ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 25 ಸೋಮವಾರ 2024

ಸಂಪುಟ: 44 | ಸಂಚಿಕೆ: 336 | ಪುಟಗಳು: 10

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಬಿಜೆಪಿ 5ನೇ ಪಟ್ಟಿ ಬಿಡುಗಡೆ

ಬೆಳಗಾವಿಯಲ್ಲಿ ಜಗದೀಶ್ ಶೆಟ್ಟರ್ ಸ್ಪರ್ಧೆ

ಅನಂತಕುಮಾರ್ ಹೆಗಡೆಗೆ ಕೈತಪ್ಪಿದ ಟಿಕೆಟ್



ಜಗದೀಶ್‌ಶೆಟ್ಟರ್



ಅನಂತ್‌ಕುಮಾರ್ ಹೆಗ್ಡೆ

ಬೆಂಗಳೂರು, ಮಾ.24–ಲೋಕಸಭಾ ಚುನಾವಣೆಗೆ ಬಿಜೆಪಿ ತನ್ನ 5ನೇ ಪಟ್ಟಿ ಬಿಡುಗಡೆ ಮಾಡಿದ್ದು, ಕರ್ನಾಟಕದ ನಾಲ್ಕು ಕ್ಷೇತ್ರ ಸೇರಿದಂತೆ 8 ರಾಜ್ಯಗಳ ಅಭ್ಯರ್ಥಿಗಳನ್ನು ಪ್ರಕಟಿಸಿದೆ. ಕರ್ನಾಟಕದಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಕಗ್ಗಂಟಾಗಿದೆ. ಇದರೊಂದಿಗೆ ಕರ್ನಾಟಕದಲ್ಲಿ ಬಿಜೆಪಿ 24 ಅಭ್ಯರ್ಥಿಗಳನ್ನು ಪ್ರಕಟಿಸಿದಂತಾಗಿದೆ. ● 8ನೇ ಪುಟಕ್ಕೆ

ಶಸ್ತ್ರ ಚಿಕಿತ್ಸೆ ನಂತರ ಮಾಜಿ ಸಿಎಂ ಕುಮಾರಸ್ವಾಮಿ ಡಿಸ್ಚಾರ್ಜ್

ಜನರ ಸೇವೆ ಮಾಡಲು ಭಗವಂತ ನನ್ನ ಕಾಪಾಡಿದ್ದಾನೆ



ಬೆಂಗಳೂರು, ಮಾ.24–ಚೆನ್ನೈನಲ್ಲಿ ಹೃದಯ ಸಂಬಂಧಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿ ಭಾನುವಾರ ಬೆಂಗಳೂರಿಗೆ ಹಿಂತಿರುಗಿದ್ದಾರೆ.

ಹೆಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸುವ ಬಗ್ಗೆ ಇನ್ನೆರಡು ದಿನದಲ್ಲಿ ತೀರ್ಮಾನ ಮಾಡುವುದಾಗಿ ತಿಳಿಸಿದರು. ನನ್ನ ಶಸ್ತ್ರಚಿಕಿತ್ಸೆಯ ದಿನ ನಾಡಿನಾದ್ಯಂತ ಅಭಿಮಾನಿಗಳು, ಹಿತೈಷಿಗಳು ದೇವರಿಗೆ ಪ್ರಾರ್ಥನೆ ಸಲ್ಲಿಸಿದ್ದಾರೆ. ದೇವರ ಅನುಗ್ರಹ, ಪ್ರಾರ್ಥನೆ ಫಲ ಕೊಟ್ಟಿದೆ. ನನಗೆ ಶಸ್ತ್ರಚಿಕಿತ್ಸೆ ನಡೆಸಿದ ವೈದ್ಯರು ಸಾಯಿಬಾಬ ಭಕ್ತರು. ಅವರು ನನಗೆ ● 8ನೇ ಪುಟಕ್ಕೆ


ಎಲ್ಲಾ ಪಕ್ಷಗಳು ಪ್ರಣಾಳಿಕೆಯಲ್ಲಿ

ಮೇಕೆದಾಟು ಯೋಜನೆ ಪ್ರಕಟಿಸೋಣ

● ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಕರೆ ● ರಾಜ್ಯದ ನೆಲ–ಜಲ, ಭಾಷೆ ವಿಚಾರದಲ್ಲಿ ರಾಜಕಾರಣ ಸಲ್ಲದು ● ಚುನಾವಣೆ ನಂತರ ಮೇಕೆದಾಟು ಜಲಾಶಯ ನಿರ್ಮಿಸುವ ತೀರ್ಮಾನ ಮಾಡೋಣ

ಬೆಂಗಳೂರು, ಮಾ.24–ಜೆಡಿಎಸ್ ಚುನಾವಣಾ ಪ್ರಣಾಳಿಕೆಯಲ್ಲಿ ಮೇಕೆದಾಟು ಯೋಜನೆಯನ್ನು ಪ್ರಕಟಿಸಲಿದ್ದು, ಬಿಜೆಪಿ, ಕಾಂಗ್ರೆಸ್ ಸೇರಿದಂತೆ ಎಲ್ಲಾ ಪಕ್ಷಗಳೂ ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಮೇಕೆದಾಟು ಯೋಜನೆಯನ್ನು ಪ್ರಕಟಿಸುವ ಮೂಲಕ ಯೋಜನೆಗೆ ಬೆಂಬಲ ನೀಡೋಣ ಎಂದು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಕರೆ ನೀಡಿದ್ದಾರೆ.

ಮೇಕೆದಾಟು ಯೋಜನೆಯಲ್ಲಿ ಡಿಎಂಕೆ ಚುನಾವಣಾ ಪ್ರಣಾಳಿಕೆಯಲ್ಲಿ ವಿರೋಧಿಸಿರುವ ತಮಿಳ್ನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ನಿಲುವನ್ನು ಖಂಡಿಸಿದ ಅವರು, ತಮಿಳ್ನಾಡು ಮುಖ್ಯಮಂತ್ರಿ ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಕಠಿಣ ನಿಲುವನ್ನು ಪ್ರಕಟಿಸಿರುವುದರಿಂದ ನಾವು ಭಯಪಡಬೇಕಾಗಿಲ್ಲ. ಕರ್ನಾಟಕದ ಎಲ್ಲಾ ಪಕ್ಷಗಳು ತಮ್ಮ ಪ್ರಣಾಳಿಕೆಯಲ್ಲಿ ಮೇಕೆದಾಟು ಯೋಜನೆ ಬೆಂಬಲಿಸುವ ತೀರ್ಮಾನವನ್ನು ಪ್ರಕಟಿಸೋಣ ಎಂದರು. ರಾಜ್ಯದ ನೆಲ–ಜಲ, ಭಾಷೆ ವಿಚಾರದಲ್ಲಿ ಯಾವುದೇ ರೀತಿಯ ರಾಜಕೀಯ ಸಲ್ಲ ಎಂದ ಅವರು,





ಬೆಂಗಳೂರಿಗೆ ಕುಡಿಯುವ ನೀರು ಒದಗಿಸಲು ಕೈಗೊಳ್ಳಲಿರುವ ಮೇಕೆದಾಟು ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಪಕ್ಷಭೇದ ಮರೆತು ಎಲ್ಲರೂ ಒಗ್ಗೂಡಬೇಕಾದ ಅವಶ್ಯಕತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು.

ರಾಜ್ಯ ಸರ್ಕಾರ, ಮುಖ್ಯಮಂತ್ರಿಗಳು, ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಪಕ್ಷಗಳು ಈ ಯೋಜನೆಯನ್ನು ಬೆಂಬಲಿಸಬೇಕು. ಲೋಕಸಭಾ ಚುನಾವಣೆ ಮುಗಿದ ಬಳಿಕ ಮೇಕೆದಾಟು ಜಲಾಶಯ ನಿರ್ಮಿಸುತ್ತೇವೆ ಎಂದು ಎಲ್ಲರೂ ಒಮ್ಮನಸ್ಸಿನಿಂದ ತೀರ್ಮಾನ ಮಾಡೋಣ ಎಂದು ಹೇಳಿದರು.

ಬೆಂಗಳೂರು ಸೇರಿದಂತೆ ಕಾವೇರಿ ಕಣಿವೆಯ 9 ಜಿಲ್ಲೆಗಳ 22 ತಾಲೂಕುಗಳಲ್ಲಿ ಕುಡಿಯುವ ● 8ನೇ ಪುಟಕ್ಕೆ



ಮೈಸೂರಿನ ಖಾಸಗಿ ಹೋಟೇಲ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಕಾಂಗ್ರೆಸ್ ಮುಖಂಡರ ಸಭೆ ನಡೆಸಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿಗೆ

ಸಿಎಂ ಸಿದ್ದರಾಮಯ್ಯ ರಣತಂತ್ರ

● ಪಕ್ಷದ ಅಭ್ಯರ್ಥಿ ಲೀಡ್‌ಗೆ ಶಾಸಕರು, ಮುಖಂಡರಿಗೆ ಟಾರ್ಗೆಟ್
● ಭಿನ್ನಾಭಿಪ್ರಾಯ ಬದಿಗೊತ್ತಿ ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸುವಂತೆ ಸೂಚನೆ

ಮೈಸೂರು, ಮಾ.24(ಬಿಎಲ್‌ಯು)–ಪ್ರತಿಷ್ಠಿತ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಣತಂತ್ರ ರೂಪಿಸಿದ್ದಾರೆ.

ಇಂದು ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಮುಖ್ಯಮಂತ್ರಿಗಳು ಮೈಸೂರು–ಕೊಡಗು ಮತ್ತು ಚಾಮರಾಜನಗರ ಜಿಲ್ಲೆಗಳ ಸಚಿವರು, ಶಾಸಕರು, ಮಾಜಿ ಶಾಸಕರು ಹಾಗೂ ಮುಖಂಡರ ಸಭೆ ಕರೆದು, ಲೋಕಸಭಾ ಚುನಾವಣೆಯಲ್ಲಿ ಗೆಲ್ಲಲು ಪ್ರತಿಯೊಬ್ಬರೂ ನಿರ್ವಹಿಸಬೇಕಾದ ಜವಾಬ್ದಾರಿ ಬಗ್ಗೆ ಟಾಸ್ಕ್ ನೀಡಿದರು.

ಕಳೆದ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಂದು ವಿಧಾನಸಭಾ ಕ್ಷೇತ್ರದಲ್ಲೂ ಕಾಂಗ್ರೆಸ್‌ಗೆ ಬಂದಿರುವ ಮತಗಳ ವಿವರಗಳನ್ನು ಪಡೆದ ಅವರು, ಕಳೆದ ಚುನಾವಣೆಯಲ್ಲಿ ಹುಣಸೂರು ಮತ್ತು ನರಸಿಂಹರಾಜ ಕ್ಷೇತ್ರ ಹೊರತುಪಡಿಸಿ, ಉಳಿದ ಎಲ್ಲಾ ಕ್ಷೇತ್ರಗಳಲ್ಲೂ ಬಿಜೆಪಿಗೆ ಲೀಡ್ ಬಂದಿದೆ. ಆದರೆ ಈಗ ಪರಿಸ್ಥಿತಿ ಬದಲಾಗಿದ್ದು, ಜನರು ಬಿಜೆಪಿ ವಿರುದ್ಧ ತಿರುಗಿ ಬಿದ್ದಿದ್ದಾರೆ ಹಾಗೂ ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳಿಂದ ಮತದಾರರು ನಮ್ಮತ್ತ ಒಲವು ತೋರಿದ್ದಾರೆ ಎಂದು ಹೇಳಿದರು. ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆಯಲ್ಲಿ ● 8ನೇ ಪುಟಕ್ಕೆ

ಯದುವೀರ್ ಟೀಕಿಸಬೇಡಿ; ಕಾಂಗ್ರೆಸ್ ಮುಖಂಡರಿಗೆ ಸಿಎಂ ಕಟ್ಟಾಜ್ಞೆ

ಮೈಸೂರು, ಮಾ.24(ಬಿಎಲ್‌ಯು)–ಲೋಕಸಭಾ ಚುನಾವಣಾ ಪ್ರಚಾರದ ವೇಳೆ ಅಪ್ಪಿ–ತಪ್ಪಿಯೂ ರಾಜವಂಶಸ್ಥರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಟೀಕಿಸಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಪಕ್ಷದ ಮುಖಂಡರಿಗೆ ಕಟ್ಟಾಜ್ಞೆ ವಿಧಿಸಿದ್ದಾರೆ. ಯದುವೀರ್ ನಮ್ಮ ಅಭ್ಯರ್ಥಿಯ ಪ್ರತಿಸ್ಪರ್ಧಿ ಎಂಬ ಕಾರಣಕ್ಕಾಗಿ ಅವರ ಬಗ್ಗೆ ಅಪ್ಪಿ–ತಪ್ಪಿಯೂ ಟೀಕಿಸಬಾರದು. ಪ್ರಚಾರದಲ್ಲಿ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ಮನ ಮುಟ್ಟುವಂತೆ ತಿಳಿಸಬೇಕು. ನಮ್ಮ ಟೀಕೆ ಏನಿದ್ದರೂ ಬಿಜೆಪಿ ವಿರುದ್ಧ ಇರಬೇಕೇ ಹೊರತು, ಮೈಮರೆತೂ ಕೂಡ ಯದುವೀರ್ ಬಗ್ಗೆ ಟೀಕಿಸಬಾರದು. ನೀವು ಯದುವೀರ್ ಅವರ ಹೆಸರನ್ನು ಹೇಳದೇ ಹೋದರೂ ಆಗುತ್ತದೆ. ಆದರೆ ಟೀಕೆಯಂತು ಬೇಡ ಎಂದ ಸಿದ್ದರಾಮಯ್ಯ, ನೀವೇನಾದರೂ ಯದುವೀರ್ ಬಗ್ಗೆ ● 8ನೇ ಪುಟಕ್ಕೆ

ಯದುವಂಶದ ಅಭಿವೃದ್ಧಿ ಪರ್ವ ಮರುಕಳಿಸಲು ಯದುವೀರ್ ಗೆಲ್ಲಿಸಿ

ರಾಜ್ಯ ಬಿಜೆಪಿ ಚುನಾವಣಾ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರ್‌ವಾಲ್ ಮನವಿ

● ನಾಲ್ವಡಿಯವರು ದೇಶದಲ್ಲೇ ಮೊದಲ ಬಾರಿಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದರು ● ಯದುವೀರರ ವಿಕಸಿತ ಮೈಸೂರು ಕನಸು ನನಸು ಮಾಡಿ

ಮೈಸೂರು, ಮಾ.24(ಎಂಟಿವೈ)–ಯದುವಂಶದ ಅಭಿವೃದ್ಧಿ ಪರ್ವ ಮರುಕಳಿಸಲು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಗೆಲ್ಲಿಸುವಂತೆ ರಾಜ್ಯ ಬಿಜೆಪಿ ಚುನಾವಣಾ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರ್‌ವಾಲ್ ಮನವಿ ಮಾಡಿದ್ದಾರೆ.

ಮೈಸೂರಿನ ಸರಸ್ವತಿಪುರಂನಲ್ಲಿರುವ ವಿಜಯ ವಿಠಲ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಭಾನುವಾರ ಆಯೋಜಿಸಿದ್ದ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮೈಸೂರಿನ ಯದುವಂಶಕ್ಕೆ 400 ವರ್ಷಗಳ ಇತಿಹಾಸವಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ದೇಶದಲ್ಲಿಯೇ ಮೊದಲ ಬಾರಿಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಶಿಕ್ಷಣ, ಆರೋಗ್ಯ, ಕೈಗಾರಿಕೆ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಸ್ವಾತಂತ್ರ್ಯಪೂರ್ವದಲ್ಲೇ ಸಾಧನೆ ಮಾಡಿದ್ದಾರೆ. ಅವರ ವಂಶದ ಕುಡಿಯಾಗಿರುವ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ವಿಕಸಿತ ಮೈಸೂರು ಕನಸನ್ನು ಕಂಡಿದ್ದಾರೆ. ಆ ಕನಸನ್ನು ಸಾಕಾರಗೊಳಿಸಲು ರಾಜಕೀಯ ಪ್ರವೇಶಿಸಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾರೆ. ಅವರನ್ನು ಹೆಚ್ಚಿನ ಲೀಡ್‌ನಲ್ಲಿ ಗೆಲ್ಲಿಸುವ ಮೂಲಕ ಮೈಸೂರು ಮಾತ್ರವಲ್ಲದೆ, ಕರ್ನಾಟಕದ ಅಭಿವೃದ್ಧಿಗೆ ಶ್ರಮಿಸುವ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು. ಬಿಜೆಪಿ ಅಭ್ಯರ್ಥಿ ಯದುವೀರ್ ಅವರನ್ನು ಕ್ಷೇತ್ರದ ಜನ ಈಗಾಗಲೇ ಸಂಸದ ಎಂದು ತೀರ್ಮಾನಿಸಿದ್ದಾರೆ. ಈಗ ಜನರ ಜವಾಬ್ದಾರಿ ಹೆಚ್ಚಿದೆ. ಈ ಚುನಾವಣೆಯಲ್ಲಿ ಮೈಸೂರಿನ ರಾಜರನ್ನು ನಾಲ್ಕೈದು ಲಕ್ಷ ಅಂತರದಿಂದ ಗೆಲ್ಲಿಸಬೇಕು. ಆಗ ಅವರ ಶಕ್ತಿ ಹೆಚ್ಚಲಿದೆ. ಯದುವೀರ್ ಅವರಿಂದ ಇಡೀ ಕರ್ನಾಟಕ ಅಭಿವೃದ್ಧಿ ಆಗಬೇಕು. ಇದಕ್ಕಾಗಿ ಜನರು ಮತಗಳ ಮೂಲಕ ಅವರಿಗೆ ಶಕ್ತಿ ತುಂಬಬೇಕು. ಪ್ರೌಢಿಮೆ ಹೊಂದಿರುವ ಯುವ ನಾಯಕ. ಮೈಸೂರಿನ ಅಭಿವೃದ್ಧಿ ಬಗ್ಗೆ ಅವರು ಸಾಕಷ್ಟು ಕಲ್ಪನೆ ಹೊಂದಿದ್ದಾರೆ. ಇದು ಅವರಿಗೆ ರಾಜಕೀಯವಾಗಿ ● 5ನೇ ಪುಟಕ್ಕೆ



ಮೈಸೂರಿನ ಸರಸ್ವತಿಪುರಂನಲ್ಲಿರುವ ವಿಜಯ ವಿಠಲ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಭಾನುವಾರ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಸನ್ಮಾನಿಸಲಾಯಿತು.

ಪ್ರತಾಪ್ ಸಿಂಹರಿಗಿಂತ ಯದುವೀರ್ ಉತ್ತಮ ಅಭ್ಯರ್ಥಿ

ಪ್ರತಾಪ್ ಸಿಂಹಗೆ ಸ್ಟಾರ್ ಪ್ರಚಾರಕ ಸ್ಥಾನ, ಮುಂದಿನ ದಿನಗಳಲ್ಲಿ ಸುಮಲತಾಗೆ ಸೂಕ್ತ ಸ್ಥಾನಮಾನ

ಮೈಸೂರು, ಮಾ.24(ಎಂಟಿವೈ)–ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಸಂಸದ ಪ್ರತಾಪ್ ಸಿಂಹ ಅವರಿಗಿಂತ ಉತ್ತಮ ಅಭ್ಯರ್ಥಿಯನ್ನೇ ಕಣಕ್ಕಿಳಿಸಲಾಗಿದೆ ಎಂದು ರಾಜ್ಯ ಬಿಜೆಪಿ ಚುನಾವಣಾ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರ್‌ವಾಲ್ ಪ್ರತಿಪಾದಿಸಿದರು. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪರ ಪ್ರಚಾರ ಮಾಡಲು ಮೈಸೂರಿಗೆ ಆಗಮಿಸಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರವನ್ನು ಎರಡು ಬಾರಿ ಪ್ರತಿನಿಧಿಸಿದ್ದ ಸಂಸದ ಪ್ರತಾಪ್ ಸಿಂಹ ಅವರಿಗೆ ಟಿಕೆಟ್ ತಪ್ಪಿದ್ದಕ್ಕೆ ನಿರ್ದಿಷ್ಟವಾದ ಕಾರಣವಿಲ್ಲ. ಮೈಸೂರು ಕ್ಷೇತ್ರದಲ್ಲಿ ಪ್ರತಾಪ್ ಸಿಂಹಗಿಂತ ಉತ್ತಮ ಅಭ್ಯರ್ಥಿ ಸಿಕ್ಕಿದ್ದಾರೆ. ಸ್ವಾತಂತ್ರ್ಯ ಪೂರ್ವದಲ್ಲಿ ಯದುವಂಶ ನೀಡಿದ ಕೊಡುಗೆ ಹಾಗೂ ಸೇವೆ ದೇಶಕ್ಕೆ ಗೊತ್ತಿದೆ. ಈಗ ಅವರು ಪ್ರಜಾಪ್ರಭುತ್ವದ ಭಾಗ ಆಗಲು ಚುನಾವಣೆಗೆ ಬಂದಿದ್ದಾರೆ. ಇವರಿಗಿಂತಲೂ ಉತ್ತಮ ಅಭ್ಯರ್ಥಿ ಬೇಕಾ? ಯದುವೀರ್ ನಮ್ಮ ಸ್ಟಾರ್ ಕ್ಯಾಂಪೇನರ್. ಅವರನ್ನು ಎಲ್ಲಾ ಕಡೆಗಳಲ್ಲಿ ಬಳಸಿಕೊಳ್ಳುತ್ತೇವೆ ಎಂದರು. ಸಂಸದ ಪ್ರತಾಪ್ ಸಿಂಹ ಅವರಿಗೆ ಸ್ಟಾರ್ ಪ್ರಚಾರಕ ಸ್ಥಾನ ಕೊಟ್ಟಿದ್ದೇವೆ. ಇದಕ್ಕಿಂತ ಇನ್ನೇನು ಬೇಕು. ಅವರು ಪಕ್ಷದ ಅಭ್ಯರ್ಥಿ ಪರ ಪ್ರಚಾರ ಮಾಡುತ್ತಾರೆ ಎಂದು ತಿಳಿಸಿದರು. ಮೈಸೂರು–ಕೊಡಗು ಕ್ಷೇತ್ರದ ಚುನಾವಣೆಯಲ್ಲಿ ● 5ನೇ ಪುಟಕ್ಕೆ

ಕರ್ನಾಟಕಕ್ಕೆ ನೀಡಬೇಕಾದ ಅನುದಾನ ಕೊಟ್ಟಾಗಿದೆ...

ಗ್ಯಾರಂಟಿಗಳಿಗೆ ಕೇಂದ್ರದ ಅನುದಾನ ನಿರೀಕ್ಷೆ ಯಾಕೆ?

ಸಿಎಂ ಸಿದ್ದರಾಮಯ್ಯಗೆ ನಿರ್ಮಲಾ ಸೀತಾರಾಮನ್ ಟಾಂಗ್




ಮೈಸೂರು,ಮಾ.24(ಪಿಎಂ)– ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ಅನುದಾನ ಬಂದಿಲ್ಲ ಎಂಬ ಕರ್ನಾಟಕ ಕಾಂಗ್ರೆಸ್ ಸರ್ಕಾರದ ಆರೋಪ ಸಂಪೂರ್ಣ ನಿರಾಧಾರ. ಕೇಂದ್ರದಿಂದ ಎಲ್ಲಾ ಅನುದಾನ ಸಹ ನೀಡಿದ್ದು, ತಾನು ಘೋಷಿಸಿದ ಉಚಿತ ಯೋಜನೆಗಳಿಗೆ ಹಣ ಹೊಂದಿಸಲಾಗದೇ ಕೇಂದ್ರ ಸರ್ಕಾರ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ವಿರುದ್ಧ ಹಣ ನೀಡುತ್ತಿಲ್ಲವೆಂದು ಸುಳ್ಳು ಆರೋಪ ಮಾಡಲಾಗುತ್ತಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರಿದರು.

ಮೈಸೂರಿನ ಮುಕ್ತ ಗಂಗೋತ್ರಿಯ ಮುಕ್ತ ವಿವಿಯ ಘಟಿಕೋತ್ಸವ ಭವನದಲ್ಲಿ ಥಿಂಕರ್ಸ್ ಫೋರಮ್ ಮೈಸೂರು ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಅನೌಪಚಾರಿಕ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉಚಿತ ಗ್ಯಾರಂಟಿ ಯೋಜನೆಗಳನ್ನು ನೀಡಲು 60 ಸಾವಿರ ಕೋಟಿ ರೂ. ಬೇಕಾಗುತ್ತದೆ ಎಂದು ಈ ಮೊದಲೇ ಹೇಳಿದ್ದೆ. ಆದರೆ ಈಗ ಕರ್ನಾಟಕ ಕಾಂಗ್ರೆಸ್ ಸರ್ಕಾರಕ್ಕೆ ತನ್ನ ಸ್ವಂತ ಅನುದಾನದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಾಧ್ಯವಾಗುತ್ತಿಲ್ಲ. ಅದಕ್ಕಾಗಿ ಈಗ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವ ಪ್ರಯತ್ನ ಮಾಡಲಾಗುತ್ತಿದೆ. ಗ್ಯಾರಂಟಿ ಅನುಷ್ಠಾನಕ್ಕೆ ಅಗತ್ಯವಿರುವ 60 ಸಾವಿರ ಕೋಟಿ ರೂ. ಇಲ್ಲವಾದರೆ ಭರವಸೆ ಕೊಟ್ಟಿದ್ದೇಕೆ? ಎಂದು ಪ್ರಶ್ನಿಸಿದರು. ಉಚಿತ ಯೋಜನೆಗಳನ್ನು ನೀಡಿ. ಇದಕ್ಕೆ ನಮ್ಮದೇನೂ ಅಭ್ಯಂತರವಿಲ್ಲ. ● 8ನೇ ಪುಟಕ್ಕೆ

ಗ್ಯಾರಂಟಿ ಯೋಜನೆಗೆ ವಿಶೇಷ ಅನುದಾನಕ್ಕಾಗಿ ಕೇಂದ್ರವನ್ನು ಬೇಡಿಕೊಳ್ಳುತ್ತಿಲ್ಲ

ಬಜೆಟ್‌ನಲ್ಲಿ ಹಣ ಇಟ್ಟಿದ್ದೇವೆ: ಸಿಎಂ ಸಿದ್ದರಾಮಯ್ಯ ತಿರುಗೇಟು



ಮೈಸೂರು, ಮಾ.24(ಎಸ್‌ಬಿಡಿ)–'ಶ್ರೀಮತಿ ನಿರ್ಮಲಾ ಸೀತಾರಾಮನ್ ಅಮ್ಮೇ, ನಾವು ನಮ್ಮ ಗ್ಯಾರಂಟಿ ಯೋಜನೆಗಳಿಗೆ ವಿಶೇಷವಾದ ಅನುದಾನ ಕೊಡಿ ಎಂದು ಕೇಂದ್ರ ಸರ್ಕಾರವನ್ನು ಬೇಡಿಕೊಳ್ಳುತ್ತಿಲ್ಲ, ಈ ಯೋಜನೆಗಳಿಗೆ ಬೇಕಿರುವ ಅನುದಾನವನ್ನು ನಾವು ಬಜೆಟ್‌ನಲ್ಲೇ ಮೀಸಲಿಟ್ಟಿದ್ದೇವೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ. ರಾಜ್ಯ ಸರ್ಕಾರದ ಯೋಜನೆಗಳಿಗೆ ಅವರೇ ಹಣ ಹೊಂದಿಸಿಕೊಳ್ಳಬೇಕು, ಕೇಂದ್ರ ಸರ್ಕಾರವನ್ನು ಕೇಳಬಾರದು ಎನ್ನುವ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಯಜಮಾನಿಕೆಯ ಧೋರಣೆ ಅತ್ಯಂತ ಖಂಡನೀಯ. ಈ ರೀತಿಯ ಹೇಳಿಕೆ ನೀಡುವ ಮೂಲಕ ಆರೂವರೆ ಕೋಟಿ ಕನ್ನಡಿಗರಿಗೆ ಅಗೌರವ ತೋರಿದ್ದಾರೆ, ಅವಮಾನ ಮಾಡಿದ್ದಾರೆ ಎಂದು ತಿಳಿದುಕೊಳ್ಳಬೇಕಾಗುತ್ತದೆ ● 5ನೇ ಪುಟಕ್ಕೆ

ದಕ್ಷ ಕಾಲೇಜಲ್ಲಿ ಮಹಿಳಾ ದಿನಾಚರಣೆ; ಸಾಧಕರಿಗೆ ಸನ್ಮಾನ



ಮೈಸೂರು,ಮಾ.24–ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ತ ಹೂಟಗಳ್ಳಿಯಲ್ಲಿನ ದಕ್ಷ ಕಾಲೇಜಿನಲ್ಲಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕೊಡಗಿನ ಉಮ್ಮತ್ತಾಟದ ಕಲಾವಿದೆ ರಾಣಿ ಮಾಚಯ್ಯ ಮತ್ತು ಹವಾಮಾನ ಪತ್ರಕರ್ತೆ ಸ್ಮಿತಾ ಟಿ.ಕೆ. ಅವರನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಕಾಲೇಜಿನ ಅಧ್ಯಕ್ಷ ಜಯಚಂದ್ರರಾಜು ಮಾತನಾಡಿ, ಮಹಿಳೆಯರು ಭೂಮಿತಾಯಿಯ ಸಾಕಾರ ರೂಪ. ನಮ್ಮ ಜೀವನವನ್ನು ಪೋಷಿಸುವ ಮಾನವೀಯತೆ ಮಾತೆಯರು ಎಂದು ಬಣ್ಣಿಸಿದರು.

ನೀರನ್ನು ಉಳಿಸುವ, ಆಹಾರವನ್ನು ಪೋಲು ಮಾಡುವುದನ್ನು ತಡೆಯುವ, ಸಂಕಷ್ಟದಲ್ಲಿರುವ ಮಹಿಳೆಯರಿಗೆ ಜೀವನೋಪಾಯವನ್ನು ಸೃಷ್ಟಿಸುವ ಮತ್ತು ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛ ಮತ್ತು ಹಸಿರಿನಿಂದ ಕಾಪಾಡುವ ಶಕ್ತಿ ಮಹಿಳೆಯರಿಗೆ ಇದೆ ಎಂದು ಹೇಳಿದರು.

ಪ್ರಾಂಯೋಗಿಕವಾಗಿ ಸಾಧ್ಯವಿರುವ ಚಟುವಟಿಕೆಗಳು ಮತ್ತು ಪ್ರಕ್ರಿಯೆಗಳೊಂದಿಗೆ ಸ್ವಯಂಸೇವಕರಾಗಿ ಬರುವ ಮಹಿಳಾ ಶಿಕ್ಷಕರು, ವಿದ್ಯಾರ್ಥಿಗಳಿಗೆ ಸಾಧ್ಯವಿರುವ ಎಲ್ಲಾ ಬೆಂಬಲವನ್ನು ದಕ್ಷ ಶಿಕ್ಷಣ ಸಂಸ್ಥೆ ವತಿಯಿಂದ ನೀಡುವ ಭರವಸೆ ನೀಡಿದರು.

ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕಲಾವಿದೆ ರಾಣಿ ಮಾಚಯ್ಯ ಮಾತನಾಡಿ, ಶಿಕ್ಷಣದಿಂದ ವಿಕಾಸ ಸಾಧ್ಯ. ಆದ್ದರಿಂದ ಅತ್ಯುತ್ತಮ ಶಿಕ್ಷಣವನ್ನು ಪಡೆಯಲು ವಿದ್ಯಾರ್ಥಿಗಳು ಮುಂದಾಗಬೇಕು. ಹಿರಿಯರನ್ನು ಗೌರವಿಸಬೇಕು. ತಮಗೆ ಉತ್ತಮ ಶಿಕ್ಷಣವನ್ನು ನೀಡಲು ನಿಸ್ವಾರ್ಥವಾಗಿ ಶ್ರಮಿಸಿದ ಪೋಷಕರ ಬಗ್ಗೆ ವಿದ್ಯಾರ್ಥಿಗಳು ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು. ಇದೇ ವೇಳೆ ದಕ್ಷ ಕಾಲೇಜಿನ ಕಾರ್ಯದರ್ಶಿ ಸೋನಿಯಾ ಉಮಾಪತಿ, ಪ್ರಾಂಶುಪಾಲ ಡಾ. ಮಹೇಶ್ ಎಂ.ಬಿ. ಮತ್ತು ಸೌಮ್ಯ ಉಪಸ್ಥಿತರಿದ್ದರು

ವಿಶ್ವ ಜಲ ದಿನಾಚರಣೆ ಹಿನ್ನೆಲೆ

ನೀರು ಸಂರಕ್ಷಣೆ, ನಿರ್ವಹಣೆ ಸಂಬಂಧ ಪಾಲಿಕೆ ಆಯುಕ್ತರಿಗೆ ಮೈಗ್ರಾಪ ಕಾರ್ಯಸೂಚಿ ಸಲ್ಲಿಕೆ



ನೀರಿನ ಸಂರಕ್ಷಣೆ ಹಾಗೂ ಸಮರ್ಪಕ ನಿರ್ವಹಣೆ ಸಂಬಂಧ ಮೈಗ್ರಾಪ ನಿಯೋಗ, ನಗರಪಾಲಿಕೆ ಆಯುಕ್ತೆ ಎನ್.ಎನ್.ಮಧು ಅವರಿಗೆ ಕಾರ್ಯಸೂಚಿ ಸಲ್ಲಿಸಿತು.

ಮೈಸೂರು, ಮಾ.24(ಎಸ್‌ಬಿಡಿ)– ವಿಶ್ವ ಜಲ ದಿನಾಚರಣೆ ಹಿನ್ನೆಲೆಯಲ್ಲಿ ಮೈಸೂರು ಗ್ರಾಹಕರ ಪರಿಷತ್ತು (ಮೈಗ್ರಾಪ) ನೀರಿನ ಸಂರಕ್ಷಣೆ ಹಾಗೂ ನಿರ್ವಹಣೆ ಸಂಬಂಧ ಮೈಸೂರು ನಗರಪಾಲಿಕೆಗೆ ಕಾರ್ಯಸೂಚಿ ಸಲ್ಲಿಸಿತು.

ಮೈಗ್ರಾಪ ಸದಸ್ಯರಾದ ಕೆ.ವಿ.ಭಾನುಪ್ರಶಾಂತ್, ವಿಶ್ವನಾಥ್, ಅರುಣ್‌ಕುಮಾರ್, ಸೋಮ ಶೇಖರ್, ಡಾ.ಪಾಂಡುರಂಗ ಮೂರ್ತಿ, ದಯಾ ನಂದ, ರಾಘವೇಂದ್ರ ಮತ್ತು ಶಂಕರ್ ಅವರನ್ನೊಳ ಗೊಂಡ ನಿಯೋಗ, ನಗರಪಾಲಿಕೆ ಆಯುಕ್ತೆ ಎನ್.ಎನ್.ಮಧು ಅವರಿಗೆ ಕಾರ್ಯಸೂಚಿಯನ್ನು ನೀಡಿ, ಈ ಸಂಬಂಧ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಮನವಿ ಮಾಡಿದರು.

ಮೈಸೂರು ಮಹಾನಗರ ಪಾಲಿಕೆ, ಮೂಲ ಹಂತದಲ್ಲಿ ನೀರಿನ ಸಂಭವ ನೀಯ ಮಾಲಿನ್ಯವನ್ನು ತಪ್ಪಿಸುವ ಬಗ್ಗೆ ಖಚಿತಪಡಿಸಬೇಕು. ಮೂಲ ಹಂತ ಹಾಗೂ ಸಂಸ್ಕರಣೆ ಹಂತದಲ್ಲಿ ಪರಿಶೀಲನೆ ನಡೆಸುವ ಮೂಲಕ ನೀರಿನ ಗುಣ ಮಟ್ಟವನ್ನು ಸ್ಪಷ್ಟಪಡಿಸಿಕೊಂಡ ನಂತರ ಗ್ರಾಹಕರಿಗೆ ಪೂರೈಕೆ ಮಾಡಬೇಕು. ಗ್ರಾಹಕರ ಬಿಂದುವಿನಲ್ಲಿ ನಿಯಮಿತವಾಗಿ ಪರಿಶೀಲನೆ ನಡೆಸಬೇಕು. ಬೇಸಿಗೆಯಲ್ಲಿ ಹೆಚ್ಚು ಕಲುಷಿತವಾಗುವ ಸಾಧ್ಯತೆ ಇರುವುದರಿಂದ ಡಬಲ್ ಕ್ಲೋರಿನೇಶನ್ ಅಳವಡಿಸಿಕೊಳ್ಳಬೇಕು. ಸಂಸ್ಕರಿಸಿದ, ಗುಣ ಮಟ್ಟದ ನೀರನ್ನು ಮಿತವಾಗಿ ಬಳಸುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸಬೇಕು. ಅಕ್ರಮವಾಗಿ ನೀರಿನ ಸಂಪರ್ಕ ಹೊಂದಿರುವ ಹಾಗೂ ಯಥೇಚ್ಛವಾಗಿ ನೀರು ಬಳಸುವ ಗ್ರಾಹಕರಿಗೆ ಎಚ್ಚರಿಕೆ ನೀಡಿ, ಸರಿಪಡಿಸಿಕೊಳ್ಳದಿದ್ದರೆ ಅಂತಹವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ವಿತರಣಾ ವ್ಯವಸ್ಥೆಯಲ್ಲಿನ ಸೋರಿಕೆಯನ್ನು ತಡೆಗಟ್ಟಲು ಹಾಗೂ ಲೆಕ್ಕಕ್ಕೆ ಸಿಗದ ನೀರಿನ ಬಗ್ಗೆ ನಿಗಾ ವಹಿಸಬೇಕು. ಎಲ್ಲಾ ಸಂಪರ್ಕಗಳಿಗೂ ಕಡ್ಡಾಯವಾಗಿ ಮೀಟರ್ ಅಳ ವಡಿಸುವ ಮೂಲಕ ನೀರು ಪೋಲಾ ಗುವುದನ್ನು ತಡೆಯಬೇಕು.

ಅಂತರ್ಜಲ ಮರುಪೂರಣಕ್ಕಾಗಿ ನೀರಿನ ಒಳ ನುಸುಳುವಿಕೆಯನ್ನು ಖಚಿತಪಡಿಸಿಕೊಳ್ಳಲು, ಎಲ್ಲಾ ಜಲಮೂಲಗಳನ್ನು ಪುನಃ ಸ್ಥಾಪಿಸಿ, ನಿರ್ವಹಿಸಲು ಪರಿಣಾಮ ಕಾರಿ ಕ್ರಮ ವಹಿಸಬೇಕು. ಅಂತರ್ಜಲ ವೃದ್ಧಿಗಾಗಿ ನಗರದಲ್ಲಿ ಮಳೆ ನೀರು ಕೊಯ್ಲು ವ್ಯವಸ್ಥೆಯನ್ನು ಕಡ್ಡಾಯಗೊಳಿಸಬೇಕು. ಅನಗತ್ಯ ನೆಲಹಾಸು ಅಳವಡಿಸುವುದನ್ನು ನಿಲ್ಲಿಸ ಬೇಕು. ಇದರಿಂದ ಭೂಮಿಯ ನೈಸರ್ಗಿಕ ಮೇಲ್ಮೈ ಹಾಳಾಗುವುದರ ಜೊತೆಗೆ ಮಳೆ ನೀರಿನ ಒಳ ಹರಿವಿನ ಮೇಲೆ ಪರಿಣಾಮ ಬೀರುತ್ತದೆ. ಅಲ್ಲದೆ ಮಳೆಗಾಲದಲ್ಲಿ ಪ್ರವಾಹ ಪರಿಸ್ಥಿತಿಯನ್ನು ಉಂಟು ಮಾಡುತ್ತದೆ. ಇದನ್ನು ಗಂಭೀರವಾಗಿ ಪರಿಗಣಿಸ ಬೇಕು ಎಂದು ಕಾರ್ಯಸೂಚಿಯಲ್ಲಿ ತಿಳಿಸಲಾಗಿದೆ.

'ವಚನ ಸಾಹಿತ್ಯ ವರ್ತಮಾನದ ತಲ್ಲಣಗಳು' ಕುರಿತು ರಾಜ್ಯಮಟ್ಟದ ವಿಚಾರ ಸಂಕಿರಣ

ಮೈಸೂರು, ಮಾ.24(ಜಿಎ)–ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಮೈಸೂರು ನಗರ ಘಟಕ, ಜೆಎಸ್‌ಎಸ್ ಮಹಿಳಾ ಕಾಲೇಜು ಕನ್ನಡ ವಿಭಾಗಗಳ ಸಂಯುಕ್ತಾಶ್ರಯದಲ್ಲಿ ಮಾ.27ರಂದು ಬೆಳಗ್ಗೆ 10.30ಕ್ಕೆ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜು ನವ ಜ್ಯೋತಿ ಸಭಾಂಗಣದಲ್ಲಿ ದತ್ತಿ ಕಾರ್ಯಕ್ರಮದ ಅಂಗವಾಗಿ 'ವಚನ ಸಾಹಿತ್ಯ–ವರ್ತಮಾನದ ತಲ್ಲಣಗಳು' ಕುರಿತು ಒಂದು ದಿನದ ರಾಜ್ಯ ಮಟ್ಟದ ವಿಚಾರ ಸಂಕಿರಣವನ್ನು ಏರ್ಪಡಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ನಗರ ಘಟಕದ ಅಧ್ಯಕ್ಷ ಮ.ಗು.ಸದಾನಂದಯ್ಯ ಈ ವಿಷಯ ತಿಳಿಸಿ, ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ.ಸಿ. ಸೋಮಶೇಖರ್ ಉದ್ಘಾಟನೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಹಿರಿಯ ಸಾಹಿತಿ ಸಿ.ಪಿ.ಕೃಷ್ಣಕುಮಾರ್ ವಹಿಸಲಿದ್ದಾರೆ ಎಂದರು.

ಗೋಷ್ಠಿಗಳಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ಸಂಸ್ಕೃತಿ ಚಿಂತಕಿ ಡಾ.ಜ್ಯೋತಿ ಶಂಕರ್, ಸರ್ಕಾರಿ ಮಹಾರಾಣಿ ಮಹಿಳಾ ಕಾಲೇಜಿನ ಪ್ರಾಚಾರ್ಯ ಡಾ.ಬಿ.ವಿ.ವಸಂತಕುಮಾರ್, ಮೈಸೂರು ವಿವಿ ಗಣಕ ವಿಜ್ಞಾನ ವಿಭಾಗದ ಪ್ರಾಧ್ಯಾಪಕ ಡಾ.ಡಿ.ಎಸ್.ಗುರು ಮೊದಲಾದವರು ವಿವಿಧ ವಿಷಯ ಮಂಡಿಸಲಿದ್ದಾರೆ. ನಂತರ ಸಮಾರೋಪ ಭಾಷಣವನ್ನು ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಮಾತನಾಡಲಿದ್ದಾರೆ. ಈ ವೇಳೆ ಎಲ್. ಶಿವಲಿಂಗಪ್ಪ ಅವರ 'ವಚನಾಂತರಂಗ' ಚಿತ್ರಕಲಾ ಪ್ರದರ್ಶನ ಏರ್ಪಡಿಸಲಾಗಿದೆ ಎಂದರು.

ಇದಕ್ಕೂ ಮುನ್ನ ಮಾ.24ರಂದು ಪರಿಷತ್‌ನ ನಗರ ಘಟಕ ಹಾಗೂ ಸಪ್ತಸ್ವರ ಬಳಗದ ಸಂಯುಕ್ತಾಶ್ರಯದಲ್ಲಿ ಸಂಜೆ 5 ಗಂಟೆಗೆ ರಮಾಗೋವಿಂದ ರಂಗ ಮಂದಿರದಲ್ಲಿ ಗಾನ ಯೋಗಿ ಪಂಚಾಕ್ಷರ ಗವಾಯಿ ಸ್ಮರಣಾರ್ಥ ವಚನ ಸಂಗೀತೋತ್ಸವ ಆಯೋಜಿಸಲಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ರೇಚಣ್ಣ, ಹೆಚ್.ಮುದ್ದುಮಲ್ಲೇಶ್, ಟಿ.ಎಸ್. ಕುಮಾರಸ್ವಾಮಿ, ಜಯಾಗೌಡ, ಡಾ.ಎಂ. ಪೂರ್ಣಿಮಾ ಉಪಸ್ಥಿತರಿದ್ದರು.

ಸುತ್ತೂರು ಶ್ರೀಗಳ ಆಶೀರ್ವಾದ ಪಡೆದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ್

ಏ.2, ಮೈಸೂರು ಲೋಕಸಭಾ ಕ್ಷೇತ್ರದಿಂದ ಚುನಾವಣೆಗೆ ನಾಮಪತ್ರ ಸಲ್ಲಿಸಲು ಚಿಂತನೆ

ಮೈಸೂರು,ಮಾ.24(ಜಿಎ)–ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಶಾಖಾ ಮಠಕ್ಕೆ ಭೇಟಿ ನೀಡಿ, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳ ಆಶೀರ್ವಾದ ಪಡೆದುಕೊಂಡರು.

ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಲವು ತತ್ವ ಸಿದ್ಧಾಂತಗಳ ನಡುವೆ ಚುನಾವಣೆ ನಡೆಯುತ್ತಿದ್ದು, ನಾವು ಸಂವಿಧಾನ ಪರ ಇದ್ದೇವೆ, ಅವರು ವಿರುದ್ಧ ಇದ್ದಾರೆ. ಜನಸಾಮಾನ್ಯರ ಅಭಿವೃದ್ಧಿ ಪರ ನಾವಿದ್ದೀವಿ, ಜನಸಾಮಾನ್ಯರ ಅಭಿವೃದ್ಧಿ ವಿರುದ್ಧ ಅವರಿದ್ದಾರೆ. ಕೋಮು ಸೌಹಾರ್ದತೆ ವಿಚಾರದಲ್ಲಿ ನಾವು ನಂಬರ್ ಒನ್ ಇದ್ದೇವೆ. ಇದಕ್ಕೆ ತಕ್ಕಂತೆ ಎರಡನೇ ಬಾರಿ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾದ ಬಳಿಕ ಮೈಸೂರಿನ ಅಭಿವೃದ್ಧಿಗೆ ಈಗಾಗಲೇ 1,500 ಕೋಟಿ ರೂ. ಅನುದಾನ ನೀಡಿದ್ದಾರೆ ಎಂದರು.

ಪ್ರಚಾರದುದ್ದಕ್ಕೂ ಕಳೆದ ಹತ್ತು ವರ್ಷಗಳ ಬಿಜೆಪಿ ವೈಫಲ್ಯತೆ ಬಗ್ಗೆ ಜನರಿಗೆ ತಿಳಿಸುತ್ತೇವೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಬಂದ ನಂತರ ರಾಜ್ಯಕ್ಕೆ ನೀಡುವ ತೆರಿಗೆ ವಿಚಾರದಲ್ಲಿ ತಾರತಮ್ಯ ಅನುಸರಿಸುತ್ತಿದೆ. ತೆರಿಗೆ ಹಣ ನೀಡುವಂತೆ ರಾಜ್ಯ ಸರ್ಕಾರದಿಂದ ಹಲವು ಬಾರಿ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ. ಈ ಸಂಬಂಧ ಕೇಂದ್ರದ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ದಾವೆ ಹೂಡಲಾಗಿದೆ. ಇಷ್ಟೆಲ್ಲ ಸಮಸ್ಯೆಗಳ ನಡುವೆಯೂ ರಾಜ್ಯದ ರೈತರಿಗೆ ತೊಂದರೆಯಾಗದ ರೀತಿ ಸರ್ಕಾರ ನಿರ್ವಹಣೆ ಮಾಡುತ್ತಿದೆ ಎಂದರು.

ಚುನಾವಣೆ ಸಂಬಂಧ ಸಿಎಂ ಇಂದು ಮತ್ತು ನಾಳೆ ಮೈಸೂರಲ್ಲೇ ವಾಸ್ತವ್ಯ ಹೂಡಲಿದ್ದಾರೆ. ಮಾ.27ರಂದು ಬಿಜೆಪಿ, ಜೆಡಿಎಸ್ ಮುಖಂಡರು ಪಕ್ಷ ಸೇರ್ಪಡೆಯಾಗಲಿದ್ದಾರೆ. ಏ.2ರಂದು ನಾಮಪತ್ರ ಸಲ್ಲಿಸಲು ಚಿಂತಿಸಿದ್ದು ಸಿಎಂ, ಡಿಸಿಎಂ ಜೊತೆ ಚರ್ಚಿಸಿ ಒಪ್ಪಿಗೆ ಸೂಚಿಸಿದರೆ ಏ.2ರಂದು ನಾಮಪತ್ರ ಸಲ್ಲಿಸಲಾಗುವುದು ಎಂದರು. ನಗರ ಕಾಂಗ್ರೆಸ್ ಅಧ್ಯಕ್ಷ ಮೂರ್ತಿ, ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಮುಖಂಡರಾದ ದಕ್ಷಿಣಮೂರ್ತಿ, ಬಿ.ಕೆ. ಪ್ರಕಾಶ್, ಎಂ.ಶಿವಣ್ಣ ಶೌಕತ್ ಅಲೀ, ಚಿಕ್ಕಣ್ಣ, ಲೋಕೇಶ್ ಪಿಯಾ, ಹೆಚ್.ಎ.ವೆಂಕಟೇಶ್, ಕೆ.ಎಸ್.ಶಿವರಾಂ, ಬಸಪ್ಪ, ಪ್ರದೀಪ್ ಕುಮಾರ್, ಡೈರಿ ವೆಂಕಟೇಶ್ ಇದ್ದರು.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಶಾಖಾ ಮಠಕ್ಕೆ ಭೇಟಿ ನೀಡಿ, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳ ಆಶೀರ್ವಾದ ಪಡೆದರು.

ಏ.15, ಸಾಮೂಹಿಕ ಉಪನಯನ

ಮೈಸೂರು: ಮೈಸೂರಿನ ಬ್ರಾಹ್ಮಣ ಧರ್ಮ ಸಹಾಯ ಸಭಾದಿಂದ ಶ್ರೀ ಶಂಕರ ಜಯಂತಿ ಪ್ರಯುಕ್ತ ಏ.15ರಂದು ತ್ರಿಮತಸ್ಥ ಬ್ರಾಹ್ಮಣವಟುಗಳಿಗೆ ಸಾಮೂಹಿಕ ಉಪನಯನ ಹಮ್ಮಿಕೊಳ್ಳಲಾಗಿದೆ. ಶ್ರೀ ಕೃಷ್ಣಸ್ವಾಮಿ ಶಾಸ್ತ್ರಿಗಳು ಕಾರ್ಯಕ್ರಮ ನೆರವೇರಿಸಿಕೊಡಲಿದ್ದು, ಸಭಾಧ್ಯಕ್ಷ ಹೆಚ್.ಅಶ್ವಥ್ ನಾರಾಯಣ ಅಧ್ಯಕ್ಷತೆ ವಹಿಸಲಿದ್ದಾರೆ. ಆಸಕ್ತರು ಸಭಾ ಕಚೇರಿಯಲ್ಲಿ 10 ದಿನಗಳ ಮುಂಚೆ ಹೆಸರನ್ನು ನೋಂದಾಯಿಸಿಕೊಳ್ಳಲು ಪ್ರಕಟಣೆಯಲ್ಲಿ ಕೋರಲಾಗಿದೆ.

ನೇಮಕ



ಮೈಸೂರು, ಮಾ.24–ಕೆಪಿಸಿಸಿ ಅಲ್ಪಸಂಖ್ಯಾತ ವಿಭಾಗದ ಮೈಸೂರು ಜಿಲ್ಲಾ ಕಾರ್ಯದರ್ಶಿಯಾದ ಬಡಾಮಕಾನ್ ನಿವಾಸಿ ಸಯ್ಯದ್ ಫಾರೂಕ್ ಅವರನ್ನು ನೇಮಕ ಮಾಡಲಾಗಿದೆ. ಇವರು ಈವರೆವಿಗೂ ಜಿಲ್ಲಾ ಅಲ್ಪಸಂಖ್ಯಾತ ವಿಭಾಗದ ಸಂಘಟನಾ ಕಾರ್ಯದರ್ಶಿಯಾಗಿದ್ದರು.

ವಾಯುಪಡೆಯ ಮಾಜಿ ಮುಖ್ಯಸ್ಥ ಬದೌರಿಯಾ ಬಿಜೆಪಿಗೆ ಸೇರ್ಪಡೆ

ನವದೆಹಲಿ, ಮಾ.24– ಭಾರತೀಯ ವಾಯುಪಡೆಯ ಮಾಜಿ ಮುಖ್ಯಸ್ಥ ಆರ್‌ಕೆಎಸ್ ಬದೌರಿಯಾ (ನಿವೃತ್ತ) ಭಾನುವಾರ ಕೇಂದ್ರ ವಾರ್ತಾ ಸಚಿವ ಅನುರಾಗ್ ಸಿಂಗ್ ಠಾಕೂರ್, ವಿನೋದ್ ತಾವ್ಡೆ ಅವರ ಸಮ್ಮುಖದಲ್ಲಿ ಬಿಜೆಪಿಗೆ ಸೇರ್ಪಡೆಯಾದರು. ನಿವೃತ್ತ ಏರ್ ಚೀಫ್ ಮಾರ್ಷಲ್ ಆದ ಬದೌರಿಯಾ ಉತ್ತರ ಪ್ರದೇಶದವರು, ಅಲ್ಲಿ ಲೋಕ ಸಭಾ ಚುನಾವಣಾ ಅಭ್ಯರ್ಥಿಗಳನ್ನು ಬಿಜೆಪಿ ಇನ್ನೂ ಪ್ರಕಟಿಸಿಲ್ಲ. ಬದೌರಿಯಾ ಅವರಿಗೆ ಅವಕಾಶ ನೀಡುವ ಮೂಲಕ ರಾಷ್ಟ್ರ ಸೇವೆಗೆ ಅವರ ಕೊಡುಗೆ ಬಳಸಿಕೊಳ್ಳಲು ಉದ್ದೇಶಿಸಿದೆ ಎನ್ನಲಾಗಿದೆ.



ಈ ಸಂದರ್ಭದಲ್ಲಿ ಮಾತನಾಡಿದ ಬದೌರಿಯಾ, ತಮ್ಮ ಸೇವೆಯಲ್ಲಿ ಕಳೆದ ಎಂಟರಿಂದ 10 ವರ್ಷಗಳನ್ನು 'ಸುವರ್ಣ ಅವಧಿ' ಎಂದು ಬಣ್ಣಿಸಿದರು. ಸ್ವಾವಲಂಬನೆಯನ್ನು ಹೆಚ್ಚಿಸಲು ಮತ್ತು ಸಶಸ್ತ್ರ ಪಡೆಗಳನ್ನು ಆಧುನೀಕರಿಸಲು ಮೋದಿ ಸರ್ಕಾರ ತೆಗೆದುಕೊಂಡ ಕ್ರಮಗಳನ್ನು ಶ್ಲಾಘಿಸಿದರು. ವಿವಿಧ ಇಲಾಖೆಗಳಾದ್ಯಂತ ತೆಗೆದುಕೊಂಡ ಕ್ರಮಗಳು ದೇಶವು ಬಲಿಷ್ಠವಾಗಿ ಹೊರಹೊಮ್ಮಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಭಾರತೀಯ ವಾಯುಪಡೆಯಲ್ಲಿ ಬದೌರಿಯಾ ಅವರ ಸುದೀರ್ಘ ಸೇವೆಯನ್ನು ಠಾಕೂರ್ ಹಾಗೂ ತಾವ್ಡೆ ಶ್ಲಾಘಿಸಿದರು. ಮತ್ತು ರಕ್ಷಣಾ ಪಡೆಗಳಲ್ಲಿ ಸಕ್ರಿಯ ಪಾತ್ರ ವಹಿಸಿದ ನಂತರ ಈಗ ಅವರು ರಾಜಕೀಯ ಕ್ಷೇತ್ರದಲ್ಲಿ ಸಕ್ರಿಯವಾಗಿ ಕೊಡುಗೆ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.ಬದೌರಿಯಾ ಅವರು ಐಎಎಫ್‌ನಲ್ಲಿ ಸುಮಾರು 40 ವರ್ಷಗಳನ್ನು ಕಳೆದಿದ್ದಾರೆ.

ಹುಣಸೂರು ಸೇರಿ ರಾಜ್ಯದಲ್ಲಿ ಒಂದೇ ದಿನ 6 ಕೋಟಿಗೂ ಹೆಚ್ಚು ಹಣ ಜಪ್ತಿ

ಮೈಸೂರು, ಮಾ.24(ಎಸ್‌ಬಿಡಿ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ 15.96 ಲಕ್ಷ ರೂ. ಸೇರಿದಂತೆ ರಾಜ್ಯದಲ್ಲಿ ಒಂದೇ ದಿನ 6.13 ಕೋಟಿಗೂ ಹೆಚ್ಚು ಹಣವನ್ನು ವಶಪಡಿಸಿಕೊಳ್ಳಲಾಗಿದೆ. ಮೈಸೂರು–ಕೊಡಗು ಕ್ಷೇತ್ರದ ಹುಣಸೂರು ಸ್ಥಿರ ಕಣ್ಗಾವಲು ತಂಡ(ಎಸ್‌ಎಸ್‌ಟಿ) 15,96,078 ರೂ., ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಹೆಜ್ಜಾಲ ಚೆಕ್‌ಪೋಸ್ಟ್‌ನಲ್ಲಿ 5.36 ಕೋಟಿ, ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ 26 ಲಕ್ಷರೂ. ಸೇರಿದಂತೆ ಒಟ್ಟು 6,13,70,148 ರೂಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.

ಉಚಿತ ಉಡುಗೊರೆ ನೀಡಲು ಸಾಗಿಸುತ್ತಿದ್ದ 1.68 ಲಕ್ಷ ಮೌಲ್ಯದ 700 ಗೋಡೆ ಗಡಿಯಾರಗಳು, 52.51 ಲಕ್ಷ ಮೌಲ್ಯದ ಮದ್ಯ, 213 ಕೆಜಿ ಶ್ರೀಗಂಧದ ಮರ, 34.27 ಲಕ್ಷ ರೂ. ಮೌಲ್ಯದ 112 ಕ್ವಿಂಟಾಲ್ ಅಕ್ಕಿ, 12.34 ಲಕ್ಷ ರೂ. ಮೌಲ್ಯದ ಮಾದಕ ವಸ್ತುಗಳನ್ನು ಜಪ್ತಿ ಮಾಡಲಾಗಿದೆ.

ಮೈಸೂರು ಸಂಸ್ಥಾನದ ಪರಂಪರೆ ಮುಂದಿನ ಪೀಳಿಗೆಗೆ ಪರಿಚಯಿಸಲು ರಾಜಕೀಯ ಸ್ಥಾನಮಾನ ಅಗತ್ಯ

ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಮತ

ಮೈಸೂರು, ಮಾ.24(ಎಸ್‌ಪಿಎನ್)– ಮೈಸೂರು ಸಂಸ್ಥಾನದ ಪರಂಪರೆಗೆ ದೇಶದಲ್ಲೇ ಐತಿಹಾಸಿಕ ಸ್ಥಾನಮಾನವಿದೆ. ಇದನ್ನು ಉಳಿಸಿ, ಮುಂದಿನ ಪೀಳಿಗೆಗೂ ಪರಿಚಯಿಸಲು ರಾಜಕೀಯ ಸ್ಥಾನಮಾನ ಅಗತ್ಯವಿದೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ಯದು ವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟರು.

ಮೈಸೂರು ಕೆಸರೆ ಕೆಪಿಟಿಸಿಎಲ್ ಸಮುದಾಯ ಭವನದಲ್ಲಿ ನರಸಿಂಹರಾಜ ವಿಧಾನಸಭಾ ಕ್ಷೇತ್ರ ಬಿಜೆಪಿ ಘಟಕದ ವತಿಯಿಂದ ಆಯೋಜಿಸಿದ್ದ ಕಾರ್ಯಕರ್ತರ ಸಭೆ ಮತ್ತು ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಮೈಸೂರು ನಗರ ವ್ಯಾಪ್ತಿಯಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳಿವೆ. ಚಾಮರಾಜ ವಿಧಾನಸಭಾ ಕ್ಷೇತ್ರದ ಹೆಸರು ಹತ್ತನೇ ಚಾಮರಾಜ ಒಡೆಯರ್ ಸವಿನೆನಪಿಗಾಗಿ, ಕೃಷ್ಣರಾಜ ಕ್ಷೇತ್ರದ ಹೆಸರು ನಾಲ್ವಡಿ ಕೃಷ್ಣ ರಾಜ ಒಡೆಯರ್ ಸ್ಮರಣೆಗಾಗಿ ಹಾಗೂ ಕಂಠೀರವ ನರಸಿಂಹರಾಜ ಒಡೆಯರ್ ಮೈಸೂರು ರಾಜರುಗಳಲ್ಲೇ ಪ್ರಸಿದ್ಧಿ ಪಡೆದ ರಾಜರಾಗಿದ್ದರು. ಅವರ ಹೆಸರನ್ನು ಈ ಕ್ಷೇತ್ರಕ್ಕಿಟ್ಟಿದ್ದಾರೆ ಎಂದು ತಿಳಿಸಿದರು.

ಹತ್ತನೇ ಚಾಮರಾಜ ಒಡೆಯರ್, ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತಾವಧಿಯಲ್ಲಿ ಮೈಸೂರು ಸಂಸ್ಥಾನದ ಅಭಿವೃದ್ಧಿ ಉತ್ತುಂಗಕ್ಕೇರಿತ್ತು. ಆ ಕಾಲದ ಅಭಿವೃದ್ಧಿ ಕಾರ್ಯಗಳನ್ನು ಈಗಿನ ನಮ್ಮ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶಾದ್ಯಂತ ವಿಸ್ತರಿಸಿ, ಅತೀ ವೇಗವಾಗಿ ಭಾರತವನ್ನು ಅಭಿವೃದ್ಧಿಪಡಿಸಿದ್ದಾರೆ. ಇದೀಗ ಪ್ರಧಾನಿ ಮಂತ್ರಿ ಮೋದಿ ಅವರು, ಮೂರನೇ ಬಾರಿಗೆ ಪ್ರಧಾನಿಯಾಗಲು ಮೈಸೂರಿನ ಜನತೆ ಬಿಜೆಪಿಯನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಈ ಬಾರಿ ಅತ್ಯಧಿಕ ಮತಗಳಿಂದ ಜಯಭೇರಿ: ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಯದುವಂಶದ ಕುಡಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಭಾರಿ ಬಹು ಮತದಿಂದ ಆಯ್ಕೆ ಮಾಡಬೇಕು ಎಂದು ಮನವಿ ಮಾಡಿದರು.

ರಾಜಮನೆತನ ಹಾಗೂ ಕೇಂದ್ರ ಸರ್ಕಾರ ಅಭಿವೃದ್ಧಿಗೆ ಮತನೀಡಿ: ಬಿಜೆಪಿ ಮೈಸೂರು ನಗರ ಘಟಕದ ಅಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಯದುವೀರ್ ಬಿಜೆಪಿ ಅಭ್ಯರ್ಥಿ ಜೊತೆಗೆ ಮೈಸೂರು ರಾಜಮನೆತನ ಕುಡಿ. ಹಾಗಾಗಿ ಈ ಮನೆತನ ಮೈಸೂರಿನ ಅಭಿವೃದ್ಧಿಗೆ ಸಾಕಷ್ಟು ಕೊಡುಗೆಗಳನ್ನು ನೀಡಿದೆ. ಇವೆಲ್ಲಾ ಅಂಶಗಳನ್ನು ಕಾರ್ಯಕರ್ತರು ಪ್ರಚಾರ ಮಾಡಿ, ನಮ್ಮ ಅಭ್ಯರ್ಥಿ ಯದುವೀರ್ ಗೆಲುವಿಗೆ ಶ್ರಮಿಸಬೇಕು ಎಂದು ಸಲಹೆ ನೀಡಿದರು.


ಮೈಸೂರು ಬೇರೆ ಸಂಸ್ಥಾನಗಳಿಗಿಂತ ವಿಭಿನ್ನ: ಬಿಜೆಪಿ ಹಿರಿಯ ಮುಖಂಡ ಹಾಗೂ ಮಾಜಿ ಮೇಯರ್ ಸಂದೇಶಸ್ವಾಮಿ ಮಾತನಾಡಿ, ಮೈಸೂರು ಸಂಸ್ಥಾನದ ಅಭಿವೃದ್ಧಿಗೆ ಇಲ್ಲಿನ ರಾಜರು ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ರಾಜರ ಆಳ್ವಿಕೆಯಲ್ಲಿ ಪ್ರಪ್ರಥಮ ಬಾರಿಗೆ ದಲಿತರು, ಹಿಂದುಳಿದ ವರ್ಗ ಸೇರಿದಂತೆ ಎಲ್ಲಾ ವರ್ಗದವರಿಗೂ ಮೀಸಲಾತಿ ಜಾರಿಗೆ ತಂದರು. ಇದರಿಂದಾಗಿಯೇ ಮೈಸೂರು ಸಂಸ್ಥಾನ ಬೇರೆ ಸಂಸ್ಥಾನಗಳಿಗಿಂತ ವಿಭಿನ್ನ. ಹಾಗಾಗಿ ನಮ್ಮ ಕಾರ್ಯಕರ್ತರು ರಾಜರ ಕೊಡುಗೆ ಹಾಗೂ ಕೇಂದ್ರ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟು ಮತಯಾಚನೆ ಮಾಡುವಂತೆ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಪದಾಧಿಕಾರಿಗಳ ಪದಗ್ರಹಣ: ಈ ವೇಳೆ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಮಂಡಲದ ಅಧ್ಯಕ್ಷರಾಗಿ ಸ್ಮಾರ್ಟ್ ಮಂಜು, ಪ್ರಧಾನ ಕಾರ್ಯದರ್ಶಿಯಾಗಿ ಮಂಜು.ಸಿ.ಗೌಡ ಪದಗ್ರಹಣ ಮಾಡಿದರು. ಮಹಿಳಾ ಮೋರ್ಚಾ ಅಧ್ಯಕ್ಷರಾಗಿ ಆರ್.ಮಾಲಿನಿ, ಪ್ರಧಾನ ಕಾರ್ಯದರ್ಶಿಯಾಗಿ ಕವಿತಾ ಸಿಂಗ್, ಉಮಾಶ್ರೀ, ಯುವ ಮೋರ್ಚಾ ಅಧ್ಯಕ್ಷರಾಗಿ ನವೀನ್ ರಾಜು, ಪ್ರಧಾನಕಾರ್ಯದರ್ಶಿಯಾಗಿ ಪರಮೇಶ್, ಶಾಮ್ ಕುಮಾರ್, ಓಬಿಸಿ ಮೋರ್ಚಾ ಅಧ್ಯಕ್ಷರಾಗಿ ಎಸ್.ಮಂಜು (ಕೆಸರೆ), ಪ್ರಧಾನ ಕಾರ್ಯದರ್ಶಿಯಾಗಿ ಉಮಾ ಶಿವಕುಮಾರ್, ಯಶವಂತ್ ಸಿಂಗ್, ಎಸ್ಸಿ ಮೋರ್ಚಾ ಅಧ್ಯಕ್ಷರಾಗಿ ಸುಬ್ರಹ್ಮಣಿ, ಪ್ರಧಾನ ಕಾರ್ಯದರ್ಶಿಯಾಗಿ ಕರ್ಣ, ಸೋಮೇಶ್, ಎಸ್ಟಿ ಮೋರ್ಚಾ ಅಧ್ಯಕ್ಷರಾಗಿ ಜಗದೀಶ್ ಲಕ್ಷ್ಮಣ್, ಪ್ರಧಾನ ಕಾರ್ಯದರ್ಶಿಯಾಗಿ ಶಿವುಬಸವರಾಜು, ಲೋಕೇಶ್, ಅಲ್ಪ ಸಂಖ್ಯಾತ ಮೋರ್ಚಾ ಅಧ್ಯಕ್ಷರಾಗಿ ಜಮಾಲ್, ಪ್ರಧಾನ ಕಾರ್ಯದರ್ಶಿಯಾಗಿ ರಿಚರ್ಡ್ ಸ್ಯಾಮ್ಯುಯೇಲ್, ರೋಹಿತ್ ಹಾಗೂ ಮಂಡಲ ಉಪಾಧ್ಯಕ್ಷರಾಗಿ ಶಿವಕುಮಾರ್, ಮಮತ ಚಂದ್ರಶೇಖರ್, ಕಾವ್ಯ, ಜಡೆಯಪ್ಪ ಸ್ವಾಮಿ, ಮಹದೇವ ಮತ್ತು ಕಾರ್ಯದರ್ಶಿಯಾಗಿ ಅಂಬರೀಷ್, ಮಹದೇವು, ಆರ್.ಎಕ್ಸ್.ಮೋಹನ್, ಶೇಖರ್, ಶಶಿಕುಮಾರ್, ಭಾರತಿಯಮ್ಮ, ಖಜಾಂಚಿ ಶಾಂತರಾಜು, ಕಾರ್ಯಾಲಯ ಕಾರ್ಯದರ್ಶಿ ಶಿವಾನಂದರಾವ್ ಅವರು ಪದಗ್ರಹಣ ಮಾಡಿದರು. ಈ ವೇಳೆ ಬಿಜೆಪಿ ಹಿರಿಯ ಮುಖಂಡರಾದ ಬಿ.ಪಿ.ಮಂಜುನಾಥ್, ನಗರ ಪಾಲಿಕೆ ಮಾಜಿ ಸದಸ್ಯ ಸಾತ್ವಿಕ್, ನಗರ ಪ್ರಧಾನ ಕಾರ್ಯದರ್ಶಿ ಗಿರಿಧರ್, ಬಿಜೆಪಿ ಗ್ರಾಮಾಂತರ ಘಟಕದ ಮಾಧ್ಯಮ ವಕ್ತಾರ ಕೆ.ವಸಂತ್‌ಕುಮಾರ್ ಸೇರಿದಂತೆ ಇತರೆ ಮುಖಂಡರಿದ್ದರು.



ನರಸಿಂಹರಾಜ ವಿಧಾನಸಭಾ ಕ್ಷೇತ್ರ ಬಿಜೆಪಿ ಘಟಕದ ವತಿಯಿಂದ ಆಯೋಜಿಸಿದ್ದ ಕಾರ್ಯಕರ್ತರ ಸಭೆ ಮತ್ತು ಎನ್.ಆರ್.ಕ್ಷೇತ್ರದ ಮಂಡಲ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಯದುವೀರ್ ಭಾಗವಹಿಸಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

25.3.2024 ಸೋಮವಾರ, ಮಳೆ ನಕ್ಷತ್ರ: ಉತ್ತರಾಭಾದ್ರ 17.03.2024ರಿಂದ 30.03.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಪಾಲ್ಗುಣ ಮಾಸ, ಶುಕ್ಲ ಪಕ್ಷ,
ತಿಥಿ: ಹುಣ್ಣಿಮೆ, ನಕ್ಷತ್ರ: ಉತ್ತರಾ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ, ಮೈಸೂರು:** ಸರ್ಮೇತನಹಳ್ಳಿ ಶ್ರೀಮತಿ ಮಹಾಲಕ್ಷ್ಮಮ್ಮ ರಾಮರಾವ್ ಅವರ ದತ್ತಿ ಕಾರ್ಯಕ್ರಮ, ಉದ್ಘಾಟನೆ: ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಧ್ಯಕ್ಷತೆ: ಮೈಸೂರು ಹಿರಿಯ ನಾಗರಿಕರ ಹಗಲು ಕ್ಷೇಮ ಕೇಂದ್ರದ ಅಧ್ಯಕ್ಷ ಮಲೆಯೂರು ಪ್ರಭುಸ್ವಾಮಿ, ಸ್ಥಳ: ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ, ನಿಮಿಷಾಂಬ ಬಡಾವಣೆ, ಕುವೆಂಪುನಗರ, ಬೆಳಗ್ಗೆ 10.30ಕ್ಕೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಶ್ರವಣ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆಯಿಂದ.

■ **ಇಂಡಿಯನ್ ಹೆರಿಟೇಜ್ ಸಿಟಿಸ್ ನೆಟ್‌ವರ್ಕ್ ಫೌಂಡೇಷನ್ :** ಪ್ರಕೃತಿಯ ಆಕರ್ಷಣೆ – ಸುನಿಲ್ ರಾಜು ಅವರು ಕುಕ್ಕರಹಳ್ಳಿಕೆರೆಯಲ್ಲಿ ಸೆರೆ ಹಿಡಿದಿರುವ ಛಾಯಾಚಿತ್ರಗಳ ಪ್ರದರ್ಶನ, ಸ್ಥಳ: ಹೆರಿಟೇಜ್ ಹೌಸ್, ಸರಸ್ವತಿಪುರಂ, ಬೆಳಗ್ಗೆ 10.30ರಿಂದ.

■ **ಬಾಸುದೇವ ಸೋಮಾನಿ ಕಾಲೇಜ್:** ವಿಶ್ವ ಜಲ ದಿನ, ಉದ್ಘಾಟನೆ: ದಿ ಇನ್ಸಿಟ್ಯೂಟ್ ಆಫ್ ಎಜುಕೇಷನ್ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟ್ ಪಿ.ಗೀತಾಂಜಲಿ, ಸಂಪನ್ಮೂಲ ವ್ಯಕ್ತಿ: ಮೈಸೂರಿನ ರೀಜಿನಲ್ ನ್ಯಾಚುರಲ್ ಹಿಸ್ಟರಿ ಮ್ಯೂಸಿಯಂನ ವಿಜ್ಞಾನಿ ಬಿ.ಎಸ್.ಯೋಗೇಂದ್ರ, ಕಾಲೇಜಿನ ಆಡಿಟೋರಿಯಂ, ಬೆಳಗ್ಗೆ 11 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ 6.10–ಚಿಂತನ, 6.15–ಗೀತಾರಾಧನ, 6.35. 6.10 "ವಿಶ್ವ ವಿಖ್ಯಾತ ವಿಜ್ಞಾನಿಗಳು" ಬಾನುಲಿ ಸರಣಿ, ಪ್ರಸ್ತುತಿ– ಶ್ರೀನಿವಾಸ ಪ್ರಸಾದ್, 6.40–ಪದಸಂಸ್ಕೃತಿ–ಡಾ.ಶ್ರೀಧರ ಹೆಗಡೆ ಭದ್ರನ್, 6.50ರೈತರಿಗೆ ಸಲಹೆ, 7.15–ಭಾವಗೀತೆಗಳು–ಸುಲೋಚನಾ, 9.05–ನೆನಪಿನಂಗಳ ಹೆಸರಾಂತ ಚಿತ್ರ ಕಲಾವಿದೆ ಮಹಿಳಾ ಶಿಲ್ಪಿ ಜೆ.ವಿ.ಸುಭಾಷಿಣಿ ದೇವಿ ಅವರೊಂದಿಗೆ ಎಸ್.ಪುಟ್ಟತಾಯಮ್ಮ ಅವರು ನಡೆಸಿದ್ದ ಸಂವಾದ, 10 ಬಳ್ಳಾರಿ ಎಂ. ರಾಘವೇಂದ್ರ –ಹಾಡುಗಾರಿಕೆ, 12.30 ದೇವರನಾಮ–12.45–ನಮ್ಮ ಆರೋಗ್ಯ?–ಅಬ್ ಸ್ಟ್ರಕ್ಟೀವ್ ಸ್ಲೀಪ್ ಏಪ್ನಿಯಾ" ಕುರಿತು ಮೈಸೂರಿನ ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಕನ್ಸಲ್ಟೆಂಟ್ ಪಲ್ಮನಾಲಜಿಸ್ಟ್ ಡಾ.ಅರುಣಾ ಎಚ್.ಎಂ. ಅವರೊಂದಿಗೆ ಮಾತುಕತೆ, 1.00 ಮತ ಹಾಕೋಣ ಬನ್ನಿ –ಮತದಾನ ಜಾಗೃತಿ ಕಾರ್ಯಕ್ರಮ, 1.20 ಭಾವಗೀತೆಗಳು–ಆರ್.ವಿ.ಅನುಪಮಾ, 3.00 ಶ್ರೀಗಳಿ ಎಸ್. ಗೋವಿಂದರಾಜನ್–ಹಾಡುಗಾರಿಕೆ, 4.00 ಮಹಿಳಾರಂಗ–ಡಾಕ್ಟರ್ ಸಮಯ ವಿಷಯ: ಹೆಣ್ಣು ಮಕ್ಕಳಿಗೆ ಸಾಮಾನ್ಯವಾಗಿ ಮಾಡುವ ದಂತ ಪರೀಕ್ಷೆಗಳುಭಾಗವಹಿಸುವ ವೈದ್ಯರು: ಡಾ.ರಜನೀ ಲೋಕೇಶ್, 4.45 ಹಿಂದಿ ಪಾಠ–ವಿದ್ಯಾಕುಮಾರ್, 6.50ಕೃಷಿರಂಗ – "ಹಣ್ಣು ಹೊನ್ನು"? ಸೀಬೆ ಉತ್ಪಾದನಾ ತಾಂತ್ರಿಕತೆಗಳನ್ನು ಕುರಿತು ಸಂವಾದ. ಭಾಗವಹಿಸುತ್ತಾರೆ ಮೈಸೂರು ತಾಲ್ಲೂಕ್ ಎಲಚನಹಳ್ಳಿಯ ತೋಟಗಾರಿಕಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಜಿ.ಕೆ.ರಾಮೇಗೌಡ ಹಾಗೂ ಡಾ.ಎನ್.ಕೇಶವಮೂರ್ತಿ, 9.30 ಮತ್ತೆ ಕೇಳಿ "ಹಾದಿಯಲ್ಲಿ ಕಂಡ ಮುಖ" ಭಾಗವಹಿಸುವವರು ಭಾಗವಹಿಸುವವರು ಸಾಗರದ ಆಳದ ಮುಳುಗುಪಟು ಹಾಗೂ ಅಂತರಾಷ್ಟ್ರೀಯ ಈಜು ತರಬೇತುದಾರ ಆರ್.ಗುರುಪ್ರಸಾದ್, ಪ್ರಸ್ತುತಿ:ಅಬ್ದುಲ್ ರಶೀದ್, 10.30–ಸವಿನೆನಪು

■ **ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನ:** ತಿಂಗಳ ತಿಳಿವು ಸಂಚಿಕೆ–01, ಸ್ವಾಗತ: ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನ ಕಾರ್ಯಾಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಉದ್ಘಾಟನೆ ಮತ್ತು ಆಶೀರ್ವಚನ: ಪೂಜ್ಯ ಸ್ವಾಮಿ ಮುಕ್ತಿದಾನಂದಜಿ ಮಹಾರಾಜ್, ಉಪಸ್ಥಿತಿ: ಪ್ರತಿಷ್ಠಾನದ ಅಧ್ಯಕ್ಷ ಡಿ.ಮಾದೇಗೌಡ, ಕುವೆಂಪು ಅಧ್ಯಯನ ಸಂಸ್ಥೆಯ ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಡಿ.ಕೆ.ರಾಜೇಂದ್ರ, ಅತಿಥಿಗಳು: ಮಹಾಲಕ್ಷ್ಮಿ ಸ್ವೀಟ್ಸ್‌ನ ಶಿವಕುಮಾರ್, ಸ್ಥಳ: ಪರಮಹಂಸ ಮಂಟಪ, ರಾಮಕೃಷ್ಣ ಪರಮಹಂಸ ಸರ್ಕಲ್, ರಾಮಕೃಷ್ಣನಗರ, ಸಂಜೆ 6 ಗಂಟೆಗೆ.

ಸಿಂಧುವಳ್ಳಿ, ಮೈಸೂರು ತಾಲೂಕು

■ **ಮೈಸೂರು ವಿಶ್ವವಿದ್ಯಾನಿಲಯ, ಶ್ರೀ ನಟರಾಜ ಪ್ರತಿಷ್ಠಾನ, ರಾಷ್ಟ್ರೀಯ ಸೇವಾ ಯೋಜನೆ, ಶ್ರೀ ನಟರಾಜ ಮಹಿಳಾ ವಸತಿ ಪ್ರಥಮ ದರ್ಜೆ ಕಾಲೇಜು:** ವಾರ್ಷಿಕ ವಿಶೇಷ ಶಿಬಿರ–2023–24, ವಿಜ್ಞಾನ ಮತ್ತು ವೈಜ್ಞಾನಿಕ ಮನೋಭಾವದೆಡೆಗೆ ಯುವ ಜನತೆ, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಸಿಂಧುವಳ್ಳಿ, ಮೈಸೂರು ತಾಲೂಕು.

ಮೈಸೂರು ಮಿತ್ರ

20 ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು

ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ

- ಚುನಾವಣೆ ತಂತ್ರಗಾರಿಕೆ ಗುಟ್ಟು ಬಿಟ್ಟು ಕೊಡಲ್ಲ
- ಬಿಜೆಪಿ-ಜೆಡಿಎಸ್ ಮೈತ್ರಿ ಕಾಂಗ್ರೆಸ್‌ಗೆ ಲಾಭ



ಮೈಸೂರು, ಮಾ.24(ಬಿಎಲ್‌ಯು)– ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲ್ಲಲು ರೂಪಿಸಿರುವ ರಾಜಕೀಯ ತಂತ್ರಗಾರಿಕೆಯ ರಹಸ್ಯ ಬಹಿರಂಗಪಡಿಸುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಮೈಸೂರು ವಿಮಾನ ನಿಲ್ದಾಣದಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಲೋಕಸಭಾ ಚುನಾವಣೆಯಲ್ಲಿ ರಾಜಕೀಯ ತಂತ್ರಗಾರಿಕೆ ಮಾಡಿದ್ದೇವೆ. ಆದರೆ ಅದನ್ನು ಬಹಿರಂಗ ಮಾಡಲ್ಲ. ಕೆಲವು ಗುಟ್ಟುಗಳನ್ನು ಗುಟ್ಟಾಗಿಯೇ ಇಡಬೇಕು ಎಂದು ತಿಳಿಸಿದರು.

ರಾಷ್ಟ್ರಾದ್ಯಂತ ಮೋದಿ ಅಲೆ ಇದ್ದು, ಕರ್ನಾಟಕದ 28 ಕ್ಷೇತ್ರಗಳಲ್ಲಿ ಗೆಲ್ಲುತ್ತೇವೆ ಎಂಬ ಬಿಜೆಪಿಯವರ ಅಚಲ ವಿಶ್ವಾಸದ ಹೇಳಿಕೆ ನೀಡುತ್ತಿರುವ ಸಂದರ್ಭದಲ್ಲಿ ರಾಜಕೀಯ ತಂತ್ರಗಾರಿಕೆಯ ಗುಟ್ಟು ಬಿಟ್ಟುಕೊಡುವುದಿಲ್ಲ ಎಂಬ ಸಿದ್ದರಾಮಯ್ಯ ಅವರ ಈ ಹೇಳಿಕೆ ಕುತೂಹಲಕ್ಕೆಡೆ ಮಾಡಿದೆ. ಸಿದ್ದರಾಮಯ್ಯ ಅವರ ರಾಜಕೀಯ ತಂತ್ರಗಾರಿಕೆಯ ಗುಟ್ಟು ಏನಿರಬಹುದು ಎಂಬ ಹಲವು ಪ್ರಶ್ನೆಗಳು ಎದುರಾಗಿದೆ.

ಕರ್ನಾಟಕದ 20 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲಿದೆ. 28 ಕ್ಷೇತ್ರಗಲ್ಲಿ ಗೆಲ್ಲುತ್ತೇವೆ ಎಂದು ಬಿಜೆಪಿಯವರಂತೆ ನಾವು ಸುಳ್ಳು ಹೇಳುವುದಿಲ್ಲ. ಬಿಜೆಪಿಯವರು ಹೇಳುವಂತೆ ಅವರು 28 ಕ್ಷೇತ್ರಗಳಲ್ಲಿ ಗೆಲ್ಲಲು ಸಾಧ್ಯವೇ ಎಂದು ಸಿದ್ದರಾಮಯ್ಯ ಕೇಸರಿ ನಾಯಕರಿಗೆ ಟಾಂಗ್ ನೀಡಿದರು.

ಚಾಮರಾಜನಗರ ಸೇರಿದಂತೆ ಉಳಿದ ಕ್ಷೇತ್ರಗಳ ಅಭ್ಯರ್ಥಿಗಳ ಪಟ್ಟಿಯನ್ನು ನಾಳೆ ಅಥವಾ ನಾಡಿದ್ದು ಬಿಡುಗಡೆ ಮಾಡಲಾಗುವುದು. ಚಾಮರಾಜನಗರ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಸಂಬಂಧ ಯಾವುದೇ ಕಗ್ಗಂಟು ಅಥವಾ ಎಳೆದಾಟವಿಲ್ಲ ಎಂದು ಸ್ಪಷ್ಟಪಡಿಸಿದರು.

ಮೈಸೂರು ಕೊಡಗು, ಚಾಮರಾಜನಗರ ಮಾತ್ರವಲ್ಲದೆ 28 ಕ್ಷೇತ್ರಗಳು ನನಗೆ ಪ್ರತಿಷ್ಠೆಯ ಕಣಗಳಾಗಿವೆ. ಎಲ್ಲಾ ಕ್ಷೇತ್ರದ ಗೆಲುವಿಗಾಗಿ ಶ್ರಮಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ನಡುವಿನ ಮೈತ್ರಿಯಿಂದ ನಮಗೆ ಲಾಭವಾಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಹಿಂದೆ ಕಾಂಗ್ರೆಸ್ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಾಗ ನಮಗೆ ಯಾವುದೇ ರೀತಿಯ ಲಾಭವಾಗದೆ, ಅನಾನುಕೂಲವಾಯಿತು. ಅದರಂತೆ ಮೈತ್ರಿಯಿಂದ ಬಿಜೆಪಿಗೂ ಯಾವುದೇ ಅನುಕೂಲವಾಗುವುದಿಲ್ಲ. ಬದಲಿಗೆ ನಮಗೆ ಲಾಭವಾಗುತ್ತದೆ ಎಂದರು. ಕಾಂಗ್ರೆಸ್ ಟಿಕೆಟ್ ಹಂಚಿಕೆಯಲ್ಲಿ ಕುಟುಂಬ ರಾಜಕಾರಣವನ್ನು ಸ್ಪಷ್ಟವಾಗಿ ನಿರಾಕರಿಸಿದ ಸಿಎಂ, ಜನರು ಬಯಸಿದವರಿಗೆ ಟಿಕೆಟ್ ಕೊಟ್ಟಿದ್ದೇವೆ. ಇದರಲ್ಲಿ ಕುಟುಂಬ ರಾಜಕಾರಣವಿಲ್ಲ ಎಂದು ಸ್ಪಷ್ಟಪಡಿಸಿದರು.

ಸಿದ್ದರಾಮಯ್ಯ ಪೊಲಿಟಿಕಲ್ ಸ್ಟಂಟ್ ಮಾಡುತ್ತಾರೆ ಎಂಬ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಟೀಕೆಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿ, ಕುಮಾರಸ್ವಾಮಿಗೆ ಒಳ್ಳೆಯದಾಗಲಿ ಎಂದಷ್ಟೆ ಸಿಎಂ ಹೇಳಿದರು.

ನಾವು ನೀಡುವ ಪೂರ್ಣ ಪ್ರಮಾಣದ ಹೇಳಿಕೆ ಪ್ರಸಾರ ಮಾಡದೆ ನಿಮಗಿಷ್ಟ ಬಂದಿರುವುದನ್ನು ಮಾತ್ರ ತೋರಿಸುತ್ತೀರಾ ಎಂದು ಸಿದ್ದರಾಮಯ್ಯ ಮಾಧ್ಯಮದವರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಹೆಚ್ಚಿನ ಸ್ಥಾನ ಗೆಲ್ಲದಿದ್ದರೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕಾಗುತ್ತದೆ ಎಂಬ ಶಾಸಕ ಗುಬ್ಬಿ ಶ್ರೀನಿವಾಸ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ನಾವು ನೀಡುವ ಹೇಳಿಕೆಯ ಹಿಂದೆ ಮುಂದೆ ಬಿಟ್ಟು ಬಿಡುತ್ತೀರಾ. ನಿಮಗೆ ಬೇಕಾದನ್ನು ತೋರಿಸುತ್ತೀರಾ ಎಂದು ಕಿಡಿಕಾರಿದರು.

ಸಿದ್ದರಾಮಯ್ಯ ಬಡವರ ಪರ ಕೆಲಸ ಮಾಡಿದ್ದಾರೆ. ಅವರನ್ನು ಬೆಂಬಲಿಸಬೇಕು ಎಂಬ ಅರ್ಥದಲ್ಲಿ ಶ್ರೀನಿವಾಸ್ ಹೇಳಿದ್ದಾರೆ. ಆದರೆ ಅವರ ಮಾತಿನ ಹಿಂದೆ ಹಾಗೂ ಮುಂದಿನ ಹೇಳಿಕೆ ಅರ್ಥ ಬಿಟ್ಟು ನಿಮಗೆ ಬೇಕಾದ ಹೇಳಿಕೆ ತೋರಿಸುತ್ತೀರಾ. ಇದರಿಂದ ಆ ಹೇಳಿಕೆ ಅರ್ಥಪೂರ್ಣವಾಗಿರುವುದಿಲ್ಲ ಎಂದರು.

ಪೂರ್ಣ ಅರ್ಥದ ಮಾತು ಕೇಳಿಸದ ಕಾರಣ ಯಾವ ಅರ್ಥದಲ್ಲಿ ಮಾತಾಡಿದ್ದಾರೆ ಎಂಬ ಸತ್ಯ ತಿಳಿಯುವುದಿಲ್ಲ. ಆದ ಕಾರಣ ಯಾವ ಧಾಟಿಯಲ್ಲಿ ಹೇಳಿದ್ದಾರೆ ಎಂದು ತೋರಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ನೀಡಿದರು.

ಬಿಜೆಪಿಯವರು ಹೇಳುವುದೆಲ್ಲಾ ಸುಳ್ಳು. ಸುಳ್ಳು ಹೇಳಿ ಅವರಿಗೆ ಅಭ್ಯಾಸವಾಗಿದೆ. ಅವರು ಜನರಿಗೆ ಕೊಟ್ಟ ಯಾವ ಭರವಸೆಯನ್ನು ಈಡೇರಿಸಿಲ್ಲ ಎಂದು ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿಯವರು 600 ಭರವಸೆ ನೀಡಿದ್ದರು. ಇದರಲ್ಲಿ ಕನಿಷ್ಠ ಶೇ.10ರಷ್ಟು ಭರವಸೆಯನ್ನೂ ಈಡೇರಿಸಿಲ್ಲ. ಅವರೇಳುವುದೆಲ್ಲಾ ಸುಳ್ಳು ಎಂಬುವುದಕ್ಕೆ ಇದಕ್ಕಿಂತ ಬೇರೆ ನಿದರ್ಶನ ಬೇಕೆ ಎಂದು ಪ್ರಶ್ನಿಸಿದರು.

ದೇಶದ ಪ್ರತಿಯೊಬ್ಬ ಪ್ರಜೆಯ ಬ್ಯಾಂಕ್ ಖಾತೆಗೆ 15 ಲಕ್ಷ ರೂ. ಹಾಕುತ್ತೇವೆ ಅಂದರು ಕೊಟ್ಟರಾ, ಎರಡು ಕೋಟಿ ಉದ್ಯೋಗ ಸೃಷ್ಟಿಸುತ್ತೇವೆ ಅಂದರು, ಯಾರಿಗಾದರೂ ಕೆಲಸ ಕೊಟ್ಟರಾ, ರೈತರ ಆದಾಯ ದ್ವಿಗುಣ ಮಾಡುತ್ತೇವೆ ಎಂದರು ಆದಾಯ ಹೆಚ್ಚಳ ಮಾಡಿದರಾ ಎಂದು ಸರಣಿ ಪ್ರಶ್ನೆಗಳನ್ನು ಕೇಳಿದರು.

ಬಿಜೆಪಿಯವರು ಸುಳ್ಳು ಹೇಳುತ್ತಾರೆ ಎಂಬುದು ಈ ಅಂಕಿ ಅಂಶಗಳಿಂದ ತಿಳಿಯುತ್ತದೆ ಎಂದು ಆಪಾದಿಸಿದರು. ಆದರೆ ನಾವು ನುಡಿದಂತೆ ನಡೆದಿದ್ದೇವೆ. ನೀಡಿದ ಭರವಸೆ ಈಡೇರಿಸಿದ್ದೇವೆ. ಪಂಚ ಗ್ಯಾರಂಟಿ ಮೂಲಕ ಪ್ರತಿಯೊಬ್ಬ ಫಲಾನುಭವಿಗೆ ಸೌಲಭ್ಯ ಕಲ್ಪಿಸಿದ್ದೇವೆ. ಇದರಿಂದ ಲೋಕಸಭಾ ಚುನಾವಣೆಯಲ್ಲಿ ಜನರು ನಮ್ಮ ಕೈ ಹಿಡಿಯುತ್ತಾರೆ ಎಂಬ ವಿಶ್ವಾಸವಿದೆ ಎಂದರು. ಪಂಚ ಗ್ಯಾರಂಟಿ ಯೋಜನೆಗೆ ಈ ವರ್ಷ 36 ಸಾವಿರ ಕೋಟಿ ರೂ. ನೀಡಿದ್ದೇವೆ. ಮುಂದಿನ ವರ್ಷ ಈ ವೆಚ್ಚ 52 ಸಾವಿರ ಕೋಟಿಯಾಗಲಿದೆ ಎಂದರು.

ಗ್ಯಾರಂಟಿ ಯೋಜನೆಗಳೇ ಕಾಂಗ್ರೆಸ್ ಗೆಲುವಿಗೆ ಶ್ರೀರಕ್ಷೆ

ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ವಿಶ್ವಾಸ



ಮೈಸೂರು, ಮಾ.24–ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ನೀಡುವುದರ ಮೂಲಕ ಎಲ್ಲಾ ವರ್ಗದವರನ್ನು ಮೇಲೆತ್ತುವ ಕೆಲಸ ಮಾಡಿದೆ. ಈ ಗ್ಯಾರಂಟಿ ಯೋಜನೆಗಳೇ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಶ್ರೀರಕ್ಷೆಯಾಗಲಿದೆ ಎಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಹೆಬ್ಬಾಳ್ ಲೋಕನಾಯಕ ನಗರದಲ್ಲಿ ಕಾಂಗ್ರೆಸ್ ಬೂತ್ ಮಟ್ಟದ ಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಪರ ಮತಯಾಚಿಸಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಸಾಧನೆಗಳನ್ನು ಕ್ಷೇತ್ರದ ಮತದಾರರಿಗೆ ಮನೆ ಮನೆಗೆ ಹೋಗಿ ತಿಳಿಸುವುದರ ಮೂಲಕ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅತಿ ಹೆಚ್ಚು ಮತ ನೀಡುವುದರೊಂದಿಗೆ ನಮ್ಮ ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಭಾಸ್ಕರ್‌ಗೌಡ, ಮಾಜಿ ಮೇಯರ್ ಬಿ.ಕೆ.ಪ್ರಕಾಶ್, ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ಮಂಚೇಗೌಡನಕೊಪ್ಪಲು ರವಿ, ಪಾಲಿಕೆ ಮಾಜಿ ಸದಸ್ಯ ಶ್ರೀನಿವಾಸ್, ಎಪಿಎಂಸಿ ಮಾಜಿ ಅಧ್ಯಕ್ಷ ಬಸವರಾಜು, ಸ್ಥಳೀಯ ಮುಖಂಡ ಕೇಬಲ್ ಮಹೇಶ್, ವಾರ್ಡ್ ಅಧ್ಯಕ್ಷ ನಾಗರಾಜು, ಸಿಂಡಿಕೇಟ್ ಮಾಜಿ ಸದಸ್ಯ ಗೋಪಿನಾಥ್, ವಾರ್ಡ್ ಮಹಿಳಾ ಅಧ್ಯಕ್ಷೆ ಕಮಲಮ್ಮ ಇನ್ನಿತರರು ಹಾಜರಿದ್ದರು.

ಯದುವೀರ್ ಒಡೆಯರ್‌ಗೆ ಹುಟ್ಟುಹಬ್ಬದ ಸಂಭ್ರಮ



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ನಗರಪಾಲಿಕೆ ಮಾಜಿ ಸದಸ್ಯ ಹಾಗೂ ಒಕ್ಕಲಿಗರ ಸಂಘದ ನಿರ್ದೇಶಕ ಪ್ರಶಾಂತ್‌ಗೌಡ, ಹುಣಸೂರು ರಮೇಶ್, ಪ್ರವೀಣ್ ಜೈನ್, ಗೋಪಿನಾಥ್, ಗುರುಪ್ರಸಾದ್ ಹುಟ್ಟುಹಬ್ಬದ ಶುಭಾಶಯ ಕೋರಿದರು.



ಒಂಟಿಕೊಪ್ಪಲು ಗ್ರಾಮದೇವತೆ ಹಬ್ಬದ ಅಂಗವಾಗಿ ಆಯೋಜಿಸಿದ್ದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಕರ್ನಾಟಕ ರಾಜ್ಯ ವಸತಿ ಮಹಾಮಂಡಳದ ನಿರ್ದೇಶಕ ಎಸ್‌ಬಿಎಂ ಮಂಜು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಆಯೋಜಕರಾದ ಆನಂದ್, ವಿನಯ್, ಮೋಹನ್, ಪ್ರಜ್ವಲ್, ಶರತ್ ಇನ್ನಿತರರು ಉಪಸ್ಥಿತರಿದ್ದರು.

ಕೃಷ್ಣ ಜನಮನ ಅವರ 'ಚಾವಡಿ' ಕಾದಂಬರಿ ಬಿಡುಗಡೆ



ಮೈಸೂರಿನ ರಂಗಾಯಣದ ಶ್ರೀರಂಗ ವೇದಿಕೆಯಲ್ಲಿ ದೇಸೀರಂಗ ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಮಾರಂಭದಲ್ಲಿ ಕೃಷ್ಣ ಜನಮನ ಅವರ 'ಚಾವಡಿ' ಕಾದಂಬರಿಯನ್ನು ನಿವೃತ್ತ ಪ್ರಾಧ್ಯಾಪಕ ಮಹದೇವ ಭಾನುವಾರ ಬಿಡುಗಡೆಗೊಳಿಸಿದರು.

ಮೈಸೂರು,ಮಾ.24(ಜಿಎ)–ಹಳೆ ಪೀಳಿಗೆಯ ಮೌಲ್ಯಗಳಿಗೆ ಹೊಸ ಪೀಳಿಗೆಯ ಮೌಲ್ಯಗಳು ಬೆರೆತಾಗ ದುರಂತಗಳು ಸಂಭವಿಸುತ್ತವೆ ಎಂದು ನಿವೃತ್ತ ಪ್ರಾಧ್ಯಾಪಕ ಮಹದೇವ ಅಭಿಪ್ರಾಯಪಟ್ಟರು.

ಮೈಸೂರಿನ ರಂಗಾಯಣದ ಶ್ರೀರಂಗ ವೇದಿಕೆಯಲ್ಲಿ ದೇಸೀರಂಗ ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಭಾನುವಾರ ಆಯೋಜಿಸಿದ್ದ ಸಮಾರಂಭದಲ್ಲಿ ಕೃಷ್ಣ ಜನಮನ ಅವರ 'ಚಾವಡಿ' ಕಾದಂಬರಿಯನ್ನು ಬಿಡುಗಡೆಗೊಳಿಸಿ, ಮಾತನಾಡಿದರು.

ಇಂದು ಬಹುತೇಕರು ನಾವೆಲ್ಲರೂ ಒಂದೇ ಎಂಬ ಮೌಲ್ಯವನ್ನು ಒಪ್ಪಿಕೊಳ್ಳಲು ಸಿದ್ಧರಿಲ್ಲ. ಒಬ್ಬೊಬ್ಬರ ಚಿಂತನಾ ಶೈಲಿಗಳು, ಆಚಾರ, ವಿಚಾರಗಳಲ್ಲಿ ಬದಲಾವಣೆ ಕಾಣುತ್ತಿವೆ. ಆ ಎಲ್ಲಾ ಅಂಶಗಳನ್ನಿಟ್ಟುಕೊಂಡು ಸಮಾನತೆಗೆ ಒಂದು ಹೊಸ ಅರ್ಥವನ್ನು ನೀಡಬೇಕಿದೆ ಎಂಬುದನ್ನು ಈ ಕಾದಂಬರಿಯಲ್ಲಿ ವಿಭಿನ್ನ ಶೈಲಿಯೊಂದಿಗೆ, ಅಚ್ಚುಕಟ್ಟಾಗಿ ಪದಜೋಡಣೆ ಮಾಡಲಾಗಿದೆ ಎಂದು ಕಾದಂಬರಿಯ ವೈಶಿಷ್ಟ್ಯತೆಯನ್ನು ವಿವರಿಸಿದರು.

ಕಾದಂಬರಿಯನ್ನು ಒಂದೆರಡು ಗಂಟೆಗಳಲ್ಲಿ ಕುಳಿತು ಓದಬಹುದು. ಆದರೆ ಇದರಲ್ಲಿ ಅಡಕವಾಗಿರುವ ವಿಷಯ ವಿಚಾರತೆಗಳು ವಿಭಿನ್ನವಾಗಿವೆ. ಇಲ್ಲಿ ಲೇಖಕರ ಭಾವನೆಗೆ ಭಾಷೆ ಒದಗಿಬಂದಿದೆ. ಕಾದಂಬರಿಯಲ್ಲಿ ಸಮುದಾಯ ಹಾಗೂ ವ್ಯಕ್ತಿಗಳ ಘಟನೆಗಳು ಎಂಬ ಎರಡು ಅಂಶಗಳಿರುತ್ತವೆ. ಮೊದಲೆರಡು ಅಧ್ಯಾಯದಲ್ಲಿ ಗ್ರಾಮಗಳ ಗುಣ ಏನಿದೆ ಎಂಬ ಅಗೋಚರ ಸಂಬಂಧಗಳನ್ನು ಇಲ್ಲಿ ವಿವರಿಸಲಾಗಿದೆ ಎಂದರು. ಹಳ್ಳಿಗಳಲ್ಲಿರುವ ಕೆಲವು ಆಚರಣೆಗಳು, ನಂಬಿಕೆಗಳು ಹಳ್ಳಿಗಳು ಹಿಂದುಳಿಯುವುದಕ್ಕೆ ಕಾರಣವಾಗಿದೆ. ಮಾಡಿದ್ದುಣ್ಣೋ ಮಾರಾಯ ಎಂಬಂತೆ ಕಲ್ಪನೆಗಳಲ್ಲಿ ನಂಬಿಕೆ ಇಡುವವರು ಹಳ್ಳಿಯ ಜನ. ಅವರ ಕಲ್ಪನೆ, ನಂಬಿಕೆಗಳನ್ನು ಅವರದ್ದೇ ಮಾನದಂಡದಲ್ಲಿ ಅಳೆಯುತ್ತಾರೆ. ಇಂತಹ ಹಳ್ಳಿಯ ವ್ಯವಸ್ಥೆಗಳ ಕುರಿತು ಬರೆದಂತಹ ಕಾದಂಬರಿ ಇದಾಗಿದ್ದು, ಭಾಷೆಗೆ ಹೊಸ ಚೌಕಟ್ಟನ್ನು ನೀಡುವಂತಹ ಹೊಸ ಆಯಾಮವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾರತೀಯ ಭಾಷಾ ಸಂಸ್ಥಾಪನ ಯೋಜನಾ ನಿರ್ದೇಶಕ ಪ್ರೊ ಎನ್.ಎಂ.ತಳವಾರ್, ಸಂಸ್ಕೃತಿ ಬುಕ್ ಏಜೆನ್ಸಿ ಪ್ರಕಾಶಕ ಸಂಸ್ಕೃತಿ ಸುಬ್ರಮಣ್ಯ, ಕ್ರೈಸ್ತ ಕಾಲೇಜು ಬೆಂಗಳೂರಿನ ಉಪನ್ಯಾಸಕ ಡಾ.ಹ.ರಾ.ಮಹೇಶ್, ಹುಲ್ಲಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಹೆಚ್.ಎಂ.ಮಂಜುನಾಥ ಇದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಶಾಸಕ ಕೆ.ಹರೀಶ್‌ಗೌಡ ಅವರೊಂದಿಗೆ ಚಾಮರಾಜ ಕ್ಷೇತ್ರದ ಇಂದಿರಾ ಗಾಂಧಿ ಬ್ಲಾಕಿನ ರವಿ ಮಂಚೇಗೌಡನಕೊಪ್ಪಲು, ದೇವರಾಜ ಬ್ಲಾಕ್‌ನ ರಮೇಶ್ ರಾಮಪ್ಪ ಆತ್ಮೀಯವಾಗಿ ಅಭಿನಂದಿಸಿದರು.

ಪ್ರತಿಯೊಬ್ಬರಿಗೂ ಮತದಾನದ ಪ್ರಾಮುಖ್ಯತೆ ತಿಳಿಯಬೇಕು

ಸಹಾಯಕ ಸ್ವೀಪ್ ನೋಡಲ್ ಅಧಿಕಾರಿ ಎಂ.ಶಾಂತ



ಮೈಸೂರು,ಮಾ.24–ಪ್ರತಿಯೊಬ್ಬ ಮತದಾರರು ಮತದಾನ ಏಕೆ ಮಾಡಬೇಕು ಎಂಬುದರ ಪ್ರಾಮುಖ್ಯತೆಯನ್ನು ತಿಳಿದು ಕಡ್ಡಾಯವಾಗಿ ಮತ ಹಾಕುವುದರ ಮೂಲಕ ನಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಸ್ವೀಪ್ ಸಮಿತಿಯ ಸಹಾಯಕ ಸ್ವೀಪ್ ನೋಡಲ್ ಅಧಿಕಾರಿ ಎಂ.ಶಾಂತ ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ತಾಲೂಕು ಮಟ್ಟದ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ಆಯೋಜಿಸಲಾಗಿದ್ದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವೀಪ್ ಸಮಿತಿಯು ದೇಶದಾದ್ಯಂತ ಮತದಾನದ ಬಗ್ಗೆ ಜನರಲ್ಲಿ ಅರಿವು ಹಾಗೂ ಮಾಹಿತಿಯನ್ನು ನೀಡುವ ಕೆಲಸ ಮಾಡುತ್ತಿದೆ. ಇದರಿಂದಾಗಿ ಇಂದು 97 ಕೋಟಿ ಜನರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡಿದ್ದಾರೆ ಎಂದರು.

ಗ್ರಾಮೀಣ, ನಗರ ಪ್ರದೇಶದಲ್ಲಿನ ಯುವಕರು ಹಾಗೂ ಮತದಾರರಲ್ಲಿ ಚುನಾವಣಾ ಸಾಕ್ಷರತೆ ಮೂಡಿಸಬೇಕು. ಯಾವುದೇ ಮತದಾರರು ಆಸೆ ಆಮಿಷಗಳಿಗೆ ಒಳಗಾಗದೆ ಸ್ವಯಂ ನಿರ್ಣಯ ಕೈಗೊಂಡು ಉತ್ತಮ ನಾಯಕನನ್ನು ಆಯ್ಕೆ ಮಾಡಲು ನೈತಿಕ ಮತದಾನ ಮಾಡಲು ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದರು.

ಇಎಲ್‌ಸಿ ವಿದ್ಯಾರ್ಥಿಗಳಿಗೆ, ಸಂಚಾಲಕರಿಗೆ ವಿವಿಧ ಚಟುವಟಿಕೆಗಳ ಮೂಲಕ ಚುನಾವಣೆಯ ಬಗ್ಗೆ ಮನದಟ್ಟಾಗುವಂತೆ ತರಬೇತಿ ನೀಡಬೇಕು. ಸಮುದಾಯದ ರಾಯಭಾರಿಗಳು ತಮ್ಮ ವ್ಯಾಪ್ತಿಗೆ ಬರುವ ಮತದಾರರಿಗೆ ಮತದಾನದ ಬಗ್ಗೆ ವಿಸ್ತೃತವಾಗಿ ಜಾಗೃತಿಯನ್ನು ಮೂಡಿಸಿ, ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಡಾ.ರಂಜಿನಿ, ಪ್ರೌಢ ಶಾಲಾ ವಿಭಾಗದ ನೋಡಲ್ ಅಧಿಕಾರಿ ದೇವರಾಜು, ಜಿಲ್ಲಾ ಸ್ವೀಪ್ ಸಮಿತಿಯ ಸದಸ್ಯರಾದ ಡಾ.ಹೇಮಲತಾ, ಡಾ. ಶಶಿಕಲಾ, ಡಾ.ಮಂಗಳಮೂರ್ತಿ, ಪ್ರಕಾಶ್, ಮಂಜುನಾಥ್, ಶಿವಕುಮಾರ್, ನಾಗಚಂದ್ರ ರಮೇಶ್ ಸೇರಿದಂತೆ ತಾಲೂಕು ಮಟ್ಟದ ಶಿಕ್ಷಕರು ಹಾಗೂ ಉಪನ್ಯಾಸಕರು ಉಪಸ್ಥಿತರಿದ್ದರು.



ಜೆಡಿಎಸ್ ಮುಖಂಡ ಗೆಜ್ಜಗಳ್ಳಿ ಲೋಕೇಶ್ ಅವರಿಗೆ ಅಭಿಮಾನಿಗಳು ಹುಟ್ಟುಹಬ್ಬಕ್ಕೆ ಶುಭಕೋರಿದರು. ಈ ವೇಳೆ ದಿ ಯೂನಿಯನ್ ಸಹಕಾರ ಬ್ಯಾಂಕ್ ಉಪಾಧ್ಯಕ್ಷ ಕಡಕೊಳ ಕುಮಾರಸ್ವಾಮಿ, ಗ್ರಾಪಂ ಮಾಜಿ ಸದಸ್ಯ ಪಿ.ಮಹೇಶ್, ಯುವ ಮುಖಂಡರಾದ ಆಟೋ ಮಂಜು, ಓಂ ಪ್ರಕಾಶ್, ಜಮೀರ್ ಅಹಮದ್, ಎಸ್.ಕೆ.ಎಫ್ ದಿನೇಶ್, ರಾಜು, ಮಂಜು ಇನ್ನಿತರರು ಉಪಸ್ಥಿತರಿದ್ದರು.

ಚುನಾವಣಾ ಬಾಂಡ್ ಹಗರಣ ನ್ಯಾಯಾಂಗ ತನಿಖೆಯಾಗಬೇಕು

ಸಿಪಿಐ(ಎಂ)ನ ರಾಜ್ಯ ಕಾರ್ಯದರ್ಶಿ ಯು.ಬಸವರಾಜು ಆಗ್ರಹ

ಮೈಸೂರು, ಮಾ.24(ಜಿಎ)–ಕೇಂದ್ರ ಸರ್ಕಾರದ ಚುನಾವಣಾ ಬಾಂಡ್ ಹಗರಣವನ್ನು ಸುಪ್ರೀಂಕೋರ್ಟ್ ನೇತೃತ್ವದಲ್ಲಿ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ)ದ ರಾಜ್ಯ ಕಾರ್ಯದರ್ಶಿ ಯು. ಬಸವರಾಜ ಒತ್ತಾಯಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯು ಬಾಂಡ್ ಮೂಲಕ ಸುಮಾರು 8,252 ಕೋಟಿ ಹಣ ಪಡೆದಿದೆ. ಇಲ್ಲಿ ಅಧಿಕಾರ ದುರುಪಯೋಗವಾಗಿದೆ. ಹಲವರು ತನಿಖಾ ಸಂಸ್ಥೆಗಳಿಗೆ ಹೆದರಿ, ಉದ್ಯಮದ ಲಾಭಕ್ಕಾಗಿ ಹಣ ನೀಡಿರುವುದು ಕಂಡುಬಂದಿದ್ದು, ಇದು ನರೇಂದ್ರ ಮೋದಿ ಸರ್ಕಾರದ ಭ್ರಷ್ಟಾಚಾರವನ್ನು ಸೂಚಿಸುತ್ತದೆ. ಅಲ್ಲದೇ, ರಾಜಕೀಯ ದ್ವೇಷ ಸಾಧನೆಯಲ್ಲೂ ಕೇಂದ್ರ ಸರ್ಕಾರ ನಿರತವಾಗಿದೆ. ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಬಂಧನ ಖಂಡನೀಯ. ಕೂಡಲೇ ಅವರನ್ನು ಬಿಡುಗಡೆಗೊಳಿಸಬೇಕು ಎಂದು ಆಗ್ರಹಿಸಿದರು.

ಬರ ಪರಿಹಾರದಲ್ಲಿ ರಾಜ್ಯದ ಹಿತ ಕಾಯುವಲ್ಲಿ ಬಿಜೆಪಿ ಸಂಸದರು ಸಂಪೂರ್ಣ ವಿಫಲವಾಗಿದ್ದಾರೆ. ಎರಡು ಕೋಟಿ ಉದ್ಯೋಗ ಸೃಷ್ಟಿ, ರೈತರ ಆದಾಯ ದ್ವಿಗುಣ ವಿಷಯದಲ್ಲೂ ಬಿಜೆಪಿ ಯಾವುದೇ ಕ್ರಮ ಕೈಗೊಂಡಿಲ್ಲ. ಇಂದು ಮತ್ತೆ ಅಧಿಕಾರ ಪಡೆಯಲು ಅಭ್ಯರ್ಥಿಗಳನ್ನು ಬದಲಾಯಿಸಿ, ಮತದಾರರ ದಿಕ್ಕು ತಪ್ಪಿಸುತ್ತಿದ್ದಾರೆ. ಇಂಥ ಫ್ಯಾಸಿಸ್ಟ್ ಮನೋಭಾವದ ಬಿಜೆಪಿ ಹಾಗೂ ಅದರ ಮಿತ್ರ ಪಕ್ಷಗಳನ್ನು ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಮತದಾರರು ತಿರಸ್ಕರಿಸಬೇಕು. ಮೈಸೂರು ರಾಜ ಮನೆತನದ ಜನಪರ ನೀತಿಗೆ ವಿರುದ್ಧವಾಗಿರುವ ಬಿಜೆಪಿ ಜೊತೆ ಕೈಜೋಡಿಸಿರುವ ರಾಜ ವಂಶಸ್ಥ ಯದುವೀರ್ ಅವರನ್ನೂ ಸೋಲಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾರ್ಯದರ್ಶಿ ಜಗದೀಶ ಸೂರ್ಯ, ಸಮಿತಿ ಸದಸ್ಯರಾದ ಜಿ.ಜಯರಾಮ್, ಕೆ.ಬಸವರಾಜು, ಎನ್. ವಿಜಯಕುಮಾರ್ ಉಪಸ್ಥಿತರಿದ್ದರು.



ಮೈಸೂರಿನ ವಿಜಯನಗರದಲ್ಲಿರುವ ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಆರ್ಯ ಈಡಿಗರ ವಿದ್ಯಾರ್ಥಿನಿಲಯದಲ್ಲಿ ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮತ್ತು ಮೈಸೂರು, ಚಾಮರಾಜನಗರ ಜಿಲ್ಲಾ ಆರ್ಯ ಈಡಿಗರ ಸಂಘದ ವತಿಯಿಂದ ಆಯೋಜಿಸಿದ್ದ ಬಿ.ವಿ.ಬಾಲಸುಬ್ರಮಣ್ಯ, ಗುಂಡ್ಲುಪೇಟೆ ಜಿ.ಎನ್.ನಂಜುಂಡಯ್ಯ ದತ್ತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಸಾಹಿತಿಗಳಾದ ತಳುಕಿನ ಲಕ್ಷ್ಮಿ ಮಧು ಮತ್ತು ಸುಮತಿ ಸುಬ್ರಮ್ಮಣ್ಯ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಕಸಾಪ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಈಡಿಗರ ಸಂಘದ ಅಧ್ಯಕ್ಷ ಎಂ.ಕೆ.ಪೋತರಾಜು, ಉಪಾಧ್ಯಕ್ಷ ರಾಜಶೇಖರ್ ಕದಂಬ, ಕಾರ್ಯದರ್ಶಿ ಕೃಷ್ಣಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

ನಾಯಕ ಸಮುದಾಯದ 4 ದಶಕದ ಸಮಸ್ಯೆ 6 ತಿಂಗಳಲ್ಲಿ ಬಗೆಹರಿಸಿದ್ದೇನೆ

ಬಿಜೆಪಿ ಎಸ್ಟಿ ಮೋರ್ಚಾ ವತಿಯಿಂದ ಆಯೋಜಿಸಲಾಗಿದ್ದ ಪರಿಶಿಷ್ಟ ಪಂಗಡದ ಮುನ್ನಡೆ ಸಮಾವೇಶದಲ್ಲಿ ಸಂಸದ ಪ್ರತಾಪ್ ಸಿಂಹ



ಮೈಸೂರಿನ ನಂಜುಮಳಿಗೆ ಬಳಿಯಿರುವ ನೇರಂಬಳ್ಳಿ ಕಲ್ಯಾಣ ಮಂಟಪದಲ್ಲಿ ಭಾನುವಾರ ಬಿಜೆಪಿ ಎಸ್ಟಿ ಮೋರ್ಚಾ ವತಿಯಿಂದ ಆಯೋಜಿಸಲಾಗಿದ್ದ ಪರಿಶಿಷ್ಟ ಪಂಗಡದ ಮುನ್ನಡೆ ಸಮಾವೇಶದಲ್ಲಿ ಸಂಸದ ಪ್ರತಾಪ ಸಿಂಹ ಮಾತನಾಡಿದರು.

ಮೈಸೂರು, ಮಾ.24(ಎಂಟಿವೈ)– ನಾಯಕ ಸಮುದಾಯದ ಪರಿವಾರ, ತಳವಾರ ಒಳಪಂಗಡಗಳು 40 ವರ್ಷದಿಂದ ಎದುರಿಸುತ್ತಿದ್ದ ಸಮಸ್ಯೆಯನ್ನು 6 ತಿಂಗಳಲ್ಲೇ ಬಗೆಹರಿಸಿಕೊಟ್ಟಿದ್ದೇನೆ ಎಂದು ಸಂಸದ ಪ್ರತಾಪ ಸಿಂಹ ತಿಳಿಸಿದ್ದಾರೆ.

ಮೈಸೂರಿನ ನಂಜುಮಳಿಗೆ ಬಳಿಯಿರುವ ನೇರಂಬಳ್ಳಿ ಕಲ್ಯಾಣ ಮಂಟಪದಲ್ಲಿ ಭಾನುವಾರ ಬಿಜೆಪಿ ಎಸ್ಟಿ ಮೋರ್ಚಾ ವತಿಯಿಂದ ಆಯೋಜಿಸಲಾಗಿದ್ದ ಪರಿಶಿಷ್ಟ ಪಂಗಡದ ಮುನ್ನಡೆ ಸಮಾವೇಶದಲ್ಲಿ ಮಾತನಾಡಿದ ಅವರು, ಮೈಸೂರು ಭಾಗದಲ್ಲಿ ನಾಯಕ ಸಮುದಾಯ ಪರಿವಾರ, ತಳವಾರ ಒಳಪಂಗಡಗಳು 1982ರಿಂದಲೂ ಸಮಸ್ಯೆ ಎದುರಿಸುತ್ತಿದ್ದವು. ಈ ಪಂಗಡಗಳಿಗೆ ಎಸ್ಟಿ ಪ್ರಮಾಣ ಪತ್ರ ನೀಡುವುದಕ್ಕೂ ನಿರಾಕರಿಸಲಾಗುತ್ತಿತ್ತು. ಇದರಿಂದ ಉದ್ಯೋಗ ಸೇರಿದಂತೆ ಇನ್ನಿತರ ಸೌಲಭ್ಯ ಪಡೆದುಕೊಳ್ಳುವುದಕ್ಕೂ ಸಾಧ್ಯವಾಗುತ್ತಿರಲಿಲ್ಲ. 40 ವರ್ಷದಿಂದ ಮೈಸೂರು ಸಂಸದರಾಗಿ ಚಂದ್ರಪ್ರಭಾ ಅರಸ್, ಯದುವೀರ್ ಅವರ ತಂದೆ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ನಾಲ್ಕು ಬಾರಿ, ಸಿ.ಹೆಚ್.ವಿಜಯಶಂಕರ್, ಅಡಗೂರು ಹೆಚ್.ವಿಶ್ವನಾಥ್ ಅವರಿಂದ ಸಾಧ್ಯವಾಗದ ಕೆಲಸವನ್ನು ನಾನು ಮಾಡಿದ್ದೇನೆ. ನಾಯಕ ಸಮುದಾಯ ನನಗೆ ನೀಡಿದ ಬೆಂಬಲಕ್ಕಾಗಿ ನಾನು ಋಣ ತೀರಿಸಿದ್ದೇನೆ ಎಂದರು.

ಚುನಾವಣೆಗಳಲ್ಲಿ ಅವಕಾಶಗಳು ಬದಲಾಗುತ್ತಿರುತ್ತವೆ. ಹಾಗಾಗಿ ಅದಕ್ಕೆ ತಲೆಕೆಡಿಸಿಕೊಳ್ಳದೆ, ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಮಂತ್ರಿಯನ್ನಾಗಿ ಮಾಡಲು ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು. ರಾಷ್ಟ್ರಭಕ್ತರನ್ನು ಗೆಲ್ಲಿಸಬೇಕು. ಮೈಸೂರಿಗೆ ಮಹಾರಾಜರು ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ಅವುಗಳು ಎಲ್ಲರ ಕಣ್ಣ ಮುಂದೆ ಸಾಕ್ಷಿಯಾಗಿ ಉಳಿದಿವೆ. ಮೈಸೂರು ರಾಜಮನೆತನಕ್ಕೆ ಸೇರಿದ ಯದುವೀರ್ ಅವರು ಬಿಜೆಪಿ ಅಭ್ಯರ್ಥಿಯಾಗಿದ್ದಾರೆ. ಅವರನ್ನು ಗೆಲ್ಲಿಸಬೇಕು. ನಾನು ಕಳೆದ 10 ವರ್ಷಗಳಲ್ಲಿ ಸಂಸದನಾಗಿ ಬಹಳಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇನೆ. ಅವುಗಳು ನಿಲ್ಲಬಾರದು. ಇದಕ್ಕಾಗಿ ನಾಯಕ ಸಮುದಾಯದವರು ಯದುವೀರ್ ಅವರನ್ನು ಬೆಂಬಲಿಸಿ ಕೈಹಿಡಿಯಬೇಕು ಎಂದು ಮನವಿ ಮಾಡಿದರು.

ದೇಶದಲ್ಲಿ ಸುವರ್ಣಯುಗ ಸೃಷ್ಟಿಸಲು ಬಿಜೆಪಿ ಗೆಲ್ಲಿಸಿ

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಯದುವೀರ್ ಮನವಿ



ಮೈಸೂರು, ಮಾ.24(ಎಂಟಿವೈ)– ದೇಶವನ್ನು ಅಭಿವೃದ್ಧಿ ಹೊಂದಿದ ಭಾರತವಾಗಿಸಿ ಸುವರ್ಣಯುಗ ಸೃಷ್ಟಿಸಲು ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವಂತೆ ಮೈಸೂರು–ಕೊಡಗು ಕ್ಷೇತ್ರದ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮನವಿ ಮಾಡಿದ್ದಾರೆ.

ಪರಿಶಿಷ್ಟ ಪಂಗಡದ ಮುನ್ನಡೆ ಸಮಾವೇಶದಲ್ಲಿ ಮಾತನಾಡಿದ ಅವರು, ಮೈಸೂರು ಭಾಗಕ್ಕೆ ಯದುವಂಶದ ಕೊಡುಗೆ ಅಪಾರವಾಗಿದೆ. ಇದೀಗ ಕೇಂದ್ರ ಸರ್ಕಾರದಿಂದಲೂ ಅನೇಕ ಯೋಜನೆಗಳು ಮೈಸೂರಿಗೆ ಲಭಿಸಿವೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯ ನಡೆಸಲು ನನ್ನನ್ನು ಗೆಲ್ಲಿಸುವ ಮೂಲಕ ಶಕ್ತಿ ನೀಡಿ. ಹಿಂದುಳಿದ ವರ್ಗಗಳಲ್ಲಿ ಉದ್ಯೋಗ ಆಕಾಂಕ್ಷಿಗಳನ್ನು ಸೃಷ್ಟಿಸುವ ಬದಲಾಗಿ, ಉದ್ಯೋಗದಾತರನ್ನಾಗಿ ಮಾಡುವ ಅಗತ್ಯವಿದೆ. ಇದಕ್ಕಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಹಲವಾರು ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಚಾಮುಂಡಿಬೆಟ್ಟದಲ್ಲಿ ಅಭಿವೃದ್ಧಿಯ ತೇರನ್ನು ಎಳೆಯಲಾಗುತ್ತದೆ. ಅದೇ ರೀತಿ ಭಾರತ ಮಾತೆಯ ಅಭಿವೃದ್ಧಿ ತೇರನ್ನು ಎಳೆಯಲು ಎಲ್ಲರೂ ಕೈಜೋಡಿಸಬೇಕು. ಆ ಮೂಲಕ ಮುಂದಿನ ಪೀಳಿಗೆಗೆ ಉತ್ತಮವಾದ ವಾತಾವರಣವನ್ನು ಸೃಷ್ಟಿಸಬೇಕಾಗಿದೆ ಎಂದು ಹೇಳಿದರು. ನಾನು ನಿಮ್ಮೊಂದಿಗೆ ಇರುತ್ತೇನೆ. ಕಾರ್ಯಕರ್ತರಿಗಾಗಿ ಕಚೇರಿಯನ್ನು ತೆರೆದು ಕೆಲಸ ಮಾಡುತ್ತೇನೆ. ಎಲ್ಲರೂ ಕೈಜೋಡಿಸಿ, ಒಟ್ಟಾಗಿ ಮೈಸೂರಿನ ಅಭಿವೃದ್ಧಿಗಾಗಿ ಕೆಲಸ ಮಾಡೋಣ ಎಂದು ಮನವಿ ಮಾಡಿದರು.

ಚಾಮರಾಜನಗರ ಮೀಸಲು ಕ್ಷೇತ್ರದ ಅಭ್ಯರ್ಥಿ ಎಸ್.ಬಾಲರಾಜ್ ಮಾತನಾಡಿ, ನನಗೆ ನಿರಂತರವಾಗಿ ನಾಯಕ ಸಮುದಾಯ ಬೆಂಬಲ ನೀಡುತ್ತಾ ಬಂದಿದೆ. ಈ ಹಿಂದೆ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದಾಗ, ಪ್ರತಿಯೊಬ್ಬರು ಹಣ ನೀಡಿ, ಮತವನ್ನೂ ನೀಡಿದ್ದರು. ಈ ಬಾರಿಯ ಚುನಾವಣೆಯಲ್ಲೂ ಈ ಸಮುದಾಯದ ಜನರು ನನಗೆ ಬೆಂಬಲ ನೀಡುತ್ತಿದ್ದಾರೆ. ದೇಶದ ಸಮಗ್ರತೆ, ಏಕತೆ, ರಕ್ಷಣೆ, ಅಭಿವೃದ್ಧಿಗಾಗಿ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನ ಮಂತ್ರಿಯನ್ನಾಗಿ ಮಾಡಲು ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವಂತೆ ಕೋರಿದರು.

ನಕ್ಕರೆ ಅದೇ ಸ್ವರ್ಗ

ಟೀಚರ್ : ಸಕ್ಕರೆ ಪದವನ್ನು ಉಪಯೋಗಿಸಿ ಒಂದು ಸೆಂಟೆನ್ಸ್ ಬರೆಯಿರಿ...
ವಿದ್ಯಾರ್ಥಿ : ಟೀ (Tea) ತುಂಬಾನೇ ಸ್ವೀಟಾಗಿದೆ.
ಟೀಚರ್ : ಎಲ್ಲಿ ಸಕ್ಕರೆ ಪದವನ್ನು ಉಪಯೋಗಿಸಿಲ್ಲ.
ವಿದ್ಯಾರ್ಥಿ : ಅದು ಟೀ (Tea) ಒಳಗಡೆ ಇದೆ.

ಮೈಸೂರು ಮಿತ್ರ
ಸೋಮವಾರ, 25 ಮಾರ್ಚ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

'ಅಳುವೂ ಹಾಲು ಕುದಿಸಿದಂತೆ... ಎರಡು ಬಾರಿ ಉಕ್ಕಿದ ಮೇಲೆ ಬರೀ ಕುದಿಯುತ್ತೆ ಮತ್ತೆ ಉಕ್ಕುವುದಿಲ್ಲ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { 'ಭರಣಿ ಮಳೆ, ಧರಣಿ ಬೆಳೆ'

ನಿಮ್ಮ ಪತ್ರಗಳು

ರಾಜ್ಯಪಾಲರ ನಿಲುವು ಸಮರ್ಥನೀಯ

ಮಾನ್ಯರೆ,

ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ವಿಧಾನಮಂಡಲದಲ್ಲಿ ಅಂಗೀಕಾರವಾಗಿದ್ದ ಕರ್ನಾಟಕ ಹಿಂದೂ ಧಾರ್ಮಿಕ ದತ್ತಿ ಸಂಸ್ಥೆಗಳ ತಿದ್ದುಪಡಿ ಮಸೂದೆ–2024ರ ವಿಧೇಯಕವನ್ನು ರಾಜ್ಯ ಸರ್ಕಾರಕ್ಕೆ ಹಿಂದಿರುಗಿಸಿದ್ದಾರೆಂದು ಮಾಧ್ಯಮಗಳಲ್ಲಿ ಪ್ರಕಟವಾಗಿದೆ. ರಾಜ್ಯದ ವಿರೋಧ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಈ ತಿದ್ದುಪಡಿ ವಿಧೇಯಕದ ಬಗ್ಗೆ ತೀವ್ರ ರೀತಿಯ ವಿರೋಧ ವ್ಯಕ್ತಪಡಿಸಿದ್ದವು. ರಾಜ್ಯ ವಿಧಾನಪರಿಷತ್ತಿನಲ್ಲಿ ಈ ಮಸೂದೆಯನ್ನು ತಿರಸ್ಕರಿಸಲಾಗಿತ್ತು. ಆದರೂ ರಾಜ್ಯ ಸರ್ಕಾರ ಕಳೆದ ಬಜೆಟ್ ಅಧಿವೇಶನದಲ್ಲಿ, ಈ ತಿದ್ದುಪಡಿ ಮಸೂದೆಯನ್ನು 2ನೇ ಬಾರಿಗೆ ರಾಜ್ಯ ವಿಧಾನಸಭೆಯಲ್ಲಿ ಮಂಡಿಸಿ, ಒಪ್ಪಿಗೆ ಪಡೆದುಕೊಂಡು, ಅಂತಿಮವಾಗಿ ರಾಜ್ಯಪಾಲರ ಅನುಮತಿಗಾಗಿ ರಾಜಭವನಕ್ಕೆ ಕಳುಹಿಸಿತ್ತು.

ಈ ತಿದ್ದುಪಡಿ ಮಸೂದೆಯ ಮೂಲಕ, ರಾಜ್ಯ ಸರ್ಕಾರ ಮುಜರಾಯಿ ಇಲಾಖೆ ಅಧೀನದಲ್ಲಿರುವ ಹಾಗೂ ವಾರ್ಷಿಕವಾಗಿ 1 ಕೋಟಿ ಆದಾಯ ಹೊಂದಿರುವ 87 ದೇವಸ್ಥಾನಗಳ ಒಟ್ಟಾರೆ ವಾರ್ಷಿಕ ಆದಾಯದ ಶೇ.10ರಷ್ಟು ಆದಾಯವನ್ನು ಹಾಗೂ ವಾರ್ಷಿಕವಾಗಿ 10 ಲಕ್ಷ ರೂ.ಗಳಿಗಿಂತ ಹೆಚ್ಚಿನ ಆದಾಯ ಹೊಂದಿರುವ 311 ದೇವಸ್ಥಾನಗಳಿಂದ ಶೇ.5ರಷ್ಟು ಆದಾಯವನ್ನು ಪಡೆದುಕೊಂಡು, ರಾಜ್ಯ ಧಾರ್ಮಿಕ ಪರಿಷತ್ತಿನ ಅಧೀನದಲ್ಲಿರುವ ಒಂದು ಸಾಮಾನ್ಯ ಖಾತೆಗೆ ವರ್ಗಾಯಿಸಿ, ಈ ನಿಧಿಯನ್ನು ದೇವಸ್ಥಾನಗಳಲ್ಲಿ ಕೆಲಸ ಮಾಡುವ 40,000ಕ್ಕಿಂತಲೂ ಅಧಿಕ ಅರ್ಚಕರ ಕಲ್ಯಾಣ ಕಾರ್ಯಕ್ರಮಗಳಿಗೆ ಹಾಗೂ 34,000 ಸಿ ದರ್ಜೆಯ ದೇವಸ್ಥಾನಗಳ ಅಭಿವೃದ್ಧಿಗೆ ಬಳಸಲು ಉದ್ದೇಶಿಸಿತ್ತು ಎಂದು ಹೇಳಲಾಗಿದೆ. ಈ ಮಸೂದೆಯ ಮೂಲಕ ರಾಜ್ಯ ಸರ್ಕಾರ, ಸುಮಾರು 60 ಕೋಟಿ ರೂ. ಹಣವನ್ನು ಸಂಗ್ರಹಿಸುವ ಇರಾದೆ ಹೊಂದಿತ್ತು ಎಂದು ಹೇಳಲಾಗಿದೆ.

ಮಸೂದೆಯನ್ನು ರಾಜ್ಯ ಸರ್ಕಾರಕ್ಕೆ ವಾಪಸ್ ಕಳುಹಿಸಿರುವ ರಾಜ್ಯಪಾಲರು ಬೇರೆ ರೀತಿಯ ಧಾರ್ಮಿಕ ಸಂಸ್ಥೆಗಳಿಂದ ಇದೇ ರೀತಿಯಲ್ಲಿ ಹಣವನ್ನು ವರ್ಗಾಯಿಸುವ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರ ಹೊಂದಿದೆಯೇ ಎಂದು ಕೇಳಿದ್ದಾರೆ. ಅದೂ ಅಲ್ಲದೆ, ಸದರಿ ಮಸೂದೆಯ ಬಗ್ಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ಅಂತಿಮ ವಿಚಾರಣೆ ಬಾಕಿ ಇರುವುದರಿಂದ, ಇಂತಹ ವಿಚಾರದಲ್ಲಿ ಆತುರಪಡುವುದು ಸರಿಯಲ್ಲವೆಂದು ಹೇಳಿ ಮಸೂದೆಯನ್ನು ಹಿಂದಿರುಗಿಸಿದ್ದಾರೆ. ಯಾವುದೇ ಕಾಯ್ದೆಯ ಸಿಂಧುತ್ವ ನ್ಯಾಯಾಲಯದಲ್ಲಿ ಬಾಕಿ ಇರುವಾಗ, ಅವುಗಳ ತಿದ್ದುಪಡಿ ಪ್ರಶ್ನಾರ್ಹವಾಗುತ್ತದೆ. ಈ ವಿಚಾರದಲ್ಲಿ ರಾಜ್ಯಪಾಲರು ವ್ಯಕ್ತಪಡಿಸಿರುವ ಅಭಿಪ್ರಾಯಗಳು ಸೂಕ್ತವಾಗಿದ್ದು, ರಾಜ್ಯ ಸರ್ಕಾರ, ರಾಜ್ಯಪಾಲರ ಸಂದೇಹಗಳಿಗೆ ಸೂಕ್ತ ಉತ್ತರವನ್ನು ನೀಡಬೇಕಾಗಿದೆ. **–ಕೆ.ವಿ.ವಾಸು, ವಕೀಲರು–ನೋಟರಿ, ಮೈಸೂರು**

ಸ್ವಚ್ಛತೆ ಮೂಲಕ ನೀರಿನ ಮೂಲ ಸಂರಕ್ಷಿಸಿ

ಮಾನ್ಯರೆ,

ಬೇಸಿಗೆ ಬಂತೆಂದರೆ ಎಲ್ಲೆಡೆ ನೀರಿಗಾಗಿ ಹಾಹಾಕಾರ ಉಂಟಾಗುವುದು ಸಹಜ ಪ್ರಕ್ರಿಯೆಯಾಗಿದೆ. ಮಳೆಯ ಪ್ರಮಾಣದಲ್ಲಿ ಕುಸಿತ ಕೂಡ ನೀರಿನ ಸಮಸ್ಯೆಯನ್ನು ಹೆಚ್ಚು ಮಾಡಿದೆ. ಈಗಾಗಲೇ ಬೆಂಗಳೂರು ಸೇರಿದಂತೆ ಕರ್ನಾಟಕದ ಹಲವಾರು ಭಾಗಗಳಲ್ಲಿ ನೀರಿನ ಸಮಸ್ಯೆ ತಲೆದೋರಿದೆ. ನೀರಿನ ಸಮಸ್ಯೆಯಿಂದ ಪಾರಾಗಬೇಕಾದರೆ ನೀರಿನ ಮೂಲಗಳಾದ ನದಿ, ಕೆರೆ, ಬಾವಿ ಇನ್ನೂ ಮುಂತಾದ ನೀರಿನ ಮೂಲಗಳ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಪ್ರಸ್ತುತ ದಿನಗಳಲ್ಲಿ ಪ್ರತಿಯೊಬ್ಬರು ಯಾವುದೇ ಕಸ, ಪ್ಲಾಸ್ಟಿಕ್ ವಸ್ತುಗಳು, ಗಾಜಿನ ವಸ್ತುಗಳು, ಬಟ್ಟೆಗಳು ಹೀಗೆ ಯಾವುದೇ ರೀತಿಯ ತ್ಯಾಜ್ಯವಾದರೂ ನದಿಗಳಲ್ಲಿ ಎಸೆಯುವುದು ಅಭ್ಯಾಸವಾಗಿದೆ.

ಇದರಿಂದಾಗಿ ಆ ತ್ಯಾಜ್ಯ ವಸ್ತುಗಳು ನದಿಯ ತಳ ಸೇರುವ ಮೂಲಕ ಹೂಳಾಗಿ ಪರಿವರ್ತನೆಯಾಗಿ ನೀರಿನ ಮಟ್ಟ ಕುಸಿಯುವಂತಾಗುತ್ತದೆ. ಇದರ ಜೊತೆಗೆ ಕುಡಿಯುವ ನೀರಿನಲ್ಲಿ ವಿಷಕಾರಿ ಪದಾರ್ಥಗಳು ಸೇರುವ ಮೂಲಕ ನೀರಿನ ಗುಣಮಟ್ಟ ಕುಸಿದು ಕುಡಿಯಲು ಯೋಗ್ಯವಲ್ಲದಾಗಿ ಪರಿಣಮಿಸುತ್ತದೆ.

ಇತ್ತೀಚೆಗೆ ಬೆಂಗಳೂರಿನಿಂದ ಕಾವೇರಿ ನದಿಯ ವೀಕ್ಷಣೆಗೆ ತೆರಳಿದ್ದ ಒಂದು ಕುಟುಂಬ ತ್ಯಾಜ್ಯಗಳ ಜೊತೆಗೆ ಮದುವೆ ಆಮಂತ್ರಣ ಪತ್ರಗಳನ್ನು ನದಿಯಲ್ಲಿ ಎಸೆದಿದ್ದಾಗ ಅಲ್ಲಿನ ಅಧಿಕಾರಿಗಳು ಮದುವೆಯ ಆಮಂತ್ರಣ ಪತ್ರದಲ್ಲಿದ್ದ ದೂರವಾಣಿ ಸಂಖ್ಯೆಗೆ ಕರೆ ಮಾಡಿ ಎಸೆದವರನ್ನು ಕರೆಸಿ ಅವರಿಂದಲೇ ತ್ಯಾಜ್ಯವನ್ನು ತೆಗೆಸುವ ಮೂಲಕ ಕಾವೇರಿ ನದಿಯ ಅಧಿಕಾರಿಗಳು ಉತ್ತಮ ಕೆಲಸಕ್ಕೆ ನಾಂದಿ ಹಾಡಿದ್ದಾರೆ. ಹೆಚ್ಚು ಹೆಚ್ಚು ಮರಗಳನ್ನು ನೆಡುವುದು, ಮಳೆ ನೀರನ್ನು ಸಂಗ್ರಹಿಸುವುದು, ನೀರಿನ ಮಿತವಾದ ಬಳಕೆಯಿಂದ ನೀರಿನ ಸಮಸ್ಯೆಯನ್ನು ಬಗೆಹರಿಸಬಹುದಾಗಿದೆ. ಆದ್ದರಿಂದ ಸರ್ಕಾರದ ನದಿಗಳ ಸ್ವಚ್ಛತೆಗೆ ಸಂಬಂಧಿಸಿದಂತೆ ಕಠಿಣ ಕಾನೂನು ಜಾರಿಗೊಳಿಸಬೇಕು ಮತ್ತು ಯಾರೇ ಕಾನೂನು ಉಲ್ಲಂಘನೆ ಮಾಡಿದರೂ ಕಠಿಣ ಶಿಕ್ಷೆ ವಿಧಿಸುವ ಮೂಲಕ ಅವರಿಗೆ ಪಾಠ ಕಲಿಸಿದರೆ ನದಿ ನೀರಿನ ಬಗ್ಗೆ ಅರಿವು ಮೂಡುತ್ತದೆ. **–ರಾಸುಮ ಭಟ್, ಸಂಶೋಧನಾ ವಿದ್ಯಾರ್ಥಿ, ಕುವೆಂಪು ವಿವಿ.**

ಸಿಟಿ ಬಸ್ಸುಗಳ ಕೊರತೆ ನಿವಾರಿಸಿ

ಮಾನ್ಯರೆ,

ಮೈಸೂರು ನಗರ ಬಸ್ ನಿಲ್ದಾಣದಿಂದ ಫೈವ್‌ಲೈಟ್ ಸರ್ಕಲ್, ನೆಕ್ಸಸ್ ಮಾಲ್, ಉದಯಗಿರಿ, ಶಾಂತಿನಗರ ಮಾರ್ಗವಾಗಿ ಮಹದೇವಪುರಕ್ಕೆ ಹೋಗಲು ಸಮರ್ಪಕ ಬಸ್ಸುಗಳಿಲ್ಲದೆ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಮಾರ್ಗವಾಗಿ 110 ಕಾಳಿಸಿದ್ದನುಂಡಿ,110ಃ ಹೆಬ್ಬಾಡಿ, 110C ರಮ್ಮನಹಳ್ಳಿ ಹಾಗೂ ಅರೆಕೆರೆಗೆ ಇರುವ ಬಸ್ಸುಗಳು ನಿಗದಿತ ಸ್ಥಳಗಳಿಂದ ಬರುವಾಗಲೇ ಭರ್ತಿಯಾಗಿರುತ್ತದೆ. ಆದ್ದರಿಂದ ಮುಂಬರುವ ಯಾವುದೇ ಬಸ್ ನಿಲ್ದಾಣಗಳಲ್ಲಿ ನಿಲ್ಲಿಸದೆ ಇನ್ಯಾವುದೋ ಸ್ಥಳದಲ್ಲಿ ಹೋಗಿ ನಿಲ್ಲಿಸುವುದರಿಂದ ಓಡಿ ಹೋಗಿ ಬಸ್ ಹತ್ತುವ ಹಿರಿಯ ನಾಗರಿಕರು ಹಾಗೂ ವಿದ್ಯಾರ್ಥಿಗಳು ಬಿದ್ದೇಳುತ್ತಿರುವುದು ಸಾಮಾನ್ಯವಾಗಿದೆ.

ಈ ಮಾರ್ಗಕ್ಕೆ ಬೆರಳೆಣಿಕೆಯಷ್ಟು ಇರುವ ಸಿಟಿ ಬಸ್‌ಗಳಂತೂ ನಿಗದಿತ ಸಮಯಕ್ಕೆ ಬಾರದೆ ಇರುವ ಕಾರಣ ಸಾರ್ವಜನಿಕರು ಹಾಗೂ ಶ್ರಮಿಕರು ಕೆಲಸದ ಸ್ಥಳಗಳಿಗೆ ಧಾವಿಸಲು ಆಟೋಗಳಿಗೆ ಅವಲಂಬಿತರಾಗಿದ್ದು, ದಿನನಿತ್ಯ ಸುಲಿಗೆಗೊಳಪಡುತ್ತಿದ್ದಾರೆ. ಆಟೋಗಳಲ್ಲಿ ಹೋಗಲು ಹಣವಿಲ್ಲದ ವಿದ್ಯಾರ್ಥಿಗಳು ಮಾತ್ರ ಬಸ್‌ಗಳನ್ನು ಎದುರು ನೋಡುತ್ತಾ ಅಲ್ಲೇ ನಿಂತುಕೊಳ್ಳುವಂತಾಗಿದೆ. ಈ ಮಾರ್ಗದಲ್ಲಿಯೇ ಬಸ್ ಡಿಪೋ ಇದ್ದರು ಅಲ್ಲಿಂದ ಹೊರಬರುವ 80, 161 ಬಸ್‌ಗಳು ಬೇರೆ ಮಾರ್ಗದಲ್ಲಿ ನಗರ ಬಸ್ ನಿಲ್ದಾಣಕ್ಕೆ ತಲುಪುವುದರಿಂದ ಯಾರಿಗೂ ಪ್ರಯೋಜನವಿಲ್ಲ. ಈ ಸಮಸ್ಯೆ ಸುಮಾರು ವರ್ಷಗಳಿಂದಿದ್ದು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಲಿ. **–ರಮ್ಯಾ ಆರ್., ಪತ್ರಿಕೋದ್ಯಮ ವಿದ್ಯಾರ್ಥಿನಿ, ಮಹಾರಾಣಿ ಮಹಿಳಾ ಕಲಾ ಕಾಲೇಜು, ಮೈಸೂರು.**



ಜಿ.ಎಲ್. ತ್ರಿಪುರಾಂತಕ
ಮೊಬೈಲ್ ನಂ.: 96866–77284

ಬೆರಗು

ಅಮುಖ್ಯನ ಆನಂದವೂ... ಬಹುಮುಖ್ಯನ ಬಂಧನವೂ...!


'ಜನ ತಾವು ಮುಖ್ಯವಾಗಬೇಕು ಎಂದು ಬಯಸುತ್ತಿರುವುದರಿಂದ ಜಗತ್ತಿನಲ್ಲಿ ತುಂಬಾ ತೊಂದರೆ ಉಂಟಾಗುತ್ತಿದೆ' ಎಂದು ಆಂಗ್ಲ ಕವಿ ಟಿ.ಎಸ್.ಇಲಿಯಟ್ ಹೇಳಿದ್ದಾರೆ. ಮನುಷ್ಯನಾದ ಮೇಲೆ ಸಮಾಜದಲ್ಲಿ ಯಾವುದಾದರೂ ರೂಪದಲ್ಲಿ ಗುರುತಿಸಿಕೊಂಡು ತಾನು ಬಹುಮುಖ್ಯ ವ್ಯಕ್ತಿ ಅಂದರೆ ವಿಐಪಿ ಆಗಬೇಕು ಎಂದು ಅನೇಕರು ಬಹುವಿಧವಾದ ಪ್ರಯತ್ನ ಮಾಡುತ್ತಲೇ ಇರುತ್ತಾರೆ. ಕೆಲವರು ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡುವ ಮೂಲಕ ಐಡೆಂಟಿಟಿ ಗಿಟ್ಟಿಸಿಕೊಂಡರೆ, ಹಲವರು ರಾಜಕಾರಣದಲ್ಲಿ ಸಕ್ರಿಯವಾಗಿ ಪಾಲ್ಗೊಂಡರೆ, ಮತ್ತೆ ಕೆಲವರು ಭಿನ್ನವಾದ ಬಟ್ಟೆ ಧರಿಸುವುದು, ವಿಭಿನ್ನವಾದ ವಾಹನಗಳಲ್ಲಿ ತಿರುಗಾಡುವುದು ಇತ್ಯಾದಿಗಳ ಮೂಲಕ ಗುರುತಿಸಿಕೊಳ್ಳುವ ಹುಂಬತನ ಹೊಂದಿರುತ್ತಾರೆ. ಈ ಐಡೆಂಟಿಟಿ ಕ್ರೈಸಿಸ್ ಎಂಬುದು ಈ ಕಾಲಘಟ್ಟದ ಜನರಿಗೆ ಒಂದು ಮೇನಿಯಾ ರೀತಿ ಆಗಿಬಿಟ್ಟಿದೆ. ಇಂದಿನ ಮಾಹಿತಿ ತಂತ್ರಜ್ಞಾನ ಯುಗದಲ್ಲಿ ಸಾಮಾಜಿಕ ಜಾಲತಾಣದ ಮುಖಾಂತರ ಸಮಾಜಕ್ಕೆ ಸುಲಭವಾಗಿ ತಲುಪಬಹುದಾಗಿದೆ. ಜನರೇ ಗುರುತಿಸಿ ಗೌರವಿಸುವುದು ಬೇರೆ. ಜನರು ತಮ್ಮನ್ನು ಗುರುತಿಸಿ ಗೌರವಿಸಬೇಕು ಎಂದು ಭಾವಿಸುವುದೇ ಬೇರೆ.

ಸಾಮಾನ್ಯನು ತನ್ನನ್ನು ಯಾರೂ ಅಷ್ಟಾಗಿ ಗಮನಿಸುವುದಿಲ್ಲ ಎಂದು ಭಾವಿಸುತ್ತಾನೆ. ಆ ಕಾರಣಕ್ಕೆ ಅವನು ತನಗೋಸ್ಕರ ಬದುಕುವ ಇರಾದೆ ಹೊಂದಿರುತ್ತಾನೆ. ಆದರೆ ವಿಐಪಿಯಾದವನಿಗೆ ಸಮಾಜದಲ್ಲಿ ಎಲ್ಲರೂ ನನ್ನನ್ನು ಗಮನಿಸುತ್ತಾರೆ ಎಂಬ ಭಾವನೆ ಇರುತ್ತದೆ. ಹಾಗಾಗಿ ಅವನು ಅನ್ಯರಿಗೋಸ್ಕರ ಬದುಕುವ ಅನಿವಾರ್ಯತೆ ಉಂಟಾಗುತ್ತದೆ. ಅವನು ಸಮಾಜ ಬಯಸುವಂತೆ ಅಥವಾ ಡಿಮ್ಯಾಂಡ್ ಮಾಡುವಂತೆ ಬದುಕಬೇಕಾಗುತ್ತದೆ. ಆಗ ಅವನ ಬದುಕು ಅವನ ಬದುಕಾಗಿ ಉಳಿಯುವುದಿಲ್ಲ, ಯಾರದೋ ಬದುಕನ್ನು ಅವನು ಬದುಕಬೇಕಾಗುತ್ತದೆ.

ಅಮುಖ್ಯರ ಹಾಗೂ ಮುಖ್ಯವಾದವರ ಬದುಕಿನ ರೀತಿಯನ್ನು ಅರಿಯಬೇಕಾದರೆ ಸಿನೆಮಾ ಥಿಯೇಟರ್‌ಗೆ ಹೋಗಬೇಕು. ಪ್ರಥಮ ದರ್ಜೆಗೆ ದುಬಾರಿ ಟಿಕೆಟ್ ಖರೀದಿಸಿ ಬರುವ ಜನಕ್ಕಿಂತ ಮೂರನೇ ದರ್ಜೆಗೆ ಕಡಿಮೆ ಹಣಕೊಟ್ಟು ಬರುವವರು ಸಿನೆಮಾವನ್ನು ಆಸ್ವಾದಿಸುವುದನ್ನು ಕಾಣಬಹುದು. ಸಿನೆಮಾದಲ್ಲಿ ಬರುವ ಸೆಂಟಿಮೆಂಟ್ ದೃಶ್ಯವೇ ಆಗಲಿ, ಹಾಸ್ಯ ದೃಶ್ಯವೇ ಆಗಲಿ ಯಾವುದಕ್ಕೂ ಸ್ಪಂದಿಸದೆ, ಅತ್ತರೆ ಜನ ಏನಂದಾರೂ, ನಕ್ಕರೆ ಜನ ಏನಂದಾರೂ ಎಂದು ಭಾವಿಸಿ ಭಾವರಹಿತವಾಗಿ ಸಿನೆಮಾ ನೋಡುವ ಇರಾದೆಯನ್ನು ದೊಡ್ಡಜನ ಎಂದರೆ ವಿಐಪಿ ಜನ ಹೊಂದಿರುತ್ತಾರೆ. ಆದರೆ ಸಿನೆಮಾದಲ್ಲಿ ಬರುವ ದೃಶ್ಯಗಳಿಗೆ ಸ್ಪಂದಿಸುವವರು ಹೆಚ್ಚಾಗಿ ಸಾಮಾನ್ಯರೆ. ಕೇಕೆ ಹಾಕುತ್ತಾ, ಚಪ್ಪಾಳೆ ಹಾಕುತ್ತಾ, ಸೆಂಟಿಮೆಂಟ್ ದೃಶ್ಯಗಳಿಗೆ ಕಣ್ಣೀರನ್ನು ಹಾಕುತ್ತಾ ಇಡೀ ಸಿನೆಮಾವನ್ನು ಎಂಜಾಯ್ ಮಾಡುವ ಮನಸ್ಥಿತಿ ಅವರದ್ದು. ಪರಿಸ್ಥಿತಿ ಚೆನ್ನಾಗಿ ಇಲ್ಲದಿದ್ದರೂ ಮೂರು ಗಂಟೆಗಳ ಕಾಲ ಎಲ್ಲವನ್ನೂ ಮರೆತು ಮನರಂಜನೆ ಮಾಧ್ಯಮವನ್ನು ಆನಂದಿಸುವ ಮನಸ್ಥಿತಿ ಅವರಿಗೆ ಇರುತ್ತದೆ. ಆದರೆ ಪರಿಸ್ಥಿತಿ ಚೆನ್ನಾಗಿರುವ ಅನೇಕ ಮಂದಿಯು ಸಿನೆಮಾ ಆಗಲಿ, ನಾಟಕ ಆಗಲಿ ಭಾವರಹಿತವಾಗಿ ನೋಡುತ್ತಾ, ಯಾವ ಮನರಂಜನೆಯೂ ಇಲ್ಲದೆ ಮನೆ ಸೇರಿಬಿಡುತ್ತಾರೆ. ಇತ್ತೀಚೆಗೆ ಸಮೂಹವಾಗಿ ಸಿನೆಮಾಗಳನ್ನು ನೋಡಲು ಇಚ್ಛಿಸದೆ ಮನೆಯಲ್ಲಿಯೇ ಹೋಂ ಥಿಯೇಟರ್ ಮಾಡಿಸಿಕೊಂಡು ಸಿನೆಮಾ ನೋಡುವ ಅಭ್ಯಾಸ ವಿಐಪಿಗಳಿಗೆ ಇರುತ್ತದೆ. ಆದರೆ ಜನಗಳ ಜೊತೆ ಸಿನೆಮಾ ಥಿಯೇಟರ್‌ನಲ್ಲಿ ನೋಡುವ ಮಜವೇ ಬೇರೆ ಇರುತ್ತದೆ. ಆದರೆ ಅದು ಸಾಮಾನ್ಯನಿಗೆ ಮಾತ್ರ ಅರಿವಿರುತ್ತದೆ. ಆ ವಿಷಯದಲ್ಲಿ ಸಾಮಾನ್ಯನೇ ಅದೃಷ್ಟವಂತ ಎನ್ನಬಹುದು.

ಸಾರ್ವಜನಿಕ ಬದುಕಿನಲ್ಲಿ ವಿಐಪಿಯಾದವನು ಅನೇಕ ಕಟ್ಟುಪಾಡುಗಳನ್ನು, ಷರತ್ತುಗಳನ್ನು ಪಾಲಿಸಲೇಬೇಕಾಗುತ್ತದೆ. ವಿಐಪಿ/ಸೆಲೆಬ್ರಿಟಿ ಆದ ಮೇಲೆ ಅವನು ತನಗೆ ಇಷ್ಟ ಬಂದ ಕಡೆ ಕುಳಿತು ಇಷ್ಟ ಬಂದ ತಿನಿಸುಗಳನ್ನು ತಿನ್ನಲಾಗುವುದಿಲ್ಲ. ಉದಾಹರಣೆಗೆ ಅವನು ಪಾರ್ಕಿನಲ್ಲಿ ಕುಳಿತು ತನ್ನ ಕುಟುಂಬ ಸದಸ್ಯರೊಂದಿಗೆ ಕಡಲೆಕಾಯಿ ತಿನ್ನಬೇಕು ಎಂದು ಬಯಸಿದರೂ, ಅದನ್ನು ಅವನು ಅನುಸರಿಸಲಾಗದು. ಏಕೆಂದರೆ ಯಾರಾದರೂ ಪರಿಚಯದವರಿದ್ದರೆ ? ಎಂಬ ಪ್ರಶ್ನೆ ಅವನನ್ನು ಸದಾ ಕಾಡುತ್ತಲೇ ಇರುತ್ತದೆ. ಸೆಲೆಬ್ರಿಟಿ ಕುಟುಂಬದ ಮೇಲೆ ಸಮಾಜದ ಮಂದಿ ಸಿಸಿ ಕ್ಯಾಮೆರಾದಂತೆ ಕಣ್ಗಾವಲು ಹಾಕಿರುತ್ತಾರೆ. ಅವರ ಮನೆಯ ಸಣ್ಣ ಜಗಳ ಕೂಡ ಮಾಧ್ಯಮಗಳಲ್ಲಿ ದೊಡ್ಡಸುದ್ದಿಯಾಗುವ ಸಂಭವವಿರುತ್ತದೆ.

ವಿಐಪಿಗಳಿಗೆ ಇರುವ ಸವಲತ್ತುಗಳನ್ನು ಕಂಡು ಸಾಮಾನ್ಯನು ಈರ್ಷೆ ಪಡಬಹುದು. ಆದರೆ ಸಾಮಾನ್ಯನ ಬಳಿ ಇರುವಂತಹ ಹಣಕೊಟ್ಟು ಕೊಳ್ಳಲಾಗದ ಒಂದು ವಿಶೇಷ ಸಂಗತಿಯೊಂದು ವಿಐಪಿಗಳ ಬಳಿ ಇರುವುದಿಲ್ಲ ಎಂಬುದನ್ನು ಅರಿಯಬೇಕು. ಅನೇಕ ವಿಐಪಿಗಳಿಗೆ



> ಸ್ಟೇಟಸ್ ಎಂಬುದು ಮನುಷ್ಯನನ್ನು ಸಹಜವಾಗಿ ಬದುಕಲು ಬಿಡುವುದಿಲ್ಲ. ಅಸಹಜ ಬದುಕನ್ನು ರೂಢಿ ಮಾಡಿಸಿಬಿಡುತ್ತದೆ. ಅದರಿಂದ ಆಗುವ ಯಾತನೆಗಳು ಅಷ್ಟಿಷ್ಟಲ್ಲ. ನಾನು ಸಾಮಾನ್ಯ, ನಾನು ಅಮುಖ್ಯ ಎಂದು ಭಾವಿಸಿದಾಗ ಸಿಗುವ ಆನಂದ ನಾನು ವಿಐಪಿ ಎಂದು ಭಾವಿಸಿಕೊಂಡಾಗ ಇರದು. ನಮ್ಮ ಹೆಸರುಗೊತ್ತಿರದ ಪರಊರಿನಲ್ಲಿ ನಾವು ಸಂಭ್ರಮಿಸುವಷ್ಟು ಚೆನ್ನಾಗಿ ನಮ್ಮ ಗುರುತು ಇರುವ ಊರಿನಲ್ಲಿ ಸಂಭ್ರಮಿಸಲಾಗದು. ಆ ಕಾರಣಕ್ಕೆ ಕುಟುಂಬ ಸಮೇತ, ಹೊರರಾಜ್ಯ, ಹೊರದೇಶಗಳಿಗೆ ಹೋದಾಗ ಆನಂದ ಹೆಚ್ಚಿರುತ್ತದೆ. ಅಲ್ಲಿ ನಾನು ವಿಐಪಿ ಎನ್ನುವ ಭಾವ ಇರುವುದಿಲ್ಲ. ಎಲ್ಲರಂತೆ ನಾವು ಪ್ರವಾಸಿಗಳು ಎಂದು ಭಾವಿಸಿದರೆ ಪ್ರವಾಸ ಉಲ್ಲಾಸಮಯವಾಗಿರುತ್ತದೆ. ಅಲ್ಲಿಯೂ ನಾನು ವಿಐಪಿ ಅನ್ನುವ ನಶೆ ತಲೆಯಲ್ಲಿದ್ದರೆ ಪ್ರವಾಸ ಪ್ರಯಾಸವಾಗಿಬಿಡುತ್ತದೆ.

ವಿಐಪಿ ಖಾಯಿಲೆಗಳು ಸಹ ಇರುವುದು ವಿಪರ್ಯಾಸ. ಅನ್ನ ತಿನ್ನುವಷ್ಟೇ ಅವರು ಔಷಧಗಳನ್ನು ತಿನ್ನಬೇಕಾದ ಅನಿವಾರ್ಯತೆ ಇರುವುದು ಮಾತ್ರ ದುರದೃಷ್ಟಕರ. ವಯಸ್ಸಾದ ಮೇಲೆ ಬದುಕಿನಕಡೆಯ ದಿನಗಳಲ್ಲಿ ಸಾಮಾನ್ಯನು ಹೆಚ್ಚು ನರಳದೆ ಇಹಲೋಕ ತ್ಯಜಿಸುತ್ತಾನೆ. ಆದರೆ ವಿಐಪಿಗೆ ಈ ಭೂಮಿಯಿಂದ ಮುಕ್ತಿ ಬೇಗ ಸಿಗದು. ಹಣ್ಣು ಹಣ್ಣು ಮುದುಕನಾಗಿದ್ದು, ಗಂಭೀರ ಸ್ವರೂಪದ ಖಾಯಿಲೆ ಇದ್ದರೂ, ಒಂದೆರಡು ದಿನಗಳಲ್ಲಿ ಸಾವನ್ನಪ್ಪುವ ಸನ್ನಿವೇಶವಿದ್ದರೂ, ಅನಗತ್ಯ ಎನಿಸಿದರೂ ಆಸ್ಪತ್ರೆಯ ಐಸಿಯುಗೆ ಹಾಕುತ್ತಾರೆ. ಸಾವನ್ನು ಪೋಸ್ಟ್‌ಪೋನ್ ಮಾಡುವುದರಿಂದ ಅನೇಕ ದಿನಗಳ ಕಾಲ ಹಾಸಿಗೆಯಲ್ಲಿಯೇ ನರಳಿ ನರಳಿ ಭೂಮಿಯ ಮೇಲೆ ನರಕಯಾತನೆ ಅನುಭವಿಸುವ ಅನಿವಾರ್ಯತೆ ಉಂಟಾಗುವುದು ನಿಜಕ್ಕೂ ವಿಪರ್ಯಾಸವೇ ಸರಿ.

ಅನೇಕರಿಗೆ ಮರಣ ಹೊಂದಿದ ಮೇಲು ಶವಕ್ಕೂ ಬೇಗ ಮುಕ್ತಿ ಸಿಗುವುದಿಲ್ಲ. ಅಮುಖ್ಯ ವ್ಯಕ್ತಿಯಾದರೆ ಮರಣ ಹೊಂದಿದ ಒಂದು ದಿನದ ಒಳಗೆ ಶವಸಂಸ್ಕಾರ ಮಾಡಿಬಿಡುತ್ತಾರೆ. ಆದರೆ ವಿಐಪಿಯಾದರೆ, ಅವರ ಮಕ್ಕಳು, ಮೊಮ್ಮಕ್ಕಳು ವಿದೇಶದಲ್ಲಿ ಇರುತ್ತಾರೆ. ಅವರು ಬರುವವರೆಗೂ ಶವವನ್ನು ಫ್ರೀಜರ್‌ನಲ್ಲಿ ಇಡುವುದು ಮತ್ತೊಂದು ರೀತಿಯ ಯಾತನೆಯೇ ಸರಿ. ಇವುಗಳನ್ನೆಲ್ಲಾ ನೋಡುತ್ತಿದ್ದರೆ ವಿಐಪಿ ಆಗ ಬಯಸುವ ಸಾಮಾನ್ಯನಿಗೆ ಜ್ಞಾನೋದಯವಾಗಿ ತಾನು ಅಮುಖ್ಯ ವ್ಯಕ್ತಿಯಾಗಿಯೇ ಉಳಿದು ಬಿಡುವುದು ಕ್ಷೇಮಕರ ಅನಿಸದೇ ಇರದು.

ಸಾಮಾನ್ಯರ ಮಕ್ಕಳಿಗೆ ಇರುವಷ್ಟು ಸ್ವಾತಂತ್ರ್ಯ ವಿಐಪಿ ಎನಿಸಿಕೊಳ್ಳುವ ಸಿರಿವಂತರ ಮಕ್ಕಳಿಗೆ ಇರುವುದಿಲ್ಲ. ಸಾಮಾನ್ಯರ ಮಕ್ಕಳು ಸರ್ಕಾರಿ ಶಾಲೆಯಲ್ಲಿಯೇ ಓದಿದರೂ ಅವರಿಗೆ ಅನೇಕ ಬಗೆಯ ಮುಕ್ತ ಅವಕಾಶಗಳು ಇರುತ್ತವೆ. ಆದರೆ ವಿಐಪಿಗಳ ಮಕ್ಕಳಿಗೆ ಎಲ್ಲಾ ರೀತಿಯ ಸವಲತ್ತುಗಳು ಇದ್ದರೂ, ಸಾಮಾನ್ಯರ ಮಕ್ಕಳಿಗೆ ಇರುವಷ್ಟು ಸ್ವಾತಂತ್ರ್ಯ ಇರುವುದಿಲ್ಲ. ಮುಕ್ತವಾಗಿ ಎಲ್ಲರೊಂದಿಗೆ ಬೆರೆಯಲು ಅವರ ಪೋಷಕರು ಅಡ್ಡಿಪಡಿಸುತ್ತಲೇ ಇರುತ್ತಾರೆ.

ಉಳ್ಳವರಿಗೆ ಒಳ್ಳೆಯ ಹಾಸಿಗೆ ಇದ್ದ ಮಾತ್ರಕ್ಕೆ ನಿದ್ರೆ ಬರದು, ವೈದ್ಯರು ಪರಿಚಯವಿದ್ದ ಮಾತ್ರಕ್ಕೆ ಆರೋಗ್ಯ ಉತ್ತಮವಾಗಿ ಇರದು, ಎಲ್ಲವನ್ನೂ ಕೊಂಡುಕೊಳ್ಳುವ ಶಕ್ತಿ ಇದ್ದ ಮಾತ್ರಕ್ಕೆ ಇಷ್ಟ ಬಂದದ್ದನ್ನು ತಿನ್ನುವ ಯೋಗ ಇರದು, ಕಾರು ಇದ್ದ ಮಾತ್ರಕ್ಕೆ ಸ್ವಚ್ಛಂದವಾಗಿ ಹೊರಗೆ ತಿರುಗಾಡಿ ಬರಲು ಸ್ವಾತಂತ್ರ್ಯವಿರದು. ಕೆಳವರ್ಗದವರು, ಮಧ್ಯಮ ವರ್ಗದವರು ತಮಗೆ ಇರುವ ಆರ್ಥಿಕ ದುಸ್ಥಿತಿಯನ್ನು ಗಮನಿಸಿಕೊಂಡು ಮುಂದಿನ ಜನ್ಮಕ್ಕೆ ಈ ವರ್ಗದಲ್ಲಿ ಮಾತ್ರ ಜನಿಸಬಾರದು ಎಂದು ಪ್ರಾರ್ಥಿಸುತ್ತಿರುತ್ತಾರೆ. ಆದರೆ ಒಂದೊಂದು ವರ್ಗಕ್ಕೂ ವರವಿರುವಂತೆ ಶಾಪಗಳು ಇರುತ್ತವೆ. ನೋಡುವವರಿಗೆ ಒಂದು ಮುಖ ಮಾತ್ರ ಕಾಣುತ್ತಿರುತ್ತದೆ ವಾಸ್ತವದ ಅರಿವೇ ಇರುವುದಿಲ್ಲ.

ಸಿರಿವಂತರು ಬಡವರನ್ನು ನೋಡಿ ಇವರು ಕಷ್ಟದಲ್ಲಿಯೇ ಕೈತೊಳೆಯುತ್ತಾರೆ. ಇವರ ಬದುಕಿನಲ್ಲಿ ಆನಂದವೇ ಇರದು ಅಂದುಕೊಳ್ಳಬಹುದು. ಅದೇ ರೀತಿ ಸಾಮಾನ್ಯರು ಸಿರಿವಂತರನ್ನು ನೋಡಿ ಇವರಿಗೆ ಸಮಸ್ಯೆಗಳೇ ಇಲ್ಲವೇನೋ, ಕಷ್ಟ ಇವರ ಹತ್ತಿರಕ್ಕೂ ಬರದೇನೋ ಎಂದು ಭಾವಿಸಿಕೊಳ್ಳಬಹುದು. ಆದರೆ ಅವರವರಿಗೆ ಅವರವರ ಕಷ್ಟ–ನಷ್ಟಗಳು, ನೋವು ನಲಿವುಗಳ ಅರಿವಿರುತ್ತದೆ. ಸರತಿ ಸಾಲಿನಲ್ಲಿ ಗಂಟೆಗಟ್ಟಲೆ ನಿಂತು ದೇವರ ದರ್ಶನ ಮಾಡುವ ಸಾಮಾನ್ಯರು ಪುನೀತ ಭಾವ ಹೊಂದುವಷ್ಟು, ಹಣಕೊಟ್ಟು ವಿಐಪಿ ಎಂಟ್ರಿ ತೆಗೆದುಕೊಳ್ಳುವವರಿಗೆ ಆಗದೇ ಇರಬಹುದು. ರಸ್ತೆಯಲ್ಲಿ ತಳ್ಳುಗಾಡಿಯಲ್ಲಿ ಹತ್ತು ರೂಪಾಯಿ ಕೊಟ್ಟು ಐಸ್‌ಕ್ಯಾಂಡಿಯನ್ನು ಕೊಂಡು ಸಾಮಾನ್ಯ ಆಸ್ವಾದಿಸುವಷ್ಟು, ವಿಐಪಿ ಎನಿಸಿಕೊಂಡವನು ಐಸ್‌ಕ್ರೀಂ ಪಾರ್ಲರ್‌ನಲ್ಲಿ ನೂರಾರುರೂಪಾಯಿ ಕೊಟ್ಟು ಖರೀದಿಸಿದ ಐಸ್‌ಕ್ರೀಂಅನ್ನು ಎಂಜಾಯ್ ಮಾಡದೇ ಇರಬಹುದು.

ವಿಐಪಿಗಳಿಗೆ ತಾನು ವಿಐಪಿ ಅನ್ನೊ ವಾಸಿಯಾಗದ ಮನೋರೋಗ ಒಂದಿರುತ್ತದೆ. ಅದರಿಂದ ಅವರು ಅನುಭವಿಸುವ ಕಷ್ಟ ಅಷ್ಟಿಷ್ಟಲ್ಲ. ಅದಕ್ಕೆ ಯಾವುದೇ ರೀತಿಯ ಮದ್ದು ಇರುವುದಿಲ್ಲ. ಆದರೆ ಮದವಿಲ್ಲದೆ ಸಾಮಾನ್ಯರ ಜೊತೆ 'ಎಲ್ಲರೊಳಗೊಂದಾಗು ಮಂಕುತಿಮ್ಮ' ಎಂದು ಬೆರೆತರೆ ಆ ಮನೋರೋಗ ಕಡಿಮೆ ಆಗುವ ಸಂಭವವಿರುತ್ತದೆ. ಅಮುಖ್ಯರ ಜೊತೆಗೆ ಬೆರೆಯುವುದೇ ಮುಖ್ಯವಾದವರಿಗೆ ಬಹಳ ಕಷ್ಟದ ಸಂಗತಿ. ಒಂದು ವಿಚಾರ ನೆನಪಿಟ್ಟುಕೊಳ್ಳಬೇಕು. ಅಮುಖ್ಯರು ಇದ್ದರೆ ಮಾತ್ರ ವಿಐಪಿಗಳಿಗೆ ಬೆಲೆ. ಎಲ್ಲರೂ ವಿಐಪಿಗಳೇ ಆದರೆ ಯಾರು ಸಹ ಗೌರವಿಸುವುದಿಲ್ಲ. ಏಕೆಂದರೆ ಅಹಮ್ಮಿನ ಕೋಟೆಯಲ್ಲಿ ಎಲ್ಲರೂ ರಾಜರಂತೆ ವರ್ತಿಸಿದರೆ ಪ್ರಜೆಗಳಾಗುವವರು ಯಾರು?

ಸ್ಟೇಟಸ್ ಎಂಬುದು ಮನುಷ್ಯನನ್ನು ಸಹಜವಾಗಿ ಬದುಕಲು ಬಿಡುವುದಿಲ್ಲ. ಅಸಹಜ ಬದುಕನ್ನು ರೂಢಿ ಮಾಡಿಸಿಬಿಡುತ್ತದೆ. ಅದರಿಂದ ಆಗುವ ಯಾತನೆಗಳು ಅಷ್ಟಿಷ್ಟಲ್ಲ. ನಾನು ಸಾಮಾನ್ಯ, ನಾನು ಅಮುಖ್ಯ ಎಂದು ಭಾವಿಸಿದಾಗ ಸಿಗುವ ಆನಂದ ನಾನು ವಿಐಪಿ ಎಂದು ಭಾವಿಸಿಕೊಂಡಾಗ ಇರದು. ನಮ್ಮ ಹೆಸರು ಗೊತ್ತಿರದ ಪರಊರಿನಲ್ಲಿ ನಾವು ಸಂಭ್ರಮಿಸುವಷ್ಟು ಚೆನ್ನಾಗಿ ನಮ್ಮ ಗುರುತು ಇರುವ ಊರಿನಲ್ಲಿ ಸಂಭ್ರಮಿಸಲಾಗದು. ಆ ಕಾರಣಕ್ಕೆ ಕುಟುಂಬ ಸಮೇತ, ಹೊರರಾಜ್ಯ, ಹೊರ ದೇಶಗಳಿಗೆ ಹೋದಾಗ ಆನಂದ ಹೆಚ್ಚಿರುತ್ತದೆ. ಅಲ್ಲಿ ನಾನು ವಿಐಪಿ ಎನ್ನುವ ಭಾವ ಇರುವುದಿಲ್ಲ. ಎಲ್ಲರಂತೆ ನಾವು ಪ್ರವಾಸಿಗಳು ಎಂದು ಭಾವಿಸಿದರೆ ಪ್ರವಾಸ ಉಲ್ಲಾಸಮಯವಾಗಿರುತ್ತದೆ. ಅಲ್ಲಿಯೂ ನಾನು ವಿಐಪಿ ಅನ್ನುವ ನಶೆ ತಲೆಯಲ್ಲಿದ್ದರೆ ಪ್ರವಾಸ ಪ್ರಯಾಸವಾಗಿಬಿಡುತ್ತದೆ. ರಾಷ್ಟ್ರಕವಿ ಕುವೆಂಪು ಅವರು ತಮ್ಮ ಮಲೆಗಳಲ್ಲಿ ಮದುಮಗಳು ಕಾದಂಬರಿಯಲ್ಲಿ 'ಇಲ್ಲಿ ಯಾರು ಮುಖ್ಯರಲ್ಲ, ಯಾರು ಅಮುಖ್ಯರಲ್ಲ, ಯಾವುದೂ ಯಕಃಶ್ಚಿತವಲ್ಲ ಎಂದು ಬರೆದಿರುವುದು ಔಚಿತ್ಯಪೂರ್ಣವಾಗಿದೆ.

ಪದ ತಾಂಬೂಲ: ಆನಂದಕ್ಕೆ ಆರ್ಥಿಕತೆ ಕಾರಣವಾಗದು, ಸಾರ್ಥಕತೆ ಕಾರಣವಾಗಬಹುದು.


ಗುರಿ ದೊಡ್ಡದಾಗಿರಲಿ, ಪ್ರಯತ್ನ ನಿರಂತರವಾಗಿರಲಿ

ಕೆಎಎಸ್ ಹುದ್ದೆಯ ಆಕಾಂಕ್ಷಿಗಳಿಗೆ ಏರ್ಪಡಿಸಿದ್ದ ಉಚಿತ ಕಾರ್ಯಾಗಾರ ಉದ್ಘಾಟಿಸಿದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸಲಹೆ

ಮೈಸೂರು,ಮಾ.24– ಪ್ರಸ್ತುತ ನಾವು ಸ್ಪರ್ಧಾತ್ಮಕ ಯುಗದಲ್ಲಿ ಬದುಕುತ್ತಿದ್ದೇವೆ. ಇಲ್ಲಿ ಯಾವುದೇ ಸ್ಪರ್ಧಾತ್ಮಕ ಪರೀಕ್ಷಾರ್ಥಿಯೂ ಏನನ್ನೇ ಸಾಧಿಸಬೇಕಾದರೂ ಮೊದಲು ತನ್ನ ಗುರಿಯನ್ನು ದೊಡ್ಡದಾಗಿರಿಸಿಕೊಂಡು, ಅದರ ಕಡೆಗೆ ನಿರಂತರ ಪ್ರಯತ್ನ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸಲಹೆ ನೀಡಿದರು.

ಮೈಸೂರು ವಿಶ್ವವಿದ್ಯಾನಿಲಯ ವೃತ್ತಿ ಕೇಂದ್ರ, ಮೈಸೂರು ವಿಶ್ವವಿದ್ಯಾನಿಲಯ ನೇಗಿಲಯೋಗಿ ವಿದ್ಯಾವರ್ಧಕ ಸ್ಪರ್ಧಾ ಕೇಂದ್ರದ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಯುವರಾಜ ಕಾಲೇಜಿನ ಸಭಾಂಗಣದಲ್ಲಿ ಕೆಎಎಸ್ ಹುದ್ದೆಯ ಆಕಾಂಕ್ಷಿಗಳಿಗೆ ಆಯೋಜಿಸಲಾಗಿದ್ದ ಉಚಿತ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಸ್ಪರ್ಧಾತ್ಮಕ ಜಗತ್ತಿನಲ್ಲಿ ಸ್ಪರ್ಧೆ ಸಾಮಾನ್ಯವಾಗಿದ್ದು, ಯುಪಿಎಸ್‌ಸಿ, ಕೆಎಎಸ್ ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿಯಾಗಲು ಸಿಕ್ಕ ಅವಕಾಶಗಳನ್ನು ಸದುಯೋಗಪಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಪ್ರತಿದಿನ 5ರಿಂದ 6 ಗಂಟೆಗಳ ಕಾಲ ನಿಯಮಿತವಾಗಿ ಓದುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಪ್ರತಿಯೊಬ್ಬ ಪರೀಕ್ಷಾರ್ಥಿಗಳು ಕಠಿಣ ಪರಿಶ್ರಮ, ತಾಳ್ಮೆ, ಸಮಯ ಪ್ರಜ್ಞೆ, ಏಕಾಗ್ರತೆ ಎಂಬುದು ಬಹಳ ಮುಖ್ಯವಾಗಿದ್ದು, ಅದನ್ನು ಮೈಗೂಡಿಸಿಕೊಳ್ಳಬೇಕು ಎಂದರು.



ಭಾನುವಾರ ಮೈಸೂರು ಯುವರಾಜ ಕಾಲೇಜಿನ ಸಭಾಂಗಣದಲ್ಲಿ ಕೆ.ಎ.ಎಸ್ ಹುದ್ದೆಯ ಆಕಾಂಕ್ಷಿಗಳಿಗೆ ಆಯೋಜಿಸಲಾಗಿದ್ದ ಉಚಿತ ಕಾರ್ಯಾಗಾರವನ್ನು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಉದ್ಘಾಟಿಸಿದರು.

ನಾವು ಪ್ರತಿನಿತ್ಯವೂ ಹೊಸ ಹೊಸದಾಗಿ ನೋಡಿದ, ಕೇಳಿದ ವಿಷಯಗಳನ್ನು ವೈಜ್ಞಾನಿಕವಾಗಿ ಯೋಚಿಸಿ ಅದರ ಬಗ್ಗೆ ತಿಳಿದುಕೊಳ್ಳಬೇಕು. ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿತ ದಿನಾಂಕವೆಂಬುದಿರುತ್ತದೆ. ಆದರೆ, ಜೀವನದ ಅಧ್ಯಯನದಲ್ಲಿ ಪ್ರತಿದಿನವು ಸಹ ಹೊಸ ಪರೀಕ್ಷೆಗಳು ಎದುರಾಗುತ್ತವೆ. ಯುದ್ಧಕಾಲದಲ್ಲಿ ಶಸ್ತ್ರಾಭ್ಯಾಸ ಮಾಡುವ ಬದಲು ಪರೀಕ್ಷೆಯನ್ನು ಎದುರಿಸುವಲ್ಲಿ ಆರಂಭದಿಂದಲೂ ಸತತ ಪ್ರಯತ್ನ ಮಾಡಬೇಕು. ಕಠಿಣ ಪರಿಶ್ರಮ, ನಿರಂತರ ಪ್ರಯತ್ನಕ್ಕೆ ಯಶಸ್ಸು ಕಟ್ಟಿಟ್ಟಬುತ್ತಿ ಎಂದು ಹೇಳಿದರು.

ಮೈಸೂರು ನಗರಪಾಲಿಕೆ ಆಯುಕ್ತೆ ಡಾ.ಎನ್.ಎನ್. ಮಧು ಮಾತನಾಡಿ, ಸಮಾಜಕ್ಕೆ ಅಧಿಕಾರಿಗಳ ಕೊಡುಗೆ ಹೆಚ್ಚಾಗಿದ್ದು, ಸ್ಪರ್ಧಾರ್ಥಿಗಳು ಶ್ರಮಪಟ್ಟು ನಿರಂತರವಾಗಿ ಓದುವ ಅಭ್ಯಾಸದಲ್ಲಿ ತೊಡಗಬೇಕು. ಕಠಿಣ ಪರಿಶ್ರಮ, ತಾಳ್ಮೆ ಪ್ರತಿ ಸ್ಪರ್ಧಾರ್ಥಿಗೂ ಅತ್ಯಂತ ಅವಶ್ಯಕವಾದುದು. ಇವುಗಳನ್ನು ಸಾಧಿಸಿದ್ದೇ ಆದಲ್ಲಿ ಅವರು ಯಶಸ್ಸು ಸಾಧಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಬಿ.ರಂಗೇಗೌಡ, ಮೈಸೂರು ವಿವಿ ಪಿ.ಎಂ.ಇ ಬೋರ್ಡ್‌ನ ನಿರ್ದೇಶಕ ಪ್ರೊ.ಎನ್. ನಾಗರಾಜ್, ಮೈಸೂರು ವಿವಿ ಯು.ಸಿ.ಎಚ್‌ನ ಸಂಯೋಜಕಿ ಪ್ರೊ. ಹಂಸವೇಣಿ, ಮೈಸೂರು ವಿವಿ ಸ್ಪರ್ಧಾ ಕೇಂದ್ರದ ಸಂಯೋಜಕ ಡಾ.ಸುರೇಶ್, ಯುವರಾಜ ಕಾಲೇಜಿನ ಪ್ರೊ.ದೇವಿಕಾ ಇನ್ನಿತರರು ಉಪಸ್ಥಿತರಿದ್ದರು.

> "ಪ್ರತಿನಿತ್ಯ ದಿನಪತ್ರಿಕೆಗಳು, ಪುಸ್ತಕಗಳು, ಕಾದಂಬರಿಗಳನ್ನು ಓದುವ ಹವ್ಯಾಸ ಮಾಡಿಕೊಳ್ಳಬೇಕು. ಸ್ಪರ್ಧಾರ್ಥಿಗಳು ಯಾವಾಗಲೂ ಐ.ಎ.ಎಸ್ ಐ.ಪಿ.ಎಸ್‌ನಂತಹ ದೊಡ್ಡ ಹುದ್ದೆಗಳಿಗೆ ಸೇರುವ ಆಸೆಯನ್ನು ಹೊಂದಿದ್ದು ಪ್ರಯತ್ನ ಮಾಡಿದ್ದಲ್ಲಿ ಕನಿಷ್ಠ ಪಕ್ಷ ಕೆ.ಎ.ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಸಮಾಜಕ್ಕೆ ಕೊಡುಗೆ ನೀಡಬಹುದು. ಎಷ್ಟೋ ಸ್ಪರ್ಧಾರ್ಥಿಗಳಲ್ಲಿ ಭಾಷೆಯ ಬಗ್ಗೆ ಗೊಂದಲಗಳಿವೆ. ಇಂಗ್ಲಿಷ್‌ನಲ್ಲೇ ಎಲ್ಲವೂ ಕಡ್ಡಾಯವಲ್ಲ ಪ್ರಾದೇಶಿಕ ಭಾಷೆಗಳಲ್ಲಿಯೂ ಸಹ ಪರೀಕ್ಷೆಗಳನ್ನು ತೆಗೆದುಕೊಳ್ಳಬಹುದು. ವಿವಿಧ ರೀತಿಯ ಹುದ್ದೆಗಳಿದ್ದರೂ ಸಹ ಪ್ರಶ್ನೆ ಪತ್ರಿಕೆಗಳ ಸ್ವರೂಪ ಒಂದೇ ಆಗಿರುತ್ತದೆ. ಆದ್ದರಿಂದ ಪ್ರಚಲಿತ ವಿದ್ಯಮಾನಗಳು ಹಾಗೂ ಹಳೇ ವರ್ಷದ ಪ್ರಶ್ನೆ ಪತ್ರಿಕೆಗಳನ್ನು ಹೆಚ್ಚು ಮನನ ಮಾಡಿಕೊಳ್ಳಬೇಕು.
> –ಡಾ.ಕೆ.ವಿ.ರಾಜೇಂದ್ರ, ಜಿಲ್ಲಾಧಿಕಾರಿ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishweswaraya Building, III Floor, K.R. CIRCLE, MYSORE-570 001, Ph: 2421774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಒಂದನೇ ಪುಟದಿಂದ

ಮರುಕಳಿಸಲು ಯದುವೀರ್ ಗೆಲ್ಲಿಸಿ

ಅವಕಾಶ ಮಾಡಿಕೊಡುವಂತೆ ಕೋರಿದರು. ಮಾಜಿ ಶಾಸಕ ಎಸ್.ಎ.ರಾಮದಾಸ್ ಮಾತನಾಡಿ, ಈ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನಮಗೆ ಗುರಿಯೊಂದನ್ನು ನೀಡಿದ್ದಾರೆ. ಆರ್ಟಿಕಲ್ 370 ನೆನಪಿಸುವಂತೆ ಈ ಚುನಾವಣೆಯಲ್ಲಿ 370ಕ್ಕಿಂತ ಹೆಚ್ಚು ಕ್ಷೇತ್ರವನ್ನು ಗೆಲ್ಲಲೇಬೇಕೆಂದು ತಿಳಿಸಿದ್ದಾರೆ. ಆದರೆ, ದೇಶದೆಲ್ಲೆಡೆ 400ಕ್ಕೂ ಹೆಚ್ಚು ಸ್ಥಾನ ಲಭಿಸುವ ವಾತಾವರಣ ಸೃಷ್ಟಿಯಾಗಿದೆ. ಈ ಹಿನ್ನೆಲೆಯಲ್ಲಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು 3.70 ಲಕ್ಷಕ್ಕಿಂತಲೂ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಿ, ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು. ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಮೈಸೂರು ರಾಜವಂಶಸ್ಥರು ಈ ಹಿಂದೆ ದೂರದೃಷ್ಟಿಯಿಂದ ಜಾರಿಗೊಳಿಸಿದ ಯೋಜನೆಗಳ ಫಲವನ್ನು ನಾವು ಇಂದು ಅನುಭವಿಸುತ್ತಿದ್ದೇವೆ. ಮೈಸೂರು ಅರಸರು ಮಾಡಿದ ಅಭಿವೃದ್ಧಿ ಕಾರ್ಯದ ಪ್ರತಿಧ್ವನಿಯಾಗಿ ಪ್ರಧಾನಿ ನರೇಂದ್ರ ಮೋದಿಯವರು ಕೆಲಸ ಮಾಡುತ್ತಿದ್ದಾರೆ. ವಿಕಸಿತ ಭಾರತಕ್ಕಾಗಿ ಶ್ರಮಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಜನತೆ ಬಿಜೆಪಿಯನ್ನು ಬೆಂಬಲಿಸಿ, ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿಯಾಗಿ ಮಾಡಬೇಕು. ಮೋದಿ ಅವರು 2047ರ ಗುರಿಯೊಂದಿಗೆ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಯೋಜನೆಗಳು ನಮಗೆ ಅಲ್ಲದಿದ್ದರೂ, ಮುಂದಿನ ಪೀಳಿಗೆಗೆ ಸಹಕಾರಿಯಾಗಲಿವೆ ಎಂದು ಅಭಿಪ್ರಾಯಪಟ್ಟರು.

ಜನರ ಮನಸ್ಥಿತಿ ಬದಲಾಗಬೇಕು: ಸಂವಾದ ಕಾರ್ಯಕ್ರಮದಲ್ಲಿ ಮೈಸೂರಲ್ಲಿ ಕಸ ವಿಲೇವಾರಿ, ಮಾಟಮಂತ್ರದ ಹಾವಳಿ, ಆಂಬುಲೆನ್ಸ್ ವ್ಯವಸ್ಥೆ ಕೊರತೆ ಸೇರಿದಂತೆ ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ಜನ ಪ್ರಶ್ನೆ ಕೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪಾಲಿಕೆ ವತಿಯಿಂದ ಕಸ ಸಂಗ್ರಹ ನಡೆಯುತ್ತಿದೆ. ಆದರೂ, ಕೆಲವೆಡೆ ಕಸ ಬಿದ್ದಿರುವುದು ಕಂಡು ಬರುತ್ತದೆ. ಬಿದ್ದಿರುವ ಕಸ ಸಂಗ್ರಹ ಮಾಡಬಹುದು. ಆದರೆ, ಜನರು ತಮ್ಮ ಮನಸ್ಥಿತಿಯನ್ನು ಬದಲಿಸಿಕೊಳ್ಳಬೇಕು. ಎಲ್ಲೆಂದರಲ್ಲಿ ಕಸ ಬಿಸಾಡಬಾರದು. ಸ್ವಚ್ಛಗೊಳಿಸಿದಷ್ಟು ಕಸ ಎಸೆಯುವವರ ಸಂಖ್ಯೆ ಹೆಚ್ಚಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮೈಸೂರಿನ ಸ್ವಚ್ಛತೆ ಕಾಪಾಡುವ ಹೊಣೆ ಎಲ್ಲರದ್ದಾಗಿದೆ ಎಂದರು. ರಸ್ತೆ ಬದಿಯಲ್ಲಿ ಮಾಟ ಮಂತ್ರ ಮಾಡಿರುವುದನ್ನು ತಡೆಗಟ್ಟುವ ಜವಾಬ್ದಾರಿ ಎಲ್ಲರದ್ದಾಗಿದೆ. ಜನ ಮೂಢನಂಬಿಕೆಗಳಿಗೆ ಒಳಗಾಗಿ, ಬ್ಲಾಕ್ ಮ್ಯಾಜಿಕ್‌ನಂತಹ ಕೃತ್ಯಕ್ಕೆ ಇಳಿಯಬಾರದು. ಮೈಸೂರಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಆಂಬುಲೆನ್ಸ್ ಸೇವೆ ಹೆಚ್ಚಿಸುವ ಸಂಬಂಧ ಚರ್ಚಿಸಿ ಕ್ರಮ ಕೈಗೊಳ್ಳುವ ಭರವಸೆ ನೀಡಿದರು. ಲಿಂಗಾಂಬುದಿ ಕೆರೆ ಹಾಗೂ ಸ್ಮಾರಕ ಸಂರಕ್ಷಣೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ವಾರಾಂತ್ಯದಲ್ಲಿ ಯಾವುದಾದರೂ ಕೆರೆ ಅಥವಾ ಸ್ಮಾರಕ ಸಂರಕ್ಷಣೆಗೆ ಕ್ರಮ ಕೈಗೊಳ್ಳಲಾಗುವುದು. ಇದಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ. ದೊಡ್ಡಮಟ್ಟದಲ್ಲಿ ಸಹಕಾರ ದೊರೆತರೆ ಸಂರಕ್ಷಣೆಯನ್ನು ತೀವ್ರಗೊಳಿಸಲಾಗುವುದು ಎಂದು ವಿವರಿಸಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ವಿಜಯ ವಿಠಲ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಆರ್.ವಾಸುದೇವ್ ಮೂರ್ತಿ, ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ರಾಜ್ಯ ಬಿಜೆಪಿ ಉಪಾಧ್ಯಕ್ಷ ಎಂ.ರಾಜೇಂದ್ರ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮಂಡಕಳ್ಳಿ ವಿಮಾನ ನಿಲ್ದಾಣದಿಂದ ವಿಮಾನಗಳೇ ಹಾರುತ್ತಿಲ್ಲ

ಸಂವಾದ ಕಾರ್ಯಕ್ರಮದಲ್ಲಿ ಹೊಯ್ಸಳ ಸಂಘದ ಅಧ್ಯಕ್ಷ ಕೆ.ಆರ್.ಸತ್ಯನಾರಾಯಣ ಮಾತನಾಡಿ, ಮೈಸೂರು ಮಂಡಕಳ್ಳಿ ವಿಮಾನ ನಿಲ್ದಾಣದಿಂದ ವಿಮಾನಗಳ ಹಾರಾಟ ಸ್ಥಗಿತಗೊಂಡಿದೆ. ಈ ಹಿಂದೆ 10 ವಿಮಾನಗಳು ಹಾರಾಡುತ್ತಿದ್ದವು. ಆದರೆ ಪ್ರಸ್ತುತ ಕೇವಲ ಎರಡು ವಿಮಾನವಷ್ಟೇ ಸಂಚರಿಸುತ್ತಿದ್ದು, ಮಾಹಿತಿಯಂತೆ ಎರಡು ದಿನದಲ್ಲಿ ಒಂದು ವಿಮಾನ ಹಾರಾಟ ಸ್ಥಗಿತಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ವಿಮಾನಯಾನ ಪುನರಾರಂಭಿಸಬೇಕು. ಇಲ್ಲದಿದ್ದರೆ ಜನರು ಬೆಂಬಲಿಸುವುದಿಲ್ಲ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಕೇಂದ್ರದ ನಾಯಕರೊಂದಿಗೆ ಚರ್ಚಿಸಿ, ಗಮನ ಸೆಳೆಯುವುದಾಗಿ ಭರವಸೆ ನೀಡಿದರು.

ಯದುವೀರ್ ಉತ್ತಮ ಅಭ್ಯರ್ಥಿ

ಕಾಂಗ್ರೆಸ್ ನಾಯಕರು ಮಹಾರಾಜ ಹಾಗು ಸಾಮಾನ್ಯ ಅಭ್ಯರ್ಥಿ ನಡುವಿನ ಚುನಾವಣೆ ಎನ್ನುತ್ತಿದ್ದಾರೆ. ನಮ್ಮ ಅಭ್ಯರ್ಥಿ ಯದುವೀರ್ ಅವರೂ ಜನಸಾಮಾನ್ಯರೇ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಹಾರಾಜರು. ಆ ಮಹಾರಾಜರ ವಿರುದ್ಧ ನಮ್ಮ ಸಾಮಾನ್ಯ ಅಭ್ಯರ್ಥಿ ಹೋರಾಡುತ್ತಿದ್ದಾರೆ ಎಂದರು.

ಸುಮಲತಾಗೆ ಉತ್ತಮ ಭವಿಷ್ಯ: ಜೆಡಿಎಸ್‌ಗೆ ಮಂಡ್ಯ, ಹಾಸನ, ಕೋಲಾರ ಕ್ಷೇತ್ರಗಳನ್ನು ಬಿಟ್ಟುಕೊಟ್ಟ ಕಾರಣ ಸುಮಲತಾ ಅವರಿಗೆ ಟಿಕೆಟ್ ಕೈತಪ್ಪಿದೆ. ಪ್ರಧಾನಿ ಮೋದಿ, ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಸುಮಲತಾ ಜತೆ ಮಾತನಾಡಿದ್ದಾರೆ. ಸುಮಲತಾ ನಮ್ಮೊಂದಿಗೆ ಇರುತ್ತಾರೆ. ಕಳೆದ ಐದು ವರ್ಷಗಳ ಕಾಲ ನಮ್ಮ ಜತೆಯಲ್ಲೇ ಇದ್ದರು. ಮುಂದೆಯೂ ನಮ್ಮ ಜೊತೆಗೆ ಇರುತ್ತಾರೆ. ಮುಂದಿನ ದಿನಗಳಲ್ಲಿ ಸುಮಲತಾ ಅವರಿಗೆ ಸೂಕ್ತ ಸ್ಥಾನಮಾನ ದೊರೆಯಲಿದೆ ಎಂದ ಅವರು, ಚುನಾವಣಾ ಪ್ರಚಾರ ಮಾಡುವ ಸಂದರ್ಭದಲ್ಲಿ ಜೆಡಿಎಸ್ ನಾಯಕರನ್ನು ಕಡೆಗಣಿಸುವ ಪ್ರಶ್ನೆಯೇ ಇಲ್ಲ. ಸೀಟು ಹಂಚಿಕೆ ಅಂತಿಮವಾಗದ ಕಾರಣ ಅವರನ್ನು ಆಹ್ವಾನಿಸಿರಲಿಲ್ಲ. ಇದೀಗ ಕ್ಷೇತ್ರಗಳು ಅಂತಿಮವಾಗಿರುವ ಕಾರಣ ಮುಂದೆ ನಡೆಯುವ ಚುನಾವಣಾ ಪ್ರಚಾರ ಸಭೆಗಳಲ್ಲಿ ಬಿಜೆಪಿ, ಜೆಡಿಎಸ್ ಪ್ರಮುಖ ನಾಯಕರು ಒಟ್ಟಿಗೆ ಭಾಗಿಯಾಗಲಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಕರ್ನಾಟಕದಲ್ಲಿ ಬಿಜೆಪಿಯನ್ನು ಒಕ್ಕಲಿಗ, ವೀರಶೈವ–ಲಿಂಗಾಯತ ಪಕ್ಷ ಎನ್ನುತ್ತಿದ್ದರು. ಆದರೆ, ಈ ಬಾರಿಯ ಚುನಾವಣೆಯಲ್ಲಿ ಇಡೀ ರಾಜ್ಯದ ಎಲ್ಲಾ ಸಮುದಾಯದ ಜನರು ಬಿಜೆಪಿ ಪರ ಒಲವು ವ್ಯಕ್ತಪಡಿಸಿದ್ದಾರೆ. ವಿಧಾನಸಭಾ ಚುನಾವಣೆಯಲ್ಲಿ ಮಾಡಿದ ತಪ್ಪನ್ನು ಕರ್ನಾಟಕದ ಜನರು ಲೋಕಸಭಾ ಚುನಾವಣೆಯಲ್ಲಿ ಮಾಡುವುದಿಲ್ಲ ಎಂದರು.

ಅನುದಾನಕ್ಕಾಗಿ ಕೇಂದ್ರವನ್ನು ಬೇಡಿಕೊಳ್ಳುತ್ತಿಲ್ಲ

ಎಂದು ಪತ್ರಿಕಾ ಪ್ರಕಟಣೆಯಲ್ಲಿ ಅವರು ಹೇಳಿದ್ದಾರೆ. ಶತಾಯಗತಾಯ ರಾಜ್ಯದಲ್ಲಿ ಆರ್ಥಿಕ ಬಿಕ್ಕಟ್ಟನ್ನು ಸೃಷ್ಟಿಸಿ, ಬಡವರಿಗೆ ನೀಡಲಾಗಿರುವ ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳುವಂತೆ ಮಾಡಬೇಕೆಂಬ ದುರಾಲೋಚನೆ ಕೇಂದ್ರ ಸರ್ಕಾರಕ್ಕೆ ಇದೆ ಎನ್ನುವುದು ಕನ್ನಡಿಗರಿಗೆ ಈಗ ಅರ್ಥವಾಗಿದೆ. ಇದಕ್ಕೆ ತಕ್ಕ ಉತ್ತರವನ್ನು ರಾಜ್ಯದ ಮತದಾರರು ಲೋಕಸಭಾ ಚುನಾವಣೆಯಲ್ಲಿ ನೀಡಲಿದ್ದಾರೆ ಎಂದಿದ್ದಾರೆ.

ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ಆಗಿರುವ ಅನ್ಯಾಯದ ವಿರುದ್ಧ ಸಿಡಿದೆದ್ದಿರುವ ಕನ್ನಡಿಗರ ಕೂಗಿಗೆ ರಾಜ್ಯ ಸರ್ಕಾರ ದನಿಯಾಗಿದೆ. ಇದು ಜವಾಬ್ದಾರಿಯುತ ಸರ್ಕಾರದ ಕರ್ತವ್ಯವೂ ಹೌದು. ಅನ್ಯಾಯ ನಡೆದಿರುವ ಕಾರಣಕ್ಕಾಗಿಯೇ 2020–21ರಲ್ಲಿ 15ನೇ ಹಣಕಾಸು ಆಯೋಗವು ತನ್ನ ಮಧ್ಯಂತರ ವರದಿಯಲ್ಲಿ ಕರ್ನಾಟಕವೂ ಸೇರಿದಂತೆ 3 ರಾಜ್ಯಗಳಿಗೆ ವಿಶೇಷ ಅನುದಾನ 6,764 ಕೋಟಿ (ರಾಜ್ಯಕ್ಕೆ 5,495 ಕೋಟಿ, ತೆಲಂಗಾಣಕ್ಕೆ 723 ಕೋಟಿ ಹಾಗೂ ಮಿಜೋರಾಂಗೆ 546 ಕೋಟಿ) ನೀಡಲು ಶಿಫಾರಸು ಮಾಡಿತ್ತು. ಆದರೆ ಕರ್ನಾಟಕಕ್ಕೆ ಮಾತ್ರವಲ್ಲ ತೆಲಂಗಾಣ ಮತ್ತು ಮಿಜೋರಾಂಗಳಿಗೂ ತೆರಿಗೆ ಹಂಚಿಕೆಯಲ್ಲಿ ಅನ್ಯಾಯವಾಗಿತ್ತು. ಹದಿನೈದನೇ ಹಣಕಾಸು ಆಯೋಗದ ಅಂತಿಮ ವರದಿಯಲ್ಲಿ ಜಲಮೂಲಗಳ ಸಂರಕ್ಷಣೆ ಹಾಗೂ ಬೆಂಗಳೂರಿನ ಫೆರಿಪೆರಲ್ ರಿಂಗ್ ರಸ್ತೆ ನಿರ್ಮಾಣಕ್ಕೆ ತಲಾ 3 ಸಾವಿರ ಕೋಟಿಯಂತೆ ಒಟ್ಟು 6 ಸಾವಿರ ಕೋಟಿ ರೂ. ನೀಡುವಂತೆ ಶಿಫಾರಸು ಮಾಡಿತ್ತು. ಇದು ಕೇಂದ್ರ ಸರ್ಕಾರ ವಿಶೇಷ ಪ್ರೀತಿ ಇಲ್ಲವೇ ಔದಾರ್ಯದಿಂದ ಮಾಡಿರುವ ಶಿಫಾರಸುಗಳಲ್ಲ. ಇವೆಲ್ಲವೂ ತೆರಿಗೆ ಹಂಚಿಕೆಯಲ್ಲಿನ ಅನ್ಯಾಯಕ್ಕೆ ನೀಡಿರುವ ಪರಿಹಾರ ಅಷ್ಟೆ. ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ಸರ್ಕಾರ ಇದೆ ಎನ್ನುವ ಏಕೈಕ ಕಾರಣಕ್ಕೆ ಈ ಎರಡೂ ಶಿಫಾರಸುಗಳನ್ನು ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ತಿರಸ್ಕರಿಸಿದ್ದಾರೆ. ಈ ಮೂಲಕ ಕರ್ನಾಟಕಕ್ಕೆ ನ್ಯಾಯಯುತ ಪಾಲಿನ ಹಕ್ಕಿನಿಂದ ವಂಚಿತರನ್ನಾಗಿಸಿದ್ದಾರೆ. ಇದು ರಾಜ್ಯದ ಆರುವರೆ ಕೋಟಿ ಕನ್ನಡಿಗರಿಗೆ ಬಗೆದಿರುವ ದ್ರೋಹವಾಗಿದೆ ಎಂದು ಟಾಂಗ್ ನೀಡಿದ್ದಾರೆ. ಕಣ್ಣೆದುರೇ ದಾಖಲೆಗಳಿದ್ದರೂ ಸ್ವಲ್ಪವೂ ಅಂಜಿಕೆಯಿಲ್ಲದೆ ಕೇಂದ್ರ ವಿತ್ತ ಸಚಿವರು ಹಸಿ ಹಸಿ ಸುಳ್ಳುಗಳನ್ನು ಹೇಳಿ ಜನರ ದಾರಿ ತಪ್ಪಿಸುವ ಹತಾಶ ಪ್ರಯತ್ನ ನಡೆಸುತ್ತಿದ್ದಾರೆ. ಕನ್ನಡಿಗರ ಎದುರು ಕೇಂದ್ರ ಸರ್ಕಾರದ ಸುಳ್ಳಿನ ಪರದೆ ಕಳಚಿ, ನಿಜ ಬಣ್ಣ ಬಯಲಾಗಿ ಬಹಳ ಕಾಲವಾಗಿದೆ ಎಂದಿದ್ದಾರೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600+30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಮನೆ ಮಾರಾಟಕ್ಕಿದೆ
30x40 ಪೂರ್ವ ದಿಕ್ಕಿನ MUDA ಖಾತೆ ಗ್ರಾನೈಟ್ All ಟೀಕ್ 100% ವಾಸ್ತು 3 BHK ಡ್ಯೂಪ್ಲೆಕ್ 91 ಲಕ್ಷ ಸಾತಗಳ್ಳಿ VTU ಹತ್ತಿರ 21x50 East Site ಕೆ.ಎಸ್.ಹುಂಡಿ 12 ಲಕ್ಷ, ನ 3 ಖಾತೆ
9900840025

Commercial Building for Sale
1st, 2nd, 3rd & 4th Floor, 1200 sq. Ring Road, Ananda Nagar.
Contact: 9844713445, 9066637156

HOME APPLIANCES SERVICE
ಫ್ರಿಡ್ಜ್, ವಾಶಿಂಗ್‌ಮೇಶೀನ್, ಮೈಕ್ರೋ ವೋವೆನ್, ಎಲ್‌ಸಿಡಿ, ಸೋಲಾರ್, ಯುಪಿಎಸ್, ಗೀಸರ್, ಸೇಲ್ಸ್ ಅಂಡ್ ಸರ್ವೀಸ್, ನಿಮ್ಮ ಮನೆಯ ಹತ್ತಿರ ದೊರೆಯುತ್ತದೆ.
Contact: Srinivas 9379699229

JNANJYOTHI VIDYLYA
Beerihundi Bhogadi Road, (English Medium)
Wanted Teachers (High School) for English - 2, Science & Maths - 2, PET-1 Kannada- 1, Social Science- 1
9845390377
8197057626

ಶ್ರೀ ಗೌರಿಶಂಕರ ಟೂರಿಸ್ಟ್
28/4/24–(6 ದಿನ)– ಕಾಶಿ, ಆಯೋಧ್ಯ, ಗಯ, 12/5/24–(5ದಿನ)– ಮುನ್ನಾರ್, ತ್ರಿವೇಂಡ್ರಂ, 30/5/24–(11 ದಿನ)– ಆಯೋಧ್ಯ, ಕಾಶಿ, ನೇಪಾಳ, ಮುಕ್ತಿನಾಥ, 15/7/24–(11ದಿನ)– ವೈಷ್ಣೋದೇವಿ, ಅಮರ್‌ನಾಥ್, ಶ್ರೀನಗರ, ಗುಲ್ಮಾರ್ಗ್ (ವಿಮಾನ್, ಬಸ್, ಊಟ, ರೂಂ)
9620002114

ಬೇಕಾಗಿದ್ದಾರೆ
ಮೈಸೂರಿನ ಹೂಟಗಳ್ಳಿಯಲ್ಲಿರುವ ಕಂಪನಿಯಲ್ಲಿ ಶಿಫ್ಟ್‌ಗಳಲ್ಲಿ ಕೆಲಸ ಮಾಡಲು ಹೆಲ್ಪರ್‌ಗಳು ಬೇಕಾಗಿದ್ದಾರೆ
ಸಮಯ: ಬೆಳಗ್ಗೆ 8 ರಿಂದ ಸಂಜೆ 8 ರವರೆಗೆ, ಸಂಜೆ 8 ರಿಂದ ಬೆಳಗ್ಗೆ 8 ರವರೆಗೆ.
ಸಂಬಳ: 16000 ಪ್ರತಿ ತಿಂಗಳಿಗೆ (ವಸತಿ ಸೌಲಭ್ಯ ಇರುತ್ತದೆ), ಸಂಪರ್ಕಿಸಿ:
9513777350

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 8880558064

WANTED
Receptionist, Typist and Housekeeping Staff, Chinese Cook and Asst. Cook, Captain.
Walk-in interview
Call: 9739786223

ಬೇಕಾಗಿದ್ದಾರೆ
ಬೇಕಾಗಿದ್ದಾರೆ : ಕೆಲಸಕ್ಕೆ ಹುಡುಗಿಯರು ಬೇಕಾಗಿದ್ದಾರೆ
ಕೆಲಸದ ವೇಳೆ: 10 AM to 8 PM
ವಿಚಾರಿಸಿ: ಚೇತನ ಬುಕ್ ಹೌಸ್, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 8861401315

ಸುಸಜ್ಜಿತವಾಗಿ ನಡೆಯುತ್ತಿರುವ ಇಟ್ಟಿಗೆ ಫ್ಯಾಕ್ಟರಿ
ಬಾಡಿಗೆಗೆ ದೊರೆಯುತ್ತದೆ (ಮಣ್ಣಿನ ಸಮೇತ)
BRICK FACTORY AVAILABLE FOR RENT (WITH SOIL)
ಸಂಪರ್ಕಿಸಿ : 8296240149

FOR RENT
D Subbaiah Road
Ground Floor 1 BHK
2nd Floor 2 BHK
LEASE / RENT
3rd Floor 1 BHK
D Subbaiah Road
7760090416
9886712649

ಬೋಳು ತಲೆಯ ಸಮಸ್ಯೆಯೇ?



ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಪರ್ಧಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Aniketana Road, Kuvempunagar, Mysuru
MYSURU 9611028523 MANGALORE 9343142258

ಉಚಿತ ಭವಿಷ್ಯ ಶಾಶ್ವತ ಪರಿಹಾರ
ಶ್ರೀ ಸಾಯಿ ಕೃಷ್ಣ ಜ್ಯೋತಿಷ್ಯಾಲಯ
ಪಂ|| ಕೃಷ್ಣಪ್ರಸಾದ್
ಮನೆಯಲ್ಲಿ ಅಶಾಂತಿ ಸತಿಪತಿ ಕಲಹ ಸಾಲಬಾಧೆ, ದಾಂಪತ್ಯ ಸಮಸ್ಯೆ, ಭೂಮಿ ವಶ, ಸ್ತ್ರೀಪುರುಷ ಶತೃಕಾಟ, ನೀವು ಬೇರೆ ಜೋತಿಷ್ಯರಲ್ಲಿ ಹಣ ನೆಮ್ಮದಿ ವಿಶ್ವಾಸ ಕಳೆದುಕೊಂಡಿದ್ದಲ್ಲಿ ನಿಮ್ಮ ಜೀವನದ ಯಾವುದೇ ಸಮಸ್ಯೆ ಇದ್ದರು ಕೊಳ್ಳೇಗಾಲದ 500 ವರ್ಷದ ಯಂತ್ರ ಮಂತ್ರ ವಿದ್ಯೆಯಿಂದ 9 ದಿನದಲ್ಲಿ ಶಾಶ್ವತ ಪರಿಹಾರ ಶತಃಸಿದ್ಧ
9535161120

Aquaguard & Kent Sales and Service
Service Charge: 300/-
9901200444

ಬೇಕಾಗಿದ್ದಾರೆ
ಬೇಕಾಗಿದ್ದಾರೆ : ಕೆಲಸಕ್ಕೆ 40 ವರ್ಷ ಮೇಲ್ಪಟ್ಟ ಪುರುಷರು
ಕೆಲಸದ ವೇಳೆ: 10 AM to 8 PM
ವಿಚಾರಿಸಿ: ಚೇತನ ಬುಕ್ ಹೌಸ್, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು

DTCP SITES FOR SALE
DTCP Sites Rs. 699 per sq.ft., Near Jayapura, H.D. Kote Road, Mysore.
9590491194,9606783264

ಕೆಲಸಕ್ಕೆ ಬೇಕಾಗಿದ್ದಾರೆ
ಹುಡುಗಿಯರು ವಯೋಮಿತಿ 18–25 ವಿದ್ಯಾರ್ಹತೆ ಪಿಯುಸಿ ಯಾವುದೇ ಡಿಗ್ರಿ ಸೆರಾಕೇರ ಮೈಸೂರು ಹೆಲ್ತ್ ಸೆಂಟ್ ನ್ಯೂ ಕಾಂತರಾಜ ಅರಸು ರಸ್ತೆ, ಕೆ.ಜಿ.ಕೊಪ್ಪಲು, ಮೈಸೂರು
8296366894
7996011692

BEFORE DRILLING BOREWELL CONTACT
ಸಿ.ಟಿ. ಚಂದ್ರಶೇಖರ್ ಭೂ ವಿಜ್ಞಾನಿ
Ground Water Consultant
9448389090

ಬರವಣಿಗೆ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಫಾರಂಗೆ 30 ರೂ.ಗಳನ್ನು ಪಡೆಯಿರಿ.
9731891409

ಬೇಕಾಗಿದ್ದಾರೆ
ಗೌಡ್ರು ಪೋರ್ಕ್ ಹೋಟೆಲ್ ಹಿನಕಲ್, ಮೈಸೂರು ಪೋರ್ಕ್ ಹಾಗೂ ಇತರೆ ಮಾಂಸಾಹಾರ ಅಡುಗೆ ಮಾಡಲು ಅನುಭವಿ ಭಟ್ಟರು ಬೇಕಾಗಿದ್ದಾರೆ.
9886181222

2 BHK HOME INTERIORS
Starting @ ₹2.5 Lacs*
Home Space Mart™
TALK TO OUR DESIGN TEAM 9108923123

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 7204494854

neem BOND PLATINUM® PLYWOOD DOORS
10 YEARS WARRANTY
@ FACTORY DEPOT RATES
9731591267, 9901291267

ವಿವಾಹ ಭಾಗ್ಯ
MRJ ಮ್ಯಾಟ್ರಿಮೋನಿ
ಎಲ್ಲಾ ಜಾತಿಯ ವಧು / ವರರಿಗಾಗಿ ಸಂಪರ್ಕಿಸಿ
1) ಮೊದಲನೆ ಮದುವೆ
2) ಎರಡನೆ ಮದುವೆ
3) ವಿಧವೆ / ವಿದುರರು
FREE REGISTRATION.
89048 90413

ಲಾವಣ್ಯ ಮ್ಯಾರೇಜ್ ಬ್ಯೂರೋ
SC, ST, ಗೌಡ, ಬಲಿಜ, ಲಿಂಗಾಯತ, ಬ್ರಾಹ್ಮಣ ಈಡಿಗ, ದೇವಾಂಗ, ಮರಾಠ ಇತರೆ ಎಲ್ಲಾ ಜಾತಿಯ ಮೊದಲನೇ ಮತ್ತು ಎರಡನೇ ಮರು ಮದುವೆಯಾಗುವ ವಧುವರರು ಸಂಪರ್ಕಿಸಿ
91647-43059

ನಿವೇಶನ ಮಾರಾಟಕ್ಕಿದೆ
ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ಪಟ್ಟಣದ ಜಯನಗರ ಬಡಾವಣೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮುಂಭಾಗ, ಉತ್ತರಕ್ಕೆ 30ಅಡಿ ರಸ್ತೆ ಹೊಂದಿರುವ ಇ–ಖಾತೆ ಆಗಿರುವ 45x45 ಅಡಿ ಅಳತೆಯುಳ್ಳ ನಿವೇಶನವು ಮಾರಾಟಕ್ಕಿದೆ.
ಆಸಕ್ತರು ಸಂಪರ್ಕಿಸಿ:
Mob: 9980250333

ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರು ಕೈಗಾರಿಕಾ ಪ್ರದೇಶ ಕೂರ್ಗಳ್ಳಿ, ಮೇಟಗಳ್ಳಿ, ಹೆಬ್ಬಾಳ ಇಲ್ಲಿ ಕೆಲಸ ಮಾಡಲು, Helper, SMD Operator, Soldering, Machine Operator, ಸೆಕ್ಯೂರಿಟಿಗಳು ಹಾಗೂ ಕೋ–ಆಪರೇಟಿವ್ ಸೊಸೈಟಿಯಲ್ಲಿ ಕೆಲಸ ಮಾಡಲು, ಪಿಗ್ಮಿ ಏಜೆಂಟ್, ಫೀಲ್ಡ್ ಎಕ್ಸಿಕ್ಯೂಟಿವ್, ಕಂಪ್ಯೂಟರ್ ಆಪರೇಟರ್ ಬೇಕಾಗಿದ್ದಾರೆ. ಕೂಡಲೇ ಸಂಪರ್ಕಿಸಿ:
9611208553, 9036461347

ಬೇಕಾಗಿದ್ದಾರೆ
ಕರ್ನಾಟಕದದ್ಯಂತ ಪ್ರಸಿದ್ಧ *MNC ಕಂಪನಿಗಳಿಗೆ* ಕಂಪನಿ, ಮತ್ತು ಆಫೀಸ್ ಕೆಲಸದ ಉದ್ಯೋಗಗಳಿಗೆ ತಕ್ಷಣ ಯುವಕ ಯುವತಿಯರು ಬೇಕಾಗಿದ್ದಾರೆ ಯಾವುದೇ ಸಂದರ್ಶನ ಇರುವುದಿಲ್ಲ ಪ್ರಸಿದ್ಧ ಕಂಪನಿಗಳಲ್ಲಿ, ಅಕೌಂಟೆಂಟ್, ಡೇಟಾ ಆಪರೇಟರ್, ಟೆಲಿಕಾಲರ್, ಕ್ಯಾಷಿಯರ್, ಆಫೀಸ್ ಬಾಯ್, ಮತ್ತು ಮ್ಯಾನುಫ್ಯಾಕ್ಚರಿಂಗ್ ಕೆಲಸಕ್ಕೆ ಬೇಕಾಗಿದ್ದಾರೆ, ಶಿಕ್ಷಣ 4ನೇ ತರಗತಿ ಇಂದ ಯಾವುದೇ ಪದವೀಧರರು, (*ಸಂಬಳ* 18000 Rs ಇಂದ 30000 Rs+ ಇನ್ಸೆಂಟಿವ್*) ಹೆಚ್ಚಿನ ಮಾಹಿತಿಗಾಗಿ ಇಂದೇ ಸಂಪರ್ಕಿಸಿ *HR*ಮೇಡಂ (ದೂರವಾಣಿ ಸಂಖ್ಯೆ)
+9182962 78130, +918088497952

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

WANTED
Purchase Executive
Graduates having min. 1 year exp. with good communication skills (Hindi and English) willing to travel can apply. Local languages (Tamil / Telugu) will be an added advantage.
Mob: 8971799998

SITES for SALE
JP Nagar Ring Road
20 x 30 - 17 Lakhs,
30 x 40 - 33 Lakhs,
Near Gurur Bus Stop, Ramabainagar,Mysore.
DTCP approved (Corporation limits)
1.5 Kms from JP Nagar Ring Road
8660105902

40x60 Site
Vijayanagar 4th Stage
West Facing, Price - 1.20 Cr
40 Feet Road
(Brokers Don't Call)
8660105902

FOR SALE
1) 20x30, 30x40, 30x50 near Defence Apartment H.D. Kote Road.
2) 30x50 Varuna Lake near Narasipura Road.
3) 2, 3 BHK flats in Ramakrishnanagar.
4) 100x100 Farm house KRS Back Water attach 19 Lakhs starts.
5) 40x72 house Vidyaranyapuram.
6) 20x30 House Giridarshini Layout, Alanahalli attach.
7) 30x50 new house near JP Nagar.
PRAKRUTHI PROPERTIES
9538690359, 9035990359

ತಕ್ಷಣ ಸೆಕ್ಯೂರಿಟಿ ಗಾರ್ಡ್ ಬೇಕಾಗಿದ್ದಾರೆ
ಸಂಬಳ: 15K
ಸ್ಥಳ: ಬೋಗಾದಿ ವಿಜಯನಗರ, 4th ಸ್ಟೇಜ್, ಹಿನಕಲ್
9008380450
9164010202

ಪಾರ್ಟ್ ಟೈಂ ಕೆಲಸಗಳು
ನಿಮ್ಮ ಬಿಡುವಿನ ವೇಳೆಯಲ್ಲಿ ಪಾರ್ಟ್ ಟೈಂ ಕೆಲಸಗಳನ್ನು ಮಾಡಿ ಗಳಿಸಿ ತಿಂಗಳಿಗೆ 20000/– ದಿಂದ 25000ದ ವರೆಗೆ ಕರೆ ಮಾಡಿ
7899097881

ಬೇಕಾಗಿದ್ದಾರೆ
ರೂಂ ಬಾಯ್ಸ್ ಬೇಕಾಗಿದ್ದಾರೆ. ನ್ಯೂ ಎಸ್.ಕೆ. ರೆಸಿಡೆನ್ಸಿ ಮೈಸೂರು–ಬೆಂಗಳೂರು ಸರ್ವಿಸ್ ರಸ್ತೆ, ನಾಗನಹಳ್ಳಿ ಕ್ರಾಸ್, ಮೈಸೂರು
9611443107

ತಕ್ಷಣ ಬೇಕಾಗಿದ್ದಾರೆ
ಹೆಬ್ಬಾಳ ಮತ್ತು ಹೂಟಗಳ್ಳಿಯಲ್ಲಿ ಕೆಲಸ ಮಾಡಲು ಕಂಪ್ಯೂಟರ್ ಅನುಭವವುಳ್ಳ ಸೆಕ್ಯೂರಿಟಿ ಗಾರ್ಡ್ ಮತ್ತು ಸೆಕ್ಯೂರಿಟಿ ಸೂಪರ್‌ವೈಸರ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC ಮೇಲ್ಪಟ್ಟು
ಸಂಬಳ: 18000/- + (W/o 8+hrs)
ESI & PF ಸೌಲಭ್ಯವಿರುತ್ತದೆ.
9880727819,9620667819

ಉದ್ಯೋಗವಕಾಶ
ಮೈಸೂರಿನಲ್ಲಿ ನೂತನವಾಗಿ ಆರಂಭವಾಗಿರುವ AWG ಕಂಪನಿಯಲ್ಲಿ ಖಾಲಿಯಿರುವ Asst Manager, Team Leader, Admin, Branch Manager ಹುದ್ದೆಗಳಿಗೆ ಅಭ್ಯರ್ಥಿಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC, PUC, ITI, Any Degree, Etc.
ವಯೋಮಿತಿ: 18 to 40 Years
ತಿಂಗಳಿಗೆ : 24000-31000
ಉಚಿತ ಊಟ+ವಸತಿ+ಗ್ರಾಮೀಣದವರಿಗೆ ಹೆಚ್ಚಿನ ಆದ್ಯತೆ)
ಸುಷ್ಮಾ: 9900163228 7349699460

JOB'S @ MYSORE
Age (18-23) 10th, PUC, ಮೇಲ್ಪಟ್ಟ Trainee /Helperಗಳಾಗಿ
Earn (8500/- 16500/-) Pm
Only Freshers,
No Fee ವಿವರಗಳೊಂದಿಗೆ ಖುದ್ದಾಗಿ ಸಂಪರ್ಕಿಸಿ
Meet Us Today Join Tomorrow
ಮಧು: 9342827788

SITE FOR SALE
30x40 Corner Site at Rajajnagara Near R T Layout Opposite University Layout Contact
8951820020

ಅನುಭವವುಳ್ಳ ಕೆಲಸದವರು ಬೇಕಾಗಿದ್ದಾರೆ
ವೃದ್ಧರ ಸೇವೆಯನ್ನು ಮಾಡುವವರು, ಅಡುಗೆ ಮಾಡಲು ಅನುಭವ ಇರುವವರು, ಮನೆ ಕೆಲಸ ಮಾಡಲು ಅನುಭವ ಇರುವವರು ಬೇಕಾಗಿದ್ದಾರೆ.
8152074183

ಹೊಸ ಬ್ಯುಸಿನೆಸ್ ಶುರು ಮಾಡಲು ಮತ್ತು ಹಳೆಯ ಬ್ಯುಸಿನೆಸ್ ನವೀಕರಣ ಮಾಡಲು ಸಂಪರ್ಕಿಸಿ:
8660725394
9741103367

ಮಾರಾಟಕ್ಕಿದೆ
1.1 ಲಕ್ಷರೂಗಳ ಬಾಡಿಗೆ ಬರುತ್ತಿರುವ ಕುವೆಂಪುನಗರದ ಈಸ್ಟ್ ಆಫ್ ವಿಶ್ವಮಾನವ ಜೋಡಿ ರಸ್ತೆಯ ವಿಜಯ ಬ್ಯಾಂಕ್ ಸರ್ಕಲ್ ಬಳಿ ಕಮರ್ಷಿಯಲ್ ಕಟ್ಟಡ ಮಾರಾಟಕ್ಕಿದೆ
8105751169
9620607138

ಬೇಕಾಗಿದ್ದಾರೆ
ಕುವೆಂಪುನಗರದಲ್ಲಿರುವ ಪಾರ್ಸಲ್ ಸರ್ವಿಸ್ ಹೋಟೆಲ್‌ಗೆ ಕಿಚನ್ ಹೆಲ್ಪರ್, ಹಿಟ್ಟು ಕಲಸುವವರು, ಚಪಾತಿ ಬೇಯಿಸುವವರು, ತರಕಾರಿ ಕಟ್ ಮಾಡುವವರು ಬೇಕಾಗಿದ್ದಾರೆ. ತಿಂಗಳಿಗೆ 9 ರಿಂದ 13 ಸಾವಿರ ಸಂಬಳದೊಂದಿಗೆ ಊಟ, ವಸತಿ ಉಚಿತ
7204404170

ಬೇಕಾಗಿದ್ದಾರೆ
ನಗರದ ಮಧ್ಯಭಾಗದಲ್ಲಿರುವ ಸಸ್ಯಾಹಾರಿ ಹೋಟೆಲ್‌ಗೆ ಕ್ಯಾಶಿಯರ್ ಸೂಪರ್‌ವೈಸರ್ / ಬಿಲ್ ರೈಟರ್ ಹಾಗೂ ಸಪ್ಲೈಯರ್ ಬೇಕಾಗಿದ್ದಾರೆ.
9916206561

ಬೇಕಾಗಿದ್ದಾರೆ
ಫ್ಲೋರ್ ಮಿಲ್‌ನಲ್ಲಿ ಕೆಲಸ ಮಾಡಲು ಅನುಭವ ಇರುವವರು ಬೇಕಾಗಿದ್ದಾರೆ.
9740677338
8867410444

ಮನೆ ಮಾರಾಟಕ್ಕಿದೆ
55x45 ಅಳತೆಯ ಕಟ್ಟಡದಲ್ಲಿ 21x45 ಅಳತೆಯ 2 ಅಂತಸ್ತಿನ ಮನೆ ತ್ಯಾಗರಾಜ ರೋಡ್, 8ನೇ ಕ್ರಾಸ್, ಅಗ್ರಹಾರ ಮೈಸೂರು
9448442226
6361637505

ಮಾರ್ವಲ್ ಟ್ರಾವೆಲ್ಸ್
11/4/24–(12 ದಿನಗಳು) ಉತ್ತರಭಾರತ ಪ್ರವಾಸ
10/5/24–(12 ದಿನಗಳು) ಚಾರ್ಧಾಮ್ ಯಾತ್ರ
10/7/24–(12 ದಿನಗಳು) ಅಮರನಾಥ್ ಯಾತ್ರ
ಪ್ರವಾಸಕ್ಕಾಗಿ ಸಂಪರ್ಕಿಸಿ: ಮಾರ್ವಲ್ ಟ್ರಾವೆಲ್ಸ್ ನಜರ್‌ಬಾದ್ ಮೈಸೂರು
9342118682
9449128682

ಶ್ರೀ ಕನಕದಾಸ ಪತ್ತಿನ ಸಹಕಾರ ಸಂಘ,
ದೇವರಾಜ ಮೊಹಲ್ಲಾ, ಮೈಸೂರು
1) ಹುದ್ದೆ, ಕಾರ್ಯದರ್ಶಿ –1 B.Com/ M.Com (ಪುರುಷ)
2) ಹುದ್ದೆ, ಅಕೌಂಟೆಂಟ್ / ಆಫೀಸ್ B.Com (ಪುರುಷ)
ಅನುಭವವುಳ್ಳವರಿಗೆ ಆದ್ಯತೆ, ಆಸಕ್ತಿಯುಳ್ಳವರು ಸಂಪರ್ಕಿಸಿ:
9986022201
ಆಡಳಿತ ಮಂಡಳಿಯ ಆದೇಶದ ಮೇರೆಗೆ/ಸಹಿ ಅಧ್ಯಕ್ಷರು

WANTED
Residential / Regular Teacher
Prestigious CBSE School in Mysore City The Inetrested Candidates contact
7676522224
9964654886

ಕೆಲಸಕ್ಕೆ ಬೇಕಾಗಿದ್ದಾರೆ
1. ಸೆಕ್ಯೂರಿಟಿ ಗಾರ್ಡ್ (ಪುರುಷರು): ತಾಂಡ್ಯ ಇಂಡಸ್ಟ್ರಿಯಲ್ ಏರಿಯಾ, ಕಡಕೊಳ ಇಂಡಸ್ಟ್ರಿಯಲ್ ಏರಿಯಾ, ಹೆಬ್ಬಾಳ್ ಇಂಡಸ್ಟ್ರಿಯಲ್ ಏರಿಯಾ, ಡಿ. ಅರಸು ರಸ್ತೆ, ಬಂಡಿಪಾಳ್ಯ (ಆರ್‌ಎಂಸಿ) ಬಂಬು ಬಜಾರ್, ಚಾಮುಂಡಿಪುರಂ, ಹೆಬ್ಬಾಳ್ ವಾಟರ್ ಟ್ಯಾಂಕ್, ಸೂರ್ಯ ಬೇಕರಿ, ಲಕ್ಷ್ಮಿಕಾಂತ ನಗರ ಶ್ರೀರಂಗಪಟ್ಟಣ, ಪಾಂಡವಪುರ ಹತ್ತಿರ, ಬಸವನಗುಡಿ ಸರ್ಕಲ್. ಸಂಪರ್ಕಿಸಿ:
8310098788

ಮಹಿಳೆಯರಿಗೆ ಸುವರ್ಣಾವಕಾಶ
ನಿಮ್ಮ ಮನೆಗಳಿಂದಲೇ ಪ್ಲಾಸ್ಟಿಕ್ ಹಾರಗಳನ್ನು ಮಾಡಿ ನಮಗೆ ಕೊಡಿ. ನಾವೇ ತರಬೇತಿ ನೀಡಿ ಕಚ್ಚಾ ಸಾಮಗ್ರಿಗಳನ್ನು ನಾವೇ ಕೊಡುತ್ತೇವೆ. ವಾರದ ಸಂಬಳ ದೊರೆಯುತ್ತದೆ. ಸಂಪರ್ಕಿಸಿ:
8867556624

ಬೇಕಾಗಿದ್ದಾರೆ
ವಯಸ್ಸಾದವರನ್ನು ನೋಡಿಕೊಳ್ಳಲು ಹೋಮ್ ನರ್ಸ್ ಅನುಭವ ಇರುವ ಇಲ್ಲದೆ ಇರುವ ಹುಡುಗ ಹುಡುಗಿಯರು ಹಾಗೂ ಬೆಂಗಳೂರು ಮೈಸೂರಿನಲ್ಲಿ ಅಡುಗೆ ಮನೆ ಕೆಲಸ ಮಾಡುವವರು ಬೇಕಾಗಿದ್ದಾರೆ. ಬೆಳಗ್ಗೆ ಅಥವಾ ರಾತ್ರಿ ಅಥವಾ 24 ಗಂಟೆ ಕೆಲಸ ಮಾಡುವವರು ಬೇಕಾಗಿದ್ದಾರೆ.
ಸಂಬಳ: 12000 ರಿಂದ 25000 ಸಂಪರ್ಕಿಸಿ
8123630683

ಮನೆ ಬಾಡಿಗೆಗೆ
ಮನೆ ನಂ. 242, 3ನೇ ಕ್ರಾಸ್, ಮೆಘಾ ಮೆಡಿಕಲ್ ಡೌನ್ ರಸ್ತೆ, ಕುವೆಂಪುನಗರ, ಮೈಸೂರು ಸಿಟಿ 2 ಬೆಡ್ ರೂಂ, ಗ್ರೌಂಡ್‌ಫ್ಲೋರ್ ಕಾರ್ನರ್ ಮನೆ
9886973148
7975441365

ಬೇಕಾಗಿದ್ದಾರೆ
Distributorಗೆ ಯಲ್ಲಿ ಅನುಭವ ಇರುವ FMCGಯಲ್ಲಿ ಮತ್ತು ಡೆಲಿವರಿ ಡ್ರೈವರ್ ಬೇಕಾಗಿದ್ದಾರೆ.
9972258425

ಬೇಕಾಗಿದ್ದಾರೆ
ವೃದ್ಧರು ರೋಗಿಗಳನ್ನು ಆರೈಕೆ ಮಾಡಲು ಯುವಕ/ಯುವತಿಯರು, ಮಹಿಳೆಯರು, ವಿಧವೆ/ವಿಚ್ಛೇದಿತೆಯರು ಹೋಂ ನರ್ಸಿಂಗ್ ಕೆಲಸಕ್ಕಾಗಿ ತಕ್ಷಣ ಬೇಕಾಗಿದ್ದಾರೆ. ಯಾವುದೇ ರೀತಿಯ ಶುಲ್ಕ ಇರುವುದಿಲ್ಲ (ನಮ್ಮಲ್ಲೇ ಉಳಿದುಕೊಳ್ಳುವವರಿಗೆ ಮಾತ್ರ ಅವಕಾಶ) ಸಂಬಳ ಉಚಿತ ಊಟ ವಸತಿಯಿಂದಿಗೆ 16000 ರಿಂದ 20000ವರೆಗೆ
7411304177
7411304176

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸೋಮವಾರ ಗುರುವಾರ ಶನಿವಾರ
ಪ್ರತಿ ಜಾಹೀರಾತಿಗೆ ರೂ. 630 ಮಾತ್ರ

ಮಂಡ್ಯಕ್ಕೆ ಇಂದು ಅಭ್ಯರ್ಥಿ ಘೋಷಣೆ

ಬೆಂಗಳೂರಲ್ಲಿ ಮಂಡ್ಯದ ಜೆಡಿಎಸ್ ಕಾರ್ಯಕರ್ತರಿಗೆ ಕುಮಾರಸ್ವಾಮಿ ಭರವಸೆ


ಬೆಂಗಳೂರಿಗೆ ಆಗಮಿಸಿದ್ದ ಮಂಡ್ಯ ಜಿಲ್ಲಾ ಜೆಡಿಎಸ್ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡುತ್ತಿರುವ ಕುಮಾರಸ್ವಾಮಿ

ಬೆಂಗಳೂರು,ಮಾ.24–(ಮೋಹನ್ ರಾಜ್) ಮಂಡ್ಯ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ನೀವೇ ಆಗಬೇಕು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಮಂಡ್ಯ ಜೆಡಿಎಸ್ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಮುಖಂಡರು ಒತ್ತಾಯಿಸಿದ್ದಾರೆ. ಮಂಡ್ಯದಿಂದ ಬಂದಿದ್ದ ಕಾರ್ಯಕರ್ತರು, ಮುಖಂಡರು ಮತ್ತು ಅಭಿಮಾನಿಗಳು ಬೆಂಗಳೂರಿನ ಜೆ.ಪಿ.ನಗರದಲ್ಲಿರುವ ಮಾಜಿ ಮುಖ್ಯಮಂತ್ರಿಗಳ ನಿವಾಸದ ಎದುರಿನ ರಸ್ತೆಯಲ್ಲಿಯೇ ಕುಳಿತು ಘೋಷಣೆ ಕೂಗಿದರು. ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಈ ಸಂದರ್ಭದಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿ, ಸೋಮವಾರ (ಮಾ.25)ಸಂಜೆಯೊಳಗೆ ನಿಮ್ಮ ಆಶಯಕ್ಕೆ ತಕ್ಕಂತೆ ಅಭ್ಯರ್ಥಿಯನ್ನು ಘೋಷಿಸಲಿದ್ದೇನೆ ಎಂದು ಸ್ಪಷ್ಟಪಡಿಸಿದರು.

ನಮ್ಮ ಪಕ್ಷದಲ್ಲಿ ದೊಡ್ಡ ನಾಯಕರು ಯಾರೂ ಇಲ್ಲ. ನಮ್ಮ ಪಕ್ಷದಲ್ಲಿ ಬೆಳೆದವರು ನಮ್ಮನ್ನು ಬೀದಿಯಲ್ಲಿ ನಿಲ್ಲಿಸಿ ಹೋಗಿದ್ದಾರೆ. ನಿಮ್ಮ ಆಸೆಗೆ ನಿರಾಸೆ ಮಾಡಲ್ಲ ಎಂದು ಮಂಡ್ಯದ ಸಭೆಯಲ್ಲೇ ಹೇಳಿದ್ದೇನೆ. ನಾನು ಹುಟ್ಟಿದ್ದು ಹಾಸನ ಜಿಲ್ಲೆಯಲ್ಲಿ. ನನಗೆ ರಾಜಕೀಯ ಜನ್ಮ ಕೊಟ್ಟಿದ್ದು ರಾಮನಗರ ಜಿಲ್ಲೆ, ಜೀವಕ್ಕೆ ಜೀವವಾಗಿ ನನ್ನನ್ನು ಪೊರೆದು ಸಲಹುತ್ತಿರುವುದು ಮಂಡ್ಯ ಜಿಲ್ಲೆ . ಈ ನೆಲವನ್ನು, ಈ ಜನರ ಪ್ರೀತಿ ವಿಶ್ವಾಸವನ್ನು ನಾನು ಮರೆಯಲು ಸಾಧ್ಯವೇ ಇಲ್ಲ. ನಾಳೆ (ಸೋಮವಾರ) ಚನ್ನಪಟ್ಟಣ ಕ್ಷೇತ್ರದ ಮುಖಂಡರನ್ನು ಕರೆಸಿ ಮಾತನಾಡುತ್ತೇನೆ. ನಾಳೆಯ ದಿನ ಯಾವುದೇ ಕಾರಣಕ್ಕೂ ನಿಮಗೆ ನಿರಾಶೆ ಮಾಡಲ್ಲ
–ಕುಮಾರಸ್ವಾಮಿ ಮಾಜಿ ಸಿಎಂ.

ಚೆನ್ನೈನಲ್ಲಿ ಮೂರನೇ ಬಾರಿಗೆ ಯಶಸ್ವಿಯಾಗಿ ಹೃದಯ ಶಸ್ತ್ರಚಿಕಿತ್ಸೆಗೆ ಒಳಗಾಗಿ ಮನೆಗೆ ಮರಳಿದ ಅವರನ್ನು ನೋಡಲು ಹಾಗೂ ಅಭ್ಯರ್ಥಿಯಾಗುವಂತೆ ಮನವಿ ಮಾಡಲು ಮಂಡ್ಯ ಜಿಲ್ಲೆಯಿಂದ ಸಾವಿರಾರು ಮಂದಿ ಭಾನುವಾರ ಬೆಂಗಳೂರಿನ ಜೆಪಿ ನಗರದಲ್ಲಿರುವ ಕುಮಾರಸ್ವಾಮಿ ನಿವಾಸಕ್ಕೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿಗಳ ನಿವಾಸದ ಮುಂದೆ ಜಮಾಯಿಸಿದ ಮಂಡ್ಯ ಜಿಲ್ಲೆಯ ಕಾರ್ಯಕರ್ತರು, ಮುಖಂಡರು ಕುಮಾರಸ್ವಾಮಿ ಅವರೇ ಮಂಡ್ಯ ಕ್ಷೇತ್ರದ ಅಭ್ಯರ್ಥಿಯಾಗಬೇಕು ಎಂದು ಪಟ್ಟು ಹಿಡಿದರು.

ಈ ಸಂದರ್ಭದಲ್ಲಿ ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಕಾರ್ಯಕರ್ತರನ್ನು ಸಮಾಧಾನಪಡಿಸಲು ಪ್ರಯತ್ನಿಸಿದರು. ತಂದೆಯವರು ಹೃದಯ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡು ಈಗಷ್ಟೇ ಮನೆಗೆ ಬಂದಿದ್ದಾರೆ. ಅವರಿಗೆ ಒಂದು ದಿನ ಕಾಲಾವಕಾಶ ಕೊಡಿ ಎಂದು ಮನವಿ ಮಾಡಿಕೊಂಡರು.

ನಿಖಿಲ್ ಅವರ ಮಾತಿನ ನಡುವೆಯೇ ಕುಮಾರಸ್ವಾಮಿ ಅವರೇ ನಮ್ಮ ಅಭ್ಯರ್ಥಿ ಎಂದು ಘೋಷಣೆಗಳನ್ನು ಕೂಗತೊಡಗಿದ ಕಾರ್ಯಕರ್ತರನ್ನು, ಕೊನೆಗೆ ಕುಮಾರಸ್ವಾಮಿ ಅವರೇ ಸಮಾಧಾನಪಡಿಸಬೇಕಾಯಿತು. ಹೆಚ್ಚು ಆಯಾಸ ಮಾಡಿಕೊಳ್ಳಬಾರದು, ಹೆಚ್ಚು ಮಾತನಾಡಲೂಬಾರದು ಎಂದು ವೈದ್ಯರು ನೀಡಿರುವ ಸಲಹೆಯನ್ನು ಮನಸ್ಸಿನಲ್ಲಿ ಇಟ್ಟುಕೊಂಡೇ ಕಾರ್ಯಕರ್ತರನ್ನು ಉದ್ದೇಶಿಸಿ ಹೆಚ್ಚಿಕೆ ಮಾತನಾಡಿದರು.

ಮಂಡ್ಯದಲ್ಲಿ ನಮಗೆ ವಿಶೇಷ ಪ್ರೀತಿ ವಿಶ್ವಾಸ ಸಿಕ್ಕಿದೆ. ಅದು ನನ್ನ ಭಾಗ್ಯ. ನಾನು ಈ ಭೂಮಿಯಲ್ಲಿ ಇರುವವರೆಗೂ ಈ ಪ್ರೀತಿಯನ್ನು ಮರೆಯಲು ಸಾಧ್ಯವಿಲ್ಲ. ನನಗೆ ಈವರೆಗೆ ಮೂರು ಬಾರಿ ಹೃದಯ ಶಸ್ತ್ರಚಿಕಿತ್ಸೆ ಆಗಿದೆ. ನನ್ನ ಆರೋಗ್ಯವನ್ನು ನೋಡಿಕೊಂಡು ಪಕ್ಷದ ಕೆಲಸ, ಜನರ ಸೇವೆ ಮಾಡಬೇಕಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಿ.ಸಿ. ತಮ್ಮಣ್ಣ, ಶಾಸಕ ಹೆಚ್.ಟಿ.ಮಂಜು, ಹಿರಿಯ ಮುಖಂಡ ಬಿ.ಆರ್.ರಾಮಚಂದ್ರ, ಮಾಜಿ ಶಾಸಕ ಡಾ.ಕೆ.ಅನ್ನದಾನಿ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಡಿ.ರಮೇಶ್, ಜಿಲ್ಲಾ ಯುವ ಜನತಾದಳ ಅಧ್ಯಕ್ಷ ಕಂಸಾಗರ ರವಿ, ಸೇರಿದಂತೆ ಸಾವಿರಾರು ಕಾರ್ಯಕರ್ತರು ಮಾಜಿ ಸಿಎಂ ನಿವಾಸದ ಮುಂದೆ ನೆರೆದಿದ್ದರು.

ವೈಭವದ ಚೆಲುವನಾರಾಯಣಸ್ವಾಮಿ ಮಹಾರಥೋತ್ಸವ


ಮೇಲುಕೋಟೆ ಚೆಲುವನಾರಾಯಣಸ್ವಾಮಿಗೆ ವೈರಮುಡಿ ಬ್ರಹ್ಮೋತ್ಸವದ 7ನೇ ದಿನವಾದ ಭಾನುವಾರ ರಾತ್ರಿ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಮಹಾರಥೋತ್ಸವ ನೆರವೇರಿತು

ಮೇಲುಕೋಟೆ,ಮಾ.24–ವೈರಮುಡಿ ಬ್ರಹ್ಮೋತ್ಸವದ ಅಂಗವಾಗಿ ಲಕ್ಷಾಂತರ ಭಕ್ತರ ಸಮ್ಮುಖದಲ್ಲಿ ಚೆಲುವನಾರಾಯಣ ಸ್ವಾಮಿಯವರ ಮಹಾರಥೋತ್ಸವ ಭಾನುವಾರ ವೈಭವದಿಂದ ನೆರವೇರಿತು.

ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಲಕ್ಷಾಂತರ ಭಕ್ತರು ತೇರೊಪ್ಪತ್ತಿನ ಉಪವಾಸ ಮಾಡಿ ರಥ ದರ್ಶನ ಮಾಡಿ ಹರಕೆ ಪೂರೈಸಿದರು. ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಪುತ್ರ ಸಚಿನ್, ದರ್ಶನ್ ಪುಟ್ಟಣ್ಣಯ್ಯ ಸಹೋದರ ರಾಘು ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್ ಸೇರಿದಂತೆ ಹಲವು ಗಣ್ಯರು ರಥೋತ್ಸವದಲ್ಲಿ ಭಾಗಿಯಾಗಿದ್ದರು.

ಮಹಾ ರಥೋತ್ಸವದ ಪ್ರಯುಕ್ತ ಪೂಜಾ ಕೈಂಕರ್ಯವನ್ನು ಮುಂಜಾನೆ 6 ಗಂಟೆಗೆ ಆರಂಭಿಸಲಾಯಿತು. ರಥ ಬಲಿ ಪ್ರದಾನದ ನಂತರ ಅಮ್ಮನವರ ಸನ್ನಿಧಿಯ ಬಳಿ ಬೆಳಿಗ್ಗೆ 8 ಗಂಟೆಯ ವೇಳೆಗೆ ಯಾತ್ರಾದಾನ ನೆರವೇರಿಸಲಾಯಿತು. ನಂತರ 9.15 ರ ವೇಳೆಗೆ ವೇದ ಪಾರಾಯಣ ಹಾಗೂ ಮಂಗಳವಾದ್ಯದೊಂದಿಗೆ ಶ್ರೀದೇವಿ ಭೂದೇವಿ ಕಲ್ಯಾಣನಾಯಕಿಯರೊಂದಿಗೆ ವಜ್ರಖಚಿತ ರಾಜಮುಡಿ ಧರಿಸಿದ ಚೆಲುವನಾರಾಯಣಸ್ವಾಮಿಯ ಉತ್ಸವ ಒಳಪ್ರಾಕಾರ ಮತ್ತು ಹೊರಪ್ರಾಕಾರದಲ್ಲಿ ನಡೆದ ನಂತರ ರಥಮಂಟಪ ತಲುಪಿತು. ರಥಮಂಟಪಕ್ಕೆ ಮೂರು ಪ್ರದಕ್ಷಿಣೆ ಪೂರೈಸಿದ ನಂತರ ಜೋಯಿಸರ ಮಂತ್ರ ಪಠಣದ ತರುವಾಯ ರಥಾರೋಹಣ ನೆರವೇರಿಸಲಾಯಿತು.

ಮಹಾರಥದಲ್ಲಿ ಲೋಕಕಲ್ಯಾಣಾರ್ಥವಾಗಿ ಮಳೆ–ಬೆಳೆ ಉತ್ತಮವಾಗಿ ಆಗಿ ನಾಡಿನಲ್ಲಿ ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. 11–30ರವೇಳೆಗೆ ಮಹಾರಥೋತ್ಸವಕ್ಕೆ ಚಾಲನೆ ನೀಡಲಾಯಿತು. ಚತುರ್ವೀದಿಗಳಲ್ಲಿ ಸಡಗರ ಸಂಭ್ರಮದಿಂದ ಸಂಚರಿಸಿ 3 ಗಂಟೆಗೆ ಮುಕ್ತಾಯವಾಯಿತು.

ಹರಿದು ಬಂದ ಭಕ್ತಸಾಗರ: ಈ ವರ್ಷ ನಡೆದ ಮಹಾರಥೋತ್ಸವಕ್ಕೆ ನಿರೀಕ್ಷೆಗೂ ಮೀರಿ ಭಕ್ತಸಾಗರವೇ ಹರಿದು ಬಂದಿತ್ತು ಉತ್ಸವ ಬೀದಿಗಳು, ಕಲ್ಯಾಣಿ, ದೇವಾಲಯಗಳು ಹಾಗೂ ನರಸಿಂಹಸ್ವಾಮಿ ಬೆಟ್ಟದಲ್ಲಿ ಭಕ್ತರು ಕಿಕ್ಕಿರಿದು ತುಂಬಿದ್ದರು. ವೈರಮುಡಿ ಉತ್ಸವದಷ್ಟೇ ಭಕ್ತರು ಆಗಮಿಸಿ ರಥ ದರ್ಶನ ಮಾಡಿ ಹಣ್ಣು–ಜವನ ಎಸೆದು ಭಕ್ತಿಭಾವ ಪ್ರದರ್ಶಿಸಿದರು. ತೇರೆಳೆಯುವ ಭಕ್ತರ ದಾಹ ತಣಿಸಲು ದಾನಿಗಳು ಮುಂದೆ ನಿಂತು ಅಲ್ಲಲ್ಲಿ ಮಜ್ಜಿಗೆ, ಪಾನಕ, ನೀರು ವಿತರಿಸಿದರು.

ಕಾಂಗ್ರೆಸ್‌ಗೆ ಎಲ್ಲಾ ವರ್ಗದ ಜನರ ಬೆಂಬಲ

ಬೆಂಗಳೂರಲ್ಲಿ ಮಂಡ್ಯ ಜಿಲ್ಲಾ ಮುಖಂಡರ ಸಭೆ ನಡೆಸಿದ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ



ಬೆಂಗಳೂರು,ಮಾ.24–ನಮ್ಮಲ್ಲಿ ಗೊಂದಲ, ಭಿನ್ನಾಭಿಪ್ರಾಯ, ವೈಮನಸ್ಯ ಯಾವುದೂ ಇಲ್ಲ. ಆದರೆ ಮೈತ್ರಿ ಮಾಡಿಕೊಂಡು ಅಭ್ಯರ್ಥಿ ಘೋಷಿಸಲಾಗದೆ ಒದ್ದಾಡುತ್ತಿರುವುದನ್ನು ನೋಡಿದರೆ ಅವರು ಗೊಂದಲದಲ್ಲಿದ್ದಾರೆ ಎಂಬುದು ಸ್ಪಷ್ಟವಾಗುತ್ತಿದೆ. ಆದರೆ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಬಗ್ಗೆ ಎಲ್ಲೂ ಅಪಸ್ವರ ಇಲ್ಲ, ಇದು ಕಾಂಗ್ರೆಸ್‌ನ ಒಗ್ಗಟ್ಟು ತೋರಿಸುತ್ತದೆ ಎಂದು ಸಚಿವ ಚಲುವರಾಯಸ್ವಾಮಿ ಹೇಳಿದರು.

ಮಂಡ್ಯ ಲೋಕಸಭಾ ಕ್ಷೇತ್ರದ 8 ವಿಧಾನ ಸಭಾ ಕ್ಷೇತ್ರಗಳ ಪ್ರಮುಖ ನಾಯಕರು, ಜಿಲ್ಲಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಜಿಲ್ಲಾ ಮಹಿಳಾ ಘಟಕ, ಹಿಂದುಳಿದ ವರ್ಗ, ಎಸ್‌ಸಿ, ಎಸ್‌ಟಿ, ಅಲ್ಪಸಂಖ್ಯಾತ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಮುಂಚೂಣಿ ನಾಯಕರ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ದಿನೇಶ್ ಗೂಳಿಗೌಡರಿಂದ ಆರಂಭವಾದ ಕಾಂಗ್ರೆಸ್ ಗೆಲುವಿನ ಓಟ ಈ ಚುನಾವಣೆಯಲ್ಲಿ ಕೂಡ ಮುಂದುವರೆಯಲಿದೆ. ಈ ಬಾರಿ ಕೂಡ ಗೆಲ್ಲುವ ಅವಕಾಶ ನಮಗಿದೆ ಎಂದು ಭವಿಷ್ಯ ನುಡಿದರು.

ವ್ಹೀಲ್‌ಚೇರ್‌ನಲ್ಲಿ ಬರ್ತಾರೋ, ಕಣ್ಣೀರಾಕಿಕೊಂಡು ಬರ್ತಾರೋ ಗೊತ್ತಿಲ್ಲ. ನಾವು ಭಾವನಾತ್ಮಕ ವಿಚಾರ ಮೆಟ್ಟಿ ನಿಲ್ಲಬೇಕು. ಮಾತುಗಳಿಗೆ ಕಡಿವಾಣ ಹಾಕಬೇಕು, ಆಂತರಿಕ ಭಿನ್ನಮತ ತೊಡೆಯಬೇಕು. ರಾಹುಲ್ ಗಾಂಧಿ ದೇಶ ಉಳಿಸಿ ಎನ್ನುತ್ತಿದ್ದಾರೆ ಹೊರತು ಪ್ರಧಾನಿ ಹಾಗೆ ಅನ್ನುತ್ತಿಲ್ಲ. ಕಾಂಗ್ರೆಸ್ ಪಕ್ಷ ಅಭಿವೃದ್ಧಿ ಆಧಾರದ ಮೇಲೆ ಚುನಾವಣೆ ಮಾಡುತ್ತದೆಯೇ ಹೊರತು ಧರ್ಮ, ಜಾತಿ ಆಧಾರದ ಮೇಲೆ ಚುನಾವಣೆ ಮಾಡುವುದಿಲ್ಲ ಮಂಡ್ಯದಲ್ಲಿ ಭಾವನಾತ್ಮಕ ವಿಚಾರವೇ ಚುನಾವಣಾ ಚರ್ಚಾ ವಿಷಯವಾಗಿದೆ. – ಚಲುವರಾಯಸ್ವಾಮಿ

ಶೇ. 75 ರಷ್ಟು ಮಹಿಳೆಯರು ಕಾಂಗ್ರೆಸ್ ಪರ ಇದ್ದಾರೆ. ಎಲ್ಲಾ ವರ್ಗದ ಜನತೆ ಕಾಂಗ್ರೆಸ್ ಅನ್ನು ಬೆಂಬಲಿಸುತ್ತಿರುವುದಲ್ಲದೆ, ಶೇ 40ರಷ್ಟು ಒಕ್ಕಲಿಗರು ಕಾಂಗ್ರೆಸ್ ಪರವಾಗಿ ನಿಂತಿದ್ದಾರೆ ಎಂಬುದು ಸರ್ವೆ ವರದಿಯಿಂದ ಗೊತ್ತಾಗಿದೆ ಸುಳ್ಳು ಹೇಳುವ ನರೇಂದ್ರ ಮೋದಿ ಅವರ ಪಕ್ಷಕ್ಕೆ ಜೆಡಿಎಸ್ ಶರಣಾಗತಿಯಾಗಿದೆ. ಇದರಿಂದ ಒಕ್ಕಲಿಗ ಮತಗಳು ಕಾಂಗ್ರೆಸ್ ಕಡೆಗೆ ವಾಲಿವೆ. ಯಾರನ್ನೂ ಟೀಕೆ ಮಾಡಬಾರದು, ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಗೆಲುವು ನಮ್ಮದೆ. ಇನ್ನು 30 ದಿನ 'ನಮ್ಮ ಜಿಲ್ಲೆ, ನಮ್ಮ ಹೆಮ್ಮೆ' ಎಂಬ ಘೋಷವಾಕ್ಯದೊಂದಿಗೆ ಕಾರ್ಯಕರ್ತರು ಕೆಲಸ ಮಾಡಬೇಕು. ನಾಮಪತ್ರ ಸಲ್ಲಿಕೆ ದಿನವೇ ಕಾಂಗ್ರೆಸ್ ಅಭ್ಯರ್ಥಿ ಗೆಲುವಿನ ಲಕ್ಷಣಗಳು ಕಾಣಬೇಕು. ಆ ರೀತಿಯಲ್ಲಿ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಕರೆ ಕೊಟ್ಟರು.

ಶಾಸಕ ನರೇಂದ್ರಸ್ವಾಮಿ ಮಾತನಾಡಿ, ಹಿಂದಿನ ಅಂಕಿಅಂಶಗಳು ನೋಡಿದರೆ ಮಂಡ್ಯದಲ್ಲಿ ಕಾಂಗ್ರೆಸ್‌ಗೆ ಮೂಲ ಮತಗಳಿವೆ ಎಂಬುದನ್ನು ಮನಗಾಣಬೇಕು. ಕಾರ್ಯಕರ್ತರು ಸ್ವಲ್ಪ ಶ್ರಮಿಸಿದರೆ ಕಾಂಗ್ರೆಸ್ ಅಭ್ಯರ್ಥಿ ಗೆಲುವು ನಿಶ್ಚಿತ. ನಾವು ಗೆಲುವು ಸೋಲಿನ ಅವಲೋಕನ ಮಾಡಬೇಕು. ಜೆಡಿಎಸ್ ಈಗ ರಾಷ್ಟ್ರೀಯ ಪಕ್ಷದ ಮೊರೆ ಹೋಗಿದ್ದು, ಅಂಕಿಸಂಖ್ಯೆ ಜೊತೆ ಜಾತಿ ಆಧಾರಿತ ಚುನಾವಣೆ ಮಾಡಲು ಹೊರಟಿದೆ ಹೀಗಾಗಿ ನಾವು ಐದು ವರ್ಷದ ಹಿಂದಿನ ಲೋಕಸಭಾ ಚುನಾವಣೆ ಫಲಿತಾಂಶ ಅವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಮಾತನಾಡಿ, ನಾನಲ್ಲ, ನೀವೇ ಅಭ್ಯರ್ಥಿ. ಕಾರ್ಯಕರ್ತರ ಪರಿಶ್ರಮದಿಂದ ಗೆಲುವು ಸಾಧ್ಯ. ನಾನು ಸದಾ ನಿಮ್ಮ ಜೊತೆ ಇರುತ್ತೇನೆ ಮಾತು ಕಡಿಮೆ ಕೆಲಸ ಮಾಡಿ ತೋರಿಸುತ್ತೇನೆ ಎಂದು ಹೇಳಿದರು.

ಶಾಸಕ ಕದಲೂರು ಉದಯ್, ಮಂಡ್ಯ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್ ಮಾತನಾಡಿದರು. ಸಭೆಯಲ್ಲಿ ಶಾಸಕರಾದ ರಮೇಶ್ ಬಾಬು ಬಂಡಿಸಿದ್ದೇಗೌಡ, ಗಣಿಗ ರವಿಕುಮಾರ್, ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ಮಧು ಜಿ.ಮಾದೇಗೌಡ ಇತರರು ಉಪಸ್ಥಿತರಿದ್ದರು.



ಕೆ.ಎಲ್.ರಾಹುಲ್, ಪೂರನ್ ಹೋರಾಟ ವ್ಯರ್ಥ: ರಾಜಸ್ಥಾನ್‌ಗೆ ಜಯ



ಜೈಪುರ, ಮಾ.24– ನಾಯಕ ಸಂಜು ಸ್ಯಾಮ್ಸನ್ ಅವರ ಅಮೋಘ ಅರ್ಧಶತಕದ ನೆರವಿನಿಂದ ರಾಜಸ್ಥಾನ್ ರಾಯಲ್ಸ್, ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 20 ರನ್‌ಗಳ ಅಮೋಘ ಜಯ ಸಾಧಿಸಿದೆ.

ಇಲ್ಲಿನ ಸವಾಯಿ ಮಾನ್‌ಸಿಂಗ್ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 193 ರನ್ ಗಳಿಸಿತ್ತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಜೋಸ್ ಬಟ್ಲರ್ 11 ರನ್ ಗಳಿಸಿ ಬಹುಬೇಗ ವಿಕೆಟ್ ಒಪ್ಪಿಸಿದರು. ಇವರ ಹಿಂದೆಯೇ ಮತ್ತೋರ್ವ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ 24 ರನ್ ಗಳಿಸಿ ನಿರ್ಗಮಿಸಿದರು.

5 ಓವರ್‌ಗಳಲ್ಲಿ 49 ರನ್‌ಗಳಿಗೆ 2 ವಿಕೆಟ್ ಕಳೆದುಕೊಂಡು ಸಂಕಷ್ಟದಲ್ಲಿದ್ದ ರಾಜಸ್ಥಾನ ರಾಯಲ್ಸ್ ತಂಡಕ್ಕೆ ನಾಯಕ ಸಂಜು ಸ್ಯಾಮ್ಸನ್ ಹಾಗೂ ರಿಯಾನ್ ಪರಾಗ್ ನೆರವಾದರು. ಈ ಜೋಡಿ 59 ಎಸೆತಗಳಲ್ಲಿ 93 ರನ್‌ಗಳ ಜತೆಯಾಟ ನೀಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರು. ಸ್ಫೋಟಕ ಬ್ಯಾಟಿಂಗ್ ಮಾಡಿದ ರಿಯಾನ್ ಪರಾಗ್ 29 ಎಸೆತಗಳಲ್ಲಿ 43 ರನ್ ಬಾರಿಸಿ ವಿಕೆಟ್ ಒಪ್ಪಿಸಿದರು.

ಕೊನೆಯವರೆಗೂ ಹೋರಾಡಿದ ಸಂಜು ಸ್ಯಾಮ್ಸನ್ ಆಕರ್ಷಕ ಅರ್ಧಶತಕ ಸಿಡಿಸಿ ಮಿಂಚಿದರು. ಸಂಜು ಸ್ಯಾಮ್ಸನ್ ಕೇವಲ 33 ಎಸೆತಗಳನ್ನು ಎದುರಿಸಿ 21ನೇ ಐಪಿಎಲ್ ಶತಕ ಸಿಡಿಸಿದರು. ಅಂತಿಮವಾಗಿ ಸಂಜು ಸ್ಯಾಮ್ಸನ್ 52 ಎಸೆತಗಳಲ್ಲಿ 3 ಬೌಂಡರಿ, 6 ಸಿಕ್ಸರ್ ಒಳಗೊಂಡ ಅಜೇಯ 82 ರನ್ ಸಿಡಿಸಿದರು. ಕೊನೆಯಲ್ಲಿ ಧ್ರುವ್ ಜುರೆಲ್ 12 ಎಸೆತಗಳಲ್ಲಿ ತಲಾ 1 ಸಿಕ್ಸರ್, ಬೌಂಡರಿ ಸಹಿತ 20 ರನ್ ಬಾರಿಸಿದರು. ಲಖನೌ ಪರ ನವೀನ್ ಉಲ್ ಹಕ್ 2, ರವಿ ಬಿಷ್ಣೋಯಿ ಹಾಗೂ ಮೊಯಿನ್ ಖಾನ್ ತಲಾ ಒಂದೊಂದು ವಿಕೆಟ್ ಪಡೆದರು.

194 ರನ್‌ಗಳ ಗುರಿ ಬೆನ್ನತ್ತಿದ ಲಕ್ನೋ ಸೂಪರ್ ಜೈಂಟ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 173 ರನ್ ಗಳಿಸಿ ಸೋಲು ಅನುಭವಿಸಿತು. ಬೃಹತ್ ಚೇಸಿಂಗ್ ಆರಂಭಿಸಿದ ಲಕ್ನೋ ಮೊದಲ 3 ಓವರ್‌ಗಳಲ್ಲೇ 11 ರನ್‌ಗಳಿಗೆ 3 ವಿಕೆಟ್ ಕಳೆದುಕೊಂಡು ಆರಂಭಿಕ ಆಘಾತ ಅನುಭವಿಸಿತು. ಇದರಿಂದ ತಂಡ ಅಲ್ಪ ಮೊತ್ತಕ್ಕೆ ಆಲೌಟ್ ಆಗಲಿದೆ ಎಂದು ನಿರೀಕ್ಷಿಸಲಾಗಿತ್ತು. ಆದರೆ ದೀಪಕ್ ಹೂಡಾ ಮತ್ತು ಕೆ.ಎಲ್. ರಾಹುಲ್ 49 ರನ್‌ಗಳ ಜೊತೆಯಾಟ ತಂಡಕ್ಕೆ ಚೇತರಿಕೆ ನೀಡಿತ್ತು. ಆದರೆ ಹೂಡಾ 26 ರನ್ ಗಳಿಸಿ ವಿಕೆಟ್ ಒಪ್ಪಿಸಿದರು.

ಬಳಿಕ 5ನೇ ವಿಕೆಟ್‌ಗೆ ಕ್ರೀಸ್‌ನಲ್ಲಿ ಭದ್ರವಾಗಿ ನೆಲೆಯೂರಿದ ಕೆ.ಎಲ್. ರಾಹುಲ್ ಹಾಗೂ ನಿಕೋಲಸ್ ಪೂರನ್ ಜೋಡಿ 52 ಎಸೆತಗಳಲ್ಲಿ 85 ರನ್‌ಗಳ ಜೊತೆಯಾಟ ನೀಡಿತ್ತು. ಇದರಿಂದ ತಂಡ ಗೆಲುವಿನ ಸನಿಹ ತಲುಪಿತ್ತು. ಕೊನೇ ಕ್ಷಣದಲ್ಲಿ ನಿಧಾನಗತಿಯ ಬ್ಯಾಟಿಂಗ್ ತಂಡದ ದಿಕ್ಕನ್ನೇ ಬದಲಿಸಿತು.

ಲಕ್ನೋ ಪರ ನಿಕೋಲಸ್ ಪೂರನ್ 64, ಕೆ.ಎಲ್.ರಾಹುಲ್ 58, ಕ್ವಿಂಟನ್ ಡಿ ಕಾಕ್ 4, ಆಯುಷ್ ಬದೋನಿ 1, ಮಾರ್ಕಸ್ ಸ್ಟೋಯ್ನಿಸ್ 3 ರನ್ ಗಳಿಸಿದರೆ, ಕೃನಾಲ್ ಪಾಂಡ್ಯ 3 ರನ್ ಗಳಿಸಿ ಕ್ರೀಸ್‌ನಲ್ಲಿ ಉಳಿದರು. ದೇವದತ್ ಪಡಿಕಲ್ ಶೂನ್ಯ ಸುತ್ತಿದರು. ರಾಜಸ್ಥಾನ್ ಪರ ಬೌಲಿಂಗ್‌ನಲ್ಲಿ ಟ್ರೆಂಟ್ ಬೌಲ್ಟ್ 2, ನಂದ್ರೆ ಬರ್ಗರ್, ರವಿಚಂದ್ರನ್ ಅಶ್ವಿನ್, ಯಜುವೇಂದ್ರ ಚಹಲ್ ಹಾಗೂ ಸಂದೀಪ್ ಶರ್ಮಾ ತಲಾ ಒಂದೊಂದು ವಿಕೆಟ್ ಕಬಳಿಸಿದರು. ಸಂಜು ಸ್ಯಾಮ್ಸನ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.



[ಮಾ. 25]

ರಾಯಲ್ ಚಾಲೆಂಜರ್ಸ್ ಬೆಂಗಳೂರು V/S ಪಂಜಾಬ್ ಕಿಂಗ್ಸ್

ಸ್ಥಳ: ಬೆಂಗಳೂರು, ಎಂ.ಚಿನ್ನಸ್ವಾಮಿ ಕ್ರೀಡಾಂಗಣ

ಸಮಯ: ಸಂಜೆ 7.30



ಕೊನೆ ಕ್ಷಣದಲ್ಲಿ ರೋಚಕ ಜಯ ಸಾಧಿಸಿದ ಗುಜರಾತ್



ಅಹಮದಾಬಾದ್, ಮಾ.24– ತಂಡದ ಸಾಂಘಿಕ ಪ್ರದರ್ಶದ ನೆರವಿನಿಂದ ಗುಜರಾತ್ ಟೈಟಾನ್ಸ್ ಮುಂಬೈ ಇಂಡಿಯನ್ಸ್ ವಿರುದ್ಧ 6 ರನ್‌ಗಳ ರೋಚಕ ಜಯ ಸಾಧಿಸಿದೆ.

ಇಲ್ಲಿನ ಮೊಟೇರಾದ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಭಾನುವಾರ ಸಂಜೆ ನಡೆದ ಪಂದ್ಯದಲ್ಲಿ ಗುಜರಾತ್ ಕೊನೆ ಕ್ಷಣದಲ್ಲಿ ರೋಚಕ ಜಯ ಸಾಧಿಸಿತು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 168 ರನ್ ಗಳಿಸಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ವೃದ್ಧಿಮಾನ್ ಸಾಹ 4 ಬೌಂಡರಿ ಒಳಗೊಂಡ 19 ರನ್ ಪೇರಿಸಿ ನಿರ್ಗಮಿಸಿದರು. ನಂತರ ಜೊತೆಯಾದ ಗಿಲ್ ಹಾಗೂ ಸಾಯಿ ಸುದರ್ಶನ್ 33ರನ್ ಜೊತೆಯಾಟವಾಡಿ ತಂಡಕ್ಕೆ ಚೇತರಿಕೆ ನೀಡಿದರು. ಆದರೆ 3 ಬೌಂಡರಿ, 1 ಸಿಕ್ಸರ್ ಒಳಗೊಂಡ 31 ರನ್ ಗಳಿಸಿ ಗಿಲ್ ನಿರ್ಗಮಿಸಿದರು. ಇನ್ನು ಸಮಯೋಚಿತ ಬ್ಯಾಟಿಂಗ್ ಮಾಡಿದ ಸಾಯಿ ಸುದರ್ಶನ್ 45 ರನ್ ಗಳಿಸಿ ತಂಡದ ಗೌರವಾನ್ವಿತ ಮೊತ್ತಕ್ಕೆ ಕಾರಣರಾದರು. ನಂತರ ಬಂದ ಅಜ್ಮತುಲ್ಲಾ ಒಮರ್ಜಾಯ್ 17, ಡೇವಿಡ್ ವಾರ್ನರ್ 12, ವಿಜಯ್ ಶಂಕರ್ 6, ರಾಹುಲ್ ತೆವಾಟಿಯಾ 22 ರನ್ ಗಳಿಸಿದರಾದರೂ ದೊಡ್ಡ ಮೊತ್ತ ಗಳಿಸಲು ಸಾಧ್ಯವಾಗಲಿಲ್ಲ. ಮುಂಬೈ ಪರ ಅಮೋಘ ಬೌಲಿಂಗ್ ಪ್ರದರ್ಶನ ನೀಡಿದ ಬೂಮ್ರಾ 14 ರನ್ ನೀಡಿ 3 ವಿಕೆಟ್ ಪಡೆದರು. ಉಳಿದಂತೆ ಜೆರಾಲ್ಡ್ ಕೊಯೆಟ್ಜಿ 2, ಪಿಯುಷ್ ಚಾವ್ಲಾ 1 ವಿಕೆಟ್ ಪಡೆದರು.

169 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ 20 ಓವರ್‌ಗಳಲ್ಲಿ 9 ವಿಕೆಟ್ 162 ರನ್ ಗಳಿಸಿ ಸೋಲು ಅನುಭವಿಸಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ಇಶಾನ್ ಕಿಶನ್ ಶೂನ್ಯಕ್ಕೆ ಔಟಾಗುವ ಮೂಲಕ ನಿರಾಸೆ ಮೂಡಿಸಿದರು. ನಂತರ ಬಂದ ನಮನ್ ಧೀರ್ 20 ರನ್ ಗಳಿಸಿ ನಿರ್ಗಮಿಸಿದರು. ಈ ವೇಳೆ ಜೊತೆಯಾದ ರೋಹಿತ್ ಶರ್ಮಾ ಹಾಗೂ ಡೆವಾಲ್ಡ್ ಬ್ರೆವಿಸ್ 77 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಆಸರೆಯಾದರು. ಆದರೆ 43 ರನ್ ಗಳಿಸಿ ರೋಹಿತ ವಿಕೆಟ್ ಒಪ್ಪಿಸಿದರೇ, ಬ್ರೆವಿಸ್ 46 ರನ್ ಗಳಿಸಿ ಔಟಾಗುವ ಮೂಲಕ 4 ರನ್‌ಗಳಿಂದ ಅರ್ಧಶತಕದಿಂದ ವಂಚಿತರಾದರು. ಬಳಿಕ ಬಂದ ಬ್ಯಾಟ್ಸ್‌ಮನ್‌ಗಳನ್ನು ಕೊನೆ ಓವರ್‌ಗಳಲ್ಲಿ ನಿಯಂತ್ರಿಸಿದ ಪರಿಣಾಮ ಕೊನೆ ಕ್ಷಣದಲ್ಲಿ ಗುಜರಾತ್ 6 ರನ್‌ಗಳ ಜಯ ಸಾಧಿಸಿತು. ಉಳಿದಂತೆ ಮುಂಬೈ ಪರ ತಿಲಕ್ ವರ್ಮಾ 25, ಟೀಮ್ ಡೇವಿಡ್ ಹಾಗೂ ಹಾರ್ದಿಕ್ ಪಾಂಡ್ಯ ತಲಾ 11 ರನ್ ಗಳಿಸಿದರು. ಗುಜರಾತ್ ಪರ ಅಜ್ಮತುಲ್ಲಾ ಒಮರ್ಜಾಯ್, ಉಮೇಶ್ ಯಾದವ್, ಸ್ಪೆನ್ಸರ್ ಜಾನ್ಸನ್ ಹಾಗೂ ಮೋಹಿತ್ ಶರ್ಮಾ ತಲಾ 2, ರವಿಶ್ರೀನಿವಾಸನ್ ಸಾಯಿ ಕಿಶೋರ್ 1 ವಿಕೆಟ್ ಉರುಳಿಸಿದರು. ಸಾಯಿ ಸುದರ್ಶನ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

'ಮರಿಯಪ್ಪನ ಕೆರೆ' ಸಂರಕ್ಷಣೆಗೆ ಆಗ್ರಹಿಸಿ ಪ್ರತಿಭಟನೆ


ಮೈಸೂರಿನ ಬೋಗಾಧಿಯಲ್ಲಿರುವ 'ಮರಿಯಪ್ಪನ ಕೆರೆ' ಸಂರಕ್ಷಣೆಗೆ ಆಗ್ರಹಿಸಿ ಪರಿಸರ ಉಳಿಸಿ ಸಮಿತಿ ಸದಸ್ಯರು ಮರಿಯಪ್ಪನ ಕೆರೆ ಮುಂಭಾಗ ಪ್ರತಿಭಟನೆ ನಡೆಸಿದರು.

ಮೈಸೂರು, ಮಾ.24(ಎಸ್‌ಪಿಎನ್)– ಮೈಸೂರಿನ ಬೋಗಾಧಿಯಲ್ಲಿರುವ 'ಮರಿಯಪ್ಪನ ಕೆರೆ' ಸಂರಕ್ಷಣೆ ಮಾಡುವಲ್ಲಿ ಜಿಲ್ಲಾ ಕೆರೆ ಸಂರಕ್ಷಣಾ ಪ್ರಾಧಿಕಾರ ವಿಫಲವಾಗಿದೆ ಎಂದು ಆರೋಪಿಸಿ ಪರಿಸರ ಉಳಿಸಿ ಸಮಿತಿ ಸದಸ್ಯರು ಮರಿಯಪ್ಪನ ಕೆರೆ ಮುಂಭಾಗ ಭಾನುವಾರ ಪ್ರತಿಭಟನೆ ನಡೆಸಿದರು.

ಮರಿಯಪ್ಪನ ಕೆರೆಗೆ ಹೊಂದಿಕೊಂಡಿರುವ ಜಾಗದಲ್ಲಿ ಅಕ್ಕ–ಪಕ್ಕದ ಬಡಾವಣೆಯವರು ಪ್ಲಾಸ್ಟಿಕ್ ಸೇರಿದಂತೆ ಇತರೆ ತ್ಯಾಜ್ಯಗಳನ್ನು ತಂದು ಸುರಿಯುತ್ತಿದ್ದಾರೆ. ಇದರಿಂದ ಮುಂದಿನ ದಿನಗಳಲ್ಲಿ 22.12 ಎಕರೆ ವಿಸ್ತೀರ್ಣದಲ್ಲಿರುವ ಈ ಕೆರೆ ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಹಾಗಾಗಿ ಜಿಲ್ಲಾ ಕೆರೆ ಸಂರಕ್ಷಣಾ ಪ್ರಾಧಿಕಾರ ಕೂಡಲೇ ಎಚ್ಚೆತ್ತು ಈ ಕೆರೆಯಲ್ಲಿರುವ ಹೂಳು, ತ್ಯಾಜ್ಯ ಎತ್ತಿ, ಕೆರೆ ಅಭಿವೃದ್ಧಿಪಡಿಸುವಂತೆ ಮನವಿ ಮಾಡಿದರು.

ಈ ಕೆರೆ ಸುತ್ತಮುತ್ತ ಮುಡಾ ವತಿಯಿಂದ ಸಿಎ ನಿವೇಶನಗಳನ್ನು ಖಾಸಗಿ ಸಂಘ–ಸಂಸ್ಥೆಗಳಿಗೆ ನೀಡಿರುವುದರಿಂದ ಇದರಲ್ಲಿ ಕೆಲವರು ಒತ್ತುವರಿ ಮಾಡಿಕೊಂಡಿರುವ ಸಂಭವವಿದೆ. ಹಾಗಾಗಿ ಕೆರೆಯನ್ನು ಮತ್ತೊಮ್ಮೆ ಸರ್ವೆ ಮಾಡಿಸಿ, ಒತ್ತುವರಿ ತೆರವುಗೊಳಿಸಬೇಕು ಹಾಗೂ ಬೇಲಿ ಹಾಕಿ ಸಂರಕ್ಷಣೆ ಮಾಡಬೇಕು. ಕೆರೆಗೆ ಸುರಿಯುತ್ತಿರುವ ತ್ಯಾಜ್ಯಕ್ಕೆ ಕಡಿವಾಣ ಹಾಕಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಅಲ್ಲದೆ ಧಾರಾಕಾರ ಮಳೆಯಾದಾಗ ಮರಿಯಪ್ಪನ ಕೆರೆ ತುಂಬಿ ಭಾರೀ ಪ್ರಮಾಣದಲ್ಲಿ ಮುಂದು ಸಾಗಲು ಸಾಧ್ಯವಾಗದೇ ಅಕ್ಕ–ಪಕ್ಕದ ಬಡಾವಣೆಗಳಿಗೆ ನುಗ್ಗುತ್ತಿದೆ. ಇಲ್ಲಿನ ರಾಜಕಾಲುವೆ ಲಿಂಗಾಂಬುದಿ ಕೆರೆಯವರೆಗೆ ಅಲ್ಲಲ್ಲಿ ಒತ್ತುವರಿಯಾಗಿದ್ದು, ಇದನ್ನು ತೆರವುಗೊಳಿಸುವಂತೆ ಮನವಿ ಮಾಡಿದರು.

ಈ ವೇಳೆ ಪರಿಸರ ಉಳಿಸಿ ಸಮಿತಿ ಸಂಚಾಲಕರಾದ ಕುಶಾಲ್, ಕಿರಣ್, ರಾಕೇಶ್, ಸದಸ್ಯರಾದ ಅರ್ಚನ, ಸೈಯದ್ ಇಸಾಕ್, ಸತೀಶ್, ಕುಮಾರ್, ರಮೇಶ್, ರವೀಂದ್ರನಾಥ್, ಪ್ರಣವಾನಂದ, ಸಂಗೀತಾ, ಶಾಶ್ವತ, ಉದಯ್, ಪವನ್‌ಕುಮಾರ್, ಶರತ್, ಡಾ.ಮೋಹನ್ ಕುಮಾರ್, ವಿಜಯ್, ಕ್ರೆಡಿಟ್ ಐನ ಡಾ.ಎಂ.ಪಿ.ವರ್ಷ, ಶಿವಣ್ಣ, ಬಿ.ಭುವನ, ಡಾ.ಬಸವರಾಜ ಹಟ್ಟಿ, ಕುಮಾರಸ್ವಾಮಿ, ಸ್ಮಿತಾ, ಸುಚಿತ್ರ, ವಾಗೀಶ್ ಹೆಗಡೆ, ಸುಮಾ, ಪಿ.ಮನೋಹರ್ ಸೇರಿದಂತೆ ಅನೇಕರಿದ್ದರು.

ವಿದೇಶಗಳಲ್ಲಿ ಹೆಚ್ಚಿದ ಮೋದಿ ಪರಿವಾರ; ಬ್ರಿಟನ್ ಬಳಿಕ ಆಸ್ಟ್ರೇಲಿಯಾದಲ್ಲಿ ಅಭಿಯಾನ

ನವದೆಹಲಿ, ಮಾ.24– ಭಾರತದಲ್ಲಿ ಸಾರ್ವತ್ರಿಕ ಚುನಾವಣೆಗೆ ವಿವಿಧ ಪಕ್ಷಗಳು ಭರ್ಜರಿ ಪ್ರಚಾರ ನಡೆಸುತ್ತಿವೆ. ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಸತತ ಮೂರನೇ ಬಾರಿ ಅಧಿಕಾರಕ್ಕೆ ಬರಲು ಪಣತೊಟ್ಟಿದೆ. 'ಆಪ್ ಕೀ ಬಾರ್ 400 ಕೀ ಬಹಾರ್' ಎಂಬ ಸ್ಲೋಗನ್ ದಟ್ಟವಾಗುತ್ತಿದೆ. ಬಿಜೆಪಿ, ಅದರಲ್ಲೂ ಮೋದಿಗೆ ವಿದೇಶಗಳಲ್ಲಿರುವ ಭಾರತೀಯ ಸಮುದಾಯಗಳ ಜನರು ಸತತವಾಗಿ ಬೆಂಬಲ ಕೊಡುತ್ತಾ ಬಂದಿದ್ದಾರೆ. ಅಂತೆಯೇ ಈ ಬಾರಿ ವಿದೇಶಗಳಲ್ಲೂ ಮೋದಿ ಪರ ಕಲರವ ಕೇಳಿಬರತೊಡಗಿದೆ.



ಆಸ್ಟ್ರೇಲಿಯಾದ 'ಓವರ್‌ಸೀಸ್ ಫ್ರೆಂಡ್ಸ್ ಆಫ್ ಬಿಜೆಪಿ' ಸಂಘಟನೆಯು 'ಮೋದಿ ಫಾರ್ 2024' ಎನ್ನುವ ಅಭಿಯಾನ ನಡೆಸುತ್ತಿದೆ. ಏಳು ಪ್ರಮುಖ ನಗರಗಳಲ್ಲಿ ಈ ಆಂದೋಲನ ನಡೆಯಲಿದೆ. ಪಿಎಂ ಮೋದಿ ನೇತೃತ್ವದ ಬಿಜೆಪಿ ಮತ್ತು ಎನ್‌ಡಿಎ ಮೈತ್ರಿಕೂಟಕ್ಕೆ ವಿದೇಶಗಳಲ್ಲಿ ಬೆಂಬಲ ತೋರಿಸಲು ಈ ಪ್ರಚಾರ ನಡೆಯುತ್ತಿದೆ. ಸಿಡ್ನಿ ಹಾರ್ಬರ್ ಬ್ರಿಡ್ಜ್, ಮೆಲ್ಬೋರ್ನ್ ಕ್ರಿಕೆಟ್ ಮೈದಾನ, ಪರ್ತ್ ಆಪ್ಟಸ್ ಸ್ಟೇಡಿಯಂ, ಬ್ರಿಸ್ಬೇನ್ ಗಾಬ್ಬಾ ಸ್ಟೇಡಿಯಂ, ಗೋಲ್ಡ್ ಕೋಸ್ಟ್‌ನ ಸರ್ಫರ್ಸ್ ಪ್ಯಾರಡೈಸ್, ಕ್ಯಾನಬೆರಾದ ಮೌಂಟ್ ಏನ್‌ಸ್ಲೀ, ಅಡಿಲೇಡ್‌ನ ನೇವಲ್ ಮೆಮೋರಿಯಲ್ ಗಾರ್ಡನ್‌ನಲ್ಲಿ ದೊಡ್ಡ ಪ್ರಚಾರ ಕಾರ್ಯಕ್ರಮ ಆರಂಭಿಸಲಾಗಿದೆ.

ಕೊಡಗಿನ ವಿವಿಧೆಡೆ ಬಿಜೆಪಿ ಕಾರ್ಯಕರ್ತರ ಸಭೆ

● ರಾಮರಾಜ್ಯದ ಕನಸು ನನಸು ● ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿಕೆ



ತಿತಿಮತಿ ವಿಎಸ್ಎಸ್ಎನ್ ಸಭಾಂಗಣದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಯದುವೀರ್ ಮಾತನಾಡಿದರು.

ಮಡಿಕೇರಿ, ಮಾ.24–ರಾಮರಾಜ್ಯದ ಕನಸು ನನಸಾಗುತ್ತಿದ್ದು, ದೇಶವನ್ನು ಮತ್ತಷ್ಟು ಅಭಿವೃದ್ಧಿ ಪಥದತ್ತ ಕೊಂಡೊಯ್ಯಲು ಪ್ರಧಾನಿ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಗೆಲ್ಲಿಸಬೇಕಾದ ಅನಿವಾರ್ಯತೆ ಇದೆ ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.

ತಿತಿಮತಿ ವಿಎಸ್ಎಸ್ಎನ್ ಸಭಾಂಗಣದಲ್ಲಿ ನಡೆದ ತಿತಿಮತಿ, ಬಾಳೆಲೆ, ಪೊನ್ನಪ್ಪಸಂತೆ, ಮಾಯಮುಡಿ, ದೇವರಪುರ ವ್ಯಾಪ್ತಿಯ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕಾವೇರಿ ತವರು ಕೊಡಗು ಮತ್ತು ಮೈಸೂರಿಗೂ ಅವಿನಾಭಾವ ಸಂಬಂಧವಿದೆ. ಈ ಭಾಗದ ಜನರ ಸೇವೆ ಮಾಡುವ ಆಕಾಂಕ್ಷೆಯೊಂದಿಗೆ ನಾನು ಚುನಾವಣೆ ಕಣಕ್ಕೆ ಇಳಿದಿದ್ದೇನೆ. ಪಕ್ಷದ ಆತ್ಮ ಬಲವಾಗಿರುವ ಕಾರ್ಯಕರ್ತರು ದೇಶ ಮುನ್ನಡೆಸುವ ಮತ್ತು ಅಭಿವೃದ್ಧಿಪಡಿಸುವ ಕರ್ತವ್ಯಕ್ಕಾಗಿ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಈಗಾಗಲೇ ದೇಶ ಅಭಿವೃದ್ಧಿಯತ್ತ ಸಾಗುತ್ತಿದ್ದು, ಪ್ರಪಂಚವೇ ನಿಬ್ಬೆರಗಾಗಿ ನೋಡುವ ವಾತಾವರಣ ಸೃಷ್ಟಿಯಾಗಿದೆ. ಹಿಂದೆ ಅರಸು ಮನೆತನದವರು ಮೈಸೂರು ರಾಜ್ಯವನ್ನು ವಿವಿಧ ಕ್ಷೇತ್ರಗಳಲ್ಲಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿದ್ದರು. ಸ್ವದೇಶಿ ಉತ್ಪನ್ನಗಳಿಗೆ ಸಾಕಷ್ಟು ಒತ್ತು ನೀಡಿ, ಮೈಸೂರು ಬ್ರಾಂಡ್‌ನಲ್ಲಿ ಪ್ರಚಾರ ಮತ್ತು ಮಾರಾಟ ಮಾಡಲಾಗುತ್ತಿತ್ತು. ಅದೇ ಮಾದರಿಯಲ್ಲಿ ಇಂದು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಸ್ವದೇಶಿ ಉತ್ಪನ್ನಗಳ ಬಳಕೆಗೆ ಆದ್ಯತೆ ನೀಡುತ್ತಿದೆ. ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವಲ್ಲಿ ಪಣತೊಟ್ಟಿದೆ ಎಂದು ತಿಳಿಸಿದರು.

ಮಾಜಿ ಶಾಸಕ ಕೆ.ಜಿ.ಬೋಪಯ್ಯ ಮಾತನಾಡಿ, ಲೋಕಸಭೆ ಚುನಾವಣೆಯ ಯುದ್ಧಕ್ಕೆ ದೇಶವೇ ಸಜ್ಜಾಗಿದೆ. ದೇಶದ ಮತ್ತಷ್ಟು ಸುಧಾರಣೆಗಾಗಿ ಮೋದಿ ಸರ್ಕಾರದ ಗೆಲುವಿಗೆ ಕಾರ್ಯಕರ್ತರು ಪರಿಶ್ರಮಪಡಬೇಕಾಗಿದೆ. ದೇಶದಲ್ಲಿ ಜನರು ಶಾಂತಿಯುತವಾದ ಬದುಕು ನಡೆಸಬೇಕೆಂದರೆ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಅಗತ್ಯವಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 8 ತಿಂಗಳ ಅವಧಿಯಲ್ಲೇ ವಿಧಾನಸೌಧದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗುವ ಮೂಲಕ ಆತಂಕ ಸೃಷ್ಟಿಸಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಿಧಾನಪರಿಷತ್ ಸದಸ್ಯ ಮಂಡೇಪಂಡ ಸುಜಾ ಕುಶಾಲಪ್ಪ ಮಾತನಾಡಿ, ದೇಶದ ಭದ್ರತೆ ಮತ್ತು ಉಳಿವಿಗಾಗಿ ಮೋದಿ ಸರ್ಕಾರವನ್ನು ಮತ್ತೊಮ್ಮೆ ಬೆಂಬಲಿಸುವ ಅಗತ್ಯವಿದೆ ಎಂದರು.

ಸಭೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಜಿಲ್ಲಾ ಉಪಾಧ್ಯಕ್ಷ ಕಿಲನ್ ಗಣಪತಿ, ರಾಜ್ಯ ಶಿಸ್ತು ಸಮಿತಿ ಸದಸ್ಯೆ ಪಟ್ಟಡ ರೀನಾ ಪ್ರಕಾಶ್, ಮಾಪಂಗಡ ಯಮುನಾ ಚಂಗಪ್ಪ ಚುನಾವಣಾ ಉಸ್ತುವಾರಿಗಳಾದ ಡಾ.ವಿಕಾಸ್, ಡಾ.ವಸಂತ್ ಕುಮಾರ್, ಪಕ್ಷದ ಮುಖಂಡ ಅಡ್ಡಂಡ ಕಾರ್ಯಪ್ಪ, ಕುಂಞಂಗಡ ಅರುಣ್ ಭೀಮಯ್ಯ, ತಾಲೂಕು ಮಂಡಲ ಪ್ರಧಾನ ಕಾರ್ಯದರ್ಶಿ ಅಜಿತ್ ಕರುಂಬಯ್ಯ, ಮುದ್ದಿಯಡ ಮಂಜು ಗಣಪತಿ, ಪಕ್ಷದ ಕಾರ್ಯಕರ್ತರು ಹಾಜರಿದ್ದರು.

ಸಿದ್ದಾಪುರದಲ್ಲಿ ಯದುವೀರ್‌ಗೆ ಅದ್ದೂರಿ ಸ್ವಾಗತ



ಸಿದ್ದಾಪುರಕ್ಕೆ ಭಾನುವಾರ ಆಗಮಿಸಿದ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಪಕ್ಷದ ಕಾರ್ಯಕರ್ತರು ಅದ್ದೂರಿಯಾಗಿ ಸ್ವಾಗತಿಸಿದರು.

ಪಾಲಿಬೆಟ್ಟ, ಸಿದ್ದಾಪುರ, ಅಮ್ಮತ್ತಿ, ಚನ್ನಯ್ಯನಕೋಟೆ, ಮಾಲ್ದಾರೆ, ನೆಲ್ಯಹುದಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾರ್ಯಕರ್ತರು, ಚಂಡೆ ವಾದ್ಯ ಮೇಳಗಳೊಂದಿಗೆ ಸ್ವಾಗತಿಸಿ ಬರಮಾಡಿಕೊಂಡರು. ನಂತರ ಎಸ್‌ಎನ್‌ಡಿಪಿ ಸಭಾಂಗಣದಲ್ಲಿ ನಡೆದ ಕಾರ್ಯಕರ್ತರ ಸಭೆಯಲ್ಲಿ ಯದುವೀರ್ ಮಾತನಾಡಿ, ಈಗಾಗಲೇ ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಿಸಿ ಭಾರತದ ಆಧ್ಯಾತ್ಮಿಕ ಶಕ್ತಿಯನ್ನು ಪ್ರಪಂಚಕ್ಕೆ ತಿಳಿಸಲಾಗಿದೆ. ಕೇಂದ್ರ ಸರ್ಕಾರದ ಯೋಜನೆ ಮತ್ತು ಉದ್ದೇಶಗಳನ್ನು ಜನರಿಗೆ ತಿಳಿಸುವ ಕೆಲಸವನ್ನು ಕಾರ್ಯಕರ್ತರು ನಿರಂತರವಾಗಿ ಮಾಡಬೇಕಿದೆ ಎಂದರು.

ಮಾಜಿ ಶಾಸಕ ಕೆ.ಜಿ.ಬೋಪಯ್ಯ ಮಾತನಾಡಿ, ಕೊಡಗಿನಲ್ಲಿ ಕಳೆದ 20 ವರ್ಷಗಳ ಅವಧಿಯಲ್ಲಿ ಪ್ರತಿ ಗ್ರಾಮೀಣ ಭಾಗದಲ್ಲೂ ಕಾಂಕ್ರೀಟ್ ರಸ್ತೆ, ಕುಡಿಯುವ ನೀರು, ಶೌಚಾಲಯ, ಸಮುದಾಯ ಭವನ ನಿರ್ಮಿಸಲಾಗಿದೆ. ದೇವಸ್ಥಾನ, ಚರ್ಚ್, ಮಸೀದಿಗಳ ಅಭಿವೃದ್ಧಿಯು ನಿರಂತರವಾಗಿ ನಡೆದಿದೆ. ಕೊಡಗಿನಲ್ಲಿ ಬಿಜೆಪಿ ಶಾಸಕರು ಕ್ಷೇತ್ರದ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ವಿಧಾನಪರಿಷತ್ ಸದಸ್ಯ ಸುಜಾ ಕುಶಾಲಪ್ಪ, ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ನೆಲ್ಲಿರ ಚಲನ್ ಕುಮಾರ್, ವಿ.ಕೆ. ಲೋಕೇಶ್, ವಿರಾಜಪೇಟೆ ತಾಲೂಕು ಮಂಡಲ ಅಧ್ಯಕ್ಷ ಸುವಿನ್ ಗಣಪತಿ, ಪ್ರಧಾನ ಕಾರ್ಯದರ್ಶಿಗಳಾದ ಅಜಿತ್ ಕರುಂಬಯ್ಯ, ಮಂಜು ಗಣಪತಿ, ಶಕ್ತಿ ಕೇಂದ್ರ ಪ್ರಮುಖರು, ಬೂತ್ ಅಧ್ಯಕ್ಷರು, ವಿವಿಧ ಮೋರ್ಚಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಾವೇರಿ ಪುಣ್ಯಭೂಮಿ ಸೇವೆ ನನ್ನ ಸೌಭಾಗ್ಯ



ವಿರಾಜಪೇಟೆ ಕೊಡವ ಸಮಾಜದ ಸಭಾಂಗಣದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಯದುವೀರ್ ಮಾತನಾಡಿದರು.

ವಿರಾಜಪೇಟೆ, ಮಾ.24–ಕಾವೇರಿ ಮಾತೆಯ ಪುಣ್ಯಭೂಮಿಯ ಸೇವೆಗೆ ಅವಕಾಶ ದೊರೆತಿರುವುದು ನನ್ನ ಸೌಭಾಗ್ಯವಾಗಿದ್ದು, ಕೊಡಗು ಕೊಡಗಾಗಿಯೇ ಉಳಿಯಬೇಕು ಎಂದು ಬಿಜೆಪಿ ಅಭ್ಯರ್ಥಿ ಯದುವೀರ್ ಆಶಯ ವ್ಯಕ್ತಪಡಿಸಿದರು.

ಪಟ್ಟಣದ ಕೊಡವ ಸಮಾಜದ ಸಭಾಂಗಣದಲ್ಲಿ ಭಾನುವಾರ ಆಯೋಜಿಸಿದ್ದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಜನಪರ ಯೋಜನೆಗಳು ಪಕ್ಷದ ಗೆಲುವಿಗೆ ಕಾರಣವಾಗಲಿದೆ. ಪ್ರಚಾರದ ವೇಳೆ ಮೈಸೂರು ಮತ್ತು ಕೊಡಗು ಎಲ್ಲೆಡೆ ಉತ್ತಮ ಸ್ಪಂದನೆ ಮತ್ತು ಉತ್ಸಾಹ ಕಂಡು ಬರುತ್ತಿದೆ. ಕ್ಷೇತ್ರದ ಸಮಸ್ಯೆಗಳನ್ನು ಪಕ್ಷದ ಪ್ರಮುಖರು ಗಮನಕ್ಕೆ ತಂದಿದ್ದು, ಅದರ ಪರಿಹಾರಕ್ಕೂ ಸಲಹೆ ನೀಡಿದ್ದಾರೆ. ತಲಕಾವೇರಿ ಸನ್ನಿಧಿಯಲ್ಲಿ ಪೂಜೆ ಸಲ್ಲಿಸಿ ಕೊಡಗಿನಲ್ಲಿ ಪ್ರಚಾರ ಆರಂಭಿಸಿದ್ದೇನೆ. ಪಕ್ಷದ ಎಲ್ಲಾ ಕಾರ್ಯಕರ್ತರು ನನಗೆ ಸಂಪೂರ್ಣ ಸಹಕಾರ ನೀಡುತ್ತಿದ್ದಾರೆ. ಕೊಡಗಿನ ಜನರ ವಿಶ್ವಾಸ ಹಾಗೂ ಆಶೀರ್ವಾದ ನನ್ನ ಮೇಲಿದೆ ಎಂದರು.

ಸಂಸದ ಪ್ರತಾಪ್ ಸಿಂಹ ಮಾತನಾಡಿ, ಮತ್ತೊಮ್ಮೆ ಕೊಡಗು ಬಿಜೆಪಿಯ ಭದ್ರಕೋಟೆ ಎಂಬುವುದನ್ನು ಪಕ್ಷದ ಕಾರ್ಯಕರ್ತರು ಸಾಬೀತುಪಡಿಸಬೇಕು. ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಲು ಎಲ್ಲಾ ಕಾರ್ಯಕರ್ತರು ಪಣತೊಡಬೇಕು. ಕೇಂದ್ರ ಸರ್ಕಾರದ ಜನಪರ ಕಾರ್ಯಗಳನ್ನು ಮನೆ ಮನೆಗೆ ತಲುಪಿಸಬೇಕು. ಕೊಡಗಿನ ಜನರು ರಾಷ್ಟ್ರಪ್ರೇಮ ಉಳ್ಳವರು, ಧೈರ್ಯವಂತರು. ಬಿಜೆಪಿ ನನಗೆ ತಾಯಿಯಂತೆ. ಆದ್ದರಿಂದ ಪಕ್ಷಕ್ಕಾಗಿ ನಾನು ಸದಾ ದುಡಿಯುತ್ತೇನೆ. ಅಭ್ಯರ್ಥಿ ಯದುವೀರ್ ಅವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಲು ಶ್ರಮಿಸುವಂತೆ ಎಂದು ತಿಳಿಸಿದರು.

ವಿಧಾನಪರಿಷತ್ ಸದಸ್ಯ ಸುಜಾ ಕುಶಾಲಪ್ಪ ಮಾತನಾಡಿ, ಬಿಜೆಪಿ ತತ್ವಸಿದ್ಧಾಂತವಿರುವ ಪಕ್ಷ. ಕಳೆದ ಹತ್ತು ವರ್ಷಗಳಲ್ಲಿ ರಾಷ್ಟ್ರ ರಕ್ಷಣೆ, ಭಯೋತ್ಪಾದನೆ ನಿರ್ಮೂಲನೆ, ಗ್ರಾಮೀಣ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಆದ್ಯತೆ ನೀಡಿದೆ ಎಂದು ಹೇಳಿದರು.

ಮಾಜಿ ಶಾಸಕ ಕೆ.ಜಿ.ಬೋಪಯ್ಯ ಮಾತನಾಡಿದರು. ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಪಕ್ಷದ ಚುನಾವಣಾ ಉಸ್ತುವಾರಿ ವಸಂತ್ ಕುಮಾರ್, ವಿರಾಜಪೇಟೆ ಮಂಡಲ ಅಧ್ಯಕ್ಷ ಮಾಚಿಮಂಡ ಸುವಿನ್ ಗಣಪತಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ಕೆ.ಲೋಕೇಶ್, ಕಾರ್ಯದರ್ಶಿ ಕುಟ್ಟಂಡ ಅಜಿತ್ ಕರಂಬಯ್ಯ, ನೆಲ್ಲಿರ ಚಲನ್, ಬಿ.ಬಿ.ಭಾರತೀಶ್, ವಿಕಾಸ್ ಪುತ್ತೂರು, ಅರುಣ್ ಭೀಮಯ್ಯ ಸಭೆಯಲ್ಲಿ ಉಪಸ್ಥಿತರಿದ್ದರು.

ದರೋಡೆ ಪ್ರಕರಣ: ತಂದೆ, ಮಗ ಬಂಧನ




ಅಬ್ದುಲ್ ರೆಹಮಾನ್, ತಾಜುದ್ದೀನ್

ಮಡಿಕೇರಿ: ಪೊನ್ನಂಪೇಟೆ ತಾಲೂಕಿನ ದೇವರಪುರದಲ್ಲಿ ನಡೆದಿದ್ದ ದರೋಡೆ ಪ್ರಕರಣದ ಇಬ್ಬರು ಪ್ರಮುಖ ಆರೋಪಿಗಳಾದ ತಂದೆ ಮತ್ತು ಮಗನನ್ನು ಕೊಡಗು ಜಿಲ್ಲಾ ಪೊಲೀಸರು ಬಂಧಿಸಿದ್ದಾರೆ.

ಕೇರಳದ ಮಲಪುರಂ ಜಿಲ್ಲೆಯ ಅಬ್ದುಲ್ ರೆಹಮಾನ್ ಮತ್ತು ಆತನ ಪುತ್ರ ತಾಜುದ್ದೀನ್ ಬಂಧಿತ ಆರೋಪಿಗಳು. ಇವರಿಂದ ಐಷಾರಾಮಿ ಕಾರು ಮತ್ತು ಮೊಬೈಲ್‌ಗಳನ್ನು ವಶಕ್ಕೆ ಪಡೆಯಲಾಗಿದೆ. 2023ರ ಡಿ.8ರಂದು ರಾತ್ರಿ ದೇವರಪುರದಲ್ಲಿ ನಡೆದ ದರೋಡೆ ಪ್ರಕರಣಕ್ಕೆ ಸಂಬಂಧ ಈಗಾಗಲೇ ಬಂಧಿತರ ಸಂಖ್ಯೆ 16ಕ್ಕೆ ಏರಿದ್ದು, ಮತ್ತಷ್ಟು ಆರೋಪಿಗಳ ಬಂಧನಕ್ಕೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಈ ದರೋಡೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಶೇಷ ತನಿಖಾ ತಂಡ ರಚಿಸಿದ್ದಾರೆ. ಈಗಾಗಲೇ ಬಂಧಿಸಿರುವ ಆರೋಪಿಗಳು ನೀಡಿದ ಮಾಹಿತಿಯನ್ನು ಆಧರಿಸಿ ಕೇರಳದಲ್ಲಿ 7 ದಿನ ಕಾರ್ಯಾಚರಣೆ ನಡೆಸಿ ಪ್ರಮುಖ ಆರೋಪಿಗಳಾಗ ತಂದೆ ಮತ್ತು ಮಗನನ್ನು ಬಂಧಿಸಲಾಗಿದೆ.

ಏ.3ರಂದು ಅಮ್ಮತ್ತಿಯಲ್ಲಿ ಮಹಿಳಾ ದಿನಾಚರಣೆ



ಅಮ್ಮತ್ತಿ ಕೊಡವ ಸಮಾಜ ಕಾರ್ಯದರ್ಶಿ ಪಟ್ಟಡ ಧನು ಉತ್ತಯ್ಯ ಸುದ್ದಿಗೋಷ್ಠಿ.

ಗೋಣಿಕೊಪ್ಪ: ಅಮ್ಮತ್ತಿ ಕೊಡವ ಸಮಾಜದ ವತಿಯಿಂದ ಏ.3 ರಂದು ಅಂತಾರಾಷ್ಟ್ರೀಯ ಮಹಿಳಾ ದಿನ ಆಚರಿಸಲಾಗುವುದು ಎಂದು ಸಮಾಜದ ಅಧ್ಯಕ್ಷ ಅಮ್ಮತ್ತಿ ಕೊಡವ ಸಮಾಜ ಕಾರ್ಯದರ್ಶಿ ಪಟ್ಟಡ ಧನು ಉತ್ತಯ್ಯ ತಿಳಿಸಿದರು.

ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೆ ವಿವಿಧ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ನಿರ್ದೇಶಕಿ ಕೋಡಿಯ ಮಣಿಯಂಡ ಅಶ್ವಿನಿ ಗಣಪತಿ ಮಾತನಾಡಿ, ಮಹಿಳೆಯರಿಗೆ ಸಾಕಷ್ಟು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕೈಯಲ್ಲಿ ಹೊಲಿಗೆ ಹಾಕುವುದು, ನಿಟ್ಟಿಂಗ್, ಟ್ಯಾಟು ಹಾಕುವ ಪೈಪೋಟಿ, ಸಾಂಸ್ಕೃತಿಕ ಕಾರ್ಯಕ್ರಮ, ಆಟೋಟ ಸ್ಪರ್ಧೆಗಳು ನಡೆಯಲಿವೆ. ಸಾಹಿತಿ ಪಂದ್ಯಂಡ ರೇಣುಕಾ ಸೋಮಯ್ಯ ಅವರಿಗೆ ಸನ್ಮಾನಿಸಲಾಗುವುದು. ಗೋಣಿಕೊಪ್ಪ ಸಮುದಾಯ ಆರೋಗ್ಯ ಕೇಂದ್ರದ ಮಹಿಳಾ ತಜ್ಞೆ ಡಾ. ಮುಕ್ಕಾಟೀರ ಗ್ರೀಷ್ಮಾ ಬೋಜಮ್ಮ, ದಂತ ವೈದ್ಯೆ ಡಾ. ಪಟ್ಟಡ ಪೂಜಾ ಬೋಪಣ್ಣ ಅತಿಥಿಯಾಗಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಐನಂಡ ಪ್ರಕಾಶ್ ಗಣಪತಿ, ನಿರ್ದೇಶಕಿ ಜೀನಾ ಕಿರಣ್, ರೀಟಾ ಚೆಂಗಪ್ಪ ಇದ್ದರು.

ಡಾ.ಬೊಪ್ಪಂಡ ಜಾಲಿ ಬೋಪಯ್ಯ ನಿಧನ



ನಾಪೋಕ್ಲು, ಮಾ.24– ಇಲ್ಲಿನ ಶ್ರೀರಾಮ ವಿದ್ಯಾಸಂಸ್ಥೆಯ ಅಧ್ಯಕ್ಷ ಹಾಗೂ ಕಾಫಿ ಪ್ಲಾಂಟರ್ ಡಾ.ಬೊಪ್ಪಂಡ ಜಾಲಿ ಬೋಪಯ್ಯ(74) ಶುಕ್ರವಾರ ನಿಧನರಾದರು.

ಮೃತರು ಪತ್ನಿ, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಶನಿವಾರ ಅಂತ್ಯಕ್ರಿಯೆ ನೆರವೇರಿಸಲಾಯಿತು. ಡಾ.ಜಾಲಿ ಬೋಪಯ್ಯ ಕೃಷಿ ಸಂಶೋಧನಾ ಕ್ಷೇತ್ರದಲ್ಲಿ ಪ್ರಥಮವಾಗಿ ಡಾಕ್ಟರೇಟ್ ಪಡೆದ ಕೊಡಗಿನವರಾಗಿದ್ದರು. ಫಿ.ಮಾರ್ಷಲ್ ಕಾರ್ಯಪ್ಪ ಕ್ರೀಡಾ ಅಕಾಡೆಮಿಯ ಉಪಾಧ್ಯಕ್ಷ, ಕೊಡಗು ಪ್ಲಾಂಟರ್ ಅಸೋಸಿಯೇಷನ್ ಅಧ್ಯಕ್ಷ ಹಾಗೂ ಕೊಡವ ಸ್ಪೋರ್ಟ್ಸ್ ಆ್ಯಂಡ್ ರಿಕ್ರಿಯೇಷನ್ ಕ್ಲಬ್‌ನ ಸ್ಥಾಪಕ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು.

ನಾರಿ ಶಕ್ತಿ ರಾಷ್ಟ್ರೀಯ ಶಕ್ತಿಯನ್ನಾಗಿಸಿದ ಮೋದಿ



ಚಾ.ನಗರ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಜಿಲ್ಲಾ ಮಹಿಳಾ ಮೋರ್ಚಾ ಪದಾಧಿಕಾರಿಗಳ ಸಭೆಯಲ್ಲಿ ಮಂಜುಳಾ ಮಾತನಾಡಿದರು.

ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷೆ ಮಂಜುಳಾ

ಚಾಮರಾಜನಗರ, ಮಾ.24–ದೇಶದಲ್ಲಿ ಶೇ.50ಕ್ಕಿಂತ ಹೆಚ್ಚು ಮಹಿಳಾ ಶಕ್ತಿಯನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ 300ಕ್ಕೂ ಹೆಚ್ಚು ಯೋಜನೆಗಳನ್ನು ನೀಡಿ ಅವರನ್ನು ರಾಷ್ಟ್ರೀಯ ಶಕ್ತಿಯನ್ನಾಗಿಸಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ ಎಂದು ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷೆ ಮಂಜುಳಾ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಭಾನುವಾರ ನಡೆದ ಜಿಲ್ಲಾ ಮಹಿಳಾ ಮೋರ್ಚಾ ಪದಾಧಿಕಾರಿಗಳ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರ ಸಬಲೀಕರಣಕ್ಕಾಗಿ ಜಾರಿಗೆ ತಂದ ಯೋಜನೆಗಳಿಂದ ಇಂದು ದೇಶದ ಕೋಟ್ಯಾಂತರ ಮಹಿಳೆಯರು ಸ್ವಾಭಿಮಾನದ ಬದುಕು ಕಟ್ಟಿಕೊಂಡಿದ್ದಾರೆ. ಇಂತಹ ಯೋಜನೆಗಳನ್ನು ಜಾರಿ ಮಾಡಿ ವಿಶ್ವಖ್ಯಾತಿ ಹೊಂದಿರುವ ಮೋದಿ ಮತ್ತೆ ಪ್ರಧಾನಿ ಮಾಡಬೇಕಿದೆ ಎಂದರು.

65 ವರ್ಷಗಳಿಂದ ಕಾಂಗ್ರೆಸ್‌ಗೆ ಮಹಿಳೆಯರ ಮೀಸಲಾತಿ ನೀಡುವ ಪರಿಕಲ್ಪನೆ ಬಂದಿರಲಿಲ್ಲ. ಆದರೆ, ಮೋದಿಯವರು ನಾರಿಶಕ್ತಿ ವಂದನಾ ಅಧಿನಿಯಮ-2023 ಮಸೂದೆ ಜಾರಿ ಲೋಕಸಭಾ ಹಾಗೂ ವಿಧಾನಸಭೆಯಲ್ಲಿ ಶೇ.33 ಮೀಸಲಾತಿ ನೀಡಿದೆ. ಸ್ಥಳೀಯ ಸಂಸ್ಥೆಗಳಿಗೆ ಶೇ.50ರಷ್ಟು ಮೀಸಲಾತಿ ಸೌಲಭ್ಯ ಕಲ್ಪಿಸುವ ಎಲ್ಲಾ ರಂಗದಲ್ಲೂ ಮಹಿಳೆಯರು ಮುಖ್ಯವಾಹಿನಿಗೆ ಬರುವಂತೆ ಮಾಡಿದ್ದಾರೆ. ಹೀಗಾಗಿ ಚಾಮರಾಜನಗರ ಗಡಿ ಲೋಕಸಭಾ ಕ್ಷೇತ್ರದಿಂದ ಕಾಶ್ಮೀರದವರಗೆ ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಮೋದಿಯವರನ್ನು ಮತ್ತೆ ಪ್ರಧಾನಿ ಮಾಡಲು ನಾವೆಲ್ಲರೂ ಶ್ರಮಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್‌ಕುಮಾರ್ ಮಾತನಾಡಿ, ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳು ಬಹಳ ದಿನ ನಿಲ್ಲಲ್ಲ. ಇದನ್ನು ಮೋಸ ಮಾಡಿ ಚುನಾವಣಾ ಅಸ್ತ್ರವಾಗಿ ಬಳಸಿಕೊಂಡರು. ಗ್ಯಾರಂಟಿ ಯೋಜನೆಗಳನ್ನು ಕೊಟ್ಟು ಮತ್ತೊಂದು ಕಡೆ ಬೆಲೆಗಳ ಹೆಚ್ಚು ಮಾಡುವ ಮೂಲಕ ಕಿತ್ತುಕೊಳ್ಳುವ ಕೆಲಸ ಮಾಡಿದೆ ಎಂದು ಆರೋಪಿಸಿದರು.

ಲೋಕಸಭಾ ಕ್ಷೇತ್ರದ ಚುನಾವಣಾ ಸಂಚಾಲಕ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ ಮಾತನಾಡಿದರು. ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಕಮಲಮ್ಮ, ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್, ಕಾರ್ಯಕಾರಿಣಿ ಸದಸ್ಯೆ ಜಯಶೀಲ ರಾಜಶೇಖರ್, ಮೈಸೂರು ಜಿಲ್ಲಾಧ್ಯಕ್ಷೆ ರೇಣುಕಾರಾಜು, ಪ್ರಧಾನ ಕಾರ್ಯದರ್ಶಿ ನಂದಿನಿ ಮಹೇಶ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರಸ್ವತಿ, ಕಾರ್ಯದರ್ಶಿಗಳಾದ ಮಮತಾ ಬಾಲಸುಬ್ರಹ್ಮಣ್ಯ, ಶೈಲಾ, ಉಪಾಧ್ಯಕ್ಷರಾದ ದಾಕ್ಷಾಯಿಣಿ, ವನಜಾಕ್ಷಿ, ಜಿಲ್ಲೆಯ 8 ಮಂಡಲಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಜರಿದ್ದರು.

12,403 ವಿದ್ಯಾರ್ಥಿಗಳ ನೋಂದಣಿ

● ಇಂದಿನಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ ● ಶಿಕ್ಷಣ ಇಲಾಖೆ ಅಗತ್ಯ ಸಿದ್ಧತೆ

ಚಾಮರಾಜನಗರ, ಮಾ.24– ಇಂದಿನಿಂದ ಆರಂಭವಾಗಲಿರುವ ಎಸ್ಎಸ್ಎಲ್‌ಸಿ ಪರೀಕ್ಷೆಗೆ ಜಿಲ್ಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಅಗತ್ಯ ಸಿದ್ಧತೆಯನ್ನು ಪೂರ್ಣಗೊಳಿಸಿದೆ.

ಮಾ.25ರಿಂದ ಏ.6ರ ವರೆಗೆ ಪರೀಕ್ಷೆಗಳು ಬೆಳಗ್ಗೆ 10.15 ರಿಂದ ಮಧ್ಯಾಹ್ನ 1.30ರ ವರೆಗೆ ನಡೆಯಲಿದ್ದು, ಜಿಲ್ಲೆಯಲ್ಲಿ ಒಟ್ಟು 12,403 ವಿದ್ಯಾರ್ಥಿಗಳು ನೋಂದಣಿ ಮಾಡಿಸಿಕೊಂಡಿದ್ದಾರೆ. ಒಟ್ಟು 45 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ.

ಮೊದಲ ದಿನವಾದ ಸೋಮವಾರ (ಮಾ.25) ಪ್ರಥಮ ಭಾಷೆಯ ಪರೀಕ್ಷೆಗಳು ನಡೆಯಲಿದ್ದು, ಏ.6 ರಂದು ದ್ವಿತೀಯ ಭಾಷೆ ಪರೀಕ್ಷೆಯೊಂದಿಗೆ ಮುಕ್ತಾಯವಾಗಲಿದೆ. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕುಡಿಯುವ ನೀರು, ಶೌಚಾಲಯ, ಸ್ವಚ್ಛತಾ ಕಾರ್ಯಗಳು ವ್ಯವಸ್ಥಿತ ಮಾಡಲಾಗಿದೆ. ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರದಲ್ಲಿ ಅವಶ್ಯ ಸೌಲಭ್ಯ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಪರೀಕ್ಷೆ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳಿಗೆ ನಿರಂತರವಾಗಿ ವಿದ್ಯುತ್ ಸರಬರಾಜು ವ್ಯವಸ್ಥೆ ಮಾಡಲಾಗಿದ್ದು, ಪರೀಕ್ಷಾ ಕಾರ್ಯಕ್ಕಾಗಿ ಸಾಮಾನ್ಯ ಬಸ್‌ಗಳೊಂದಿಗೆ 33 ಹೆಚ್ಚುವರಿ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.



ಒಟ್ಟು 45 ಪರೀಕ್ಷಾ ಕೇಂದ್ರ: ಚಾಮರಾಜನಗರ ತಾಲೂಕಿನ 4019 ವಿದ್ಯಾರ್ಥಿಗಳು, ಗುಂಡ್ಲುಪೇಟೆ 2722, ಹನೂರಿನ 2507, ಕೊಳ್ಳೇಗಾಲ 2180 ಹಾಗೂ ಯಳಂದೂರಿನ 975 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 12,403 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಚಾಮರಾಜನಗರ ತಾಲೂಕಿನಲ್ಲಿ 15, ಗುಂಡ್ಲುಪೇಟೆ 9, ಹನೂರು 9, ಕೊಳ್ಳೇಗಾಲ 8 ಹಾಗೂ ಯಳಂದೂರು ತಾಲೂಕಿನ 4 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 45 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್ ಮಾಹಿತಿ ನೀಡಿದರು.

> ▶ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಎಲ್ಲಾ ಸಿದ್ಧತೆ ಕೈಗೊಳ್ಳಲಾಗಿದೆ. ವಿದ್ಯಾರ್ಥಿಗಳು ಯಾವುದೇ ಭಯ, ಒತ್ತಡ ಇಲ್ಲದೇ ಪರೀಕ್ಷೆ ಬರೆಯಬೇಕು. ಯಾವುದೇ ವದಂತಿಗಳಿಗೆ ಕಿವಿಗೊಡಬೇಡಿ. ಇದುವರೆಗೆ ಓದಿರುವುದನ್ನು ಪುನರ್‌ಮನನ ಮಾಡಿಕೊಂಡು ಖುಷಿಯಿಂದ, ಧೈರ್ಯದಿಂದ ಪರೀಕ್ಷೆ ಎದುರಿಸಿ, ಎಲ್ಲಾ ವಿದ್ಯಾರ್ಥಿಗಳಿಗೂ ಆಲ್ ದಿ ಬೆಸ್ಟ್.
> – ರಾಮಚಂದ್ರರಾಜೇ ಅರಸ್,
> ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ

ಕಳೆದ ಬಾರಿ ಯಾವುದೇ ಗೊಂದಲಗಳಿಲ್ಲದೇ ಸರಾಗವಾಗಿ ಪರೀಕ್ಷೆ ನಡೆಸಿ ಫಲಿತಾಂಶಗಳನ್ನು ನಿಗದಿತ ಸಮಯದಲ್ಲೇ ಪ್ರಕಟಿಸಲಾಗಿತ್ತು. ಈ ಬಾರಿಯೂ ಅದೇ ರೀತಿ ಕ್ರಮಬದ್ಧವಾಗಿ ಇನ್ನೂ ಹೆಚ್ಚಿನ ಭದ್ರತೆಯಲ್ಲಿ ಪರೀಕ್ಷೆ ನಡೆಸಲು ಶಿಕ್ಷಣ ಇಲಾಖೆ ಸಕಲ ಸಿದ್ಧತೆ ಕೈಗೊಂಡಿದೆ ಎಂದು ತಿಳಿಸಿದರು.

ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗಿದ್ದು, ಪರಿಕ್ಷಾ ಕಾರ್ಯ ಶಾಂತಿ, ಸುವ್ಯವಸ್ಥೆಯಿಂದ ನಡೆಯಬೇಕೆಂಬ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಆದಿಕರ್ನಾಟಕ ಹಾಸ್ಟೆಲ್ ಜಾಗ ಅಕ್ರಮ ಮಾರಾಟ ಸಾಬೀತು

● ಸಂಘದ ಆಸ್ತಿಯನ್ನು ಸಮಾಜ ಕಲ್ಯಾಣ ಇಲಾಖೆಗೆ ವಹಿಸಲು ಶಿಫಾರಸು ● ಮಾರಾಟ ವಿಚಾರದಲ್ಲಿ ಕರ್ತವ್ಯಲೋಪ ಅಧಿಕಾರಿಗಳ ವಿರುದ್ಧ ಕ್ರಮ ● ಆದಿಕರ್ನಾಟಕ ಸಂಘದ ಆಸ್ತಿ ಸಂರಕ್ಷಣಾ ಸಮಿತಿ ಸುದ್ದಿಗೋಷ್ಠಿ

ಚಾಮರಾಜನಗರ, ಮಾ.24– ನಗರದ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ಆದಿಕರ್ನಾಟಕ ಹಾಸ್ಟೆಲ್‌ಗೆ (ಕೆ.ಸಿ.ರಂಗಯ್ಯ ಹಾಸ್ಟೆಲ್) ಸೇರಿದ ಜಾಗವನ್ನು ನಕಲಿ ದಾಖಲೆ ಸೃಷ್ಟಿಸಿ ಮಾರಾಟ ಮಾಡಿರುವುದು ಉಪ ವಿಭಾಗಾಧಿಕಾರಿಗಳ ನೇತೃತ್ವದ ಸಮಿತಿ ತನಿಖೆಯಿಂದ ಸಾಬೀತಾಗಿದೆ ಎಂದು ಆದಿಕರ್ನಾಟಕ ಅಭಿವೃದ್ಧಿ ಸಂಘದ ಆಸ್ತಿ ಸಂರಕ್ಷಣಾ ಸಮಿತಿ ಸದಸ್ಯ ಹಾಗೂ ಜಿಪಂ ಮಾಜಿ ಉಪಾಧ್ಯಕ್ಷ ಅಯ್ಯನಪುರ ಶಿವಕುಮಾರ್ ತಿಳಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಜಿಪಂ ಮಾಜಿ ಉಪಾಧ್ಯಕ್ಷ ಅಯ್ಯನಪುರ ಶಿವಕುಮಾರ್ ಮಾತನಾಡಿದರು.

ನಗರದ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಸಂಘದ ಅಧ್ಯಕ್ಷ ನಂಜುಂಡಸ್ವಾಮಿ ಮತ್ತಿತರರು ಸಂಘದ ಆಸ್ತಿಯನ್ನು ಮಾರಾಟ ಮಾಡಿರುವ ವಿಚಾರ ತಿಳಿಯುತ್ತಿದ್ದಂತೆಯೇ ಸಮುದಾಯದ ಹಲವರು ಸಂಘದ ಆಸ್ತಿ ಸಂರಕ್ಷಣಾ ಸಮಿತಿ ರಚಿಸಿಕೊಂಡು ನಡೆಸಿದ ಹೋರಾಟದ ಫಲವಾಗಿ ಸಂಘದ ಅಧ್ಯಕ್ಷ ಮತ್ತು ಕಾರ್ಯದರ್ಶಿ ಸೇರಿದಂತೆ 13 ಮಂದಿ ವಿರುದ್ಧ ಶುಕ್ರವಾರ ತಡರಾತ್ರಿ ಎಫ್‌ಐಆರ್ ದಾಖಲಾಗಿದೆ ಎಂದು ಅವರು ತಿಳಿಸಿದರು.

ಸಮಿತಿಯು ಹೋರಾಟ ನಡೆಸಿ ನೀಡಿದ ಮನವಿಯನ್ನಾಧರಿಸಿ ಜಿಲ್ಲಾಧಿಕಾರಿಗಳು ಕೊಳ್ಳೇಗಾಲ ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ರಚಿಸಿದ್ದ ಐವರ ತನಿಖಾ ಸಮಿತಿಯು ಸಂಘದ ಪದಾಧಿಕಾರಿಗಳು ಹಾಗೂ ಆಸ್ತಿ ಸಂರಕ್ಷಣಾ ಸಮಿತಿಯವರನ್ನು ವಿಚಾರಣೆ ನಡೆಸಿ, ಹಾಸ್ಟೆಲ್ ಜಾಗದ ಸರ್ವೆ ಕಾರ್ಯ ಕೈಗೊಂಡು ಹಳೇ ದಾಖಲೆಗಳನ್ನು ಪರಿಶೀಲಿಸಿ ಜಿಲ್ಲಾಧಿಕಾರಿಗಳಿಗೆ ನೀಡಿದ ವರದಿಯಲ್ಲಿ ಕೆಲವು ಶಿಫಾರಸುಗಳನ್ನು ಮಾಡಿದೆ ಎಂದು ಅವರು ಹೇಳಿದರು.

ಸಂಘದ ಆಸ್ತಿಯಿಂದ ಹಾಗೂ ವಾಣಿಜ್ಯ ಕಟ್ಟಡಗಳ ಜೊತೆಗೆ ಸಂಘದ ಸುಪರ್ದಿಯಲ್ಲಿರುವ ಇತರ ಆಸ್ತಿಗಳಿಂದ ಬಂದಿರುವ ಆದಾಯ ಹಾಗೂ ಅದನ್ನು ಸಂಘವು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡುತ್ತಿರುವುದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಂಘದ ಪದಾಧಿಕಾರಿಗಳು ತನಿಖಾ ಸಮಿತಿಗೆ ನೀಡದೆ, ಅಸಹಕಾರ ತೋರಿದ್ದಾರೆ. ಆದ್ದರಿಂದ ಈ ಬಗ್ಗೆ ಜಿಪಂ ಮುಖ್ಯ ಲೆಕ್ಕಾಧಿಕಾರಿ ಅಥವಾ ಇನ್ಯಾವುದೇ ಲೆಕ್ಕಾಧಿಕಾರಿಗಳಿಂದ ಸಂಘದ ಸಂಪೂರ್ಣ ಲೆಕ್ಕ ಪರಿಶೋಧನೆಯನ್ನು ತುರ್ತಾಗಿ ಮಾಡಿಸಬೇಕು. ಸಂಘವು ನಕಲಿ ದಾಖಲೆಗಳನ್ನು ಸೃಷ್ಟಿಸುವ ಹಾಗೂ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇರುವುದರಿಂದ ಅಲ್ಲಿಯವರೆಗೂ ಸಂಘದ ಎಲ್ಲಾ ಚಟುವಟಿಕೆಗಳನ್ನೂ ಸ್ಥಗಿತಗೊಳಿಸಿ ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಯನ್ನು ಸಂಘಕ್ಕೆ ಆಡಳಿತಾಧಿಕಾರಿಯಾಗಿ ನೇಮಕ ಮಾಡಬೇಕು ಎಂದು ತನಿಖಾ ಸಮಿತಿ ಶಿಫಾರಸು ಮಾಡಿರುವುದಾಗಿ ಶಿವಕುಮಾರ್ ಹೇಳಿದರು.

ಹಾಸ್ಟೆಲ್‌ಗೆ ಸೇರಿದ ಜಾಗವನ್ನು ನಕಲಿ ದಾಖಲೆಗಳ ಮೂಲಕ ಹಕ್ಕು ಬದಲಾವಣೆ ಮಾಡಿರುವುದು ಸಾಬೀತಾಗಿದ್ದು, ಸರ್ವೆ ನಂ.295/4ಸಿ, 295/4ಡಿ, 295/4ಎಫ್ ಹಿಸ್ಸಾಗಳಲ್ಲಿ ಅಕ್ರಮವಾಗಿ ಮಾಡಿರುವ ಕ್ರಯದ ವಹಿವಾಟನ್ನು ರದ್ದುಪಡಿಸಿ ಅದನ್ನು ಅಸಿಂಧುಗೊಳಿಸಬೇಕು ಎಂದು ತನಿಖಾ ಸಮಿತಿ ಶಿಫಾರಸು ಮಾಡಿದೆ.

1952-53ರಲ್ಲೇ ಹಾಸ್ಟೆಲ್‌ಗಾಗಿ ಭೂಸ್ವಾಧೀನವಾಗಿದ್ದು, ಪಹಣಿಯ ಷರಾ ಕಾಲಂನಲ್ಲಿ ಎ.ಕೆ. ಜನರಲ್ ಹಾಸ್ಟೆಲ್ ಎಂಬ ಉಲ್ಲೇಖವಿದೆ. 1968ರಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಹಾಸ್ಟೆಲ್ ನಿರ್ಮಿಸಲಾಗಿದೆ. ಹಾಸ್ಟೆಲ್ ಇರುವ ಜಾಗದಲ್ಲೇ ತಾಲೂಕು ಆದಿಕರ್ನಾಟಕ ಅಭಿವೃದ್ಧಿ ಸಂಘ ಇದೆ. ಆದರೆ ಹಾಸ್ಟೆಲ್ ಜಾಗವನ್ನು ಸಂಘಕ್ಕೆ ಸರ್ಕಾರದಿಂದ ಹಸ್ತಾಂತರ ಮಾಡಿರುವ ಬಗ್ಗೆ ದಾಖಲೆಗಳು ಇಲ್ಲ. ಅದನ್ನು ಹಾಜರುಪಡಿಸುವವರೆಗೂ ಈ ಜಾಗವನ್ನು ಸಮಾಜ ಕಲ್ಯಾಣ ಇಲಾಖೆಗೆ ವಹಿಸುವುದು ಸೂಕ್ತ ಎಂದು ತನಿಖಾ ಸಮಿತಿ ಅಭಿಪ್ರಾಯಪಟ್ಟಿದೆ.

2019ರಲ್ಲಿ ಗ್ರಾಮ ಲೆಕ್ಕಾಧಿಕಾರಿಯಾಗಿದ್ದ ಉಲ್ಲಾಸ್ ಮತ್ತು ರಾಜಸ್ವ ನಿರೀಕ್ಷಕರಾಗಿದ್ದ ಆನಂದ್ ಧೂಳಪ್ಪ ಅವರು ಸರ್ಕಾರಿ ಉದ್ದೇಶಕ್ಕಾಗಿ ಭೂಸ್ವಾಧೀನವಾಗಿರುವ ಜಾಗದ ದಾಖಲೆಗಳನ್ನು ಹಾಗೂ ಜಾಗದ ಅನುಭವವನ್ನು ಪರಿಶೀಲಿಸದೇ ಸರ್ಕಾರಿ ಹಾಸ್ಟೆಲ್ ಇರುವ ಭಾಗಕ್ಕೆ ಆಕ್ಷೇಪಣೆ ಸಲ್ಲಿಸದೇ ಹಲವಾರು ನೋಂದಣಿ ಕ್ರಯಪತ್ರದಂತೆ ಹಕ್ಕು ಬದಲಾವಣೆ ಖಾತೆ ಅಂಗೀಕರಿಸಲಾಗಿದ್ದು, ಕರ್ತವ್ಯಲೋಪ ಎಸಗಿರುವ ಈ ಅಧಿಕಾರಿಗಳ ವಿರುದ್ಧ ವಿಚಾರಣೆ ನಡೆಸಿ ಕ್ರಮ ವಹಿಸಬೇಕು ಎಂದು ತನಿಖಾ ಸಮಿತಿ ಶಿಫಾರಸು ಮಾಡಿರುವುದು ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ತಾಪಂ ಮಾಜಿ ಅಧ್ಯಕ್ಷ ಆರ್.ಮಹದೇವ್, ಮಾಜಿ ಸದಸ್ಯ ಶಿವಸ್ವಾಮಿ, ಆಸ್ತಿ ಸಂರಕ್ಷಣಾ ಸಮಿತಿಯ ಸದಸ್ಯರಾದ ನಾಗಯ್ಯ, ರಂಗಸ್ವಾಮಿ, ಮಹದೇವಸ್ವಾಮಿ, ನಾಗರಾಜು, ಉಮೇಶ್ ಉಪಸ್ಥಿತರಿದ್ದರು.

ಇಂದು ವೈ.ಕೆ.ಮೋಳೆಯಲ್ಲಿ ಕೊಂಡೋತ್ಸವ



ಯಳಂದೂರು, ಮಾ.24–ತಾಲೂಕಿನ ವೈ.ಕೆ. ಮೋಳೆ ಗ್ರಾಮದ ಉಪ್ಪಾರ ಬಡಾವಣೆಯಲ್ಲಿ ಶ್ರೀ ದೊಡ್ಡಮ್ಮ ತಾಯಿ ಕೊಂಡೋತ್ಸವ ಸೋಮವಾರ ನಡೆಯಲಿದೆ.

ಗ್ರಾಮದೇವತೆ ದೊಡ್ಡಮ್ಮ ತಾಯಿ ದೇವಾಲಯದ ಆವರಣದಲ್ಲಿ ನಡೆಯುವ ಕೊಂಡೋತ್ಸಕ್ಕೆ ಸಿದ್ಧತೆ ನಡೆಸಲಾಗಿದೆ. ಈಗಾಗಲೇ ದೇವಾಲಯಕ್ಕೆ ಸುಣ್ಣಬಣ್ಣ ಬಳಿಯಲಾಗಿದ್ದು, ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ.

ಗಿರಿಜನರ ಆಗಮನ: ಪ್ರತಿವರ್ಷ ದೊಡ್ಡಮ್ಮ ತಾಯಿ ಜಾತ್ರೆಯಲ್ಲಿ ಬಿಳಿಗಿರಿರಂಗನಬೆಟ್ಟದ ಸೋಲಿಗ ಸಮುದಾಯದವರು ಪಾಲ್ಗೊಳ್ಳುವುದು ವಿಶೇಷವಾಗಿದ್ದು, ಹಬ್ಬಕ್ಕೆ ಬರುವ ಸೋಲಿಗರಿಗೆ ಗ್ರಾಮದಿಂದಲೇ ಊಟ-ತಿಂಡಿ ಸೇರಿದಂತೆ ಎಲ್ಲಾ ವ್ಯವಸ್ಥೆ ಮಾಡಲಾಗಿದೆ.



ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪದ ಹಿರಿಕಾಟಿ ಗೇಟ್ ಬಳಿ ಊಟಿ-ಮೈಸೂರು ರಾಷ್ಟ್ರೀಯ ಹೆದ್ದಾರಿಯ ಚೆಕ್‌ಪೋಸ್ಟ್‌ನಲ್ಲಿ ವಾಹನಗಳನ್ನು ಚುನಾವಣಾಧಿಕಾರಿಗಳು ತಪಾಸಣೆ ನಡೆಸಿದರು. ಮುಖ್ಯಪೇದೆ ಕಾಮರಾಜು, ಎಂ.ಮಹದೇವೇಗೌಡ, ಜಿ.ಷಡಕ್ಷರ ಸ್ವಾಮಿ, ಕಾಳಚಾರಿ, ವೆಂಕಟೇಶ್ ಇದ್ದರು.

ಮೈಸೂರು ಮಿತ್ರ

ಸೋಮವಾರ 25 ಮಾರ್ಚ್ 2024

ಒಂದನೇ ಪುಟದಿಂದ

ಮೇಕೆದಾಟು ಯೋಜನೆ ಪ್ರಕಟಿಸೋಣ

ನೀರಿನ ಸಮಸ್ಯೆ ಭೀಕರವಾಗಿದೆ. ಇದರಿಂದ ಕಂಗಾಲಾಗಿರುವ ಜನರು ಮನೆಗೆ ಬೀಗ ಹಾಕಿಕೊಂಡು ವಲಸೆ ಹೋಗುತ್ತಿದ್ದಾರೆ. ಇಂತಹ ಸಂಕಷ್ಟವನ್ನು ನಿವಾರಿಸುವ ನಿಟ್ಟಿನಲ್ಲಿ ತಮಿಳುನಾಡಿಗೆ ಬಿಡುಗಡೆ ಮಾಡುತ್ತಿರುವ ನೀರಿನ ಪ್ರಮಾಣವನ್ನು ನಿಯಂತ್ರಿಸುವಂತೆ ಹಾಗೂ ಮೇಕೆದಾಟು ಜಲಾಶಯ ನಿರ್ಮಾಣಕ್ಕೆ ಅನುಮತಿ ನೀಡುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಈಗಾಗಲೇ ಪ್ರಧಾನಿ ನರೇಂದ್ರ ಮೋದಿಯವರಿಗೆ ಪತ್ರ ಬರೆದಿದ್ದೇನೆ ಎಂದು ಹೇಳಿದರು. ಹೆಚ್.ಡಿ.ದೇವೇಗೌಡರು ಪತ್ರದ ಪ್ರತಿಯನ್ನು ಪ್ರದರ್ಶಿಸಿದರು.

ಸಿಎಂ ಸಿದ್ದರಾಮಯ್ಯ ರಣತಂತ್ರ

ಈಗ ನಮ್ಮದೇ ಶಾಸಕರಿದ್ದು, ಈ ಬಾರಿಯ ಚುನಾವಣೆಯಲ್ಲಿ ಈ ಕ್ಷೇತ್ರಗಳಿಂದ 1 ಲಕ್ಷ ಮತಗಳು ಲೀಡ್ ಬರಬೇಕು. ಪಿರಿಯಾಪಟ್ಟಣ, ನರಸಿಂಹರಾಜ ಮತ್ತು ಚಾಮರಾಜ ಕ್ಷೇತ್ರಗಳಲ್ಲಿ ತಲಾ 1 ಲಕ್ಷ ಲೀಡ್ ಬರಬೇಕೆಂದು ಅಲ್ಲಿನ ಶಾಸಕರಿಗೆ ಟಾರ್ಗೆಟ್ ನೀಡಿದ ಮುಖ್ಯಮಂತ್ರಿಗಳು, ಕೃಷ್ಣರಾಜ ಕ್ಷೇತ್ರದಲ್ಲೂ ಪಕ್ಷಕ್ಕೆ ಒಲವಿದೆ. ಅಲ್ಲಿ ನಮ್ಮ ಶಾಸಕರು ಇಲ್ಲದಿದ್ದರೂ, ಜನರ ವಿಶ್ವಾಸವಂತೂ ಇದೆ. ಹೀಗಾಗಿ ಈ ಕ್ಷೇತ್ರದಿಂದ 50 ಸಾವಿರ, ಚಾಮುಂಡೇಶ್ವರಿ ಮತ್ತು ಹುಣಸೂರು ಸೇರಿ 60 ಸಾವಿರ ಲೀಡ್ ಬರಬೇಕು ಎಂದು ಪಕ್ಷದ ಮುಖಂಡರಿಗೆ ಟಾರ್ಗೆಟ್ ನೀಡಿದರು. ಪಂಚ ಗ್ಯಾರಂಟಿ ಯೋಜನೆ ಜನರ ಮನ ಗೆದ್ದಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವಿನ ಅವಕಾಶವಿದೆ. ನಾವು ನಡೆಸಿದ ಸರ್ವೆಯಲ್ಲೂ ಕೂಡ ಮೈಸೂರು-ಕೊಡಗು ಮತ್ತು ಚಾಮರಾಜನಗರ ಕ್ಷೇತ್ರಗಳಲ್ಲಿ ನಾವೇ ಗೆಲ್ಲುತ್ತೇವೆ ಎಂದು ಬಂದಿದೆ. ಹೀಗಾಗಿ ಎಲ್ಲರೂ ಒಗ್ಗೂಡಿ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು, ಶ್ರಮ ವಹಿಸಬೇಕು ಎಂದರು.

ಯಾವುದೇ ಪಕ್ಷದಿಂದ ಮುಖಂಡರು ಹಾಗೂ ಕಾರ್ಯಕರ್ತರು ಬಂದರೂ ಸೇರಿಸಿಕೊಳ್ಳಿ, ಭಿನ್ನಾಭಿಪ್ರಾಯ ಹಾಗೂ ವೈಮನಸ್ಸನ್ನು ಮರೆತು ಅಭ್ಯರ್ಥಿಗಳ ಗೆಲುವಿಗಾಗಿ ದುಡಿಯಬೇಕು. ಮುಖ್ಯಮಂತ್ರಿಯಾಗಿ ನಾನು ರಾಜ್ಯಾದ್ಯಂತ ಪ್ರವಾಸ ಮಾಡಬೇಕಾಗಿರುವುದರಿಂದ ನೀವೇ ನನ್ನ ಪ್ರತಿನಿಧಿಗಳಾಗಿ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು. ಮೈಸೂರು-ಕೊಡಗು ಕ್ಷೇತ್ರದಲ್ಲಿ 2 ಚುನಾವಣೆಗಳನ್ನು ಸೋತಿದ್ದೇವೆ. ಆದರೆ ಈ ಬಾರಿ ಹಾಗಾಗಬಾರದು. ನಮ್ಮ ಶಾಸಕರೇ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಚುನಾವಣೆಯಲ್ಲಿ ಗೆಲ್ಲದಿದ್ದರೆ ನಮಗೆ ಬೆಲೆ ಇರುತ್ತದೆಯೇ ಎಂದು ಪ್ರಶ್ನಿಸಿದ ಅವರು, ಎಲ್ಲರೂ ಒಗ್ಗಟ್ಟಾಗಿ ಇದ್ದರೆ ಗೆಲುವು ಸಾಧ್ಯ ಎಂದು ಹುರಿದುಂಬಿಸಿದರು.

ಈ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್ ಗೌಡ, ರವಿಶಂಕರ್, ದರ್ಶನ್ ಧ್ರುವನಾರಾಯಣನ್, ಎ.ಎಸ್.ಪೊನ್ನಣ್ಣ, ಡಾ. ಮಂತರ್‌ಗೌಡ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ವಿಧಾನ ಪರಿಷತ್ ಮಾಜಿ ಸದಸ್ಯ ಸಂದೇಶ್ ನಾಗರಾಜ್, ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ. ಬಿ.ಜೆ.ವಿಜಯಕುಮಾರ್, ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಹಾಗೂ ಚಾಮರಾಜನಗರ ಜಿಲ್ಲೆಯ ಶಾಸಕರು ಮತ್ತು ಪಕ್ಷದ ಮುಖಂಡರು ಹಾಜರಿದ್ದರು.

ಕಾಂಗ್ರೆಸ್ ಮುಖಂಡರಿಗೆ ಸಿಎಂ ಕಟ್ಟಾಜ್ಞೆ

ಒಂದೇ ಒಂದು ಹೇಳಿಕೆಯನ್ನು ಕೊಟ್ಟರೂ ಅದನ್ನು ಬಿಜೆಪಿಯವರು ಭಾವನಾತ್ಮಕ ವಿಚಾರವಾಗಿ ಪರಿವರ್ತಿಸುತ್ತಾರೆ. ಅದರಲ್ಲಿ ಬಿಜೆಪಿಯವರು ನಿಸ್ಸೀಮರು. ನಮ್ಮ ಹೇಳಿಕೆಗಳಿಗೆ ಬಣ್ಣ ಕೊಟ್ಟು ವಿವಾದ ಹುಟ್ಟು ಹಾಕುವಲ್ಲಿ ಬಿಜೆಪಿಯವರು ಚಾಣಾಕ್ಷರಾಗಿರುವುದರಿಂದ ಯದುವೀರ್ ಬಗ್ಗೆ ನೀವು ಯಾವುದೇ ಟೀಕೆ ಮಾಡಿದರೂ ಅದು ನಮಗೆ ತಿರುಗುಬಾಣವಾಗುತ್ತದೆ. ಆದ್ದರಿಂದ ನಿಮ್ಮ ಹೇಳಿಕೆಗಳು ಬಿಜೆಪಿಗೆ ಆಹಾರವಾಗದಂತೆ ಎಚ್ಚರ ವಹಿಸಬೇಕು ಎಂದು ಸಿದ್ದರಾಮಯ್ಯ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

ಬೆಳಗಾವಿಯಲ್ಲಿ ಜಗದೀಶ್ ಶೆಟ್ಟರ್ ಸ್ಪರ್ಧೆ

ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರಿಗೆ ಭಾರೀ ವಿರೋಧದ ನಡುವೆಯೂ ಬೆಳಗಾವಿ ಟಿಕೆಟ್ ನೀಡಲಾಗಿದೆ. 6 ಬಾರಿ ಸತತವಾಗಿ ಉತ್ತರ ಕನ್ನಡ ಕ್ಷೇತ್ರದ ಸಂಸದರಾಗಿದ್ದ ಅನಂತಕುಮಾರ್ ಹೆಗಡೆ ಅವರಿಗೆ ಟಿಕೆಟ್ ಕೈತಪ್ಪಿದ್ದು, ಈ ಕ್ಷೇತ್ರದಲ್ಲಿ ಮಾಜಿ ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಯವರಿಗೆ ಟಿಕೆಟ್ ನೀಡಲಾಗಿದೆ. ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಮಾಜಿ ಸಚಿವ ಡಾ. ಕೆ.ಸುಧಾಕರ್ ಅವರಿಗೆ ಮಣೆ ಹಾಕಲಾಗಿದ್ದು, ರಾಯಚೂರು ಕ್ಷೇತ್ರದಲ್ಲಿ ರಾಜ ಅಮರೇಶ್ವರ ನಾಯಕ ಅವರಿಗೆ ಟಿಕೆಟ್ ನೀಡಲಾಗಿದೆ.

ಚಿತ್ರದುರ್ಗ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಕಗ್ಗಂಟಾಗಿ ಪರಿಣಮಿಸಿದೆ. ಈ ಕ್ಷೇತ್ರದಲ್ಲಿ ಮಾಜಿ ಸಚಿವ ಗೋವಿಂದ ಕಾರಜೋಳ ಮತ್ತು ರಘುಚಂದನ್ ನಡುವೆ ಟಿಕೆಟ್‌ಗಾಗಿ ಭಾರೀ ಪೈಪೋಟಿ ಏರ್ಪಟ್ಟಿದೆ. ಗೋವಿಂದ ಕಾರಜೋಳ ಅವರಿಗೆ ಟಿಕೆಟ್ ನೀಡದಂತೆ ಸ್ಥಳೀಯರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ರಾಜ್ಯ ನಾಯಕರೊಂದಿಗೆ ಮತ್ತೊಮ್ಮೆ ಚರ್ಚಿಸಿ ಈ ಕ್ಷೇತ್ರದಲ್ಲಿ ಅಭ್ಯರ್ಥಿ ಘೋಷಿಸಲು ಬಿಜೆಪಿ ಹೈಕಮಾಂಡ್ ನಿರ್ಧರಿಸಿದೆ.

ಮಾಜಿ ಸಿಎಂ ಕುಮಾರಸ್ವಾಮಿ ಡಿಸ್ಚಾರ್ಜ್

ಆಪರೇಷನ್ ಮಾಡುವ ಮೊದಲು ಸಾಯಿಬಾಬ ದರ್ಶನ ಮಾಡಿ, ಪೂಜೆ ಸಲ್ಲಿಸಿದ್ದರು. ಶಸ್ತ್ರ ಚಿಕಿತ್ಸೆ ನಂತರ ನನ್ನೊಂದಿಗೆ ಮಾತನಾಡಿದ ಅವರು, 'ನಿಮ್ಮ ಆಪರೇಷನ್ ಮಾಡಿದ್ದು ನಾನಲ್ಲ, ಸಾಯಿಬಾಬ' ಎಂದರು. ಹಂಗೇರಿಯ ಇನ್ನೊಬ್ಬ ನುರಿತ ವೈದ್ಯರು ಬಂದು ನನ್ನ ಶಸ್ತ್ರ ಚಿಕಿತ್ಸೆ ಮಾಡಿದ್ದಾರೆ. ನನಗೆ ಹೊಸ ಜೀವ ಕೊಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಜನರ ಸೇವೆ ಮಾಡಲು ಭಗವಂತ ನನ್ನನ್ನು ಕಾಪಾಡಿದ್ದಾನೆ. ನನಗೆ ಮೂರನೇ ಬಾರಿ ಹೃದಯ ಶಸ್ತ್ರ ಚಿಕಿತ್ಸೆ ಆಗಿದೆ. ಅಭಿಮಾನಿಗಳು, ಹಿತೈಷಿಗಳ ಪ್ರಾರ್ಥನೆ ಫಲ ಕೊಟ್ಟಿದೆ ಎಂದು ಕುಮಾರಸ್ವಾಮಿ ಹೇಳಿದರು.

ಕೇಂದ್ರದ ಅನುದಾನ ನಿರೀಕ್ಷೆ ಯಾಕೆ?

ಆದರೆ ಅದಕ್ಕೆ ಅಗತ್ಯವಿರುವ ಬಜೆಟ್ ನಮ್ಮಲ್ಲಿ ಲಭ್ಯವಿದೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಅದನ್ನು ಬಿಟ್ಟು ಕೇಂದ್ರದಿಂದ ಏಕೆ ಅನುದಾನ ನಿರೀಕ್ಷಿಸುತ್ತೀರಿ? ಭರವಸೆ ಕೊಟ್ಟಿದ್ದೀರಿ. ಈಗ ಉಳಿಸಿಕೊಳ್ಳಿ. ಕೇಂದ್ರದ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಬೇಡಿ. ಕೇಂದ್ರದಿಂದ ಕರ್ನಾಟಕಕ್ಕೆ ನೀಡಬೇಕಿರುವ ಎಲ್ಲಾ ಅನುದಾನ ನೀಡಲಾಗಿದೆ. ಇದರ ಆಡಿಟ್ ಪ್ರಮಾಣಪತ್ರವನ್ನೂ ಬಿಡುಗಡೆ ಮಾಡಲಾಗುವುದು. ರಾಜ್ಯಗಳ ಅನುದಾನ ಹಂಚಿಕೆ ಸಂಬಂಧ ಹಣಕಾಸು ಆಯೋಗದ ಶಿಫಾರಸಿನ ಕನ್ನಡ ಆವೃತ್ತಿಯನ್ನೂ ಕರ್ನಾಟಕ ಸರ್ಕಾರಕ್ಕೆ ತಲುಪಿಸುತ್ತೇವೆ ಎಂದರು.

ಇದೀಗ ಕರ್ನಾಟಕ ರಾಜ್ಯಕ್ಕೆ ಎನ್‌ಡಿಆರ್‌ಎಫ್ ನಿಧಿಯನ್ನು ಕೇಂದ್ರದಿಂದ ಬಿಡುಗಡೆ ಮಾಡಿಸಬೇಕೆಂದು ಕರ್ನಾಟಕ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗಿದೆ. ಈ ಬಗ್ಗೆ ಹೆಚ್ಚು ಮಾತನಾಡುವುದಿಲ್ಲ. ನ್ಯಾಯಾಲಯದ ಮೊರೆ ಹೋಗುವುದು ಪ್ರತಿಯೊಬ್ಬ ಭಾರತೀಯ ಪ್ರಜೆಯ ಹಕ್ಕು. ಎಲ್ಲ ದಾಖಲೆಗಳನ್ನು ನ್ಯಾಯಾಲಯದ ಮುಂದೆ ಇಡಲಿ. ನ್ಯಾಯಾಲಯವೇ ಯಾವುದು ಸತ್ಯ, ಯಾವುದು ಸುಳ್ಳು ಎಂದು ತೀರ್ಮಾನಿಸಲಿ ಎಂದು ಹೇಳಿದರು. 2014ಕ್ಕಿಂತ ಮುಂಚೆ ದೇಶದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿತ್ತು. ನಂತರದಲ್ಲಿ ಆಡಳಿತಕ್ಕೆ ಬಂದ ಬಿಜೆಪಿ ಬದಲಾವಣೆ ತಂದಿತು. ಗುಜರಾತ್ ಮಾದರಿ ಆಡಳಿತ ದೇಶಕ್ಕೂ ಕಾಲಿಟ್ಟಿತು. 2014-19ರ ಅವಧಿಯಲ್ಲಿ ದೇಶದಲ್ಲಿ ಉಂಟಾದ ಉನ್ನತ ಬದಲಾವಣೆಯಿಂದ ಮತ್ತೊಮ್ಮೆ ನಮಗೇ ಆಶೀರ್ವಾದ ದೊರೆಯಿತು. 2019-2024ರ ಅವಧಿಯಲ್ಲಿ ದೇಶದ ಅರ್ಥ ವ್ಯವಸ್ಥೆಯು ಜಾಗತಿಕವಾಗಿ 10ರಿಂದ 5ನೇ ಸ್ಥಾನಕ್ಕೆ ಏರಿದೆ. ಹಿಂದಿನ ಸರ್ಕಾರಗಳು ಪ್ರಯತ್ನ ಪಟ್ಟಿದ್ದರೆ ಈ ಸಾಧನೆ ಹಿಂದೆಯೇ ಸಾಧ್ಯವಿತ್ತು. ನಮ್ಮ ಪಾರದರ್ಶಕ ಆಡಳಿತದಿಂದ ಇದು ಸಾಧ್ಯವಾಗಿದೆ ಎಂದು ತಿಳಿಸಿದರು.

ದೇಶದಲ್ಲಿ ಆದ ಡಿಜಿಟಲ್ ಕ್ರಾಂತಿ, ಉತ್ಪಾದನೆ ಹಾಗೂ ವಿದೇಶಿ ಹೂಡಿಕೆ ಹೆಚ್ಚಳದಿಂದ ಜಾಗತಿಕವಾಗಿ ಅರ್ಥ ವ್ಯವಸ್ಥೆಯಲ್ಲಿ ಕೆಲವೇ ವರ್ಷದಲ್ಲಿ 5ನೇ ಸ್ಥಾನದಿಂದ 3ನೇ ಸ್ಥಾನಕ್ಕೆ ಏರಲಿದ್ದೇವೆ. 2047ರ ವೇಳೆಗೆ ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿ ಪರಿವರ್ತನೆಯಾಗಲಿದೆ ಎಂದು ಭವಿಷ್ಯ ನುಡಿದರು.

ಬಿಜೆಪಿ ಆಡಳಿತದಲ್ಲಿ ಭ್ರಷ್ಟಾಚಾರವೆಂಬ ಒಂದೂ ಚುಕ್ಕೆ ಸಹ ಇಲ್ಲ. ರೆಫೆಲ್ ಖರೀದಿ ಬಗ್ಗೆ ಆರೋಪಿಸಿದವರಿಗೆ ನ್ಯಾಯಾಲಯವೇ ತಕ್ಕ ಉತ್ತರ ನೀಡಿತ್ತು. ಈಗ ಕೆಲವರು ಚುನಾವಣಾ ಬಾಂಡ್ ಬಗ್ಗೆ ಮಾತನಾಡುತ್ತಿದ್ದಾರೆ. ಈ ಹಣ ಎಲ್ಲಾ ರಾಜಕೀಯ ಪಕ್ಷಗಳಿಗೂ ತಲುಪಿದೆ ಅಷ್ಟೇ. ವಿನಾಕಾರಣ ಮೋದಿಯವರ ಹೆಸರಿಗೆ ಕಪ್ಪು ಮಸಿ ಬಳಿಯುವ ಪ್ರಯತ್ನ ಫಲಿಸದು ಎಂದರು. ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಬಂಧನದ ಬಗ್ಗೆ ಪ್ರಸ್ತಾಪಿಸಿದ ಅವರು, ದಾಖಲೆ, ತನಿಖೆ ಇಲ್ಲದೇ ಯಾರನ್ನೂ ಬಂಧಿಸಲು ಸಾಧ್ಯವಿಲ್ಲ. ಸಾಕಷ್ಟು ಸಮನ್ಸ್ ನೀಡಿಯೇ ಬಂಧನ ಆಗಿದೆ. ಇದಕ್ಕೆ ನ್ಯಾಯಾಲಯದ ಸೂಚನೆಯೂ ಇತ್ತು. ಈ ವಿಷಯದಲ್ಲಿ ರಾಜಕೀಯ ಮಾಡುವುದು ಸರಿಯಲ್ಲ ಎಂದು ಹೇಳಿದರು. ಬಳಿಕ ವಿತ್ತ ಸಚಿವರು ಸಭಿಕರೊಂದಿಗೆ ಸಂವಾದ ನಡೆಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನ ಪರಿಷತ್ ಮಾಜಿ ಸದಸ್ಯರಾದ ಗೋ.ಮಧುಸೂದನ್, ತೋಂಟದಾರ್ಯ ಸೇರಿದಂತೆ ವಿವಿಧ ಕ್ಷೇತ್ರಗಳ ಪರಿಣಿತರು, ವಿದ್ಯಾರ್ಥಿಗಳು ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಮೈಸೂರಲ್ಲಿ ಸಂಭ್ರಮದ ಹೋಳಿ ಆಚರಣೆ

ಮೈಸೂರು, ಮಾ.24(ಎಸ್‌ಬಿಡಿ)- ಮೈಸೂರಲ್ಲಿ ಹೋಳಿ ಹಬ್ಬದ ಸಂಭ್ರಮ-ಸಡಗರ ಜೋರಾಗಿದೆ. ಪೌರಾಣಿಕ ಹಿನ್ನೆಲೆಯುಳ್ಳ ಹಿಂದೂಗಳ ಪ್ರಮುಖ ಹಬ್ಬಗಳಲ್ಲಿ ಒಂದಾದ ಹೋಳಿ ಹುಣ್ಣಿಮೆಯನ್ನು ಎರಡು ದಿನ ಆಚರಿಸಲಾಗುತ್ತದೆ. ಹಾಗೆಯೇ ಭಾನುವಾರ ಮೈಸೂರಿನಲ್ಲೂ ಚೋಟಿ ಹೋಳಿ ಜೋರಾಗಿತ್ತು. ಎಲ್ಲಾ ವಯೋಮಾನದವರೂ ಪರಸ್ಪರ ಬಣ್ಣ ಹಚ್ಚಿ ಹಬ್ಬದ ಶುಭಾಶಯ ಕೋರಿದರು. ಯುವ ಸಮುದಾಯ ಬಣ್ಣದಲ್ಲೇ ಮಿಂದೆದ್ದಿತು. ಅದರಲ್ಲೂ ಇಲ್ಲಿ ನೆಲೆಸಿರುವ ಉತ್ತರ ಭಾರತದವರು ಕುಟುಂಬ ಸದಸ್ಯರು ಹಾಗೂ ಬಂಧು-ಮಿತ್ರರೊಂದಿಗೆ ಹೋಳಿಯನ್ನು ಸಂಭ್ರಮಿಸಿದರು. ರಜಾ ದಿನವಾದರೂ ವಿದ್ಯಾರ್ಥಿಗಳು ತಮ್ಮ ಕಾಲೇಜು ಆವರಣದಲ್ಲಿ ಒಟ್ಟುಗೂಡಿ ಬಣ್ಣದೋಕುಳಿ ಆಡಿದರು. ಸಂಜೆ ಕೆಡುಕಿನ ವಿರುದ್ಧ ಒಳಿತಿನ ವಿಜಯದ ಸಂಕೇತವಾಗಿ ಕಟ್ಟಿಗೆಗಳ ರಾಶಿಯನ್ನು ದಹಿಸಿ 'ಹೋಲಿಕಾ ದಹನ' ಪೂಜೆಯನ್ನು ನೆರವೇರಿಸಿದರು.



ಮೈಸೂರಿನ ಮಹಾಜನ ಶಿಕ್ಷಣ ಸಂಸ್ಥೆ ಮೈದಾನದಲ್ಲಿ ಭಾನುವಾರ ವಿದ್ಯಾರ್ಥಿಗಳು ಹೋಳಿಯಲ್ಲಿ ಮಿಂದೆದ್ದರು.

ಸೋಮವಾರ ಬಡೀ ಹೋಳಿ ಅಥವಾ ರಂಗ್ ವಾಲಿ ಹೋಳಿಯನ್ನು ಮತ್ತಷ್ಟು ಸಡಗರದಿಂದ ಸಂಭ್ರಮಿಸಲಾಗುತ್ತದೆ. ಬೆಳಿಗ್ಗೆ, ಜನರು ತೆರೆದ ಸ್ಥಳಗಳು, ಉದ್ಯಾನವನಗಳು ಮತ್ತು ಬೀದಿಗಳಲ್ಲಿ ಸ್ನೇಹಿತರು, ಪ್ರೀತಿ ಪಾತ್ರರನ್ನು ಭೇಟಿ ಮಾಡಿ ಪರಸ್ಪರ ಬಣ್ಣವನ್ನು ಎರಚಿಕೊಳ್ಳುತ್ತಾರೆ. ತಮ್ಮ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಒಂದೆಡೆ ಸೇರಿ ಬಣ್ಣಗಳೊಂದಿಗೆ ಸಂಭ್ರಮಿಸುತ್ತಾರೆ. ಎಲ್ಲರೂ ಒಂದೆಡೆ ಸೇರಿ ವಿಶೇಷ ಖಾದ್ಯಗಳನ್ನು ಸವಿದು ಸಂತೋಷದಿಂದ ಕಾಲ ಕಳೆಯುತ್ತಾರೆ. ಎಲ್ಲರೂ ಒಟ್ಟಾಗಿ ಹೋಳಿ ಹಬ್ಬ ಆಚರಿಸುವುದರಿಂದ ಸಾಮಾಜಿಕ ಅಡತಡೆ ದೂರಾಗಿ, ಪರಸ್ಪರ ಪ್ರೀತಿ-ವಿಶ್ವಾಸ ಗಟ್ಟಿಯಾಗುತ್ತದೆ ಎಂಬ ಮನೋವಿಜ್ಞಾನ ನೆಲೆಗಟ್ಟಿನ ವಿಶ್ಲೇಷಣೆಯೂ ಇದೆ.

ವಿಪ್ರ ಮಹಿಳಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು,ಮಾ.24-ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಹಾಗೂ ವಿಪ್ರ ಸಹಾಯವಾಣಿ ವತಿಯಿಂದ 2023-24ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಶೇಷ ಸಾಧನೆ ಮಾಡಿದ ವಿಪ್ರ ಮಹಿಳೆಯರಿಗೆ ವಿಪ್ರ ಮಹಿಳಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಶಿಕ್ಷಣ, ಕಲೆ, ಸಂಗೀತ, ಕ್ರೀಡೆ ಸಾಂಸ್ಕೃತಿಕ, ಬಹುಮುಖ ಪ್ರತಿಭೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತು ಸಂಶೋಧನೆ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿ ಈಗಾಗಲೇ ಪ್ರಶಸ್ತಿ ಪಡೆದವರು ಅರ್ಜಿ ಸಲ್ಲಿಸಬಹುದು. ಅರ್ಹರು ಪ್ರಶಸ್ತಿಗಾಗಿ ತಮ್ಮ ಸ್ವಯಂ ದೃಢೀಕೃತ ನಕಲು ದಾಖಲೆಗಳು ಹಾಗೂ ಸ್ವವಿವರದೊಂದಿಗೆ ಮಾರ್ಚ್ 26ರೊಳಗೆ 9880752727/ 78290 67769 ವಾಟ್ಸಾಪ್ ಮೂಲಕ ಅರ್ಜಿ ಸಲ್ಲಿಸಬೇಕು. ಈಗಾಗಲೇ ಪ್ರಶಸ್ತಿ ಪಡೆದವರು ಅರ್ಜಿ ಸಲ್ಲಿಸುವಂತಿಲ್ಲ ಎಂದು ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಲೆಮನೆ ಕಲಾಶ್ರೀ ಪ್ರಶಸ್ತಿ ಪ್ರದಾನ



ಮೈಸೂರಿನ ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರದಲ್ಲಿ ನಡೆದ 36ನೇ ಅಂತಾರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವ ಹಾಗೂ ಅಂತಾರಾಷ್ಟ್ರೀಯ ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಪ್ರಾಧ್ಯಾಪಕಿ ಡಾ.ಪ್ರತಿಭಾ ಪೆರೇರ, ಸಮಾಜ ಸೇವಕಿ ಹಾಗೂ ಲೇಖಕಿ ಸಿ.ಎಸ್.ಮಂಗಳಮ್ಮ ಹಾಗೂ ಸಾಹಿತಿ ಬಿ.ಆರ್.ನಾಗರತ್ನ ಅವರಿಗೆ 'ಕಲೆಮನೆ ಕಲಾಶ್ರೀ ಪ್ರಶಸ್ತಿ' ನೀಡಿ ಗೌರವಿಸಲಾಯಿತು.

ಮೈಸೂರು, ಮಾ.24(ಎಸ್‌ಬಿಡಿ)- ಮೈಸೂರಿನ ನೃತ್ಯ-ಸಂಗೀತ ಸಂಸ್ಥೆ ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರದಲ್ಲಿ 36ನೇ ಅಂತಾರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವದ ಜೊತೆಗೆ ವಿಶ್ವ ಮಹಿಳಾ ದಿನಾಚರಣೆಯನ್ನು ಭಾನುವಾರ ಹಮ್ಮಿಕೊಳ್ಳಲಾಗಿತ್ತು.

ಕೇಂದ್ರದ ಕಲೆಮನೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಮಾಜ ಸೇವಕಿ, ಲೇಖಕಿ ಸಿ.ಎಸ್.ಮಂಗಳಮ್ಮ, ಜೆಎಸ್‌ಎಸ್ ಉನ್ನತ ಶಿಕ್ಷಣ ಅಕಾಡೆಮಿಯ ಪ್ರಾಧ್ಯಾಪಕಿ ಡಾ.ಪ್ರತಿಭಾ ಪೆರೇರ ಹಾಗೂ ಸಾಹಿತಿ ಬಿ.ಆರ್.ನಾಗರತ್ನ ಅವರಿಗೆ 'ಕಲೆಮನೆ ಕಲಾಶ್ರೀ ಪ್ರಶಸ್ತಿ' ನೀಡಿ, ಅಭಿನಂದಿಸಲಾಯಿತು. ಈ ವೇಳೆ ನಾದವಪುಷ ಸಂಗೀತ ಶಾಲೆಯ ವಿದುಷಿ ಧರಿತ್ರಿ ಆನಂದರಾವ್ ಹಾಗೂ ಶಿಷ್ಯರು ಹಳೆಯ ಚಲನಚಿತ್ರಗಳಲ್ಲಿನ ಭಕ್ತಿಗೀತೆಗಳನ್ನು ಸುಶ್ರಾವ್ಯವಾಗಿ ಹಾಡಿದರು. ನೃತ್ಯಗಿರಿ ನೃತ್ಯ ಸಂಸ್ಥೆಯ ಡಾ.ಕೃಪಾ ಫಡ್ಕೆ ಮತ್ತು ವಿದುಷಿ ಪೂಜಾ ಸುಗಮ್ ಭರತನಾಟ್ಯ ಪ್ರದರ್ಶಿಸಿದರು. ಅತುಲ್ಯ ಸ್ಕೂಲ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್‌ನ ವಿದುಷಿ ಬನೀತಾ ನಾಗ್ ಶಿಷ್ಯರೊಂದಿಗೆ ಕಥಕ್ ನೃತ್ಯ ಪ್ರಸ್ತುತಪಡಿಸಿದರು. ಕಲಾಸ್ನೇಹಿ ಮತ್ತು ನರ್ತನ ಯೋಗ ಪರ್ಫಾರ್ಮಿಂಗ್ ಆರ್ಟ್ಸ್‌ನ ವಿದ್ವಾನ್ ಶ್ರೀ ಯೋಗೇಶ್‌ಕುಮಾರ್ ಮತ್ತು ವಿದುಷಿ ಸ್ನೇಹಾ ನಾರಾಯಣ್, ಶ್ರೀ ಗಣೇಶ ಸಂಗೀತ ನೃತ್ಯಾಲಯ ಟ್ರಸ್ಟ್‌ನ ವಿದುಷಿ ಆರತಿ ಅರುಣ್ ಶಿಷ್ಯರು ಪ್ರತ್ಯೇಕವಾಗಿ ಪ್ರಸ್ತುತಪಡಿಸಿದ ಭರತನಾಟ್ಯ ಕಲಾಭಿಮಾನಿಗಳ ಮನಸೂರೆಗೊಂಡಿತು. ಕಾರ್ಯಕ್ರಮದಲ್ಲಿ ಮೈಸೂರು ಆರ್ಟ್ಸ್ ಗ್ಯಾಲರಿಯ ಕಾರ್ಯದರ್ಶಿ, ನೃತ್ಯಗುರು ಡಾ.ಜಮುನಾರಾಣಿ ವಿ.ಮಿರ್ಲೆ, ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಎಂ.ಎಸ್.ಲತಾ ಮೋಹನ್, ಸಂಗೀತ ನಿರ್ದೇಶಕ ಡಾ.ಎಲ್.ಆರ್. ರಾಮನು ಜನ್, ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರದ ಸಂಸ್ಥಾಪಕ ನಿರ್ದೇಶಕ ಡಾ.ಕೆ.ಕುಮಾರ್, ಡಾ.ಮಾಲತಿ ಮತ್ತಿತರರು ಉಪಸ್ಥಿತರಿದ್ದರು.

ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹಿಸಿ ನಾಳೆ ಚೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರ ಕಚೇರಿಗೆ ಮುತ್ತಿಗೆ

ಮೈಸೂರು, ಮಾ.24(ಜಿಎ)- ಸಮರ್ಪಕ ವಿದ್ಯುತ್ ಪೂರೈಕೆ ಹಾಗೂ ಅಕ್ರಮ ಸಕ್ರಮ ಯೋಜನೆ ಮರುಜಾರಿಗೆ ಒತ್ತಾಯಿಸಿ ಮಾ.26ರ ಬೆಳಗ್ಗೆ 11.30ಕ್ಕೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಆಶ್ರಯ ದಲ್ಲಿ ರೈತರು ನಗರದ ಹಿನಕಲ್‌ನಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ವ್ಯವಸ್ಥಾಪಕ ನಿರ್ದೇಶಕರ ಕಚೇರಿಗೆ ಮುತ್ತಿಗೆ ಹಾಕಿ ಬೃಹತ್ ಪ್ರತಿಭಟನೆ ನಡೆಸಲಿದ್ದಾರೆ ಎಂದು ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಪಂಪ್‌ಸೆಟ್‌ಗಳಿಗೆ 10 ಗಂಟೆಗಳ ವಿದ್ಯುತ್ ಪೂರೈಕೆ ಮಾಡ ಬೇಕೆಂಬುದೂ ಸೇರಿದಂತೆ ಹಗಲು ವೇಳೆ ಸರ್ಕಾರದ ಆದೇಶದಂತೆ ಸಮರ್ಪಕ ವಿದ್ಯುತ್ ನೀಡುವಲ್ಲಿ ವಿಳಂಬ ನೀತಿ ಅನುಸರಿಸಲಾಗುತ್ತಿದೆ. ರೈತರಿಗೆ ಸೋಲಾರ್ ಪಂಪ್‌ಸೆಟ್ ಅನ್ನು ವೈಯಕ್ತಿಕವಾಗಿ ಅಳವಡಿಸಿಕೊಳ್ಳಲು ಇಲಾಖೆ ಪ್ರೇರೇಪಿಸುತ್ತಿರುವುದು ಸರಿಯಲ್ಲ. ಕಳೆದ ಸಾಲಿನಲ್ಲಿ ಇದ್ದಂತೆ ಅಕ್ರಮ ಸಕ್ರಮವನ್ನು ಜಾರಿ ಮಾಡಬೇಕು ಎಂದರು.

ಟಿಸಿಗಳು ಸುಟ್ಟು ಹೋದರೆ 72 ಗಂಟೆಯಲ್ಲಿ ಆಗಬೇಕೆಂಬ ನಿಯಮವಿದ್ದರೂ ಇಲಾಖೆ ಕೆಳ ಹಂತದ ಅಧಿಕಾರಿಗಳು ತೀವ್ರ ವಿಳಂಬ ಮಾಡುತ್ತಿದ್ದಾರೆ. ಹೀಗಾಗಿ ಈ ಎಲ್ಲ ಅವ್ಯವಸ್ಥೆ ವಿರುದ್ಧ ಈ ಪ್ರತಿಭಟನೆ ನಡೆಯುತ್ತಿದೆ. ಒಂದು ವೇಳೆ ಅಧಿಕಾರಿಗಳು ಸ್ಪಂದಿಸದಿದ್ದರೆ ಹೋರಾಟ ಮುಂದುವರಿಯಲಿದೆ ಎಂದು ಎಚ್ಚರಿಸಿದರು. ಸುದ್ದಿಗೋಷ್ಠಿಯಲ್ಲಿ ರಾಜ್ಯ ಉಪಾಧ್ಯಕ್ಷ ತಿಮ್ಮಪ್ಪ, ಮೈಸೂರು ಜಿಲ್ಲಾ ಗೌರವಾಧ್ಯಕ್ಷ ಶಿವರುದ್ರಪ್ಪ, ಜಿಲ್ಲಾಧ್ಯಕ್ಷ ರವಿ, ಸಂಘಟನಾ ಕಾರ್ಯದರ್ಶಿ ಮಹೇಶ, ಚಾಮರಾಜನಗರ ತಾಲೂಕು ಅಧ್ಯಕ್ಷ ಕುಮಾರ್, ಟಿ.ನರಸೀಪುರ ತಾಲೂಕು ಅಧ್ಯಕ್ಷ ಜಯಸ್ವಾಮಿ ಇದ್ದರು.

ಏ.10ರಿಂದ ರಾಜ್ಯಮಟ್ಟದ ಭಜನಾ ಸ್ಪರ್ಧೆ

ಮೈಸೂರು, ಮಾ.24(ಜಿಎ)-ಜಗದ್ಗುರು ಶ್ರೀ ಸಿದ್ಧಾರೂಢ ಮಹಾಸ್ವಾಮಿ ಅವರ ಜಯಂತ್ಯುತ್ಸವದ ಅಂಗವಾಗಿ 8ನೇ ವರ್ಷದ ರಾಜ್ಯ ಮಟ್ಟದ ಭಜನಾ ಸ್ಪರ್ಧೆಯನ್ನು ಹುಬ್ಬಳ್ಳಿಯ ಮಠದಲ್ಲಿ ಏ.10ರಿಂದ 15ರವರೆಗೆ ಏರ್ಪಡಿಸಲಾಗಿದೆ ಎಂದು ಜಯಂತ್ಯುತ್ಸವದ ಭಜನಾ ಸಮಿತಿ ಅಧ್ಯಕ್ಷ ಶಾಮಾನಂದ ಬಿ.ಪೂಜಾರಿ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಏ.10ರ ಬೆಳಗ್ಗೆ 9 ಗಂಟೆಗೆ ಸ್ಪರ್ಧೆ ಆರಂಭವಾಗಲಿದ್ದು, ಪ್ರಥಮ ಬಹುಮಾನವಾಗಿ 1 ಲಕ್ಷ, ದ್ವಿತೀಯ ಬಹುಮಾನವಾಗಿ 80 ಸಾವಿರ, ತೃತೀಯ ಬಹುಮಾನವಾಗಿ 70 ಸಾವಿರ, ಸಮಾಧಾನಕರ ಬಹುಮಾನವಾಗಿ 9 ಸಾವಿರ ರೂ. ನೀಡಲಾಗುವುದು. 16 ವರ್ಷದ ಒಳಗಿನ ಬಾಲಕ, ಬಾಲಕಿಯರ ತಂಡಗಳಿಗೆ ಪ್ರತಿಭಾ ಪುರಸ್ಕಾರವಾಗಿ 10 ಸಾವಿರ, ಮಹಿಳಾ ಭಜನಾ ತಂಡಕ್ಕೆ 10 ಸಾವಿರ ಪುರಸ್ಕಾರ ನೀಡಲಾಗುವುದು. ಇದೇ ರೀತಿ ವೈಯಕ್ತಿಕ ಬಹುಮಾನಗಳೂ ಇವೆ ಹೆಸರು ನೋಂದಾಯಿಸಿಕೊಳ್ಳಲು ಏ.9 ಅಂತಿಮ ದಿನ. ಮಾಹಿತಿಗೆ ದೂ. 98801 69881 ಸಂಪರ್ಕಿಸಬಹುದಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಶಿವಾನಂದ ಸ್ವಾಮೀಜಿ, ಆತ್ಮಾನಂದ ಸ್ವಾಮೀಜಿ, ಬಸವರಾಜ ಸಿ.ಕಲ್ಯಾಣ ಶೆಟ್ಟರ ಉಪಸ್ಥಿತರಿದ್ದರು.

ಏ.3ರಿಂದ ಬೇಸಿಗೆ ಚಿತ್ರಕಲಾ ಶಿಬಿರ

ಮೈಸೂರು, ಮಾ. 24- ಜೆಎಸ್‌ಎಸ್ ಮಹಾವಿದ್ಯಾಪೀಠದ ವತಿಯಿಂದ ಈ ವರ್ಷವೂ ಚಿತ್ರಕಲಾ ಶಿಬಿರವು ಏಪ್ರಿಲ್ 3ರಿಂದ 22ರವರೆಗೆ ಮೈಸೂರಿನ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತದಲ್ಲಿರುವ ಜೆಎಸ್‌ಎಸ್ ಬಾಲಜಗತ್ ಶಾಲಾ ಆವರಣದಲ್ಲಿ ನಡೆಯಲಿದೆ.

ಶಿಬಿರವು ಮೂರು ವಿಭಾಗಗಳಲ್ಲಿ ನಡೆಯಲಿದ್ದು, 1ರಿಂದ 4ನೇ ತರಗತಿ, 5ರಿಂದ 7ನೇ ತರಗತಿ, 8ರ ನಂತರದ ತರಗತಿಗಳ ಮಕ್ಕಳು ಹಾಗೂ ಹಿಂದೆ ಶಿಬಿರದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ನುರಿತ ಕಲಾವಿದರಿಂದ ವಿಶೇಷ ತರಬೇತಿ ನೀಡಲಾಗುವುದು. ಶಿಬಿರದ ಅವಧಿ ಬೆಳಗ್ಗೆ 9 ರಿಂದ ಮಧ್ಯಾಹ್ನ 1ರವರೆಗೆ. ಶಿಬಿರದಲ್ಲಿ ನಿಸರ್ಗ ಚಿತ್ರ ಬಿಡಿಸುವ ಸಲುವಾಗಿ ಒಂದು ದಿನದ ಪ್ರವಾಸವನ್ನು ಏರ್ಪಡಿಸಲಾಗುವುದು. ಶಿಬಿರದ ಕೊನೆಯಲ್ಲಿ ಪ್ರದರ್ಶನ ನಡೆಸಿ ಉತ್ತಮ ಚಿತ್ರಗಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರವನ್ನು ನೀಡಲಾಗುವುದು. ಅರ್ಜಿಗಳನ್ನು ಮಾ.20ರಿಂದ ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಏ.2. ಹೆಚ್ಚಿನ ವಿವರಗಳಿಗೆ ಜೆಎಸ್‌ಎಸ್ ಬಾಲಜಗತ್ ಶಾಲೆಯ ಮುಖ್ಯೋಪಾಧ್ಯಾಯಿನಿಯವರು (ದೂರವಾಣಿ: 2441370/9686677503) ಮತ್ತು ಸಂಚಾಲಕ ಎಸ್.ಎಂ. ಜಂಬುಕೇಶ್ವರ (98866 23490) ಅಥವಾ ಚಿತ್ರಕಲಾ ಶಿಕ್ಷಕ ಸಲಬಣ್ಣನವರ್ (8095 440122) ಸಂಪರ್ಕಿಸಲು ಕೋರಿದೆ.

ಎಸ್ಸಿ, ಎಸ್ಟಿಗೆ ಮೀಸಲಿಟ್ಟ ಅನುದಾನ ಗ್ಯಾರಂಟಿ ಯೋಜನೆಗಳಿಗೆ ಬಳಕೆ

ರಾಜ್ಯ ಬಿಜೆಪಿ ಉಪಾಧ್ಯಕ್ಷ ಎನ್.ಮಹೇಶ್ ಆರೋಪ

ಮೈಸೂರು, ಮಾ.24(ಎಂಟಿವೈ)- ಎಸ್ಸಿ, ಎಸ್ಟಿ ಸಮುದಾಯದ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ದುರ್ಬಳಕೆ ಮಾಡಿರುವ ಕಾಂಗ್ರೆಸ್ ಅಭ್ಯರ್ಥಿಗಳನ್ನು ಲೋಕಸಭಾ ಚುನಾವಣೆಯಲ್ಲಿ ಸೋಲಿಸಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಮಾಜಿ ಸಚಿವ ಎನ್.ಮಹೇಶ್ ಮನವಿ ಮಾಡಿದ್ದಾರೆ.

ಬಿಜೆಪಿ ಎಸ್ಟಿ ಮೋರ್ಚಾ ವತಿಯಿಂದ ಆಯೋಜಿಸಲಾಗಿದ್ದ ಪರಿಶಿಷ್ಟ ಪಂಗಡದ ಮುನ್ನಡೆ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಭಾರತಕ್ಕೆ ಮಾತ್ರವಲ್ಲ ಇಡೀ ವಿಶ್ವಕ್ಕೆ ರಾಮಾಯಣ, ಮಹಾಭಾರತದಂತಹ ಸರ್ವಶ್ರೇಷ್ಠವಾದ ಗ್ರಂಥಗಳನ್ನು ನೀಡಿದ್ದು ಮಹರ್ಷಿಗಳಾದ ವ್ಯಾಸರು ಹಾಗೂ ವಾಲ್ಮೀಕಿಯವರು. ಈ ಗ್ರಂಥಗಳ ರಚನೆಯ ಮೂಲಕ ಭಾರತದ ಸಾಮಾಜಿಕ, ಸಾಂಸ್ಕೃತಿಕ, ಆರ್ಥಿಕ, ರಾಜಕೀಯ, ಆಧ್ಯಾತ್ಮಿಕ ಪರಂಪರೆಯನ್ನು ರಚನೆ ಮಾಡಿದವರು. ಪರಿಶಿಷ್ಟ ಪಂಗಡಕ್ಕೆ ಸೇರಿದ ಈ ಇಬ್ಬರೂ ಮಹರ್ಷಿಗಳು ಗ್ರಂಥಗಳ ರಚನೆಯ ಮೂಲಕ ಭಾರತದ ಬೆಳವಣಿಗೆಗೆ ಅಡಿಪಾಯ ಹಾಕಿದರು. ಆ ಅಡಿಪಾಯದ ಮೇಲೆ ಎಲ್ಲಾ ವರ್ಗದ ಜನರನ್ನು ಪರಿಶಿಷ್ಟಪಂಗಡದ ಜನರು ಕರೆದುಕೊಂಡು ಹೋಗುತ್ತಿದ್ದಾರೆ ಎಂದು ಹೇಳಿದರು.



ಮೈಸೂರಿನ ಕಲ್ಯಾಣ ಮಂಟಪವೊಂದರಲ್ಲಿ ನಡೆದ ಬಿಜೆಪಿ ಎಸ್‌ಟಿ ಮೋರ್ಚಾ ಆಯೋಜಿಸಿದ್ದ ಪರಿಶಿಷ್ಟ ಪಂಗಡದ ಮುನ್ನಡೆ ಸಮಾವೇಶವನ್ನು ರಾಜ್ಯ ಬಿಜೆಪಿ ಲೋಕಸಭಾ ಚುನಾವಣಾ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರ್‌ವಾಲ್ ಉದ್ಘಾಟಿಸಿದರು.

ಮೈಸೂರು-ಕೊಡಗು ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ನಾಯಕ ಸಮುದಾಯದವರ ಮತಗಳೇ ನಿರ್ಣಾಯಕ. ಚಾಮರಾಜನಗರ ಕ್ಷೇತ್ರದಲ್ಲಿ ಎರಡೂವರೆ ಲಕ್ಷ, ಮೈಸೂರು ಕ್ಷೇತ್ರದಲ್ಲಿ 2 ಲಕ್ಷಕ್ಕೂ ಹೆಚ್ಚು ಮಂದಿ ನಾಯಕ ಸಮುದಾಯದ ಮತದಾರರಿದ್ದಾರೆ. ಈ ಎರಡು ಕ್ಷೇತ್ರಗಳಲ್ಲೂ ಈ ಸಮುದಾಯದ ಜನರು ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು. ಎಸ್ಸಿ, ಎಸ್ಟಿ ಸಮುದಾಯಗಳಿಗೆ ಮಂಕುಬೂದಿ ಎರಚಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್, ಎಸ್ಸಿ-ಎಸ್ಟಿ ಸಮುದಾಯಕ್ಕೆ ಮೀಸಲಾಗಿದ್ದ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡುತ್ತಿದೆ. ಹಾಗಾಗಿ ಈ ಎರಡು ಸಮುದಾಯದವರು ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಸೋಲಿಸುವ ಸಂಕಲ್ಪ ಮಾಡಬೇಕು ಎಂದು ಮನವಿ ಮಾಡಿದರು.

ಸಮಾವೇಶವನ್ನು ಬಿಜೆಪಿಯ ರಾಜ್ಯ ಚುನಾವಣಾ ಉಸ್ತುವಾರಿ ರಾಧಾ ಮೋಹನ್‌ದಾಸ್ ಅಗರ್ವಾಲ್ ಉದ್ಘಾಟಿಸಿದರು. ಮೈಸೂರು ನಗರ ಎಸ್ಸಿ ಮೋರ್ಚಾದ ಅಧ್ಯಕ್ಷ ಪಡುವಾರಹಳ್ಳಿ ರಾಮಕೃಷ್ಣ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎಸ್.ಎ.ರಾಮದಾಸ್, ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ಅಭ್ಯರ್ಥಿಗಳಾದ ಯದುವೀರ್, ಎಸ್.ಬಾಲರಾಜ್, ಸಂಸದ ಪ್ರತಾಪ್‌ಸಿಂಹ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎಂ.ರಾಜೇಂದ್ರ, ಸಿದ್ದರಾಜು, ಒಬಿಸಿ ಮೋರ್ಚಾದ ರಾಜ್ಯಾಧ್ಯಕ್ಷ ಆರ್. ರಘು ಕೌಟಿಲ್ಯ, ಎಸ್ಸಿ ಮೋರ್ಚಾದ ರಾಜ್ಯಾಧ್ಯಕ್ಷ ಬಂಗಾರ ಹನುಮಂತು, ಮೈಸೂರು ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮಾಜಿ ಮೇಯರ್ ಶಿವಕುಮಾರ್, ಚಾಮರಾಜನಗರ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಆರ್.ಸುಂದರ್, ಜಿಲ್ಲಾ ಉಪಾಧ್ಯಕ್ಷ ಮಲ್ಲೇಶ್ ನಾಯಕ, ಕೇಂದ್ರ ಪರಿಹಾರ ಸಮಿತಿಯ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಮೈಸೂರು ಎಸ್ಟಿ ಮೋರ್ಚಾದ ಗ್ರಾಮಾಂತರ ಜಿಲ್ಲಾಧ್ಯಕ್ಷ ಮುದ್ದುಕೃಷ್ಣ, ಕೆ.ಆರ್.ಕ್ಷೇತ್ರದ ಅಧ್ಯಕ್ಷ ಗೋಪಾಲರಾಜೇ ಅರಸ್, ನಗರ ಪ್ರಧಾನ ಕಾರ್ಯದರ್ಶಿ ಹೆಚ್.ಜಿ.ಗಿರಿಧರ್, ಮಹಿಳಾ ಮೋರ್ಚಾದ ಅಧ್ಯಕ್ಷೆ ಮಂಜುಳಾ, ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಜೈಸುಂದರ್ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಪಿಂಜರಾಪೋಲ್‌ಗೆ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಭೇಟಿ ನೀಡಿ ಗೋಪೂಜೆ ನೆರವೇರಿಸಿ, ಗೋವುಗಳಿಗೆ ವಿಶೇಷ ಆಹಾರ ವಿತರಿಸಿದರು.



ಪಿಂಜರಾಪೋಲ್‌ನಲ್ಲಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಹುಟ್ಟುಹಬ್ಬದ ಅಂಗವಾಗಿ ಬೆಲ್ಲದೊಂದಿಗೆ ತುಲಾಭಾರ ನೆರವೇರಿಸಲಾಯಿತು.



ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಚುನಾವಣಾ ಕಚೇರಿಯನ್ನು ಮೈಸೂರಿನ ಕುವೆಂಪುನಗರದ ಜೋಡಿ ಬಸವೇಶ್ವರ ರಸ್ತೆಯಲ್ಲಿ ಸಾಂಪ್ರದಾಯಿಕ ಪೂಜೆ ನೆರವೇರಿಸಿ ತೆರೆಯಲಾಯಿತು. ಬಿಜೆಪಿ ಮುಖಂಡರೊಂದಿಗೆ ಮಾಜಿ ಶಾಸಕ ಸಾ.ರಾ.ಮಹೇಶ್ ಅವರು ಯದುವೀರ್ ಅವರಿಗೆ ಹೂಗುಚ್ಛ ನೀಡಿ ಶುಭ ಕೋರಿದರು.

ಮೋದಿ ಕೈ ಬಲಪಡಿಸಲು ನನಗೊಂದು ಅವಕಾಶ ನೀಡಿ

ಚಾ.ನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಮನವಿ



ನಂಜನಗೂಡಿನಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯನ್ನು ಪಕ್ಷದ ಮುಖಂಡರು ಉದ್ಘಾಟಿಸಿದರು.

ಶಾಸಕ ದರ್ಶನ್ ಕೊಡುಗೆ ಶೂನ್ಯ

ನಾನು ಶಾಸಕನಾದ 100 ದಿನದೊಳಗೆ ನುಗು ಏತ ನಿರಾವರಿ ಯೋಜನೆ ಜಾರಿಗೊಳಿಸಿದ್ದೆ. ಶಾಸಕ ದರ್ಶನ್ ಗೆದ್ದು 10 ತಿಂಗಳಾದರೂ ಕ್ಷೇತ್ರದ ಅಭಿವೃದ್ಧಿಗೆ ಯಾವುದೇ ಕೊಡುಗೆ ನೀಡಿಲ್ಲ. ನಾನು ಮಾಡಿದ ಭೂಮಿಪೂಜೆಯನ್ನೇ ಮತ್ತೆ ಮಾಡಿದ್ದೇ ಅವರ ದೊಡ್ಡ ಸಾಧನೆ. ಜೊತೆಗೆ ರಾಹುಲ್ ಗಾಂಧಿಯಂತಹ ದಡ್ಡರ ಕೈಯಲ್ಲಿ ದೇಶ ಕೊಟ್ಟಲ್ಲಿ ದೇಶವನ್ನೇ ಮಾರಿಕೊಳ್ಳುತ್ತಾರೆ. ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ಹೆಚ್ಚಿನ ಬಹುಮತ ಬಂದಲ್ಲಿ ಸಿದ್ದರಾಮಯ್ಯ ಸರ್ಕಾರ ಕೂಡ ಪತನಗೊಳ್ಳಲಿದೆ. ಈ ಚುನಾವಣೆಯಲ್ಲಿ ಶ್ರೀನಿವಾಸ ಪ್ರಸಾದರ ಅನುಪಸ್ಥಿತಿಯೂ ಕಾಡುತ್ತಿದೆ. ಅವರ ಸ್ಥಾನ ತುಂಬುವ ಜವಾಬ್ದಾರಿಯನ್ನು ನಾನು ಹೊರುತ್ತೇನೆ. ಈ ಹಿನ್ನೆಲೆಯಲ್ಲಿ ಲೋಕಸಭಾ ಚುನಾವಣೆ ನಂಜನಗೂಡು ಕ್ಷೇತ್ರಕ್ಕೆ ಪ್ರತಿಷ್ಠೆಯ ಚುನಾವಣೆಯಾಗಿದ್ದು, ಪ್ರತಿಯೊಬ್ಬರೂ ತಮ್ಮ ಬೂತ್‌ಗಳಲ್ಲಿ ಹೆಚ್ಚಿನ ಮತ ಕೊಡಿಸಿ ಪಕ್ಷದ ಅಭ್ಯರ್ಥಿ ಗೆಲ್ಲಿಸಿ. - ಹರ್ಷವರ್ಧನ್, ಮಾಜಿ ಶಾಸಕ.

ನಂಜನಗೂಡು, ಮಾ.24– ಪ್ರಧಾನಿ ಮೋದಿ ದೇಶವನ್ನು ವಿಕಸಿತ ಭಾರತವನ್ನಾಗಿ ರೂಪಿಸುವ ಮೂಲಕ ವಿಶ್ವಗುರುವಾಗಿ ಮಾಡುವ ದೂರದೃಷ್ಟಿಯ ಕನಸು ಕಂಡಿದ್ದಾರೆ. ಹೀಗಾಗಿ ಈ ಬಾರಿ ಬಿಜೆಪಿಗೆ ಹೆಚ್ಚಿನ ಮತ ನೀಡಿ ನಿಮ್ಮ ಸೇವೆ ಮಾಡಲು ಅವಕಾಶ ಕಲ್ಪಿಸಿ ಎಂದು ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಮನವಿ ಮಾಡಿದರು.

ನಗರದ ಯಾತ್ರಿ ಭವನ ಕಲ್ಯಾಣ ಮಂಟಪದಲ್ಲಿ ಬಿಜೆಪಿ ಕಾರ್ಯಕರ್ತರ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರು ಕಳೆದ 10 ವರ್ಷಗಳಲ್ಲಿ ಸಮರ್ಥ ಆಡಳಿತ ನಡೆಸುವ ಮೂಲಕ ಭಾರತವನ್ನು ಜಾಗತಿಕ ದೇಶಗಳ ಪೈಕಿ ಮುಂಚೂಣಿಗೆ ತಂದು ನಿಲ್ಲಿಸಿದ್ದಾರೆ. ಜೊತೆಗೆ ದೇಶದಲ್ಲಿ ಬಡತನ ನಿರ್ಮೂಲನೆಗೆ ಅನೇಕ ಯೋಜನೆ ಜಾರಿಗೆ ತಂದಿದ್ದಾರೆ. ಆದ್ದರಿಂದ ದೇಶದ ಕಾರ್ಮಿಕ, ರೈತ ಮಹಿಳೆಯರು 3ನೇ ಬಾರಿಗೆ ಮತ್ತೊಮ್ಮೆ ಮೋದಿ ಅವರೇ ಪ್ರಧಾನಿಯಾಗಬೇಕು ಎಂಬ ಮನಸ್ಥಿತಿ ಹೊಂದಿದ್ದಾರೆ. ಎಲ್ಲೆಡೆ ಬಿಜೆಪಿ ಪರ ಅಲೆ ಇದೆ. ಹೀಗಾಗಿ ಪ್ರಧಾನಿ ಮೋದಿ ಅವರಿಗೆ ಶಕ್ತಿ ನೀಡುವ ಸಲುವಾಗಿ ನನಗೊಂದು ಅವಕಾಶ ನೀಡುವಂತೆ ಮನವಿ ಮಾಡಿದರು.

ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಮಾತನಾಡಿ, 2013ರ ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮುಗಿಲು ಮುಟ್ಟಿತ್ತು. ಪ್ರಪಂಚದಲ್ಲೇ ದೇಶದ ಆರ್ಥಿಕತೆ 10ನೇ ಸ್ಥಾನಕ್ಕೆ ಕುಸಿದಿತ್ತು. ಪ್ರಧಾನಿ ಮೋದಿ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ದೇಶದ ಆರ್ಥಿಕತೆಯನ್ನು 5ನೇ ಸ್ಥಾನಕ್ಕೆ ತಂದಿದ್ದಾರೆ. 2029ಕ್ಕೆ 3ನೇ ಸ್ಥಾನಕ್ಕೆ ಬರಲಿದ್ದು, 2047ರ ವೇಳೆಗೆ ಮೊದಲ ಸ್ಥಾನಕ್ಕೆ ತರುವ ದೂರದೃಷ್ಟಿ ಹೊಂದಿದ್ದಾರೆ. ಆದ್ದರಿಂದ ದೇಶದ ಪ್ರಗತಿಯ ಹಿತದೃಷ್ಟಿಯಿಂದ ರಾಜ್ಯದ 28 ಸ್ಥಾನಗಳನ್ನು ಗೆಲ್ಲಬೇಕು. ಜೊತೆಗೆ ಚಾಮರಾಜನಗರದಿಂದ ಎಸ್.ಬಾಲರಾಜು ಗೆಲ್ಲಿಸಿ ಮೋದಿ ಕೈ ಬಲಪಡಿಸಬೇಕು ಎಂದರು.

ಸಮಾರಂಭದಲ್ಲಿ ಮಾಜಿ ಶಾಸಕ ನಿರಂಜನ್‌ಕುಮಾರ್, ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಪ್ರಧಾನ ಕಾರ್ಯದರ್ಶಿ ಎನ್.ಸಿ.ಬಸವಣ್ಣ, ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ, ತಾಲೂಕು ಬಿಜೆಪಿ ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ಮುಖಂಡರಾದ ಎಸ್.ಸಿ.ಅಶೋಕ್, ಫಣೀಶ್, ಸೋಮಣ್ಣ, ಮಹೇಶ್, ಬಾಲಚಂದ್ರು, ಪುಟ್ಟಸ್ವಾಮಿ, ಶ್ರೀನಿವಾಸರೆಡ್ಡಿ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಮಧುರಾಜ್, ನಗರಸಭಾ ಮಾಜಿ ಅಧ್ಯಕ್ಷ ಎಚ್.ಎಸ್.ಮಹದೇವಸ್ವಾಮಿ, ಸದಸ್ಯರಾದ ಮಹದೇವಪ್ರಸಾದ್, ಗಾಯತ್ರಿ ಮುರುಗೇಶ್, ಮೀನಾಕ್ಷಿ ಇತರರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	(ದೂ: 2521923)
ಊರು ಪೇರು ಭೈರವಕೋನಾ (ತೆ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕರಟಕ ಧಮನಕ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೈತಾನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭೀಮ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಜಾಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಪ್ರೇಮುಲು (ತೆ)	4 ಪ್ರದರ್ಶನಗಳು
ಸಂಗಂ	
ಬ್ಲಿಂಕ್ (ಕ)	4 ಪ್ರದರ್ಶನಗಳು
ಲಿಡೋ	
ದಿಲ್ ಕುಷ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಊರು ಪೇರು ಭೈರವಕೋನಾ (ತೆ)	4 ಪ್ರದರ್ಶನಗಳು
ಪ್ರಭಾ	
ಶಾಖಾಹಾರಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕುಂಗ್ ಫು ಪಾಂಡ 4(3ಡಿ) (ಇಂ): ಬೆ.11ಕ್ಕೆ, ಸಂ.4ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ಕರಟಕ ದಮನಕ (ಕ): ಮ.1ಕ್ಕೆ, ಓಂ ಭೀಮ್ ಬುಶ್ (ತೆ): ರಾ.10ಕ್ಕೆ.
ಸ್ಕ್ರೀನ್ 2	ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.30ಕ್ಕೆ, ರಾ.7.20ಕ್ಕೆ, ದಿಲ್‌ಖುಷ್ (ಕ): ಮ.1.25ಕ್ಕೆ, ಆರ್ಟಿಕಲ್ 370 (ಹಿಂ): ಸಂ.4.10ಕ್ಕೆ, ಅಂಚಕಲ್ಲಕೊಕ್ಕನ್ (ಮ): ರಾ.10ಕ್ಕೆ.
ಸ್ಕ್ರೀನ್ 3	ತೂತು ಕಾಸು (ಕ): ಬೆ.10.45ಕ್ಕೆ, ಲೈನ್‌ಮನ್ (ಕ): ಮ.1.30ಕ್ಕೆ, ಯೋಧ (ಹಿಂ): ಸಂ.4.15ಕ್ಕೆ, ಜಾಕಿ (ಕ): ರಾ.7.05ಕ್ಕೆ, ರಜಾಕರ್ ಸೈಲೆಂಟ್ ಜಿನೋಸೈಡ್ ಆಫ್ ಹೈದ್ರಾಬಾದ್ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಜಾಕಿ (ಕ): ಬೆ.10.30ಕ್ಕೆ, ರೆಬಲ್ (ತ): ಮ.1.20ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಸಂ.4.10ಕ್ಕೆ, ರಾ.7.30ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಮಡಗಾಂವ್ ಎಕ್ಸ್‌ಪ್ರೆಸ್ (ಹಿಂ): ಮ.12.15ಕ್ಕೆ, ಸಂ.6.15ಕ್ಕೆ, ರಾ.9.20ಕ್ಕೆ, ಸೈತಾನ್ (ಹಿಂ): ಮ.3.20ಕ್ಕೆ
ಸ್ಕ್ರೀನ್ 2	ಜಾಕಿ (ಕ): ಮ.12.55ಕ್ಕೆ, ರಾ.7.15ಕ್ಕೆ, ಕರಟಕ ದಮನಕ (ಕ): ಸಂ.4ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಮಂಜುಮ್ಮೆಲ್ ಬಾಯ್ಸ್ (ಮ): ಬೆ.10ಕ್ಕೆ, ರಾ.7ಕ್ಕೆ, ಓಂ ಭೀಮ್ ಬುಶ್ (ತೆ): ಮ.1ಕ್ಕೆ, ಯೋಧ (ಹಿಂ): ಸಂ.4.05ಕ್ಕೆ, ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ರಾ.10ಕ್ಕೆ
ಸ್ಕ್ರೀನ್ 4	ಸ್ವತಂತ್ರ್ಯ ವೀರ ಸಾವರ್ಕರ್ (ಹಿಂ): ಬೆ.10ಕ್ಕೆ, ಮ.3.55ಕ್ಕೆ, ಕುಂಗ್ ಫು ಪಾಂಡ 4(3ಡಿ) (ಇಂ): ಮ.1.40ಕ್ಕೆ, ರಾ.7.35ಕ್ಕೆ, ರಾ.9.50ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಜಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಬೈಕ್‌ಗಳ ನಡುವೆ ಡಿಕ್ಕಿ: ಇಬ್ಬರು ಸ್ಥಳದಲ್ಲೇ ಸಾವು

ತಿ.ನರಸೀಪುರ, ಮಾ.24– ಬೈಕ್‌ಗಳ ನಡುವೆ ಡಿಕ್ಕಿ ಸಂಭವಿಸಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿ, ಮತ್ತಿಬ್ಬರು ಗಾಯಗೊಂಡಿರುವ ಘಟನೆ ನಂಜನಗೂಡು ಮುಖ್ಯ ರಸ್ತೆಯ ಬೃಂದಾವನ ಬಡಾವಣೆ ಸಮೀಪ ಭಾನುವಾರ ನಡೆದಿದೆ.

ತಾಲೂಕಿನ ಆದಿಬೆಟ್ಟಹಳ್ಳಿ ಗ್ರಾಮದ ನಿವಾಸಿ ನಾಗರಾಜು(42), ಗುಂಡ್ಲುಪೇಟೆ ಟೌನ್ ನಿವಾಸಿ ಬಿಳಿಗಿರಿ(25) ಸಾವನ್ನಪ್ಪಿದವರು. ನಂಜನಗೂಡು ಟೌನ್ ಶ್ರೀರಾಂಪುರ ಬಡಾವಣೆ ನಿವಾಸಿ ಭರತ್ ಹಾಗೂ ಸಿಂಧುವಳ್ಳಿ ಗ್ರಾಮದ ಮೋಹನ್ ಗಾಯಗೊಂಡಿದ್ದು, ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.

ನಾಗರಾಜು ಅವರು ಬನ್ನಳ್ಳಿಹುಂಡಿಯಲ್ಲಿದ್ದ ಸಂಬಂಧಿಕರ ಮನೆಗೆ ಹೋಗಿ ಬೈಕ್‌ನಲ್ಲಿ ವಾಪಸ್ ಬರುತ್ತಿದ್ದ ವೇಳೆ ಎದುರಿನಿಂದ ಬಂದ ಬಿಳಿಗಿರಿ ಅವರ ಬೈಕ್‌ಗೆ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ ತೀವ್ರ ಗಾಯಗೊಂಡ ನಾಗರಾಜು, ಬಿಳಿಗಿರಿ ಸ್ಥಳದಲ್ಲೇ ಸಾವನ್ನಪ್ಪಿ, ಭರತ್ ಹಾಗೂ ಮೋಹನ್ ಗಾಯಗೊಂಡಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ತಿ.ನರಸೀಪುರ ಠಾಣೆ ಎಸ್‌ಐ ಮಂಜುನಾಥ್ ಹಾಗೂ ಸಿಬ್ಬಂದಿ ರವಿ, ಅಭಿಷೇಕ್ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ನಾಳೆ ಕೊಂಡೋತ್ಸವ

ನಂಜನಗೂಡು, ಮಾ.24– ತಾಲೂಕಿನ ನಂದಿಗುಂದ ಗ್ರಾಮದ ಶ್ರೀಕಾಳಿಕಾಂಭ ಜಾತ್ರಾ ಮಹೋತ್ಸವ ಅಂಗವಾಗಿ ಮಾ.26 ರಂದು ಸಂಜೆ 5.30ಕ್ಕೆ ಕೊಂಡೋತ್ಸವ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಸರಗೂರಲ್ಲಿ ಶನೇಶ್ವರಸ್ವಾಮಿ ಪೂಜಾ ಮಹೋತ್ಸವ




ಶ್ರೀ ಶನೇಶ್ವರಸ್ವಾಮಿ ಪೂಜಾ ಮಹೋತ್ಸವದ ಅಂಗವಾಗಿ ನವಗ್ರಹ ದೇವಾಲಯದಲ್ಲಿ ವಿಶೇಷ ಪೂಜೆ ನಡೆಯಿತು.

ಸರಗೂರು, ಮಾ.24– ಪಟ್ಟಣದ 10ನೇ ವಾರ್ಡ್ ತೊಗಟವೀರ ಬೀದಿಯಲ್ಲಿರುವ ನವಗ್ರಹ ದೇವಾಲಯದಲ್ಲಿ ಶನಿವಾರ ಶನೇಶ್ವರಸ್ವಾಮಿ ಪೂಜಾ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು.

ದೇವಾಲಯದಲ್ಲಿ ಮುಂಜಾನೆಯಿಂದಲೇ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನೆರವೇರಿದವು. ಮಧ್ಯಾಹ್ನ 1.30ಕ್ಕೆ ಮಹಾಮಂಗಳಾರತಿ ಮಾಡಿ ಪ್ರಸಾದ ವಿನಿಯೋಗ ಮಾಡಲಾಯಿತು. ಬಳಿಕ ಭಕ್ತರಿಗೆ ಅನ್ನಸಂತರ್ಪಣೆ ಆಯೋಜಿಸಲಾಗಿತ್ತು. ರಾತ್ರಿ ಶ್ರೀಶನೇಶ್ವರಸ್ವಾಮಿ ಉತ್ಸವ ದೇವಾಲಯದಿಂದ ಹೊರಟು ಚಿಕ್ಕದೇವಮ್ಮ ದೇವಸ್ಥಾನದ ಮಾರ್ಗವಾಗಿ 2ನೇ ಮುಖ್ಯರಸ್ತೆ ಮೂಲಕ ಬಸವೇಶ್ವರ ರಸ್ತೆ, ಕಾಳಿಕಾಂಬ ಬೀದಿ, 1ನೇ ಮುಖ್ಯ ರಸ್ತೆ, ಮಾಸ್ತಮ್ಮ ದೇವಸ್ಥಾನ, ಬಸವೇಶ್ವರ ದೇವಸ್ಥಾನ, ಚಿಕ್ಕದೇವಮ್ಮ ವೃತ್ತ, ಬಸ್ ನಿಲ್ದಾಣ, ಶ್ರೀರಾಮ ಬಡಾವಣೆ ನಂತರ ದೇವಾಲಯಕ್ಕೆ ಉತ್ಸವ ಆಗಮಿಸಿತು. ಈ ವೇಳೆ ಮಹಾಮಂಗಳಾರತಿ ನೆರವೇರಿಸಿ, ಅನ್ನಸಂತರ್ಪಣೆ ನಡೆಸಲಾಯಿತು.

ಪೂಜಾ ಕೈಂಕರ್ಯಗಳು ಅರ್ಚಕರಾದ ಗೋಪಿನಾಥ್, ಎಸ್.ಹರೀಶ್ ನೇತೃತ್ವದಲ್ಲಿ ನಡೆದವು. ಈ ವೇಳೆ ತೊಗಟವೀರ ಸೇರಿದಂತೆ ಎಲ್ಲಾ ಕುಲ ಬಾಂಧವರು ಹಾಜರಿದ್ದರು.

ಮಾಯಣ್ಣ ನಿಧನ



ನಂಜನಗೂಡು, ಮಾ.24– ನಗರದ ಮಂಜುನಾಥ ರೈಸ್‌ಮಿಲ್ ಮಾಲೀಕ ಮಾಯಣ್ಣ (86) ಭಾನುವಾರ ನಿಧನರಾದರು. ಮೃತರು ನಾಲ್ವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 1 ಗಂಟೆಗೆ ನಗರದ ಲಿಂಗಭಟ್ಟರ ಗುಡಿಯಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವಿಜೃಂಭಣೆಯ ಹುಣಸಮ್ಮ ತಾಯಿ ಜಾತ್ರಾ ಮಹೋತ್ಸವ



ಭೇರ್ಯ, ಮಾ.24– ಸಾಲಿಗ್ರಾಮ ತಾಲೂಕಿನ ಮಿರ್ಲೆ ಗ್ರಾಮದ ನವಗ್ರಾಮ ದೇವತೆ ಶ್ರೀ ಹುಣಸಮ್ಮ ತಾಯಿ ದೇವರ ಸಿಡಿ ಉತ್ಸವ ಹಾಗೂ ಜಾತ್ರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಿತು.

ಮುಂಜಾನೆಯಿಂದಲೇ ದೇವಾಲಯದಲ್ಲಿ ಹೋಮ ಹವನ, ವಿವಿಧ ಅಭಿಷೇಕಗಳು ಸೇರಿದಂತೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಮಹಾಮಂಗಳಾರತಿ ನೆರವೇರಿಸಿ, ಭಕ್ತರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಯಿತು. ಬಳಿಕ ನಡೆದ ರಥೋತ್ಸವದಲ್ಲಿ ವಿಶೇಷವಾಗಿ ಸಿಂಗಾರಗೊಂಡಿದ್ದ ಶ್ರೀ ಹುಣಸಮ್ಮ ತಾಯಿಯ 5 ಸಿಡಿಗಳು ಮತ್ತು 4 ರಥಗಳು ಮಿರ್ಲೆ ಗ್ರಾಮದ ರಾಜ ಬೀದಿಗಳಲ್ಲಿ ಸಾಗಿ ದೇವಾಲಯ ತಲುಪಿದವು. ಈ ವೇಳೆ ನೆರೆದಿದ್ದ ಸಾವಿರಾರು ಭಕ್ತರು ಹಣ್ಣು ಜವನ ಎಸೆದು ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು. ಇದೇ ವೇಳೆ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

ದೇವಸ್ಥಾನದ ಧರ್ಮದರ್ಶಿ ಲೋಕೇಶ್ ಹಾಗೂ ಸಮಿತಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ಅಗತ್ಯ ಕ್ರಮ ವಹಿಸಿದ್ದರು. ಪೂಜಾ ಕಾರ್ಯ ಅರ್ಚಕ ಕುಮಾರಸ್ವಾಮಿ ನೇತೃತ್ವದಲ್ಲಿ ನಡೆಸಲಾಯಿತು.

ರಥೋತ್ಸವದಲ್ಲಿ ಶಾಸಕ ಡಿ.ರವಿಶಂಕರ್, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ದೇವಸ್ಥಾನ ಆಡಳಿತ ಮಂಡಳಿ, ವಿವಿಧ ಇಲಾಖೆ ಅಧಿಕಾರಿಗಳು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ನಾಳೆ ಶ್ರೀ ಗುಂಜಾ ನರಸಿಂಹಸ್ವಾಮಿ ರಥೋತ್ಸವ

ತಿ.ನರಸೀಪುರ, ಮಾ.24– ಕಾವೇರಿ, ಕಪಿಲ, ಸ್ಫಟಿಕ ಸರೋವರದ ಮಧ್ಯದಲ್ಲಿ ನೆಲೆಸಿರುವ ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀ ಮಹಾಲಕ್ಷ್ಮಿ ಸಮೇತ ಶ್ರೀಗುಂಜಾ ನರಸಿಂಹಸ್ವಾಮಿ ರಥೋತ್ಸವ ಮಾ.26 ರಂದು ನಡೆಯಲಿದ್ದು, ಇದಕ್ಕಾಗಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ.

ರಥೋತ್ಸವ ಅಂಗವಾಗಿ ದೇವಾಲಯದಲ್ಲಿ ಬೆಳಗ್ಗೆಯಿಂದಲೇ ವಿಶೇಷ ಪೂಜೆ ನಡೆಯಲಿದ್ದು, ಉತ್ಸವ ಮೂರ್ತಿಯನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಗುವುದು. ಬಳಿಕ ಮಧ್ಯಾಹ್ನ 2.45 ರಿಂದ 1.15 ರೊಳಗೆ ದಿವ್ಯಮಹಾ ರಥೋತ್ಸವ ಜರುಗಲಿದೆ.

ನರಸಿಂಹಸ್ವಾಮಿ ರಥ 38 ಅಡಿ ಎತ್ತರವಿದ್ದು, 150ಕ್ಕೂ ಹೆಚ್ಚು ಟನ್ ತೂಕವಿದ್ದು ಜಾತ್ರೆಯ ಪ್ರಮುಖ ಆಕರ್ಷಣೆಯಾಗಿದೆ. ಈಗಾಗಲೇ ರಥೋತ್ಸವ ಅಂಗವಾಗಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ಅಲ್ಲದೇ ರಥಗಳ ಚಕ್ರವನ್ನು ಸರಿಪಡಿಸಿ ಹೊಸ ಹಗ್ಗ ಕಟ್ಟುವ ಕಾರ್ಯ ಪ್ರಗತಿಯಲ್ಲಿದೆ. ಬಣ್ಣ ಬಣ್ಣದ ಬಾವುಟಗಳನ್ನು ಕಟ್ಟಿ, ರಥವನ್ನು ವಿಶೇಷವಾಗಿ ಕಂಗೊಳಿಸುವಂತೆ ಮಾಡುವ ಸಲುವಾಗಿ ಕಾರ್ಮಿಕರು ಒಂದು ವಾರದಿಂದ ಶ್ರಮಿಸುತ್ತಿದ್ದಾರೆ.

ವಿದ್ಯುತ್ ದೀಪಾಲಂಕಾರ: ಜಾತ್ರಾ ಮಹೋತ್ಸವ ಅಂಗವಾಗಿ ದೇವಾಲಯದ ಆವರಣದ ಸುತ್ತಲೂ ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿದೆ. ಅಲ್ಲದೆ ಪ್ರಮುಖ ಬೀದಿ ಹಾಗೂ ಕಟ್ಟಡಗಳನ್ನು ವಿದ್ಯುತ್ ದೀಪಗಳಿಂದ ಅಲಂಕೃತಗೊಳಿಸಲಾಗಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಅಗತ್ಯ ಸಿದ್ಧತೆ: ಬಿಇಓ



ತಿ.ನರಸೀಪುರ, ಮಾ.24– ಸೋಮವಾರದಿಂದ ಆರಂಭವಾಗಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಶೋಭಾ ಹೇಳಿದರು.

ಪಟ್ಟಣದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾರ್ಚ್–ಏಪ್ರಿಲ್ ತಿಂಗಳಲ್ಲಿ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಿನ 3846 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಅವರಿಗೆ ಬೇಕಾದ ಎಲ್ಲಾ ಮೂಲ ಸೌಕರ್ಯ ಕಲ್ಪಿಸಲಾಗಿದೆ. ತಾಲೂಕಿನಲ್ಲಿ 13 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದ್ದು, 13 ಅಧೀಕ್ಷಕರು, ಇಬ್ಬರು ಮುಖ್ಯ ಅಧೀಕ್ಷಕರನ್ನು ನಿಯೋಜಿಸಲಾಗಿದೆ. 14 ಮೊಬೈಲ್ ಸ್ವಾಧೀನಾಧಿಕಾರಿಗಳು ಪರೀಕ್ಷಾ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸಲಿದ್ದಾರೆ ಎಂದರು.

ಪರೀಕ್ಷೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದ್ದು, ಪೊಲೀಸ್ ಇಲಾಖೆ ಸಹಕಾರ ಕೋರಲಾಗಿದೆ. ಆರೋಗ್ಯ ಇಲಾಖೆಯ ಆಶಾ ಕಾರ್ಯಕರ್ತೆಯರು ಕೇಂದ್ರಗಳಲ್ಲಿ ಹಾಜರಿದ್ದು, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸವಾದಲ್ಲಿ ನಿಗಾವಹಿಸಲಿದ್ದಾರೆ. ಉಳಿದಂತೆ ಪರೀಕ್ಷಾ ಕೇಂದ್ರದ ಸುತ್ತ 144 ಸೆಕ್ಷನ್ ಜಾರಿಗೊಳಿಸಲಾಗಿದ್ದು, ಕೇಂದ್ರದ ಆಸುಪಾಸಿನಲ್ಲಿ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಲು ಆದೇಶ ನೀಡಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ಮಕ್ಕಳಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.


ಈ ಮೊದಲು ಖಾಸಗಿಯಾಗಿ ಪರೀಕ್ಷೆ ಬರೆಯುತ್ತಿದ್ದ ವಿದ್ಯಾರ್ಥಿಗಳು ಜಿಲ್ಲಾ ಕೇಂದ್ರಕ್ಕೆ ಹೋಗಬೇಕಿತ್ತು. ಆದರೆ ಈಗ ತಾಲೂಕು ಕೇಂದ್ರದಲ್ಲಿಯೇ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ. ಗ್ರಾಮೀಣ ಭಾಗದ 2345 ಹಾಗೂ ಪಟ್ಟಣದ 1501 ವಿದ್ಯಾರ್ಥಿಗಳು ಈ ಬಾರಿ ಪರೀಕ್ಷೆ ಬರೆಯುತ್ತಿದ್ದು, ಪರೀಕ್ಷೆಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿಗಳು ಉತ್ತೀರ್ಣರಾಗಿ ತಾಲೂಕಿಗೆ ಉತ್ತಮ ಫಲಿತಾಂಶ ಬರಬೇಕೆಂಬ ಆಶಯ ತಮ್ಮದಾಗಿದೆ ಎಂದರು.

ಬೋಗಾದಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ

ಮೈಸೂರು, ಮಾ.24– ಬೋಗಾದಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯುತ್ತಿರುವುದು ನಮ್ಮ ಹೋರಾಟಕ್ಕೆ ಸಂದ ಜಯ ಎಂದು ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ (ಐಎಂಎಸ್‌ಎಸ್) ಜಿಲ್ಲಾ ಕಾರ್ಯ ದರ್ಶಿ ಜಿ.ಎಸ್.ಸೀಮಾ ತಿಳಿಸಿದ್ದಾರೆ.

ಸಂಘಟನೆಯ ಬೋಗಾದಿ ಘಟಕದ ನಿಯೋಗವು ಬೋಗಾದಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಬಸ್ ತಂಗುದಾಣವನ್ನು ನಿರ್ಮಿಸಲು ಹಲವಾರು ಬಾರಿ ಹೋರಾಟ ನಡೆಸಿ ಸರ್ಕಾರಕ್ಕೆ ಮನವಿ ಸಲ್ಲಿಸಿತ್ತು. ಈ ಎಲ್ಲಾ ಹೋರಾಟಗಳ ಫಲವಾಗಿ ಈಗ ಬೋಗಾದಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ತೆರೆಯುತ್ತಿರುವುದು ನಮ್ಮ ಹೋರಾಟಕ್ಕೆ ಸಂದ ಜಯವಾಗಿದೆ ಎಂದು ಹೇಳಿದ್ದಾರೆ.

ಕಪಿಲಾ ನದಿಯಲ್ಲಿ ವಿಜೃಂಭಣೆಯ ಶ್ರೀಕಂಠೇಶ್ವರ ತೆಪ್ಪೋತ್ಸವ



ನಂಜನಗೂಡು, ಮಾ.24– ಶ್ರೀಕಂಠೇಶ್ವರಸ್ವಾಮಿಯವರ ದೊಡ್ಡ ಜಾತ್ರಾ ಮಹೋತ್ಸವದ ಪ್ರಯುಕ್ತ ಭಾನುವಾರ ಇಲ್ಲಿನ ಕಪಿಲಾ ನದಿಯ ತೇಲುವ ದೇವಾಲಯದಲ್ಲಿ ಸಾವಿರಾರು ಭಕ್ತರ ಹರ್ಷೋದ್ಗಾರ, ಕರತಾಡನದ ನಡುವೆ ತೆಪ್ಪೋತ್ಸವ ವಿಜೃಂಭಣೆಯಿಂದ ನಡೆಯಿತು.

ಭಾನುವಾರ ಚೂರ್ಣೋತ್ಸವ ಪೂರ್ವಕ ಅವಭೃತ ತೀರ್ಥ ಸ್ನಾನದ ಪ್ರಯುಕ್ತ ರಾಜ್ಯದ ವಿವಿಧೆಡೆ ಯಿಂದ ಆಗಮಿಸಿದ್ದ ಸಾವಿರಾರು ಭಕ್ತರು ಮುಂಜಾನೆಯಿಂದಲೇ ಕಪಿಲಾ ನದಿಯಲ್ಲಿ ತೀರ್ಥಸ್ನಾನ ಮಾಡಿ, ಉರುಳು ಸೇವೆ, ಧೂಪ ದೀಪ ಸೇವೆ, ಬೆಳ್ಳಿ ಹರಕೆ ಪದಾರ್ಥಗಳನ್ನು ಹುಂಡಿಯಲ್ಲಿ ಹಾಕಿ ಸರತಿ ಸಾಲಿನಲ್ಲಿ ನಿಂತು ಶ್ರೀಕಂಠೇಶ್ವರನ ದರ್ಶನ ಪಡೆದು ಹರಕೆ ತೀರಿಸಿದರು. ತೆಪ್ಪೋತ್ಸವದ ಅಂಗವಾಗಿ ದೇವಾಲಯದಲ್ಲಿ ಇಂದು ಮುಂಜಾನೆಯಿಂದಲೇ ವಿವಿಧ ಪೂಜಾ ಕೈಂಕರ್ಯ ನೆರವೇರಿಸಿ ಮಹಾ ಮಂಗಳಾರತಿ ನಂತರ ಭಕ್ತರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು.

ನಂತರ ರಾತ್ರಿ 7 ಗಂಟೆಗೆ ದೇವಾಲಯದಿಂದ ವಿಶೇಷವಾಗಿ ವಜ್ರ–ವೈಡೂರ್ಯ, ಮುತ್ತು ಹವಳ, ನವರತ್ನಗಳಿಂದ ಶೃಂಗರಿಸಿದ್ದ ಶ್ರೀಕಂಠೇಶ್ವರನ ಉತ್ಸವ ಮೂರ್ತಿಯನ್ನು ಮಂಗಳ ವಾದ್ಯದೊಡನೆ ಮುತ್ತಿನ ಪಲ್ಲಕ್ಕಿಯಲ್ಲಿ ಮೆರವಣಿಗೆ ಮೂಲಕ ಕಪಿಲಾ ನದಿ ದಡದಲ್ಲಿನ ಶಾಸ್ತ್ರ ಮಂಟಪಕ್ಕೆ ಕರೆತರಲಾಯಿತು. ಪ್ರಧಾನ ಅರ್ಚಕ ನಾಗಚಂದ್ರ ದೀಕ್ಷಿತ್ ಹಾಗೂ ಅರ್ಚಕ ವೃಂದ ಉತ್ಸವ ಮೂರ್ತಿಯನ್ನು ಶಾಸ್ತ್ರ ಮಂಟಪದಲ್ಲಿರಿಸಿ ವಿವಿಧ ಧಾರ್ಮಿಕ ವಿಧಿವಿಧಾನ ನೆರವೇರಿಸಿದ ನಂತರ ವಿದ್ಯುತ್ ದೀಪ ಹಾಗೂ ನಾನಾ ಬಗೆಯ ಹೂಗಳಿಂದ ಅಲಂಕಾರಗೊಂಡ ತೇಲುವ ದೇವಾಲಯದಲ್ಲಿ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ ತೆಪ್ಪೋತ್ಸವಕ್ಕೆ ಚಾಲನೆ ನೀಡಲಾಯಿತು. ಬಳಿಕ ತೇಲುವ ದೇವಾಲಯದಲ್ಲಿ ಶ್ರೀಯವರನ್ನು 3 ಬಾರಿ ಪ್ರದಕ್ಷಿಣೆ ಹಾಕಿಸಲಾಯಿತು.

ನದಿಯ ಎರಡೂ ದಡಯಲ್ಲಿ ನೆರೆದಿದ್ದ ಭಕ್ತರು ಈ ಮನೋಹರ ಮನಮೋಹಕ ದೃಶ್ಯ ಕಣ್ತುಂಬಿಕೊಂಡು ಭಾವಪರ ವಶರಾದರು. ಅಲ್ಲದೆ ತಮ್ಮ ಇಷ್ಟಾರ್ಥಗಳನ್ನು ನೆರವೇರಿಸುವಂತೆ ಕೋರಿಕೊಂಡರು. ತೆಪ್ಪೋತ್ಸವ ಅಂಗವಾಗಿ ವಿವಿಧ ಸಂಘ ಸಂಸ್ಥೆಗಳು ಪ್ರಸಾದ ವಿನಿಯೋಗ ಮಾಡಿದರು. ಸಂಚಾರ ದಟ್ಟಣೆ ಹೆಚ್ಚಾಗಿ ಸಂಚಾರ ಅಸ್ತವ್ಯಸ್ತಗೊಂಡಿತು. ಸಂಚಾರ ನಿಯಂತ್ರಿಸಲು ಪೊಲೀಸರು ಹರಸಾಹಸ ಪಡಬೇಕಾಯಿತು. ತೆಪ್ಪೋತ್ಸವದ ಅಂಗವಾಗಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಬಿಗಿಬಂದೋಬಸ್ತ್ ನಿಯೋಜಿಸಲಾಗಿತ್ತು. ಇದೇ ವೇಳೆ ದೇವಾಲಯದ ಇಓ ಜಗದೀಶ್, ಎಇಓ ಸತೀಶ್ ಸೇರಿದಂತೆ ಹಲವರಿದ್ದರು.

ಡಾ.ಬಿ.ಜೆ.ವಿಜಯ್‌ಕುಮಾರ್‌ರನ್ನು ಎಂಎಲ್‌ಸಿ ಮಾಡಿ

ಜಿಲ್ಲಾ ಕಾಂಗ್ರೆಸ್ ವೈದ್ಯಕೀಯ ವಿಭಾಗದ ಅಧ್ಯಕ್ಷ ಡಾ.ಪ್ರದೀಪ್ ಒತ್ತಾಯ



ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ವೈದ್ಯಕೀಯ ವಿಭಾಗದ ಅಧ್ಯಕ್ಷ ಡಾ.ಪ್ರದೀಪ್ ಮಾತನಾಡಿದರು.

ತಿ.ನರಸೀಪುರ, ಮಾ.24– ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡುವಂತೆ ಜಿಲ್ಲಾ ಕಾಂಗ್ರೆಸ್ ವೈದ್ಯಕೀಯ ವಿಭಾಗದ ಅಧ್ಯಕ್ಷ ಡಾ.ಪ್ರದೀಪ್ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ.ವಿಜಯ್ ಕುಮಾರ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ, ಜಿಲ್ಲಾಧ್ಯಕ್ಷರಾಗಿ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಜಿಲ್ಲಾದ್ಯಂತ ಪ್ರವಾಸ ಮಾಡಿ ಶ್ರಮಿಸಿದ್ದಾರೆ. ಜೊತೆಗೆ ಈ ಬಾರಿ ಅವರು ಮೈಸೂರು ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗುವ ಅವಕಾಶವಿತ್ತು. ಆದರೆ ಪಕ್ಷ ಲಕ್ಷ್ಮಣ್ ಅವರಿಗೆ ಟಿಕೆಟ್ ನೀಡಿದೆ. ಇವರ ಸೇವೆ ಪರಿಗಣಿಸಿ ಖಾಲಿಯಾಗುವ ಪರಿಷತ್ ಸ್ಥಾನಕ್ಕೆ ಡಾ.ವಿಜಯ್ ಕುಮಾರ್ ಅವರಿಗೆ ಅವಕಾಶ ನೀಡುವಂತೆ ಆಗ್ರಹಿಸಿದರು.

ಡಾ.ಬಿ.ಜೆ.ವಿಜಯ್ ಕುಮಾರ್ ಅವರು ಕಾಂಗ್ರೆಸ್ ಯುವಘಟಕದ ಅಧ್ಯಕ್ಷರಾಗಿ ಹಾಗೂ 9 ವರ್ಷಗಳ ಕಾಲ ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಅಧಿಕಾರಾವಧಿಯಲ್ಲಿ ಕಾಂಗ್ರೆಸ್‌ನ ಹೆಚ್ಚು ಶಾಸಕರು ಆಯ್ಕೆಯಾಗಿರುವುದು ಇವರ ಕಾರ್ಯ ವೈಖರಿಗೆ ಸಾಕ್ಷಿಯಾಗಿದೆ ಎಂದರು. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಕ್ಷೇತ್ರಗಳ ಪೈಕಿ 20ಕ್ಕೂ ಹೆಚ್ಚು ಸ್ಥಾನಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು ಕಾರ್ಯಕರ್ತರು ಪಕ್ಷದ ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕು ಎಂದರು.

ಸುನೀಲ್ ಬೋಸ್‌ಗೆ ಟಿಕೆಟ್ ನೀಡಿ: ಮಾಜಿ ಪುರಸಭಾಧ್ಯಕ್ಷ ಟಿ.ಎಂ.ನಂಜುಂಡಸ್ವಾಮಿ ಮಾತನಾಡಿ, ಕಾಂಗ್ರೆಸ್ ಯುವ ಮುಖಂಡ ಸುನೀಲ್ ಬೋಸ್ ಅವರಿಗೆ 2017ರಿಂದಲೂ ಅನ್ಯಾಯವಾಗಿದೆ. ಆದ್ದರಿಂದ ಈಗಲಾದರೂ ಅವರಿಗೆ ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ನೀಡಿ ಅವರಿಗಾಗಿರುವ ಅನ್ಯಾಯಕ್ಕೆ ನ್ಯಾಯ ಕೊಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪಕ್ಷದ ರಾಜ್ಯಾಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ತಾಪಂ ಮಾಜಿ ಅಧ್ಯಕ್ಷ ತುಂಬಲ ಅಂದಾನಿ, ಮಾಜಿ ಉಪಾಧ್ಯಕ್ಷ ಪ್ರಕಾಶ್, ಪುರಸಭಾ ಸದಸ್ಯ ಮೆಡಿಕಲ್ ನಾಗರಾಜು, ಡಿಸಿಸಿ ಸದಸ್ಯ ಬಿಲಿಗೆರೆಹುಂಡಿ ಬಸವರಾಜು, ಡೈರಿ ಮಾಜಿ ಅಧ್ಯಕ್ಷ ಯಡದೊರೆ ಮರಯ್ಯ, ಗ್ರಾಪಂ ಉಪಾಧ್ಯಕ್ಷ ಶೇಖರ್, ಸದಸ್ಯ ಮಹೇಶ್, ವರುಣ ಯೂತ್ ಕಾಂಗ್ರೆಸ್ ಉಪಾಧ್ಯಕ್ಷ ಪ್ರಮೋದ್, ಕಾಂಗ್ರೆಸ್ ಯುವ ಮುಖಂಡರಾದ ಕೆಂಪಯ್ಯನಹುಂಡಿ ರಾಜೇಂದ್ರ, ಆರ್.ಪಿ.ಹುಂಡಿ ಮಾಜಿ ಸದಸ್ಯ ನಾಗರಾಜ್, ವರುಣ ವಿಧಾನಸಭಾ ಕ್ಷೇತ್ರದ ಸಾಮಾಜಿಕ ಜಾಲತಾಣ ಪ್ರಧಾನ ಕಾರ್ಯದರ್ಶಿ ಮುತ್ತತ್ತಿ ಬಸವರಾಜ್, ಭರತ್, ಸಾಗರ್ ಉಪಸ್ಥಿತರಿದ್ದರು.

ಸಮಾಜಮುಖಿ ತೀರ್ಪುಗಳಿಂದ ಶ್ರೇಷ್ಠ ಭಾರತ ನಿರ್ಮಾಣ ಸಾಧ್ಯ

ಅಣುಕು ನ್ಯಾಯಾಲಯ ಸ್ಪರ್ಧೆ-2024 ಸಮಾರೋಪದಲ್ಲಿ ನ್ಯಾ.ಬಿ.ಎಸ್.ಪಾಟೀಲ್ ಅಭಿಪ್ರಾಯ



ಮೈಸೂರಿನ ಕುವೆಂಪುನಗರದಲ್ಲಿರುವ ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲಿ ನಡೆದ 21ನೇ ರಾಷ್ಟ್ರಮಟ್ಟದ ಕಾರ್ಪೊರೇಟ್ ಕಾನೂನು ಕುರಿತ 'ಅಣುಕು ನ್ಯಾಯಾಲಯ ಸ್ಪರ್ಧೆ–2024' ಸಮಾರೋಪ ಸಮಾರಂಭದಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ಎಸ್.ಪಾಟೀಲ್(ಎಡದಿಂದ 5ನೇಯವರು) ಪ್ರಮಾಣ ಪತ್ರ ವಿತರಿಸಿದರು.

ಅತ್ಯುತ್ತಮ ಕಾನೂನು ವ್ಯವಸ್ಥೆ...

“ಎಲ್ಲಾ ಕ್ಷೇತ್ರದಲ್ಲಿಯೂ ಭ್ರಷ್ಟಾಚಾರವಿದ್ದು, ಲೋಕಾಯುಕ್ತ ಸಂಸ್ಥೆಯೊಂದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸಾಧ್ಯವಿಲ್ಲ. ಆದ್ದರಿಂದ ವಕೀಲರು ಸೇರಿದಂತೆ ಸಮಾಜದಲ್ಲಿನ ಪ್ರತಿಯೊಬ್ಬರು ಪ್ರಾಮಾಣಿಕತೆ ಮೈಗೂಡಿಸಿಕೊಂಡರೆ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕುವುದರ ಜೊತೆಗೆ ಸಮಾಜದಲ್ಲಿ ಅತ್ಯುತ್ತಮ ಕಾನೂನು ವ್ಯವಸ್ಥೆಯನ್ನು ರೂಪುಗೊಳಿಸಲು ಸಾಧ್ಯ.

– ಬಿ.ಎಸ್.ಪಾಟೀಲ್, ಕರ್ನಾಟಕ ರಾಜ್ಯ ಲೋಕಾಯುಕ್ತ ನ್ಯಾಯಾಧೀಶರು

ಮೈಸೂರು, ಮಾ.24(ಎಂಕೆ)– ಸಮಾಜಮುಖಿಯಾಗಿ ಉತ್ತಮ ತೀರ್ಪುಗಳನ್ನು ನೀಡುವ ಮೂಲಕ ಶ್ರೇಷ್ಠ ಭಾರತ ನಿರ್ಮಾಣಕ್ಕೆ ನ್ಯಾಯಾಧೀಶರೂ ಸಹ ಕೊಡುಗೆ ನೀಡಬಹುದು ಎಂದು ಕರ್ನಾಟಕ ರಾಜ್ಯ ಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್ ತಿಳಿಸಿದ್ದಾರೆ.

ಮೈಸೂರಿನ ಕುವೆಂಪುನಗರದಲ್ಲಿರುವ ಜೆಎಸ್‌ಎಸ್ ಕಾನೂನು ಕಾಲೇಜು ಸಭಾಂಗಣದಲ್ಲಿ ಚೆನ್ನೈನ ಸುರಾನಾ ಮತ್ತು ಸುರಾನಾ ಇಂಟರ್‌ನ್ಯಾಷನಲ್ ಅಟಾರ್ನಿ ಸಹಯೋಗದೊಂದಿಗೆ ಆಯೋಜಿಸಿದ್ದ 21ನೇ ರಾಷ್ಟ್ರಮಟ್ಟದ ಕಾರ್ಪೊರೇಟ್ ಕಾನೂನು ಕುರಿತ 'ಅಣುಕು ನ್ಯಾಯಾಲಯ ಸ್ಪರ್ಧೆ–2024' ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಅಣುಕು ನ್ಯಾಯಾಲಯ ಸ್ಪರ್ಧೆಗಳ ಮೂಲಕ ಯಶಸ್ವಿ ವಕೀಲರಾಗಿ ರೂಪುಗೊಳ್ಳಲು ಸಾಧ್ಯವಿದೆ. ವಕೀಲರಾಗಿ ಉತ್ತಮವಾಗಿ ಕಾರ್ಯನಿರ್ವಹಿಸಿದರೆ, ನ್ಯಾಯಾಧೀಶರಾಗುವ ಅವಕಾಶಗಳೂ ದೊರೆಯಬಹುದು. ನ್ಯಾಯಾಧೀಶರಾಗಿ ನ್ಯಾಯಬದ್ಧ, ಸಮಾಜಮುಖಿ ತೀರ್ಪುಗಳನ್ನು ನೀಡುವ ಮೂಲಕ ಶ್ರೇಷ್ಠ ಭಾರತ ನಿರ್ಮಾಣಕ್ಕೆ ಕೊಡುಗೆ ನೀಡಬಹುದಾಗಿದೆ ಎಂದು ತಿಳಿಸಿದರು.

ಭಾರತ ಸಂವಿಧಾನದಲ್ಲಿ ನೀಡಿರುವ ಮೂಲಭೂತ ಕರ್ತವ್ಯಗಳಂತೆಯೇ ನಿರ್ವಹಿಸುವ ವೃತ್ತಿಯಲ್ಲಿ ಶ್ರೇಷ್ಠಮಟ್ಟದ ಉನ್ನತಿಯನ್ನು ಸಾಧಿಸುವುದು ಕೂಡ ಮೂಲಭೂತ ಹಕ್ಕಾಗಿದೆ ಎಂಬುದರ ಅರಿವಿರಬೇಕು. ಅದರಂತೆ ಸಮಾಜದಲ್ಲಿ ನಡೆಯುವ ಪ್ರತಿಯೊಂದು ಘಟನಾವಳಿಗಳ ಮೇಲೂ ವಕೀಲರಾದವರು ಸದಾ ಕಣ್ಣಿಟ್ಟಿರಬೇಕು. ನ್ಯಾಯಾಲಯಗಳಲ್ಲಿ ವಕೀಲರು ಪಾಪ್ಯುಲರ್ ಆಗಬೇಕಾದರೆ ಮೊದಲು ಅಧ್ಯಯನ ಉತ್ತಮವಾಗಿರಬೇಕು. ನ್ಯಾಯಾಧೀಶರ ಮುಂದೆ ವಾದ ಮಂಡಿಸುವಾಗ ಸೂಕ್ತ ಅಂಶಗಳನ್ನು ಪಟ್ಟಿಮಾಡಿಕೊಂಡು ವಕಾಲತ್ತು ವಹಿಸಿದರೆ, ವಾದ–ಪ್ರತಿವಾದ ಪರಿಣಾಮಕಾರಿಯಾಗಿರುವುದರ ಜೊತೆಗೆ ನ್ಯಾಯಾಧೀಶರ ಗಮನವನ್ನು ಸೆಳೆಯಲಿದೆ. ಇದರಿಂದ ನಿಮ್ಮಲ್ಲಿನ ವೃತ್ತಿ ಕೌಶಲ್ಯತೆಯೂ ಹೆಚ್ಚಾಗಲಿದೆ ಎಂದು ಸಲಹೆ ನೀಡಿದರು.

ಕೋರ್ಟ್‌ಗೆ ಬರಬೇಡಿ!: ವಕೀಲರು ಪೂರ್ವ ತಯಾರಿ ಮಾಡಿಕೊಳ್ಳದೆ ಕೋರ್ಟ್‌ಗೆ ಬರಬೇಡಿ. ಬರುವ ಮುನ್ನ ಕನಿಷ್ಠ ಎರಡ್ಮೂರು ಬಾರಿಯಾದರು ಕೇಸ್ ಫೈಲ್ ಅನ್ನು ಅಧ್ಯಯನ ಮಾಡಿ, ವಾದ ಮಂಡಿಸಲು ಸೂಕ್ತ ಅಂಶಗಳನ್ನು ಪಟ್ಟಿ ಮಾಡಿಕೊಳ್ಳುವುದು ಅತ್ಯಂತ ಅವಶ್ಯ. ಅನವಶ್ಯಕ ವಾದ–ಪ್ರತಿವಾದಗಳಿಂದ ಯಾವುದೇ ಪ್ರಯೋಜನಗಳಾಗುವುದಿಲ್ಲ. ಯಾವ ಅಂಶಗಳನ್ನು ಹೇಳಿದರೆ ಸೂಕ್ತ ಎಂಬುದರ ಅರಿವಿರಬೇಕು. ಮುಖ್ಯವಾಗಿ ನ್ಯಾಯವಾದಿ ಕೌಶಲ್ಯತೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಶ್ಲಾಘನೀಯ: ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲಿ 'ಅಣುಕು ನ್ಯಾಯಾಲಯ ಸ್ಪರ್ಧೆ' ಆಯೋಜನೆ ಮಾಡಿರುವುದು ಶ್ಲಾಘನೀಯ. ಇದರಿಂದ ಕಾನೂನು ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು ಯಶಸ್ವಿ ವಕೀಲರಾಗಿ ರೂಪುಗೊಳ್ಳಲು ಅನುಕೂಲವಾಗುತ್ತದೆ. ವೃತ್ತಿ ಶ್ರೇಷ್ಠತೆ ಸಾಧಿಸಬೇಕಾದರೆ ಸಕಾರಾತ್ಮಕ ಅಂಶಗಳ ಮೇಲಷ್ಟೇ ಗಮನ ಹರಿಸಿ, ನಕಾರಾತ್ಮಕ ಅಂಶಗಳನ್ನು ಸಾಧ್ಯವಾದಷ್ಟು ಕಡಿತಗೊಳಿಸಬೇಕು. ಪ್ರಾಮಾಣಿಕರಾಗಿರುವುದು ಅತೀ ಮುಖ್ಯವಾಗಿದೆ ಎಂದರು. ಇದೇ ವೇಳೆ ಅಣುಕು ನ್ಯಾಯಾಲಯ ಸ್ಪರ್ಧೆಯಲ್ಲಿ ಭಾಗವಹಿಸಿ, ವಿಜೇತರಾದ ಕಾನೂನು ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರ್ ಮಠ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸಾಲ ವಸೂಲಾತಿ ಮೇಲ್ಮನವಿ ನ್ಯಾಯಮಂಡಳಿಗಳ ಮುಖ್ಯಸ್ಥರಾದ ಎಸ್.ವಿ.ಗೌರಮ್ಮ, ಜೆಎಸ್‌ಎಸ್ ಕಾನೂನು ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಪ್ರೊ.ಕೆ.ಎಸ್.ಸುರೇಶ್, ಹಿರಿಯ ವಕೀಲ ಜಿ.ಶಿವದಾಸ್, ಚೆನ್ನೈನ ಸುರಾನಾ ಮತ್ತು ಸುರಾನಾ ಇಂಟರ್‌ನ್ಯಾಷನಲ್ ಅಟಾರ್ನಿ ಪಾಲುದಾರರಾದ ಪ್ರೀತಂ ಸುರಾನಾ, ಜೆಎಸ್‌ಎಸ್ ಕಾನೂನು ಕಾಲೇಜಿನ ಪ್ರಾಂಶುಪಾಲ ಡಾ.ಎಸ್.ನಟರಾಜ್ ಮತ್ತಿತರರು ಉಪಸ್ಥಿತರಿದ್ದರು.

ಡಾಲರ್ ಎದುರು ರೂಪಾಯಿ ಮೌಲ್ಯದಲ್ಲಿ ಸ್ಥಿರತೆ ಇದೆ

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್



ಮೈಸೂರಿನ ಮುಕ್ತ ವಿವಿಯ ಘಟಿಕೋತ್ಸವ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಅನೌಪಚಾರಿಕ ಸಂವಾದ ಕಾರ್ಯಕ್ರಮದಲ್ಲಿ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಾತನಾಡಿದರು.

ಮೈಸೂರು,ಮಾ.24(ಪಿಎಂ)– ಡಾಲರ್ ಎದುರು ಜಗತ್ತಿನ ಎಲ್ಲಾ ರಾಷ್ಟ್ರಗಳ ಕರೆನ್ಸಿಗಳ ಮೌಲ್ಯದಲ್ಲಿ ಕುಸಿತ ಉಂಟಾಗುತ್ತಿದೆ. ಆದರೆ ನಮ್ಮ ರೂಪಾಯಿ ಮೌಲ್ಯವು ಸ್ಥಿರತೆ ಕಾಯ್ದುಕೊಂಡಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

ಮೈಸೂರಿನ ಮುಕ್ತ ಗಂಗೋತ್ರಿಯ ಮುಕ್ತ ವಿವಿಯ ಘಟಿಕೋತ್ಸವ ಭವನದಲ್ಲಿ ಥಿಂಕರ್ಸ್ ಫೋರಮ್ ಮೈಸೂರು ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಅನೌಪಚಾರಿಕ ಸಂವಾದ ಕಾರ್ಯಕ್ರಮದಲ್ಲಿ ಸಭಿಕರ ಪ್ರಶ್ನೆಗಳಿಗೆ ಅವರು ಪ್ರತಿಕ್ರಿಯಿಸಿದರು. ರೂಪಾಯಿ ಮೌಲ್ಯವು ಡಾಲರ್ ಮೌಲ್ಯಕ್ಕೆ ಸಮವಾಗುವುದು ಯಾವಾಗ? ಎಂದು ಐಟಿ ಉದ್ಯೋಗಿಯೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ವಿತ್ತ ಸಚಿವರು, ನಮ್ಮ ದೇಶದ ಆರ್ಥಿಕ ವೇಗಕ್ಕೂ ಅಮೆರಿಕದ ಆರ್ಥಿಕ ವೇಗಕ್ಕೂ ವ್ಯತ್ಯಾಸವಿದೆ. ಹೀಗಾಗಿ ನಾವು ಅಭಿವೃದ್ಧಿ ಸಾಧಿಸಿದ್ದರೂ ಡಾಲರ್ ಹಾಗೂ ರೂಪಾಯಿ ಮೌಲ್ಯದ ನಡುವೆ ಅಂತರವಿರುತ್ತದೆ. ಕೆಲವು ದೇಶಗಳು ರೂಪಾಯಿ ಮೂಲಕವೇ ಭಾರತದೊಂದಿಗೆ ವ್ಯವಹಾರಕ್ಕೆ ಮುಂದಾಗಿರುವುದು ಉತ್ತಮ ಬೆಳವಣಿಗೆ. ಆದರೆ ಡಾಲರ್ ಹಾಗೂ ರೂಪಾಯಿ ಸಮಾನ ಮೌಲ್ಯ ಸಾಧಿಸುವುದು ಸದ್ಯ ಕಷ್ಟಸಾಧ್ಯ ಎಂದರು.

ತೆರಿಗೆ ವಿರುದ್ಧ ಅಪಸ್ವರ ಬೇಡ: ವೈದ್ಯಕೀಯ ಸಲಕರಣೆಗಳೂ ಸೇರಿದಂತೆ ಬಡವರಿಗೆ ಅಗತ್ಯವಿರುವ ಹಲವು ಉತ್ಪನ್ನಗಳ ಮೇಲಿನ ಜಿಎಸ್‌ಟಿ ಇಳಿಸುವಂತೆ ಹಲವು ಸಭಿಕರು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ವಿತ್ತ ಸಚಿವರು, ಸಾರ್ವಜನಿಕರ ಮೂಲಕ ಸರ್ಕಾರಕ್ಕೆ ಸಂದಾಯವಾಗುವ ಜಿಎಸ್‌ಟಿ ಹಣವು ಮತ್ತೆ ಸಾರ್ವಜನಿಕರ ಯೋಜನೆಗಳ ಅನುಷ್ಠಾನಕ್ಕೆ ಬಳಕೆಯಾಗುತ್ತದೆ. ಹೀಗಾಗಿ ತೆರಿಗೆ ಹೆಚ್ಚಾಯಿತು ಎಂದು ದೂರುವುದು ಬೇಡ. ಸರ್ಕಾರ ಹಾಗೂ ಜಿಎಸ್‌ಟಿ ಕೌನ್ಸಿಲ್ ಎಲ್ಲವನ್ನೂ ಸರಿದೂಗಿಸಿಯೇ ತೆರಿಗೆ ನಿರ್ಧರಿಸುತ್ತವೆ ಎಂದು ಹೇಳಿದರು.

ಸ್ಟಾರ್ಟ್‌ಅಪ್‌ಗಳು ಹೆಚ್ಚಳ: ದೇಶದಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚಿದೆ ಎಂಬ ವಿದ್ಯಾರ್ಥಿನಿಯೊಬ್ಬರ ಹೇಳಿಕೆಗೆ ಪ್ರತಿಕ್ರಿಯಿಸಿದ ನಿರ್ಮಲಾ ಸೀತಾರಾಮನ್, ಸರ್ಕಾರಿ ಉದ್ಯೋಗ ಬೇಕೆನ್ನುವವರ ಸಂಖ್ಯೆ ಹೆಚ್ಚಿರಬಹುದು. ಆದರೆ ಕೇಂದ್ರದ ಹಲವು ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಸ್ಟಾರ್ಟ್ ಅಪ್ (ನವೋದ್ಯಮಗಳು) ದೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸ್ಥಾಪನೆಗೊಂಡಿವೆ. ಇದರಿಂದ ಉದ್ಯೋಗ ಸೃಷ್ಟಿಯೂ ಹೆಚ್ಚಿನ ಪ್ರಮಾಣದಲ್ಲಿ ಆಗುತ್ತಿದೆ. ಶ್ರಮಿಕರು ಹಾಗೂ ಉದ್ಯೋಗಿಗಳಿಲ್ಲದೇ ದೇಶದಲ್ಲಿ ಆದಾಯ ಬರುವುದಿಲ್ಲ. ನಾನಾ ಕ್ಷೇತ್ರಗಳಲ್ಲಿ ಉದ್ಯೋಗ ಸೃಷ್ಟಿಯಾಗಿದೆ ಎಂದು ತಿಳಿಸಿದರು.

ರಾಜಕೀಯಕ್ಕೆ ಬರಲು ಯಾರೂ ತಡೆಯರು: ರಾಜಕೀಯ ಕ್ಷೇತ್ರದಲ್ಲಿ ಮಹಿಳೆಯರಿಗೆ ಅವಕಾಶ ಕಡಿಮೆ. ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ರಾಜಕೀಯ ಪ್ರವೇಶಿಸಲು ನಿಮ್ಮ ಸಲಹೆ ಏನು? ಎಂದು ಮಹಾರಾಜ ಕಾಲೇಜು ವಿದ್ಯಾರ್ಥಿನಿ ಧನ್ಯಾ ಕೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ರಾಜಕೀಯಕ್ಕೆ ಬರದಂತೆ ನಿಮ್ಮನ್ನು ತಡೆಯುವವರು ಯಾರು? ಎಂದು ಮರು ಪ್ರಶ್ನೆಯಿತ್ತರು. ಆಸಕ್ತಿ ಇದ್ದರೆ ಈಗಿನಿಂದಲೇ ತೊಡಗಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.

ದರ ಪರಿಷ್ಕರಣೆ ಮಾಡಿ: ಆಯುಷ್ಮಾನ್ ಭಾರತ್ ಸೇರಿದಂತೆ ಸರ್ಕಾರದ ಆರೋಗ್ಯ ಯೋಜನೆಗಳ ಅಡಿ ಆರೋಗ್ಯ ಸೇವೆ ಒದಗಿಸುತ್ತಿರುವ ಖಾಸಗಿ ಆಸ್ಪತ್ರೆಗಳಿಗೆ ಸರ್ಕಾರ ನೀಡುತ್ತಿರುವ ದರವು ಕಡಿಮೆ ಇದೆ. ಇದರಿಂದ ಬಹುತೇಕ ಖಾಸಗಿ ಆಸ್ಪತ್ರೆಗಳು ಚಿಕಿತ್ಸೆಗೆ ಹಿಂದೇಟು ಹಾಕುತ್ತಿವೆ. ಹೀಗಾಗಿ ದರ ಪರಿಷ್ಕರಣೆ ಮಾಡಬೇಕು. ಖಾಸಗಿ ಆಸ್ಪತ್ರೆಗಳು ಶೇ.80ರಷ್ಟು ಜನರಿಗೆ ಆರೋಗ್ಯ ಸೇವೆ ಒದಗಿಸುತ್ತಿದ್ದು, ಅವುಗಳ ಬಲವರ್ಧನೆಗೂ ಆದ್ಯತೆ ನೀಡಬೇಕೆಂದು ಎಂದು ಸರ್ಕಾರಿ ಯೋಜನೆಗಳ ಅನುಷ್ಠಾನಿತ ಖಾಸಗಿ ಆಸ್ಪತ್ರೆಗಳ ಸಂಘದ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ ಸಚಿವರಿಗೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಖಾಸಗಿ ಆಸ್ಪತ್ರೆಗಳ ಪರಿಸ್ಥಿತಿ ಬಗ್ಗೆಯೂ ಅರಿವಿದೆ. ಈ ಬಗ್ಗೆ ಪರಿಶೀಲಿಸಲಾಗುವುದು ಎಂದು ಹೇಳಿದರು.

ಮಾಸ್ಕೋ ಮಾರಣಹೋಮ; ಉಕ್ರೇನ್‌ಗೆ ಪಲಾಯನ ಮಾಡುವಾಗ ದಾಳಿಕೋರರ ಬಂಧನ

ಮಾಸ್ಕೋ, ಮಾ.24– ಮಾಸ್ಕೋ ಹೊರವಲಯದ ಕ್ರಾಕಸ್ ಸಿಟಿ ಹಾಲ್‌ನಲ್ಲಿ ಗುಂಡಿನ ದಾಳಿ ನಡೆಸಿದ ನಾಲ್ವರು ಬಂದೂಕುಧಾರಿಗಳು ಉಕ್ರೇನ್‌ಗೆ ಪಲಾಯನ ಮಾಡಲು ಯತ್ನಿಸುತ್ತಿದ್ದಾಗ ಅವರನ್ನು ಸೆರೆ ಹಿಡಿಯಲಾಯಿತು ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ. ಪುಟಿನ್ ಅವರ ಈ ಹೇಳಿಕೆಯನ್ನು ತಳ್ಳಿ ಹಾಕಿರುವ ಉಕ್ರೇನ್, 'ಕ್ರಾಕಸ್ ಸಿಟಿ ಹಾಲ್‌ನಲ್ಲಿ ನಡೆದ ದಾಳಿಯಲ್ಲಿ ತನ್ನ ಪಾತ್ರ ಇಲ್ಲ' ಎಂದು ಹೇಳಿದೆ. ಈ ದಾಳಿಯೊಂದಿಗೆ ತಪ್ಪಾಗಿ ತಳುಕು ಹಾಕಲಾಗುತ್ತಿದೆ ಎಂದು ಪುಟಿನ್ ಸೇರಿದಂತೆ ರಷ್ಯಾದ ರಾಜಕೀಯ ನಾಯಕರ ವಿರುದ್ಧವೂ ಉಕ್ರೇನ್ ಆರೋಪ ಮಾಡಿದೆ.

ಈ ದಾಳಿಯನ್ನು ತಾನೇ ನಡೆಸಿದ್ದಾಗಿ ಐಎಸ್ ಹೊಣೆ ಹೊತ್ತಿಕೊಂಡಿದೆ. ಈ ದಾಳಿಯಲ್ಲಿ ಉಕ್ರೇನ್‌ನ ಯಾವುದೇ ಪಾತ್ರವಿಲ್ಲ ಎಂದು ಉಕ್ರೇನ್‌ನ ರಾಷ್ಟ್ರೀಯ ಭದ್ರತಾ ಮಂಡಳಿಯ ವಕ್ತಾರೆ ಆಡ್ರಿಯೆನ್ ವಾಟ್ಸನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾಸ್ಕೊದಲ್ಲಿ ಯೋಜಿತ ಭಯೋತ್ಪಾದಕ ದಾಳಿ ನಡೆಯುವ ಕುರಿತು ಮಾರ್ಚ್ ಆರಂಭದಲ್ಲಿಯೇ ರಷ್ಯಾಕ್ಕೆ ಮಾಹಿತಿ ನೀಡಿದ್ದ ಅಮೆರಿಕ, ರಷ್ಯಾದಲ್ಲಿರುವ ತನ್ನ ಪ್ರಜೆಗಳಿಗೂ ಈ ಬಗ್ಗೆ ಎಚ್ಚರಿಕೆ ನೀಡಿತ್ತು ಎಂದು ವಾಟ್ಸನ್ ಹೇಳಿದ್ದಾರೆ.